ಸಂಪುಟ: 05 ಸಂಚಿಕೆ: 250 ಪುಟಗಳು: 08 ಸೋಮವಾರ 24 ನವೆಂಬರ್ 2025 www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

**ಮುಂಜಾನೆ ಮಾತು**
ಜ್ಞಾನವು ಅತ್ಯದ ಶಕ್ತಿಯಾಗಿದೆ. ಯಾವ ವ್ಯಕ್ತಿ ಜ್ಞಾನಿಯಾಗಿ ರುತ್ತಾನೋ ಅವನು ಆತ್ಮಾವಲೋಕವನ್ನು ಪಡೆದುಕೊಳ್ಳುತ್ತಾನೆ.

# ಉದಯ ವಾಹಿನಿ
ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## ಪಕ್ಷ ಅಧಿಕಾರಕ್ಕೆ ಬಂದಿದ್ದು ಒಬ್ಬನ ಪರಿಶ್ರಮದಿಂದಲ್ಲ

• ಉದಯವಾಹಿನಿ, ಬೆಳಗಾವಿ

ಪಕ್ಷಕ್ಕೆ ಅಧಿಕಾರ ಬಂದದ್ದು ಒಬ್ಬನ ಪರಿಶ್ರಮದಿಂದಲ್ಲ, ಸಾವಿರಾರು ಜನರ ದುಡಿಮೆ ಮತ್ತು ಸಾರ್ವಜನಿಕ ಬೆಂಬಲದಿಂದ ಅದು ಸಾಧ್ಯವಾಗಿದೆ ಎಂದು ಸಚಿವ ಸತೀಶ್ ಜಾರಕಿಹೊಳಿ ಉಪ ಮುಖ್ಯಮಂತ್ರಿ, ಡಿ.ಕೆ.ಶಿವಕುಮಾರ್ ಹೇಳಿಕೆಗೆ ಪರೋಕ್ಷವಾಗಿ ತಿರುಗೇಟು ನೀಡಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪರ್ವತ ಶಿಖರವೇರಲು ತೇನ್ ಸಿಂಗ್ ಜೊತೆಗೆ ಇನ್ನೂ 14 ಮಂದಿ ಇದ್ದರು. ಟೆಂಟ್ ಹೊತ್ತವರು, ಚಹಾ ಮಾಡಿದವರು ಸೇರಿ ಎಲ್ಲರೂ ಪ್ರಯಾಣದಲ್ಲಿ ಸಮಾನವಾಗಿ ಶ್ರಮಿಸಿದರೂ, ಕೀರ್ತಿ ಮಾತ್ರ ತೇನ್ ಸಿಂಗ್ ಗೇ ಸಿಕ್ಕಿತು. ಪಕ್ಷದಲ್ಲಿಯೂ ಇದೇ ರೀತಿಯ ಪರಿಸ್ಥಿತಿ. ದುಡಿದವರ ಹೆಸರು ಮರೆಮಾಡಬಾರದು ಎಂದು ಹೇಳಿದರು. ಪಕ್ಷ ಗೆಲ್ಲಲು ಎಲ್ಲಾ ಶಾಸಕರೂ ತಮ್ಮದೇ ಆದ ಕೊಡುಗೆ ನೀಡಿದ್ದಾರೆ. ಕೆಲವೇ ಜನರಿಂದ ಅಧಿಕಾರ ಬಂದಿದೆ ಎನ್ನುವುದು ನಾನು ಸಹ ಒಪ್ಪುವುದಿಲ್ಲ. ಒಂದು ಕೋಟಿಗೂ ಅಧಿಕ ಮತದಾರರು ನಮಗೆ ಮತ ಹಾಕಿದ್ದಾರೆ. ಅವರ ವಿಶ್ವಾಸವೇ ನಮ್ಮ ಶಕ್ತಿ ಎಂದು ಅವರು ಹೇಳಿದರು.

## ಕಾಂಗ್ರೆಸ್ ಸರ್ಕಾರ ಬೀಳಲ್ಲ ಮತ್ತಷ್ಟು ದೋಚಬೇಕಲ್ಲವೇ

• ಉದಯವಾಹಿನಿ, ಬೆಂಗಳೂರು

ರಾಜ್ಯ ಕಾಂಗ್ರೆಸ್ ಸರ್ಕಾರ ಅಷ್ಟು ಸುಲಭವಾಗಿ ಬಿದ್ದು ಹೋಗುತ್ತದೆ ಎಂಬುದರ ಮೇಲೆ ನಾನೇನು ನಂಬಿಕೆ ಇಟ್ಟುಕೊಂಡಿಲ್ಲ. ಆ ಭ್ರಮೆಯಲ್ಲೂ ಇಲ್ಲ.

ಮುಖ್ಯಮಂತ್ರಿ ಕುರ್ಚಿಗೆ ಪೈಪೋಟಿ ಇದ್ದರೂ ಸಿಕ್ಕಿರುವ ಅವಕಾಶದಲ್ಲೇ ಎಷ್ಟು ಬೇಕು ಅಷ್ಟು ದೋಚಬೇಕು ಎಂಬ ಭಾವನೆ ಅವರಲ್ಲಿದೆ ಎಂದು ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ವ್ಯಂಗ್ಯವಾಡಿದರು. ಆರು ತಿಂಗಳಲ್ಲಿ ರಾಜ್ಯ ಕಾಂಗ್ರೆಸ್ ಸರ್ಕಾರ ಬಿದ್ದು ಹೋಗುತ್ತದೆ, ಕ್ರಾಂತಿ ಆಗುತ್ತದೆ ಎಂಬುದಾಗಿ ನಾನು ಎಲ್ಲೂ ಹೇಳಿಲ್ಲ. ಆ ಬಗ್ಗೆ ಹಗಲು ಕನಸು ಕೂಡ ಕಾಣುತ್ತಿಲ್ಲ. ಮುಂದೇನು ನಡೆಯುತ್ತದೆ ಎಂಬುದನ್ನು ಈಗಿನ ರಾಜಕಾರಣದಲ್ಲಿ ಅರ್ಥ ಮಾಡಿಕೊಳ್ಳುವುದು ಕಷ್ಟ. ಈಗಿನ ಪರಿಸ್ಥಿತಿ ಗಮನಿಸಿದರೆ ಏನು ಬೇಕಾದರೂ ಆಗಬಹುದು. ಈ ನಿಟ್ಟಿನಲ್ಲಿ ಜೆಡಿಎಸ್ ಕಾರ್ಯಕರ್ತರು ಮೈಮರೆಯದೆ ಜನರ ಮಧ್ಯೆ ಕೆಲಸ ಮಾಡಿ ಎಂಬುದಾಗಿ ಪಕ್ಷದ ಕಾರ್ಯಕ್ರಮದಲ್ಲಿ ಹೇಳಿದ್ದೇನೆ' ಎಂದರು.

## ರಾಜ್ಯಾಧ್ಯಕ್ಷ ಸ್ಥಾನದ ಚರ್ಚೆ ನಡುವೆ ಶಾ ಭೇಟಿಯಾದ ವಿಜಯೇಂದ್ರ


• ಉದಯವಾಹಿನಿ, ಬೆಂಗಳೂರು

ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರನ್ನು ರಾಜ್ಯ ಬಿಜೆಪಿ ಘಟಕದ ಅಧ್ಯಕ್ಷ ಬಿ.ವೈ.ವಿಜಯೇಂದ್ರ ಅವರು ಭೇಟಿ ಮಾಡಿ ಮಾತುಕತೆ ನಡೆಸಿದ್ದಾರೆ. ಬಿಜೆಪಿ ರಾಜ್ಯ ಘಟಕದ ಅಧ್ಯಕ್ಷ ಸ್ಥಾನಕ್ಕೆ ಸಂಬಂಧಿಸಿದಂತೆ ರಾಜ್ಯ ರಾಜಕಾರಣದಲ್ಲಿ ನಡೆಯುತ್ತಿರುವ ಬೆಳವಣಿಗೆಗಳ ನಡುವೆ ಬಿ.ವೈ.ವಿಜಯೇಂದ್ರ ಭೇಟಿ ಕುತೂಹಲ ಮೂಡಿಸಿದೆ. ಎಕ್ಸ್‌ನಲ್ಲಿ ಬಿ.ವೈ. ವಿಜಯೇಂದ್ರ ಪೋಸ್ಟ್ ಹಂಚಿಕೊಂಡು, ರಾಷ್ಟ್ರ ರಾಜಕಾರಣಕ್ಕೆ ಸ್ಪಷ್ಟ ದಿಕ್ಸೂಚಿ ಎಂದು ವಿಶ್ಲೇಷಿಸಲಾಗಿದ್ದ ಬಿಹಾರ ಚುನಾವಣೆಯನ್ನು ಅತ್ಯಂತ ಸಮರ್ಥವಾಗಿ ನಿಭಾಯಿಸಿ, ಎನ್‌ಡಿಎ ಮೈತ್ರಿಕೂಟವು ಐತಿಹಾಸಿಕ ದಿಗ್ವಿಜಯ ಸಾಧಿಸುವಲ್ಲಿ ಮಹತ್ವದ ಪಾತ್ರವಹಿಸಿ ಚುನಾವಣಾ ನೈಪುಣ್ಯತೆ ಮೆರೆದ ಅಮಿತ್ ಶಾ ಅವರು ಬಿಜೆಪಿ ಕಾರ್ಯಕರ್ತರಿಗೆ ಪ್ರೇರಣೆಯಾಗಿದ್ದಾರೆ ಎಂದಿದ್ದಾರೆ. ಕರ್ನಾಟಕದ ರಾಜಕಾರಣದ ಪ್ರಸ್ತುತ ವಿದ್ಯಮಾನಗಳ ಮಾಹಿತಿ ನೀಡಲಾಗಿದ್ದು, ಪಕ್ಷ ಸಂಘಟನೆಯನ್ನು ಮತ್ತಷ್ಟು ಚುರುಕುಗೊಳಿಸುವ ನಿಟ್ಟಿನಲ್ಲಿ ಅಗತ್ಯ ಮಾರ್ಗದರ್ಶನ ಪಡೆಯಲಾಯಿತು ಎಂದು ಪೋಸ್ಟ್‌ನಲ್ಲಿ ಬರೆದುಕೊಂಡಿದ್ದಾರೆ.

## ನ್ಯಾಯಯುತ ಬೆಲೆ ಆಗ್ರಹಿಸಿ ಬಿಜೆಪಿ ಹೋರಾಟ

• ಉದಯವಾಹಿನಿ, ಬೆಂಗಳೂರು

ಮೆಕ್ಕೆಜೋಳ ಮತ್ತು ಭತ್ತಕ್ಕೆ ನ್ಯಾಯಯುತ ಬೆಲೆಯನ್ನು ನಿಗದಿಪಡಿಸಿ ಖರೀದಿ ಕೇಂದ್ರಗಳನ್ನು ತೆರೆಯಬೇಕು ಎಂದು ಆಗ್ರಹಿಸಿ ಬಿಜೆಪಿ ರಾಜ್ಯ ಘಟಕದ ಅಧ್ಯಕ್ಷ ಬಿ.ವೈ. ವಿಜಯೇಂದ್ರ ನೇತೃತ್ವದಲ್ಲಿ ನ. 25ರಿಂದ ರಾಜ್ಯದಾದ್ಯಂತ ಹೋರಾಟ ಹಮ್ಮಿಕೊಳ್ಳಲಾಗಿದೆ ಎಂದು ಮಾಜಿ ಸಚಿವ ಎಂ.ಪಿ. ರೇಣುಕಾಚಾರ್ಯ ತಿಳಿಸಿದರು. 'ನ.25ರಂದು ನಗರದ ಅಂಬೇಡ್ಕರ್ ವೃತ್ತದಿಂದ ಪ್ರತಿಭಟನಾ ಮೆರವಣಿಗೆ ಆರಂಭವಾಗಲಿದೆ. ಚಕ್ಕಡಿ ಗಾಡಿಯಲ್ಲಿ ವಿಜಯೇಂದ್ರ ನೇತೃತ್ವದಲ್ಲಿ ಉಪವಿಭಾಗಾಧಿಕಾರಿ ಕಚೇರಿಗೆ ತೆರಳಿ ಬಹಿರಂಗ ಸಭೆ ನಡೆಸಲಾಗುವುದು' ಎಂದು ಭಾನುವಾರ ಸುದ್ದಿಗೋಷ್ಠಿಯಲ್ಲಿ ಮಾಹಿತಿ ನೀಡಿದರು. ನ.27 ಮತ್ತು 28ರಂದು ರಾಜ್ಯದ ಬಿಜೆಪಿ ಮಂಡಲ ವ್ಯಾಪ್ತಿಯಲ್ಲಿ ಪ್ರತಿಭಟನೆ ನಡೆಸಲಾಗುತ್ತದೆ. ಡಿ.1 ಮತ್ತು 2ರಂದು ಜಿಲ್ಲಾ ಕೇಂದ್ರಗಳಲ್ಲಿ ಹೋರಾಟ ನಡೆಸಲಾಗುವುದು' ಎಂದರು. 'ಮೆಕ್ಕೆಜೋಳದ ಬೆಲೆ ಕುಸಿತಕ್ಕೆ ಕೇಂದ್ರ ಸರ್ಕಾರವೇ ಕಾರಣ ಎಂಬಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ತಪ್ಪು ಮಾಹಿತಿ ನೀಡಿದ್ದಾರೆ. ರಾಜ್ಯದ ರೈತರ ದಿಕ್ಕು ತಪ್ಪಿಸುವ ಪ್ರಯತ್ನ ನಡೆಸಿದ್ದಾರೆ' ಎಂದು ಆರೋಪಿಸಿದರು.



**ರಾಜ್ಯ ಕಾಂಗ್ರೆಸ್‌ನಲ್ಲಿ ನಾಯಕತ್ವ ಬದಲಾವಣೆ ಜೋರಾಗುತ್ತಿದ್ದು ಸಿಎಂ ವರ್ಸಸ್ ಡಿಸಿಎಂ ಫೈಟ್ ನಡುವೆ 3ನೇ ಪವರ್ ಸೆಂಟರ್ ಮತ್ತೆ ಸಕ್ರಿಯಗೊಂಡಿದ್ದು ಮತ್ತೆ ದಲಿತ ಸಿಎಂ ಕೂಗು ಜೋರಾಗಿದೆ. ಮಾಜಿ ಡಿಸಿಎಂ, ಹಾಲಿ ಗೃಹ ಸಚಿವ ಪರಮೇಶ್ವರ್ ನಾನು ಸಿಎಂ ಸ್ಥಾನದ ಆಕಾಂಕ್ಷಿ ಅಂತ ನೇರವಾಗಿ, ಬಹಿರಂಗವಾಗಿಯೇ ಹೇಳಿದ್ದಾರೆ. ಈ ಬೆನ್ನಲ್ಲೇ ಪರಮೇಶ್ವರ್ ಸಿಎಂ ಸ್ಥಾನಕ್ಕೆ ಅರ್ಹರು ಅಂತ ಸತೀಶ್ ಜಾರಕಿಹೊಳಿ ಕೂಡ ಬೆಂಬಲ ಕೊಟ್ಟಿದ್ದಾರೆ.**

# ದಲಿತ ಸಿಎಂ ಕೂಗು ಜೋರು

# ಉತ್ತರಾಧಿಕಾರಿ ಯಾರು?



**2028ರವರೆಗೂ ಸಿದ್ದುನೇ ಸಿಎಂ ಎಂದ ಮಹದೇವಪ್ಪ**

**ಹೈಕಮಾಂಡ್‌ಗೆ ತಲೆಬಿಸಿ ತಂದ ನಾಯಕರ ನಡೆ**

### ಸಿಎಂ ಬದಲಾವಣೆ ಬಗ್ಗೆ ಕುತೂಹಲ ಮೂಡಿಸಿದ ಖರ್ಗೆ ಹೇಳಿಕೆ

### ಖರ್ಗೆ ಬೆಂಗಳೂರಲ್ಲಿದ್ದರೂ ಭೇಟಿ ಆಗದ ಡಿಕೆಶಿ

ರಾಜ್ಯದಲ್ಲಿ ಕುರ್ಚಿ ಕಾದಾಟ ಬಿರುಸುಗೊಳ್ಳುತ್ತಿದ್ದಂತೆ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ್ ಖರ್ಗೆ ಅವರು ದೆಹಲಿಯಿಂದ ಬೆಂಗಳೂರಿಗೆ ದೌಡಾಯಿಸಿದ್ದರು. ನಿನ್ನೆ ಸಿಎಂ ಜೊತೆ ಸುದೀರ್ಘ ಚರ್ಚೆ ನಡೆಸಿದ್ದಾರೆ. ಆದ್ರೆ, ಡಿಸಿಎಂ ಡಿಕೆಶಿ ಮಾತ್ರ ಮಲ್ಲಿಕಾರ್ಜುನ್ ಖರ್ಗೆ ಬೆಂಗಳೂರಿನಲ್ಲೇ ಇದ್ದರೂ ಸಹ ಭೇಟಿಗೆ ಆಗದೆ ಮನೆಯಲ್ಲಿದ್ದುಕೊಂಡೆ ಎಲ್ಲರ ನಡೆಯನ್ನ ಗಮನಿಸುತ್ತಿರುವ ಡಿಸಿಎಂ ಡಿಕೆಶಿ ಕಾದು ನೋಡುವ ತಂತ್ರಕ್ಕೆ ಮುಂದಾಗಿದ್ದಾರೆ.



### ನನಗೇನು ಗೊತ್ತಿಲ್ಲ ನನ್ನೇನು ಕೇಳ್ಬೇಡಿ

### ಏನೇ ಇದ್ದರೂ ತೀರ್ಮಾನ ಹೈಕಮಾಂಡ್ ಮಾಡುತ್ತೆ

• ಉದಯವಾಹಿನಿ, ಬೆಂಗಳೂರು

ರಾಜ್ಯ ಕಾಂಗ್ರೆಸ್‌ನಲ್ಲಿ ನಾಯಕತ್ವ ಬದಲಾವಣೆ ಜೋರಾಗುತ್ತಿದ್ದು ಸಿಎಂ ವರ್ಸಸ್ ಡಿಸಿಎಂ ಫೈಟ್ ನಡುವೆ 3ನೇ ಪವರ್ ಸೆಂಟರ್ ಮತ್ತೆ ಸಕ್ರಿಯಗೊಂಡಿದ್ದು ಮತ್ತೆ ದಲಿತ ಸಿಎಂ ಕೂಗು ಜೋರಾಗಿದೆ. ಮಾಜಿ ಡಿಸಿಎಂ, ಹಾಲಿ ಗೃಹ ಸಚಿವ ಪರಮೇಶ್ವರ್ ನಾನು ಸಿಎಂ ಸ್ಥಾನದ ಆಕಾಂಕ್ಷಿ ಅಂತ ನೇರವಾಗಿ, ಬಹಿರಂಗವಾಗಿಯೇ ಹೇಳಿದ್ದಾರೆ. ಈ ಬೆನ್ನಲ್ಲೇ ಪರಮೇಶ್ವರ್ ಸಿಎಂ ಸ್ಥಾನಕ್ಕೆ ಅರ್ಹರು ಅಂತ ಸತೀಶ್ ಜಾರಕಿಹೊಳಿ ಕೂಡ ಬೆಂಬಲ ಕೊಟ್ಟಿದ್ದಾರೆ.

ಹುಬ್ಬಳ್ಳಿ ಶಾಸಕ ಪ್ರಸಾದ್ ಅಬ್ಬಯ್ಯ ಕೂಡ ಪರಮೇಶ್ವರ್ ಹಿರಿಯರಿದ್ದಾರೆ. ಅವರು ಸಿಎಂ ಆಗಲಿ ಅಂದಿದ್ದಾರೆ. ಅಧಿಕಾರ ಹಸ್ತಾಂತರ ಆದರೆ ಅದು ದಲಿತರಿಗೆ ಆಗಲಿ ಎನ್ನುವ ದಾಳ ಇವರದಾಗಿದೆ. ಸಿಎಂ ಬಣವೇ ಆದರೂ ಪ್ರತ್ಯೇಕವಾಗಿ ದಲಿತ ಸಿಎಂ ಕೂಗು ಎಬ್ಬಿಸಲು ದಲಿತ ಸಚಿವರ ತಂಡ ಸಜ್ಜಾಗಿದೆ. ಇದು ಕಾಂಗ್ರೆಸ್ ಹೈಕಮಾಂಡ್ ಪಾಲಿಗೆ, ಡಿಸಿಎಂ ಡಿಕೆಶಿ ಪಾಲಿಗೆ ಹೊಸ ಸವಾಲು ಎದುರಾಗಿದೆ.

ನಾನು ಕೆಪಿಸಿಸಿ ಅಧ್ಯಕ್ಷ ಆಗಿದ್ದಾಗಲೂ ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬಂತು. ಆದ್ರೆ, ಯಾವತ್ತೂ ನಾನೊಬ್ಬನೇ ಪಕ್ಷವನ್ನ ಅಧಿಕಾರಕ್ಕೆ ತಂದೆ ಅಂತ ಹೇಳಿಕೊಳ್ಳಲಿಲ್ಲ ಗೃಹಸಚಿವ ಪರಮೇಶ್ವರ್ ಹೇಳಿದ್ದು, ಡಿಸಿಎಂ ಡಿಕೆ ಶಿವಕುಮಾರ್ ಅವರಿಗೆ ಪರೋಕ್ಷ ಟಾಂಗ್ ಕೊಟ್ಟರು. ನಾಯಕತ್ವ ಬದಲಾವಣೆ ವಿಚಾರ ಕುರಿತು ಬೆಂಗಳೂರಿನಲ್ಲಿ ಮಾತನಾಡಿದ ಅವರು, ನಾನು ಅಧ್ಯಕ್ಷನಾಗಿದ್ದಾಗಲೂ ಪಕ್ಷ ಅಧಿಕಾರಕ್ಕೆ ಬಂತು. ನಾನೊಬ್ಬನೇ ಅಧಿಕಾರಕ್ಕೆ ತಂದೆ ಅಂತ ಹೇಳಿಕೊಳ್ಳಲಿಲ್ಲ ಎಂದರು. ಇನ್ನೂ ನೀವೂ ಸಿಎಂ ರೇಸ್‌ನಲ್ಲಿದ್ದೀರಾ ಎಂಬ ಮಾಧ್ಯಮಗಳ ಪ್ರಶ್ನೆಗೆ ಉತ್ತರಿಸಿ, ನಾನು ಯಾವಾಗಲೂ ರೇಸ್‌ನಲ್ಲಿ ಇರ್ತೀನಿ ಎಂದು ಪರೋಕ್ಷವಾಗಿ ಸಿಎಂ ಆಸೆ ಬಿಚ್ಚಿಟ್ಟರು. ನಾನು ಯಾವಾಗಲೂ ರೇಸ್‌ನಲ್ಲಿರ್ತೀನಿ ಕಣ್ರೀ, ಅದೇನ್ ದೊಡ್ಡ ವಿಚಾರ ಅಲ್ಲ. 2013 ರಲ್ಲಿ ನಾನು ಕೆಪಿಸಿಸಿ ಅಧ್ಯಕ್ಷ ಆಗಿದ್ದೆ. ಸರ್ಕಾರ ಅಧಿಕಾರಕ್ಕೆ ತಂದ್ವಿ, ನಾನೇ ಮಾಡಿದೆ, ನಾನೇ ಸರ್ಕಾರ ತಂದೆ ಅಂತ ಎಲ್ಲೂ ನಾನು ಹೇಳಿಕೊಳ್ಳಿಲ್ಲಪ್ಪ. ಎಲ್ರೂ ಸೇರಿ ಕೆಲಸ ಮಾಡಿದ್ವಿ, ಜನ ಕೈ ಹಿಡಿದ್ರು. ಆ ಸಂದರ್ಭದಲ್ಲಿ ನಾನು ಪರಾಭವ ಆದೆ. ಒಂದು ವೇಳೆ ನಾನು ಗೆದ್ದಿದ್ರೆ ಏನಾಗ್ತಿತ್ತೋ ಗೊತ್ತಿಲ್ಲ. ಆ ಸಂದರ್ಭದಲ್ಲೂ ಸಿಎಂ ರೇಸ್‌ನಲ್ಲಿ ನನ್ನ ಹೆಸರು ಇತ್ತು. ಸಾಮಾನ್ಯವಾಗಿ ಕೆಪಿಸಿಸಿ ಅಧ್ಯಕ್ಷರಿಗೆ ಸಿಎಂ ಆಗೋದಿಕ್ಕೆ ಒಂದು ಅವಕಾಶ ಕೊಡ್ತಾರೆ. ಅದು ಕೆಲವು ಸಂದರ್ಭಗಳಲ್ಲಿ ಆಗೋದಿಲ್ಲ ಎಂದರಲ್ಲದೇ, ಈಗ ಆ ಕನಸು ನನಸಾಗುತ್ತಾ ಎಂಬ ಪ್ರಶ್ನೆಗೆ, ಗೊತ್ತಿಲ್ಲಪ್ಪ, ನನಗೆ ಕನಸೇ ಬೀಳಲ್ಲ ಅಂತ ನಗೆಬೀರಿದರು.

ರಾಜ್ಯ ಕಾಂಗ್ರೆಸ್‌ನಲ್ಲಿ ಮುಖ್ಯಮಂತ್ರಿ ಬದಲಾವಣೆ ಬಗ್ಗೆ ಬಿರುಸಿನ ಚರ್ಚೆಗಳು ನಡೆಯುತ್ತಿವೆ. ಈ ವಿಚಾರದ ಬಗ್ಗೆ ದಿನಕ್ಕೊಂದು ಹೇಳಿಕೆಗಳು ಸಂಚಲನ ಸೃಷ್ಟಿಸುತ್ತಿವೆ. ಸಿದ್ದರಾಮಯ್ಯ ಹಾಗೂ ಡಿ.ಕೆ.ಶಿವಕುಮಾರ್ ಅವರು ಪ್ರತ್ಯೇಕವಾಗಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ್ ಖರ್ಗೆ ಅವರನ್ನು ಭೇಟಿಯಾಗಿ ಕುತೂಹಲ ಮೂಡಿಸಿದ್ದರು. ಆದರೆ ಅಸಲಿಗೆ ಕಾಂಗ್ರೆಸ್‌ನಲ್ಲಿ ಆಂತರಿಕವಾಗಿ ಮಹತ್ವದ ಬೆಳವಣಿಗೆ ನಡೆಯುತ್ತಿದೆ ಎಂದು ಹೇಳಲಾಗುತ್ತಿದೆ. ಇನ್ನು ಸಿಎಂ ಬದಲಾವಣೆ ವಿಚಾರವಾಗಿ ಮಲ್ಲಿಕಾರ್ಜುನ್ ಖರ್ಗೆ ಮೊದಲ ಬಾರಿಗೆ ಪ್ರತಿಕ್ರಿಯಿಸಿದ್ದಾರೆ. ಮಲ್ಲಿಕಾರ್ಜುನ್ ಖರ್ಗೆ ಜೊತೆ ಸಭೆ ನಡೆಸಿದ್ದ ಸಿಎಂ ಸಿದ್ದರಾಮಯ್ಯ ಅವರು ಇಂದು ತಮ್ಮ ನಿವಾಸದಲ್ಲಿ ಆಪ್ತರೊಂದಿಗೆ ಸಭೆ ನಡೆಸಿದ್ದಾರೆ. ಬೆಳಿಗ್ಗೆ ಎಐಸಿಸಿ ಅಧ್ಯಕ್ಷ ಖರ್ಗೆಯನ್ನ ಭೇಟಿ ಮಾಡಿದ್ದ ಸಚಿವ ಮಹದೇವಪ್ಪ, ಖರ್ಗೆ ಜೊತೆ ಚರ್ಚಿಸಿ ಸಿಎಂ ನಿವಾಸಕ್ಕೆ ಆಗಮಿಸಿದ್ದರು. ಮಹದೇವಪ್ಪ ಜೊತೆ ಸಚಿವರಾದ ಭೈರತಿ ಸುರೇಶ್, ಎಂ.ಸಿ ಸುಧಾಕರ್, ಶಾಸಕರಾದ ಎ.ಎಸ್ ಪೊನ್ನಣ್ಣ, ಕೊತ್ತೂರು ಮಂಜುನಾಥ್, ನಂಜೇಗೌಡ ಸಿಎಂ ಜೊತೆ ಸುಮಾರು 2 ಗಂಟೆಗಳ ಕಾಲ ಚರ್ಚಿಸಿದ್ದಾರೆ.


### ಪವರ್ ಸೆಂಟರ್ ಆದ ಖರ್ಗೆ ನಿವಾಸ!

### ಪರಮೇಶ್ವರ್‌ಗೆ ಮಹದೇವಪ್ಪ ಟಾಂಗ್

ರಾಜ್ಯ ರಾಜಕೀಯದಲ್ಲಿ ಅಧಿಕಾರ ಹಂಚಿಕೆ ಕದನ ನಡುವೆ ದಲಿತ ಸಿಎಂ ಕೂಗು ಮತ್ತೆ ಮುನ್ನೆಲೆಗೆ ಬಂದಿದ್ದು, ಈ ಬಗ್ಗೆ ಪ್ರತಿಕ್ರಿಯಿಸಿದ ಸಚಿವ ಮಹದೇವಪ್ಪ, ಯಾವ ರೇಸೂ ಕೂಡ ನಡೀತ್ತಿಲ್ಲ. ಆ ರೀತಿಯಲ್ಲಿ ರೇಸ್ ಅಂತೂ ಇಲ್ಲ ಎಂದು ಹೇಳಿದ್ರು. ಸಚಿವ ಸಂಪುಟ ಪುನಾರಚನೆ ಬಗ್ಗೆಯೂ ಚರ್ಚೆ ಆಗಿಲ್ಲ, ಸಿಎಂ ಸಿದ್ದರಾಮಯ್ಯ ಅವರು 2028ರವರೆಗೆ ಅವಧಿ ಪೂರೈಸುತ್ತಾರೆ. ಆ ನಂತರ ಏನು ಬೇಕಾದರೂ ಆಗಬಹುದು, ಅದು ಕೂಡ ಪಕ್ಷದ ಹೈಕಮಾಂಡ್‌ಗೆ ಬಿಟ್ಟದ್ದು, ರೇಸ್‌ಲ್ಲಿ ಯಾರು ಯಾರು ಪ್ಲೆಯರ್ಸ್ ಅಂತಾ ಆಗ ಗೊತ್ತಾಗುತ್ತದೆ, ಅವಾಗ ಪ್ಲೇಯರ್‌ಗಳನ್ನು ಆಯ್ಕೆ ಮಾಡುತ್ತಾರೆ, ನನ್ನ ,ಪರಮೇಶ್ವರ್ ಹಾಗೂ ಇನ್ನೊಬ್ಬರ ಮಾತಿಂದ ದಲಿತ ಸಿಎಂ ರೇಸ್ ಶುರುವಾಗಲ್ಲ, ಸ್ಪರ್ಧೆಗೆ ತೀರ್ಮಾನ ಮಾಡೋದು ಹೈಕಮಾಂಡ್ ಅಂತ ಹೇಳಿದರು.

### ಹೈಕಮಾಂಡ್ ತೀರ್ಮಾನ ಒಪ್ಪಲೇಬೇಕು

ನಾಯಕತ್ವ ಬದಲಾವಣೆ ಸಂಬಂಧ ಕೈ ಶಾಸಕರು ದೆಹಲಿಗೆ ಹೋದ ವಿಚಾರವಾಗಿ ಪ್ರತಿಕ್ರಿಯಿಸಿ, ಅವರು ದೆಹಲಿಗೆ ಹೋಗಲಿ. ಅಂತಿಮವಾಗಿ ಹೈ ಕಮಾಂಡ್ ಏನು ತೀರ್ಮಾನ ಮಾಡುತ್ತದೆಯೋ ಅದನ್ನು ಎಲ್ಲರೂ ಒಪ್ಪಲೇಬೇಕು. ಎಲ್ಲಾ ಮಂತ್ರಿಗಳು ಒಪ್ಪಬೇಕು. ನಾನು ಕೂಡ ಒಪ್ಪಬೇಕು ಮತ್ತು ಡಿ.ಕೆ. ಶಿವಕುಮಾರ್ ಕೂಡ ಒಪ್ಪಬೇಕು. ನಾಯಕತ್ವ ಬದಲಾವಣೆ ಬಗ್ಗೆ ಮಲ್ಲಿಕಾರ್ಜುನ ಖರ್ಗೆ ಬಳಿ ಪ್ರಸ್ತಾಪ ಆಗಿಲ್ಲ ಎಂದು ಅವರು ತಿಳಿಸಿದರು. ಖರ್ಗೆ ಭೇಟಿ ವೇಳೆ ಹಲವು ವಿಚಾರಗಳ ಬಗ್ಗೆ ಚರ್ಚೆ ನಡೆಸಲಾಗಿದೆ. ಸದ್ಯದ ಕ್ಷಿಪ್ರ ರಾಜಕೀಯ ಬೆಳವಣಿಗೆ, ಸಂಪುಟ ಪುನಾರಚನೆ, ಅಧಿಕಾರ ಹಂಚಿಕೆ ವಿಚಾರಗಳ ಬಗ್ಗೆ ಚರ್ಚೆ ನಡೆಸಲಾಗಿದೆ ಎಂದು ಮೂಲಗಳು ತಿಳಿಸಿವೆ.



### ಹೈಕಮಾಂಡ್ ತೀರ್ಮಾನ ಒಪ್ಪಲೇಬೇಕು

ನಾಯಕತ್ವ ಬದಲಾವಣೆ ಸಂಬಂಧ ಕೈ ಶಾಸಕರು ದೆಹಲಿಗೆ ಹೋದ ವಿಚಾರವಾಗಿ ಪ್ರತಿಕ್ರಿಯಿಸಿ, ಅವರು ದೆಹಲಿಗೆ ಹೋಗಲಿ. ಅಂತಿಮವಾಗಿ ಹೈ ಕಮಾಂಡ್ ಏನು ತೀರ್ಮಾನ ಮಾಡುತ್ತದೆಯೋ ಅದನ್ನು ಎಲ್ಲರೂ ಒಪ್ಪಲೇಬೇಕು. ಎಲ್ಲಾ ಮಂತ್ರಿಗಳು ಒಪ್ಪಬೇಕು. ನಾನು ಕೂಡ ಒಪ್ಪಬೇಕು ಮತ್ತು ಡಿ.ಕೆ. ಶಿವಕುಮಾರ್ ಕೂಡ ಒಪ್ಪಬೇಕು. ನಾಯಕತ್ವ ಬದಲಾವಣೆ ಬಗ್ಗೆ ಮಲ್ಲಿಕಾರ್ಜುನ ಖರ್ಗೆ ಬಳಿ ಪ್ರಸ್ತಾಪ ಆಗಿಲ್ಲ ಎಂದು ಅವರು ತಿಳಿಸಿದರು. ಎಐಸಿಸಿ ಮಲ್ಲಿಕಾರ್ಜುನ ಖರ್ಗೆ ಭೇಟಿ ವೇಳೆ ಹಲವು ವಿಚಾರಗಳ ಬಗ್ಗೆ ಚರ್ಚೆ ನಡೆಸಲಾಗಿದೆ. ಸದ್ಯದ ಕ್ಷಿಪ್ರ ರಾಜಕೀಯ ಬೆಳವಣಿಗೆ, ಸಂಪುಟ ಪುನಾರಚನೆ, ಅಧಿಕಾರ ಹಂಚಿಕೆ ವಿಚಾರಗಳ ಬಗ್ಗೆ ಚರ್ಚೆ ನಡೆಸಲಾಗಿದೆ ಎಂದು ಮೂಲಗಳು ತಿಳಿಸಿವೆ.



## ಹೈಕಮಾಂಡ್ ಸೂಚನೆಗೂ ಸಿದ್ದರಾಮಯ್ಯ ತಲೆಬಾಗಲ್ಲ, ರಾಜೀನಾಮೆ ಕೊಡಲ್ಲ

• ಉದಯವಾಹಿನಿ, ಬೆಂಗಳೂರು

ಸಿಎಂ ಸಿದ್ದರಾಮಯ್ಯ ಅವರು ಯಾರ ಸೂಚನೆಗೂ ತಲೆ ಬಾಗೋದಿಲ್ಲ. ಹೈ ಕಮಾಂಡ್ ಹೇಳಿದ್ರೂ ಸಹ ರಾಜೀನಾಮೆ ಕೊಡೋದಿಲ್ಲ. ಇವರ ಅಧಿಕಾರದ ಗುದ್ದಾಟದಲ್ಲಿ ಸರ್ಕಾರ ಪತನವಾಗುತ್ತದೆ ಎಂದು ಮಾಜಿ ಸಿಎಂ ಜಗದೀಶ್ ಶೆಟ್ಟರ್ ಅವರು ಭವಿಷ್ಯ ನುಡಿದಿದ್ದಾರೆ. ಕರ್ನಾಟಕ ಕಾಂಗ್ರೆಸ್‌ನಲ್ಲಿ ಸಿಎಂ ಸ್ಥಾನ ಬದಲಾವಣೆ ಕುರಿತು ಭಾರಿ ಹಗ್ಗಜಗ್ಗಾಟ ವ್ಯಕ್ತವಾಗುತ್ತಿದೆ. ಒಂದೆಡೆ ಸಿಎಂ ಸಿದ್ದರಾಮಯ್ಯ, ಹೈಕಮಾಂಡ್ ಏನೆ ಹೇಳಿದರು ಅದಕ್ಕೆ ನಾವು ಒಪ್ಪಬೇಕು, ಬದ್ಧವಾಗಿರಬೇಕು ಎಂದರೆ ಮತ್ತೊಂದು ಕಡೆ ಡಿಕೆ ಶಿವಕುಮಾರ್ ಅವರು ಮೀನಿಗೆ ಗಾಳ ಹಾಕೋದು ಎಂಬ ಹೇಳಿಕೆಗಳನ್ನು ನೀಡುತ್ತಿದ್ದಾರೆ. ಇಬ್ಬರ ಮಧ್ಯೆ ಕುರ್ಚಿಗಾಗಿ ನಡೆಯುತ್ತಿರುವ ಚರ್ಚೆಗಳ ಬಗ್ಗೆ ಭಾನುವಾರ ಮಾಜಿ ಸಿಎಂ ಜಗದೀಶ್ ಶೆಟ್ಟರ್ ಅವರು ಪ್ರತಿಕ್ರಿಯೆ ಕೊಟ್ಟಿದ್ದಾರೆ.

**ಯಾರಿಗೂ ಬಗ್ಗಲ್ಲ-ಜಗ್ಗಲ್ಲ:** ಕಾಂಗ್ರೆಸ್ ಹೈಕಮಾಂಡ್ ಸೂಚನೆ ನೀಡಿದರೂ ಸಹ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಮ್ಮ ಸ್ಥಾನವನ್ನು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಬಿಟ್ಟುಕೊಡುವುದಿಲ್ಲ. ಯಾರ ಸೂಚನೆಗೂ ಸಿದ್ದರಾಮಯ್ಯ ತಲೆ ಬಾಗುವುದಿಲ್ಲ ಹಾಗೂ ಸಿಎಂ ಸ್ಥಾನಕ್ಕೆ ರಾಜೀನಾಮೆಯನ್ನೂ ನೀಡುವುದಿಲ್ಲ. ಸಿದ್ದರಾಮಯ್ಯನವರ ಹಿಂಬಾಲಕರು ಸಹ ಅವರು ಸಿಎಂ ಸ್ಥಾನದಲ್ಲಿಯೇ ಮುಂದುವರಿಯುವಂತೆ ಒತ್ತಾಯ ಮಾಡುತ್ತಾರೆ ಎಂದರು.

**ಸರ್ಕಾರ ಪತನವಾಗುತ್ತೆ:** ಮತ್ತೊಂದೆಡೆ ಡಿ.ಕೆ. ಶಿವಕುಮಾರ್ ಅವರು ಮುಖ್ಯಮಂತ್ರಿ ಆಗಲೇಬೇಕು ಎನ್ನುವ ಹಠ ಬಿಡುತ್ತಿಲ್ಲ.



### ಸಿಎಂ ಆರೋಪಕ್ಕೆ ಉತ್ತರಿಸಲಿ

ಎಚ್.ಡಿ. ಕುಮಾರಸ್ವಾಮಿ ಅವರು ಅಧಿಕಾರ ಕಳೆದುಕೊಳ್ಳಲು ಸಿದ್ದರಾಮಯ್ಯ ಅವರೇ ಕಾರಣ ಎಂದು ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡರ ಅವರು ಹೇಳಿದ್ದರು. ಇದಕ್ಕೆ ಪ್ರತಿಕ್ರಿಯೆ ಕೊಟ್ಟ ಜಗದೀಶ್ ಶೆಟ್ಟರ್ ಅವರು, ದೇವೇಗೌಡರು ರಾಜಕೀಯವಾಗಿ ಅಪಾರ ಅನುಭವವಿರುವ ವ್ಯಕ್ತಿ. ಸಿದ್ದರಾಮಯ್ಯ ಜೆಡಿಎಸ್‌ನಲ್ಲಿ ಇರುವ ಸಮಯದಲ್ಲಿ ಅವರ ಚಲನವಲನ, ಗುಣವನ್ನು ಹತ್ತಿರದಿಂದ ಮಾಜಿ ಪ್ರಧಾನಿ ಕಂಡಿದ್ದಾರೆ. ದೇವೇಗೌಡರು ಹಿರಿಯ ನಾಯಕರು. ಬಹಳಷ್ಟು ಮಂದಿಯನ್ನು ನಾಯಕರನ್ನಾಗಿ ಮಾಡಿ ಬೆಳೆಸಿದ್ದಾರೆ. ಹೀಗಾಗಿ ಅವರ ಹೇಳಿಕೆಯಲ್ಲಿ ಸತ್ಯಾಂಶವಿರಲಿದೆ ಎಂದು ಶೆಟ್ಟರ್ ಹೇಳಿದರು.

ಇವರಿಬ್ಬರ ಈ ಗುದ್ದಾಟದಲ್ಲಿಯೇ ರಾಜ್ಯ ಸರ್ಕಾರ ಪತನವಾಗಲಿದೆ

ಸಿಎಂ ಸಿದ್ದರಾಮಯ್ಯ ಅವರು ಅಧಿಕಾರ ದಾಹಕ್ಕಾಗಿ ಇಂತಹ ಕೆಲಸ ಮಾಡಿರುವ ಉದಾಹರಣೆ ಹಲವಾರು ಇದೆ. ಕಾಂಗ್ರೆಸ್ ಪಕ್ಷಕ್ಕೆ ಹೊಸದಾಗಿ ಸೇರ್ಪಡೆಯಾದರೂ, ಪಕ್ಷ ಅವರನ್ನು ಮುಖ್ಯಮಂತ್ರಿಯನ್ನಾಗಿ ಮಾಡಿದೆ. ದೇವೇಗೌಡರ ಹೇಳಿಕೆಗೆ ಸ್ವತಃ ಸಿದ್ದರಾಮಯ್ಯ ಅವರೇ ಸ್ಪಷ್ಟನೆ ನೀಡಬೇಕು ಎಂದು ಜಗದೀಶ್ ಶೆಟ್ಟರ್ ಅವರು ಆಗ್ರಹಿಸಿದರು.

## ಅಪರಾಧ ಚಟುವಟಿಕೆಯಲ್ಲಿ ಭಾಗಿಯಾದರೆ ಸೇವೆಯಿಂದ ವಜಾ

### ■ ಅಪರಾಧ ಚಟುವಟಿಕೆಗಳಲ್ಲಿ ಪೊಲೀಸರು ಭಾಗಿಯಾಗುವುದು ಕಂಡು ಬಂದರೆ ನಿರ್ದಾಕ್ಷಿಣ್ಯ ಕ್ರಮ


• ಉದಯವಾಹಿನಿ, ಬೆಂಗಳೂರು

ಅಪರಾಧ ಚಟುವಟಿಕೆಗಳಲ್ಲಿ ಪೊಲೀಸರು ಭಾಗಿಯಾಗುವುದು ಕಂಡು ಬಂದರೆ ನಿರ್ದಾಕ್ಷಿಣ್ಯ ಕ್ರಮ ತೆಗೆದುಕೊಳ್ಳಲಾಗುವುದು. ಇಲಾಖೆಯ ಸೇವೆಯಿಂದ ವಜಾಗೊಳಿಸುವುದು ಸೇರಿದಂತೆ ಮುಲಾಜಿಲ್ಲದೆ ಕಾನೂನು ಕ್ರಮ ತೆಗೆದುಕೊಳ್ಳಲಾಗುವುದು ಎಂದು ಗೃಹಸಚಿವ ಡಾ. ಜಿ.ಪರಮೇಶ್ವರ ಎಚ್ಚರಿಕೆ ನೀಡಿದ್ದಾರೆ.

ಎಟಿಎಂ ಹಣ ದರೋಡೆ ಪ್ರಕರಣದ ಹಿನ್ನೆಲೆಯಲ್ಲಿ ಸದಾಶಿವ ನಗರದ ನಿವಾಸದಲ್ಲಿ, ನಗರ ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಸಿಂಗ್, ಜಂಟಿ ಪೊಲೀಸ್ ಆಯುಕ್ತ ಅಜಯ್ ಹಿಲೋರಿ, ವಂಶಿಕೃಷ್ಣರೊಂದಿಗೆ ಪ್ರಕರಣದ ತನಿಖೆಯ ಕುರಿತು ಚರ್ಚಿಸಿದ ಬಳಿಕ ಗೃಹಸಚಿವರು ಸುದ್ದಿಗಾರರೊಂದಿಗೆ ಮಾತನಾಡುತ್ತಿದ್ದರು.

ಪೊಲೀಸ್ ಇಲಾಖೆಯಲ್ಲಿ ಎಚ್ಚರಿಕೆ ವಹಿಸುವಂತೆ ಹಿರಿಯ ಅಧಿಕಾರಿಗಳಿಗೆ ಕೆಲ ಸೂಚನೆಗಳನ್ನು ಕೊಟ್ಟಿದ್ದೇನೆ ಎಂದು ಪರಮೇಶ್ವರ ಹೇಳಿದರು.

7.11 ಕೋಟಿ ರೂ. ದರೋಡೆ ಪ್ರಕರಣದಲ್ಲಿ ಏಳು ಆರೋಪಿಗಳನ್ನು ಬೆಂಗಳೂರು ನಗರ ಪೊಲೀಸರು ಹಿಡಿದಿದ್ದಾರೆ. ಇನ್ನು ಕೆಲವರು ಸಿಗಬೇಕಿದೆ. ಪ್ರಕರಣದಲ್ಲಿ ಇಲಾಖೆಯ ಒಬ್ಬ ವ್ಯಕ್ತಿ ಭಾಗಿಯಾಗಿದ್ದ ಮೂರು ವಿಶೇಷ ತಂಡಗಳು ತನಿಖೆ ಮಾಡಿ ಆರೋಪಿಗಳನ್ನು ಬಂಧಿಸಿದ್ದಾರೆ.



ನಗರ ಪೊಲೀಸ್ ಆಯುಕ್ತರು ಸೇರಿದಂತೆ ಪ್ರಕರಣದ ಜವಾಬ್ದಾರಿ ವಹಿಸಿಕೊಂಡ ಇಬ್ಬರು ಜಂಟಿ ಪೊಲೀಸ್ ಆಯುಕ್ತರಿಗೆ, ಇಬ್ಬರು ಡಿಸಿಪಿಗಳು ಮತ್ತು 200ಕ್ಕೂ ಹೆಚ್ಚು ಸಿಬ್ಬಂದಿಗೆ ಅಭಿನಂದನೆಗಳನ್ನು ಸಲ್ಲಿಸುತ್ತೇನೆ ಎಂದು ಹೇಳಿದರು.

ಬೆಂಗಳೂರಿನಲ್ಲಿ ಇಂಥ ಘಟನೆಯಾದಾಗ ಯಾರು ಕೂಡ ನಂಬಲು ಸಾಧ್ಯವಾಗಿರಲಿಲ್ಲ. ಬೆಂಗಳೂರಿಗೆ ಕೆಟ್ಟ ಹೆಸರು ಬರುವ ರೀತಿ ಕೃತ್ಯ ಆಗಿತ್ತು. ಈ ಘಟನೆ ಪೊಲೀಸ್ ಇಲಾಖೆಗೂ ಸವಾಲಾಗಿತ್ತು. 6.29 ಕೋಟಿ ರೂ. ಸಿಕ್ಕಿದೆ. ಬಾಕಿ ಹಣ ಪತ್ತೆಹಚ್ಚುತ್ತಾರೆ. ಈ ಪ್ರಕರಣ ಪೊಲೀಸ್ ಇಲಾಖೆಗೆ ಸವಾಲಾಗಿತ್ತು. ತಾಂತ್ರಿಕವಾಗಿ, ಬಹಳ ಎಚ್ಚರಿಕೆಯಿಂದ ಬುದ್ಧಿ ಉಪಯೋಗಿಸಿ ಪೊಲೀಸ್ ಅಧಿಕಾರಿ ಮತ್ತು ಸಿಬ್ಬಂದಿಗಳು ಕೆಲಸ ಮಾಡಿ ಪ್ರಕರಣವನ್ನು ಭೇದಿಸಿದ್ದಾರೆ. ದರೋಡೆ ಮಾಡಿದವರು ಬಹಳ ಎಚ್ಚರಿಕೆಯಿಂದ ಕೃತ್ಯ ಎಸಗಿದ್ದರು. ಅದೆಲ್ಲವೂ ಕೂಡ ಈಗ ತನಿಖೆಯಿಂದ ಗೊತ್ತಾಗುತ್ತಿದೆ. ಘಟನೆಗೆ ಸಂಬಂಧಿಸಿದಂತೆ ಇನ್ನುಮುಂದೆ ಇಲಾಖೆಯಲ್ಲಿ ಎಚ್ಚರಿಕೆಯಿಂದ ಇರಲು ಅಧಿಕಾರಿಗಳಿಗೆ ಸೂಚಿಸಿದ್ದೇನೆ. ಈ ರೀತಿಯ ಕೃತ್ಯದಲ್ಲಿ ಯಾರಾದರು ಭಾಗಿಯಾಗುವುದು ಕಂಡು ಬಂದರೆ ನಿರ್ದಾಕ್ಷಿಣ್ಯ ಕ್ರಮ ತೆಗೆದುಕೊಳ್ಳಲಾಗುವುದು. ಇಲಾಖೆಯ ಸೇವೆಯಿಂದ ವಜಾಗೊಳಿಸುವುದು ಸೇರಿದಂತೆ ಮುಲಾಜಿಲ್ಲದೆ ಕಾನೂನು ಕ್ರಮ ತೆಗೆದುಕೊಳ್ಳಲಾಗುವುದು. ನಿನ್ನೆ ಕೋರಮಂಗಲದಲ್ಲಿಯೂ ಘಟನೆ ನಡೆದಿದೆ. ಅರೆಸ್ಟ್ ಮಾಡಿದ್ದಾರೆ ಎಂದು ಗೃಹ ಸಚಿವರು ತಿಳಿಸಿದರು. ಏಜೆನ್ಸಿಯವರು ಆರ್‌ಬಿಐ ಮಾರ್ಗಸೂಚಿಗಳನ್ನು ಪಾಲಿಸಿದ್ದಾರೆಯೇ, ಇಲ್ಲವೇ ಎಂಬುದನ್ನು ಪರಿಶೀಲಿಸಲಾಗುತ್ತಿದೆ. ಇದಕ್ಕೆ ಅವರ ಮೇಲೆ ಕ್ರಮ ತೆಗೆದುಕೊಳ್ಳಲಾಗುವುದು ಎಂದು ಹೇಳಿದರು. ಮುಖ್ಯಮಂತ್ರಿಯನ್ನು ಆಯ್ಕೆ ಮಾಡುವ ಸಂದರ್ಭದಲ್ಲಿ ಎಐಸಿಸಿಯಿಂದ ವೀಕ್ಷಕರು ಬಂದಿದ್ದರು. ಸಿಎಲ್‌ಪಿ ಸಭೆಯಲ್ಲಿ ಅವರ ಮುಂದೆ ನಡೆದಿದೆ. ಸಿದ್ದರಾಮಯ್ಯ ಎರಡೂವರೆ ವರ್ಷ ಸಿಎಂ ಅಂತ ಹೇಳಿರಲಿಲ್ಲ. ಮಧ್ಯದಲ್ಲಿ ಬದಲಾಯಿಸುತ್ತಾರೆ ಎಂಬುದು ಹೈಕಮಾಂಡ್‌ಗೆ ಬಿಟ್ಟದ್ದು. ನಾವು ಬದಲಾವಣೆಯನ್ನು ಮಾಡಲು ಆಗುತ್ತದೆಯೇ. ಆ ಸಂದರ್ಭ ಬಂದಾಗ ಹೈಕಮಾಂಡ್ ನವರು ಮಾಡುತ್ತಾರೆ. ಹಿಂದೆ ಎಲ್ಲಾ ಮಾಡಿಲ್ಲವೇ ಬಂಗಾರಪ್ಪರನ್ನು ಬದಲಾಯಿಸಿ ವೀರಪ್ಪ ಮೊಯ್ಲಿಯವರನ್ನು ಮಾಡಿದ್ದರು. ಈಗ ಆ ಸಂದರ್ಭ ಬಂದಿದೆ ಅಂತ ನನಗೆ ಅನ್ನಿಸುತ್ತಿಲ್ಲ ಎಂದು ಹೇಳಿದರು.

**ಪೊಲೀಸರಿಗೆ ಗೃಹಸಚಿವ ಎಚ್ಚರಿಕೆ**

### ಪಕ್ಷದಲ್ಲಿ ಮತ್ತು ಸರಕಾರದಲ್ಲಿ ಸಮಸ್ಯೆಯೇ ಇಲ್ಲ

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಎಐಸಿಸಿ ಅಧ್ಯಕ್ಷ ಖರ್ಗೆಯವರನ್ನು ಭೇಟಿ ಮಾಡಿರುವ ಬಗ್ಗೆ ಮಾತನಾಡಿದ, ಪಕ್ಷದಲ್ಲಿ ಮತ್ತು ಸರಕಾರದಲ್ಲಿ ಸಮಸ್ಯೆಯೇ ಇಲ್ಲ. ಯಾರ ಮನೆಗೆ ಹೋದರೆ ಸುದ್ದಿ ಮಾಡ್ತೀರ. ಕೆಲಸ ಇರುತ್ತೆ ಹೋಗಿರುತ್ತಾರೆ. ಸತೀಶ್ ಜಾರಕಿಹೊಳಿ ಮನೇಲಿ ನಾವು ಐವರು ಸೇರಿ ಊಟ ಮಾಡಿದ್ದೆವು. ಅದು ತಪ್ಪಾ ಭೇಟಿ ವೇಳೆ ರಾಜಕೀಯನೂ ಮಾತನಾಡಿರುತ್ತೇವೆ. ಸರಕಾರದಲ್ಲಿ ಮಂತ್ರಿಗಳಿರುವುದರಿಂದ ಇಲಾಖೆಯಲ್ಲಿ ಏನೆಲ್ಲ ಕೆಲಸಗಳಾಗಬೇಕು ಅದರ ಬಗ್ಗೆನೂ ಚರ್ಚೆ ಮಾಡ್ತಿವಿ. ಭೇಟಿಯಾದಾಗ ಏನು ಮಾತನಾಡಬಾರದೆ ಯಾಕೆ ನಿಮಗೆ ಇಷ್ಟೊಂದು ಆಸಕ್ತಿ ಎಂದು ಪ್ರಶ್ನಿಸಿದ ಅವರು, ಕಾಂಗ್ರೆಸ್ ಪಕ್ಷದಲ್ಲಿ ಹೈಕಮಾಂಡ್ ಬಿಟ್ಟು ಏನು ತೀರ್ಮಾನಗಳಾಗುವುದಿಲ್ಲ ಎಂದು ಸ್ಪಷ್ಟಪಡಿಸಿದರು. ಹೈಕಮಾಂಡ್ ನವರು ಇಲ್ಲಿವರೆಗೂ ಲೀಡರ್‌ಶಿಪ್ ಬದಲಾವಣೆ ಆಗುತ್ತೆ ಸಂಪುಟ ಪುನರ್ ರಚನೆ ಆಗುತ್ತೆ ಅಂತ ಯಾರಾದರು ಹೇಳಿದ್ದಾರೆಯೇ ಎಂದರು.

ಈ ದಿನದ ದರ ಪೆಟ್ರೋಲ್: 103.50 ₹/L ಡೀಸೆಲ್ : 90.03 ₹/L ಬಂಗಾರ: ₹12,584/Gram24ct ₹11,535/Gram22ct ಬೆಳ್ಳಿ: ₹164.00/Gram



## ಸಿದ್ಧಸೂಕ್ತಿ

ಡಾ ಆರೂಢಭಾರತೀ ಸ್ವಾಮೀಜಿ
ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ
ರಾಮೋಹಳ್ಳಿ

### ದೇವದೇವಿಯರ ಅವಹೇಳನ - 2

ಗಣಪತಿ ಗುಣಪತಿ ವಿಘ್ನಾಧಿಪತಿ ವಿದ್ಯಾಧಿಪತಿ ಮಕ್ಕಳಾಧಿಪತಿ. ಮೊದಲ ಪೂಜೆ ಈತನಿಗೆ. ಭಾರತ ಸ್ವಾತಂತ್ರ್ಯ ಸಂಗ್ರಾಮದಲ್ಲಿ ತಿಲಕರು ಸಾರ್ವಜನಿಕ ಗಣೇಶ ಪೂಜೆಯನ್ನು ಮುನ್ನೆಲೆಗೆ ತಂದರು. ಗಣೇಶಪೂಜೆ ಸ್ತೋತ್ರಗಳು ಪ್ರತಿ ದಿನ ಕೋಟಿ ಕೋಟಿ ಭಕ್ತರನ್ನು ಭಕ್ತಿ-ಸಂಗೀತಸಾಗರದಲ್ಲಿ ಮುಳಿಗಿಸೇಳಿಸುತ್ತಿವೆ. ಇಂಥ ಗಣೇಶನ ಬಗ್ಗೆ ರವಿಶಂಕರ ಗುರೂಜಿ ಬನ್ನಂಜೆ ಗೋವಿಂದಾಚಾರ್ಯ ಇಳಕಲ್ ಮಹಾಂತಸ್ವಾಮಿ ಮುಂತಾದವರು ಗೇಲಿ ಮಾಡಿದ್ದಾರೆ. ಪಾರ್ವತಿಯ ಮೈ ಮಣ್ಣಿಂದ ಗಣೇಶ! ಅಷ್ಟೊಂದು ಮಣ್ಣಿತ್ತಾ? ಸ್ನಾನ ಮಾಡ್ತಿರಲಿಲ್ಲವಾ? ಗಿಡ್ಡ ವೀರಭದ್ರ, ನೀ ಯಾರಲೇ ಮಗನಾ? ನೀ ಹ್ಯಾಂಗ್ ಹುಟ್ಟಿದ್ಯೋ ಬೋ.. ಮಗನಾ? ಎಂದಿದ್ದಾರೆ. ಭಾರಿ ಭಾರಿ ಪ್ರವಚನ ಮಾಡುವ, ಲಕ್ಷಾಂತರ ಜನರ ಅಜ್ಞಾನ ಕಳೆವ ಪೂಜ್ಯರು ವಿದ್ವನ್ಮಣಿಗಳೇ ಹೀಗಾದರೆ ಸಂಸ್ಕಾರವನ್ನೇ ಹೊಂದಿರದ ಪಾಮರ ಹಿಂಬಾಲಕರ ಪಾಡೇನು! ದೇವತೆಗಳೇ ಕಾಲ್ಪನಿಕ. ದಿವ್ಯತೆಗಾಗಿ ಅಯೋನಿಜತ್ವ ಪ್ರತಿಪಾದನೆಗೆ ಇಂಥ ರೋಚಕ ಪರಿಕಲ್ಪನೆ. ಚೂಪು ಕಲ್ಲಿನಿಂದ ತುಂಡರಿಸಿ ಹಸಿ ಮಾಂಸ ತಿನ್ನುವ ಹತ್ತಾರು ಸಾವಿರ ವರ್ಷಗಳಾಚಿನ ಇಂಥ ಪರಿಕಲ್ಪನೆಯ ಹಿಂದಿನ ವಿಶಾಲ ಸಂಸ್ಕೃತಿಯ ಹೃದಯವನ್ನು ಅರಿಯದಷ್ಟು ಕುಬ್ಜವಾದವು ಇಂದಿನ ಕಂಪ್ಯೂಟರ್ ಯುಗದ ಹೃದಯಗಳು!

# 6.29 ಕೋಟಿ ರೂ. ವಶ; ಆರು ದರೋಡೆಕೋರರ ಬಂಧನ

## 3 ತಿಂಗಳ ಯೋಜನೆ, 15 ದಿನಗಳ ಸ್ಥಳ ಪರಿಶೀಲನೆ, ಸಿಸಿಟಿವಿ ಇಲ್ಲದ ಸ್ಥಳಗಳು, ನಕಲಿ ನಂಬರ್ ಪ್ಲೇಟ್ ಬಳಕೆ

• ಉದಯವಾಹಿನಿ, ಬೆಂಗಳೂರು

ಆರು ರಾಜ್ಯಗಳಲ್ಲಿ ಕಾರ್ಯಾಚರಣೆ, 200ಕ್ಕೂ ಹೆಚ್ಚು ಪೊಲೀಸರ ತಂಡ, ಅಪಾರ ಪ್ರಮಾಣದ ಫೋನ್ ಡೇಟಾ ಮತ್ತು ಸಿಸಿಟಿವಿ ದೃಶ್ಯಾವಳಿಗಳ ಪರಿಶೀಲನೆ, ಮತ್ತು 72 ಗಂಟೆಗಳ ಬೃಹತ್ ಶೋಧ. ಇದರ ಜೊತೆಗೆ ಮಾನವ ಗುಪ್ತಚರ ಮಾಹಿತಿ. ಈ ಎಲ್ಲದರ ಸಹಾಯದಿಂದ, ಬೆಂಗಳೂರು ಪೊಲೀಸರು ನವೆಂಬರ್ 19 ರಂದು ಬ್ಯಾಂಕ್ ಕ್ಯಾಶ್ ವ್ಯಾನ್‌ನಿಂದ ಕಳವಾಗಿದ್ದ 7.11 ಕೋಟಿ ರೂ.ನಲ್ಲಿ 6.29 ಕೋಟಿ ರೂ. ವಶಪಡಿಸಿಕೊಂಡು, ಆರು ಜನರನ್ನು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ.



ಉದಯವಾಹಿನಿ ಚಿತ್ರ

**ಎಟಿಎಂ ಹಣ ದರೋಡೆ ಪ್ರಕರಣ**

ಬಂಧಿತರಲ್ಲಿ ಗೋವಿಂದಪುರ ಪೊಲೀಸ್ ಠಾಣೆಯ ಪೂರ್ವ ವಿಭಾಗ ಪೊಲೀಸ್ ಕಾನ್ಸ್‌ಟೇಬಲ್ ಅಣ್ಣಪ್ಪ ನಾಯಕ್ ಸೇರಿದ್ದಾರೆ.

ಇವರೊಂದಿಗೆ ಕ್ಯಾಶ್ ವ್ಯಾನ್‌ಗಳನ್ನು ನಿರ್ವಹಿಸುವ ಸಿಎಂಎಸ್ ಕ್ಯಾಶ್ ಮ್ಯಾನೇಜ್‌ಮೆಂಟ್ ಸರ್ವಿಸಸ್‌ನ ಮಾಜಿ ಉದ್ಯೋಗಿ ಜೇವಿಯರ್, ಸಾರಿಗೆ ವಾಹನದ ಉಸ್ತುವಾರಿ ಗೋಪಾಲ್ ಪ್ರಸಾದ್, ಮತ್ತು ಅವರ ಸ್ನೇಹಿತರಾದ ನವೀನ್, ನೆಲ್ಸನ್ ಮತ್ತು ರವಿ ಇದ್ದಾರೆ.

**ಚಾಣಾಕ್ಷ ತನದಿಂದ ದರೋಡೆ:** ದರೋಡೆಕೋರರ ತಂಡವು ಒಳಸಹಾಯದೊಂದಿಗೆ ಹಗಲು ಹೊತ್ತಿನಲ್ಲೇ ಈ ದರೋಡೆಯನ್ನು ನಡೆಸಿತ್ತು. ಇದಕ್ಕಾಗಿ ಮೂರು ತಿಂಗಳ ಯೋಜನೆಯನ್ನು ರೂಪಿಸಲಾಗಿತ್ತು.

15 ದಿನಗಳ ಕಾಲ ಸ್ಥಳ ಪರಿಶೀಲನೆ ನಡೆಸಲಾಗಿತ್ತು. ದರೋಡೆಕೋರರು ಸಿಸಿಟಿವಿ ಕವರೇಜ್ ಇಲ್ಲದ ಸ್ಥಳಗಳನ್ನು ಆರಿಸಿಕೊಂಡಿದ್ದರು. ನಕಲಿ ನಂಬರ್ ಪ್ಲೇಟ್‌ಗಳನ್ನು ಹೊಂದಿದ್ದ ಅನೇಕ ವಾಹನಗಳನ್ನು ಬಳಸಿದ್ದರು. ಪತ್ತೆ ಹಚ್ಚುವುದನ್ನು ತಪ್ಪಿಸಲು ವಾಟ್ಸಾಪ್ ಕರೆಗಳ ಮೂಲಕ ವಿವಿಧ ಭಾಷೆಗಳಲ್ಲಿ ಸಂವಹನ ನಡೆಸಿದ್ದರು.

**ಉಳಿದ ಹಣಕ್ಕಾಗಿ ಹುಡುಕಾಟ:** ಅಣ್ಣಪ್ಪ, ಜೇವಿಯರ್ ಮತ್ತು ಗೋಪಾಲ್ ನೀಡಿದ ಮಾಹಿತಿಯ ಮೇರೆಗೆ, ಅವರ ಇತರ ಮೂವರು ಸಹಚರರನ್ನು ಹೈದರಾಬಾದ್‌ನ ಒಂದು ಲಾಡ್ಜ್‌ನಲ್ಲಿ ಬಂಧಿಸಲಾಯಿತು ಮತ್ತು ಅವರಿಂದ 53 ಲಕ್ಷ ರೂ.ವಶಪಡಿಸಿಕೊಳ್ಳಲಾಗಿದೆ. ದರೋಡೆಕೋರರ 6 ರಿಂದ 8 ಜನರ ತಂಡದ ಭಾಗವಾಗಿರುವ ಇನ್ನೂ ಇಬ್ಬರು ಶಂಕಿತರ ಜಾಡು ಹಿಡಿದಿದ್ದು, ಕಳ್ಳತನವಾದ ಅಂತಿಮ ಭಾಗವಾದ 82 ಲಕ್ಷ ರೂ. ಇನ್ನೂ ವಶಪಡಿಸಿಕೊಳ್ಳಬೇಕಿದೆ.

ಕಾನ್ಸ್‌ಟೇಬಲ್ ನಾಯಕ್ ಸುಲಭ ಸುಳಿವುಗಳನ್ನು ಬಿಡದೆಯೇ ಅಪರಾಧವನ್ನು ಕಾರ್ಯಗತಗೊಳಿಸಲು ಗುಂಪಿಗೆ ತರಬೇತಿ ನೀಡಿದ್ದರು ಎನ್ನಲಾಗಿದೆ. ಸಿಎಂಎಸ್ ಸಾರಿಗೆ ಉಸ್ತುವಾರಿ ಗೋಪಾಲ್ ಪ್ರಸಾದ್ ಅವರು ಕ್ಯಾಶ್ ವ್ಯಾನ್‌ನ ನೈಜ-ಸಮಯದ ಚಲನೆಯ ವಿವರಗಳನ್ನು ಒದಗಿಸಿದ್ದರು. ದರೋಡೆಕೋರರು ನಗರದಿಂದ ನಿರ್ಗಮಿಸಿದ ನಂತರ, ಜೇವಿಯರ್ ಹಣವನ್ನು ಪಡೆದಿದ್ದರು. ಅಪರಾಧಕ್ಕೆ ಬಳಸಿದ ಎಸ್‌ಯುವಿ ವಾಹನವು ಚಿತ್ತೂರು ಜಿಲ್ಲೆಯಲ್ಲಿ ಪತ್ತೆಯಾಗಿದ್ದು, ಅದರೊಳಗೆ ಒಡೆದ ನಗದು ಪೆಟ್ಟಿಗೆಗಳು ಕಂಡುಬಂದಿವೆ.

### ಸಿಎಂಎಸ್ ಸಂಸ್ಥೆಯ ವಿರುದ್ಧ ಗಂಭೀರ ಆರೋಪ

**ಕಮಿಷನರ್ ಸಿಂಗ್ ಅವರು ಸಿಎಂಎಸ್ ಸಂಸ್ಥೆಯಲ್ಲಿನ ಲೋಪಗಳನ್ನು ಎತ್ತಿ ತೋರಿಸಿದ್ದಾರೆ. ನಗದು ಸಾಗಣೆಗಾಗಿ ಆರ್‌ಬಿಐ ಮಾರ್ಗಸೂಚಿಗಳನ್ನು ಉಲ್ಲಂಘಿಸಲಾಗಿದೆ ಎಂದು ಅವರು ಹೇಳಿದ್ದಾರೆ. ಸಂಸ್ಥೆಯ ಪರವಾನಗಿಯನ್ನು ರದ್ದುಗೊಳಿಸಲು ಶಿಫಾರಸು ಮಾಡುವುದಾಗಿ ಅವರು ತಿಳಿಸಿದ್ದಾರೆ.**

### 5.76 ಕೋಟಿ ರೂ. ನಗದು ವಶ

**ಡೇರಿ ಸರ್ಕಲ್ ಫ್ಲೈಓವರ್‌ನಲ್ಲಿ ನಡೆದ ಈ ಅಪರಾಧದ ಬಗ್ಗೆ ತಪ್ಪು ನಿರ್ದೇಶಾಂಕಗಳೊಂದಿಗೆ ಎರಡು ಗಂಟೆಗಳ ನಂತರ ವರದಿಯಾಗಿತ್ತು. ಇದರಿಂದ ಪೊಲೀಸರು ತಕ್ಷಣದ ಕಾರ್ಯಾಚರಣೆಗೆ ಬೇಕಾದ ಗೋಲ್ಡನ್-ಹವರ್ ಪ್ರಯೋಜನವನ್ನು ಕಳೆದುಕೊಂಡರು ಎಂದು ಪೊಲೀಸ್ ಕಮಿಷನರ್ ಸೀಮಂತ್ ಕುಮಾರ್ ಸಿಂಗ್ ಅವರು ತಿಳಿಸಿದ್ದಾರೆ. ಬೆಂಗಳೂರಿನ ಸೆಂಟ್ರಲ್ ಕ್ರೈಮ್ ಬ್ರಾಂಚ್ ಮತ್ತು ದಕ್ಷಿಣ ವಿಭಾಗದ ಸಿಬ್ಬಂದಿಯನ್ನು ಕೇರಳ, ತಮಿಳುನಾಡು, ಗೋವಾ, ಆಂಧ್ರಪ್ರದೇಶ ಮತ್ತು ತೆಲಂಗಾಣ ರಾಜ್ಯಗಳಿಗೆ ಕಳುಹಿಸಲಾಗಿತ್ತು. ಸಿಸಿಟಿವಿ ವಿಶ್ಲೇಷಣೆಯ ಆಧಾರದ ಮೇಲೆ, ಬೆಂಗಳೂರಿನವರೇ ಆದ ಮುಖ್ಯ ಸಂಚುಕೋರರು ಅಣ್ಣಪ್ಪ, ಜೇವಿಯರ್ ಮತ್ತು ಗೋಪಾಲ್ ಪ್ರಸಾದ್ ಅವರನ್ನು ಬಂಧಿಸಲಾಯಿತು. ಅವರಿಂದ 5.76 ಕೋಟಿ ವಶಪಡಿಸಿಕೊಳ್ಳಲಾಗಿದೆ.**

## ಕಾಲ್ ಸೆಂಟರ್ ಉದ್ಯೋಗಿಗಳ ಅಪಹರಣ: ಎಂಟು ಆರೋಪಿಗಳ ಸೆರೆ

• ಉದಯವಾಹಿನಿ, ಬೆಂಗಳೂರು

ಕಾಲ್ ಸೆಂಟರ್‌ನ ನಾಲ್ವರು ಉದ್ಯೋಗಿಗಳನ್ನು ಅಪಹರಣ ಮಾಡಿದ್ದ ಪ್ರಕರಣ ಸಂಬಂಧ ಕೋರಮಂಗಲ ಠಾಣೆ ಪೊಲೀಸರು ಕ್ಷಿಪ್ರ ಕಾರ್ಯಾಚರಣೆ ನಡೆಸಿ ಹೆಡ್ ಕಾನ್ಸ್‌ಟೇಬಲ್ ಸೇರಿ ಎಂಟು ಆರೋಪಿಗಳನ್ನು ಬಂಧಿಸಿದ್ದಾರೆ. ಕೋಲಾರ ಜಿಲ್ಲೆಯ ಮಾಲೂರು ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ತನಿಖಾಧಿಕಾರಿಯ ಸಹಾಯಕರಾಗಿ ಕಾರ್ಯನಿರ್ವಹಿಸುತ್ತಿದ್ದ ಹೆಡ್ ಕಾನ್ಸ್‌ಟೇಬಲ್ ಚಲಪತಿ ಸೇರಿ ಎಂಟು ಮಂದಿಯನ್ನು ಬಂಧಿಸಿ, ಇನೋವಾ ಹಾಗೂ ವ್ಯಾಗನರ್ ಕಾರುಗಳನ್ನು ಜಪ್ತಿ ಮಾಡಲಾಗಿದೆ. ಉದ್ಯೋಗಿಯ ಖಾತೆಯಿಂದ ರೂ.18.90 ಲಕ್ಷ ಹಣ ಆರೋಪಿಯೊಬ್ಬರ ಖಾತೆಗೆ ವರ್ಗಾವಣೆ ಆಗಿರುವುದು ತನಿಖೆ ವೇಳೆ ಗೊತ್ತಾಗಿದ್ದು, ಆ ಹಣವನ್ನು ಫ್ರೀಜ್ ಮಾಡಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

**ಪ್ರಕರಣದ ವಿವರ:** ಕೋರಮಂಗಲದಲ್ಲಿರುವ ಕಾಲ್ ಸೆಂಟರ್‌ನಲ್ಲಿ ನಾಲ್ವರು ಉದ್ಯೋಗಿಗಳು ಕೆಲಸ ಮಾಡುತ್ತಿದ್ದು ಹಾಗೂ ಅವರ ಖಾತೆಯಲ್ಲಿ ಲಕ್ಷಾಂತರ ರೂಪಾಯಿ ಹಣವಿರುವ ಮಾಹಿತಿ ಹೊಂದಿದ್ದ ಆರೋಪಿಗಳು, ನಾಲ್ವರನ್ನು ಮಧ್ಯರಾತ್ರಿ ಅಪಹರಿಸಿದ್ದರು. ಮಾಲೂರಿನ ಖಾಸಗಿ ಕಾಲೇಜಿನಲ್ಲಿ ಅವರನ್ನು ಕೂಡಿ ಹಾಕಿ, ಬೆದರಿಸಿ ಅವರ ಖಾತೆಯಲ್ಲಿದ್ದ ಹಣವನ್ನು ತಮ್ಮ ಖಾತೆಗೆ ವರ್ಗಾಯಿಸಿಕೊಂಡಿದ್ದರು. ಈ ಸಂಬಂಧ ಅದೇ ಕಂಪನಿಯಲ್ಲಿ ಕೆಲಸ ಮಾಡುತ್ತಿದ್ದ ಉದ್ಯೋಗಿಯೊಬ್ಬರು ಕೋರಮಂಗಲ ಠಾಣೆಗೆ ದೂರು ನೀಡಿದ್ದರು.

## ಪಿಂಚಣಿಯ ಷರತ್ತು ಸಡಿಲಿಸಲು ಕ್ರಮ: ಸಿಎಂ ಮಾಧ್ಯಮ ಸಲಹೆಗಾರ ಕೆ.ವಿ. ಪ್ರಭಾಕರ್

• ಉದಯವಾಹಿನಿ, ಬೆಂಗಳೂರು

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ನಿವೃತ್ತ ಪತ್ರಕರ್ತರ ಪಿಂಚಣಿಯನ್ನು ರೂ.15 ಸಾವಿರಕ್ಕೆ ಹೆಚ್ಚಿಸಿದ್ದಾರೆ. ಪಿಂಚಣಿ ಪಡೆಯಲು ಇರುವ ಷರತ್ತುಗಳನ್ನು ಸಡಿಲಗೊಳಿಸಲಾಗುವುದು ಎಂದು ಮುಖ್ಯಮಂತ್ರಿಯ ಮಾಧ್ಯಮ ಸಲಹೆಗಾರ ಕೆ.ವಿ. ಪ್ರಭಾಕರ್ ಭರವಸೆ ನೀಡಿದರು. ಭಾರತೀಯ ಹಿರಿಯ ಪತ್ರಕರ್ತರ ಒಕ್ಕೂಟ ಹಾಗೂ ಹಿರಿಯ ಪತ್ರಕರ್ತರ ವೇದಿಕೆ ಆಯೋಜಿಸಿದ್ದ ಹಿರಿಯ ಪತ್ರಕರ್ತರ ಸಮಾವೇಶವನ್ನು ಉದ್ಘಾಟಿಸಿ ಅವರು ಮಾತನಾಡಿದರು. ರಾಜ್ಯದಲ್ಲಿ ಕೇವಲ 240 ಮಂದಿ ನಿವೃತ್ತ ಪತ್ರಕರ್ತರಿಗೆ ಪಿಂಚಣಿಸಿಗುತ್ತಿದೆ. ನಿವೃತ್ತರಾದ ಎಲ್ಲಾ ಅರ್ಹ ಪತ್ರಕರ್ತರಿಗೆ ಪಿಂಚಣಿ ಸಿಗುವಂತೆ ಮಾಡಲು ಪ್ರಯತ್ನಿಸುತ್ತೇನೆ. ಮುಖ್ಯಮಂತ್ರಿಯವರ ಮಾಧ್ಯಮ ಸಂಜೀವಿನಿ ಯೋಜನೆಯನ್ನು ಹಿರಿಯ ಪತ್ರಕರ್ತರಿಗೂ ವಿಸ್ತರಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು. ಊಹಾ ಪತ್ರಿಕೋದ್ಯಮ ಇಂದು ಆಳವಾಗಿ ತಲೆ ಎತ್ತಿದೆ. ಇದಕ್ಕೆ ಕಡಿವಾಣ ಹಾಕದಿದ್ದರೆ ಪತ್ರಿಕೋದ್ಯಮದ ವಿಶ್ವಾಸಾರ್ಹತೆ ಕುಸಿಯಲಿದೆ. ಅಭಿವೃದ್ಧಿ ತನಿಖಾ ಪತ್ರಿಕೋದ್ಯಮ ಸತ್ತು ಹೋಗಿದೆ. ಈ ಹಿಂದೆ ತನಿಖಾ ವರದಿಗಳಿಂದ ಸರ್ಕಾರಗಳು ಬಿದ್ದು ಹೋಗಿರುವ ಹಾಗೂ ಸಚಿವರು ರಾಜೀನಾಮೆ ನೀಡಿರುವ ಹಲವು ನಿದರ್ಶನಗಳಿವೆ. ಆದರೆ, ಈಗ ಅಭಿವೃದ್ಧಿ ಹಾಗೂ ತನಿಖಾ ಪತ್ರಿಕೋದ್ಯಮಕ್ಕೆ ಜಾಗವಿಲ್ಲ. ರಾಜಕೀಯ ನಾಯಕರ ಹೇಳಿಕೆ ಆಧಾರಿತ ಸುದ್ದಿಗಳಿಗೆ ಆದ್ಯತೆ ನೀಡಲಾಗುತ್ತಿದೆ. ರಾಜಕೀಯ ವಿಶ್ಲೇಷಣೆಗಳು, ಸಿನಿಮಾ ನಟ, ನಟಿಯರ ಸುದ್ದಿಗಳು ಹೆಚ್ಚಾಗಿವೆ ಎಂದು ತಿಳಿಸಿದರು. ವೇದಿಕೆ ಅಧ್ಯಕ್ಷ ಆರ್.ಪಿ. ಸಾಂಬಸದಾಶಿವ ರೆಡ್ಡಿ, ಭಾರತೀಯ ಹಿರಿಯ ಪತ್ರಕರ್ತರ ಒಕ್ಕೂಟದ ಪ್ರಧಾನ ಕಾರ್ಯದರ್ಶಿ ಎನ್.ಪಿ. ಚೆಕ್ಕುಟ್ಟಿ, ಕರ್ನಾಟಕ ಮಾಧ್ಯಮ ಅಕಾಡೆಮಿ ಮಾಜಿ ಅಧ್ಯಕ್ಷ ಎಂ. ಸಿದ್ದರಾಜು. ಆನಂದಮ್ ಪುಲಿಪಲುಪುಲ ಉಪಸ್ಥಿತರಿದ್ದರು.

## ನಮ್ಮ ಮೆಟ್ರೋ ಪ್ರಯಾಣಿಕರಿಗೆ ಗುಡ್‌ನ್ಯೂಸ್ ಹೈಟೆಕ್ ಆಗಲಿದೆ ನಾಗವಾರ ಸ್ಟೇಷನ್

• ಉದಯವಾಹಿನಿ, ಬೆಂಗಳೂರು

ನಮ್ಮ ಮೆಟ್ರೋ ಪ್ರಯಾಣಿಕರಿಗೆ ಬಿಎಂಆರ್‌ಸಿಎಲ್ ಗುಡ್ ನ್ಯೂಸ್ ನೀಡಿದೆ. ನಾಗವಾರ ಮೆಟ್ರೋ ನಿಲ್ದಾಣವನ್ನು ಹೈಟೆಕ್ ಮಾಡಲು ಬಿಎಂಆರ್‌ಸಿಎಲ್ ಪ್ಲಾನ್ ಮಾಡಿದ್ದು, ಇದಕ್ಕಾಗಿ ಟೆಂಡರ್ ಕರೆದಿದೆ. ನಾಗವಾರ ಸ್ಟೇಷನ್‌ನಲ್ಲಿ ಶಾಪಿಂಗ್ ಮಾಲ್, ಬಹುಮಹಡಿ ಪಾರ್ಕಿಂಗ್ ಸೌಲಭ್ಯ ಜೊತೆಗೆ ಕಾರ್ಪೋರೇಟ್ ಕಚೇರಿ ತೆರೆಯಲು ಉದ್ದೇಶಿಸಿದ್ದು, ನಿಲ್ದಾಣವನ್ನು ನಾಲ್ಕು ಮಹಡಿಯಲ್ಲಿ ಕಟ್ಟಲು ಯೋಜನೆ ರೂಪಿಸಲಾಗಿದೆ. ನಾಗವಾರ ಮೆಟ್ರೋ ನಿಲ್ದಾಣವು ಮಾನ್ಯತಾ ಟೆಕ್ ಪಾರ್ಕ್, ಕಾರ್ಲೆ ಟೌನ್ ಸೆಂಟರ್, ದೊಡ್ಡ ವಸತಿ ಪ್ರದೇಶಗಳಿಗೆ ವಾಣಿಜ್ಯ ಅವಕಾಶವನ್ನು ನೀಡುವ ಉದ್ದೇಶದಿಂದ ಈ ಯೋಜನೆ ಮಾಡಲಾಗಿದೆ. ಡಿಸೆಂಬರ್ 2026ರ ವೇಳೆಗೆ ಮೆಟ್ರೋ ನಿಲ್ದಾಣವು ಕಾರ್ಯಾರಂಭ ಮಾಡಲು ನಿರ್ಧರಿಸಲಾಗಿದೆ.

## ಸುಮಾರು 10,000ಕ್ಕೂ ಹೆಚ್ಚು ನಿವಾಸಿಗಳಿಂದ ಪ್ರತಿಭಟನೆ

• ಉದಯವಾಹಿನಿ, ಬೆಂಗಳೂರು

ಆನೇಕಲ್ ತಾಲ್ಲೂಕಿನ ಮುತ್ತನಲ್ಲೂರು, ಹೆಬ್ಬಗೋಡಿ ಮತ್ತು ಸಿಂಗೇನ ಅಗ್ರಹಾರದ 10,000 ಕ್ಕೂ ಹೆಚ್ಚು ನಿವಾಸಿಗಳು ನ. 29 ರಂದು ಎಎಸ್‌ಬಿ ಕಾಲೇಜು ಮೈದಾನದಲ್ಲಿ ತಮ್ಮ ಪ್ರದೇಶಗಳಲ್ಲಿನ ಹದಗೆಟ್ಟ ರಸ್ತೆಗಳ ವಿರುದ್ಧ ಪ್ರತಿಭಟನೆ ನಡೆಸಲಿದ್ದಾರೆ.

ಆನೇಕಲ್ ತಾಲ್ಲೂಕು ನಾಗರಿಕರ ಕಲ್ಯಾಣ ಸಮಿತಿಯಡಿ ಈ ಪ್ರತಿಭಟನೆ ನಡೆಸಲಾಗುತ್ತಿದೆ. ಹೀಲಳಿಗೆ, ಸಿಂಗೇನ ಅಗ್ರಹಾರ, ಅನಂತ ನಗರ ಮತ್ತು ಸಂಪಿಗೆ ನಗರ ರಸ್ತೆಗಳನ್ನು ಆದಷ್ಟು ಬೇಗ ಡಾಂಬರೀಕರಣಗೊಳಿಸಬೇಕೆಂದು ಒತ್ತಾಯಿಸಲಾಗಿದೆ. ಸುಮಾರು ಎರಡು ದಶಕಗಳಿಂದ ಈ ರಸ್ತೆಗಳನ್ನು ದುರಸ್ತಿ ಮಾಡಿಲ್ಲ. ಪದೇ ಪದೇ ಮನವಿ ಮಾಡಿದ್ದರೂ ಯಾವುದೇ ಪ್ರಯೋಜನವಾಗಿಲ್ಲ ಎಂದು ಸಮಿತಿ ಆರೋಪಿಸಿದೆ. 20 ಕ್ಕೂ ಹೆಚ್ಚು ಅಪಾರ್ಟ್‌ಮೆಂಟ್‌ಗಳಲ್ಲಿ ವಾಸಿಸುವ ಜನರು ಸರಿಯಾದ ರಸ್ತೆ, ಒಳಚರಂಡಿ



ಉದಯವಾಹಿನಿ ಚಿತ್ರ

ಮತ್ತು ನೀರು ಪೂರೈಕೆಯಲ್ಲಿದೆ ಮೂಲಭೂತ ಸೌಲಭ್ಯಗಳಿಂದ ವಂಚಿತರಾಗಿದ್ದಾರೆ ಎಂದು ಹೇಳಲಾಗಿದೆ.

ಸಮಸ್ಯೆ ಬಗ್ಗೆ ಸ್ಥಳೀಯ ಪಂಚಾಯತ್, ತಹಶೀಲ್ದಾರ್ ಮತ್ತು ಶಾಸಕರ ಗಮನಕ್ಕೆ ತಂದಾಗ ಪ್ಯಾಚ್‌ವರ್ಕ್ ಮಾಡಲಾಯಿತು. ಆದರೆ ಹೆಚ್ಚುತ್ತಿರುವ ವಾಹನ ದಟ್ಟಣೆಯಿಂದಾಗಿ ಈ ಪ್ಯಾಚ್‌ವರ್ಕ್ ಕೆಲವೇ ವಾರಗಳಲ್ಲಿ ಕಿತ್ತುಹೋಗುತ್ತಿದೆ. ಆನೇಕಲ್ ಶಾಸಕ ಬಿ. ಶಿವಣ್ಣ ನಾಗರಿಕ ಸಮಸ್ಯೆಗಳನ್ನು ಪರಿಹರಿಸಲು ಯಾವುದೇ ಕ್ರಮಗಳನ್ನು ತೆಗೆದುಕೊಂಡಿಲ್ಲ ಎಂದು ಕೆಲವು ನಿವಾಸಿಗಳು ಆರೋಪಿಸಿದ್ದಾರೆ.

> **ಹುಸ್ಕೂರು ರಸ್ತೆಯಿಂದ ಅನಂತ ನಗರ ಹೀಲಳಿಗೆವರೆಗಿನ 3 ಕಿ.ಮೀ. ರಸ್ತೆ ಕೆಟ್ಟ ಸ್ಥಿತಿಯಲ್ಲಿದೆ. ಅನಂತ ನಗರದಲ್ಲಿನ ಭೂಗತ ಒಳಚರಂಡಿ ಮಾರ್ಗವು ಹಾನಿಗೊಳಗಾಗಿದ್ದು, ಕೊಳಚೆ ನೀರು ಮುಖ್ಯ ರಸ್ತೆಗೆ ಹರಿಯುತ್ತದೆ. ಚಂದಾಪುರ, ಬೊಮ್ಮಸಂದ್ರ ಮತ್ತು ಹೆಬ್ಬಗೋಡಿ ಪಂಚಾಯತ್‌ಗಳು ರೂ. 25 ಕೋಟಿ ಆಸ್ತಿ ತೆರಿಗೆಯನ್ನು ಸಂಗ್ರಹಿಸುತ್ತವೆ. ಆದರೆ ನಿವಾಸಿಗಳಿಗೆ ಸರಿಯಾದ ಸೌಲಭ್ಯಗಳನ್ನು ಒದಗಿಸುತ್ತಿಲ್ಲ ಎಂದು ಹೇಳಿದರು.**
>
> -ಆನೇಕಲ್‌ನ ಶಿವ ರೆಡ್ಡಿ

## ಮೀನು ಉತ್ಪಾದನೆಯಲ್ಲಿ ಕರ್ನಾಟಕ ಮೂರನೇ ಸ್ಥಾನದಲ್ಲಿದೆ: ಸಿದ್ದರಾಮಯ್ಯ

• ಉದಯವಾಹಿನಿ, ಬೆಂಗಳೂರು

ಕರ್ನಾಟಕವು ಈಗ ಮೀನು ಉತ್ಪಾದನೆಯಲ್ಲಿ ದೇಶದಲ್ಲಿ ಮೂರನೇ ಸ್ಥಾನದಲ್ಲಿದೆ. ಜಾಗತಿಕ ಮೀನು ಉತ್ಪಾದನೆಯಲ್ಲಿ ಭಾರತದ ಪಾಲು ಸುಮಾರು ಶೇ 7.7 ರಷ್ಟಿದ್ದು, ರಫ್ತಿನಲ್ಲಿ ನಾಲ್ಕನೇ ಸ್ಥಾನದಲ್ಲಿದೆ' ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ.

ವಿಶ್ವ ಮೀನುಗಾರಿಕಾ ದಿನಾಚರಣೆಯಂದು 'ಮತ್ಸ್ಯ ಮೇಳ 2025ದಲ್ಲಿ ಮಾತನಾಡಿದ ಅವರು, ಮೀನುಗಾರಿಕೆ ಲಕ್ಷಾಂತರ ಕುಟುಂಬಗಳಿಗೆ ಆಹಾರ ಭದ್ರತೆ, ಪೋಷಣೆ ಮತ್ತು ಜೀವನೋಪಾಯವನ್ನು ಖಾತ್ರಿಪಡಿಸುವ ನಿರ್ಣಾಯಕ ಉದ್ಯಮವಾಗಿದೆ ಎಂದು ಹೇಳಿದರು. ಕರ್ನಾಟಕವು 32 ಕಿ.ಮೀ ಕರಾವಳಿ ಮತ್ತು 5.5 ಲಕ್ಷ ಹೆಕ್ಟೇರ್ ಒಳನಾಡಿನ ಜಲ ಸಂಪನ್ಮೂಲಗಳನ್ನು ಹೊಂದಿದ್ದು, ಮೀನು ಉತ್ಪಾದನೆಯಲ್ಲಿ ದೇಶದಲ್ಲಿ ಮೂರನೇ ಸ್ಥಾನದಲ್ಲಿದೆ. ಈ ವಲಯವು ರಾಜ್ಯದಲ್ಲಿ ಸುಮಾರು 10 ಲಕ್ಷ ಜನರಿಗೆ ಆಧಾರವಾಗಿದೆ ಎಂದು ಹೇಳಿದರು. ಈ ವಲಯಕ್ಕೆ ಸರ್ಕಾರದ ಬದ್ಧತೆಯನ್ನು ಪುನರುಚ್ಚರಿಸಿದ ಅವರು, ಯಾಂತ್ರೀಕೃತ ಮೀನುಗಾರಿಕಾ ದೋಣಿಗಳಿಗೆ ವಾರ್ಷಿಕ ಡೀಸೆಲ್ ಕೋಟಾವನ್ನು 1.5 ಲಕ್ಷ ಕಿಲೋಲೀಟರ್‌ಗಳಿಂದ 2 ಲಕ್ಷ ಕಿಲೋಲೀಟರ್‌ಗಳಿಗೆ ಹೆಚ್ಚಿಸಲಾಗಿದೆ. ಸಾಂಪ್ರದಾಯಿಕ ದೋಣಿಗಳಿಗೆ ಲೀಟರ್‌ಗೆ 35 ರೂ. ಸಬ್ಸಿಡಿ ದರದಲ್ಲಿ ಕೈಗಾರಿಕಾ ಸೀಮೆಎಣ್ಣೆಯನ್ನು ನೀಡಲಾಗುತ್ತಿದೆ ಎಂದು ಹೇಳಿದರು. ವಾರ್ಷಿಕ ಮೀನುಗಾರಿಕೆ ನಿಷೇಧದ ಸಮಯದಲ್ಲಿ ಮೀನುಗಾರರಿಗೆ ನೀಡಲಾಗುತ್ತಿದ್ದ ಆರ್ಥಿಕ ಸಹಾಯವನ್ನು 1,500 ರೂ.ಗಳಿಂದ 3,000 ರೂ.ಗಳಿಗೆ ಹೆಚ್ಚಿಸಲಾಗಿದೆ.

ಮೀನುಗಾರರಿಗೆ 10,000 ಮನೆಗಳ ನಿರ್ಮಾಣ ಕಾರ್ಯ ಪ್ರಾರಂಭವಾಗಿದೆ ಎಂದು ಸಿದ್ದರಾಮಯ್ಯ ಹೇಳಿದರು. ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಮಾತನಾಡಿ, ರಾಜ್ಯದಾದ್ಯಂತ 10,000ಕ್ಕೂ ಹೆಚ್ಚು ಕೆರೆಗಳನ್ನು ತುಂಬಿಸಲಾಗಿದ್ದು, ಒಳನಾಡಿನ ಮೀನುಗಾರಿಕೆಗೆ ಅವಕಾಶ ಕಲ್ಪಿಸಲಾಗಿದೆ. ಸಣ್ಣ ಕೆರೆಗಳನ್ನು ಸೊಸೈಟಿಗಳಿಗೆ ಹಸ್ತಾಂತರಿಸಲಾಗುವುದು. ಆದರೆ, ದೊಡ್ಡ ಕೆರೆಗಳನ್ನು ಹರಾಜು ಮಾಡಲಾಗುವುದು ಎಂದು ಅವರು ಹೇಳಿದರು. ಈ ವರ್ಷ 45 ಮೀನುಗಾರರ ಸಾವನ್ನು ಗಮನದಲ್ಲಿಟ್ಟುಕೊಂಡು ಸರ್ಕಾರವು ಲೈಫ್ ಜಾಕೆಟ್‌ಗಳನ್ನು ವಿತರಿಸಲಿದೆ. ಆಕಸ್ಮಿಕ ಸಾವುಗಳಿಗೆ ಪರಿಹಾರವನ್ನು 10 ಲಕ್ಷ ರೂ.ಗಳಿಗೆ ಹೆಚ್ಚಿಸಲಾಗಿದೆ ಮತ್ತು 24 ಗಂಟೆಗಳ ಒಳಗೆ ಬಿಡುಗಡೆ ಮಾಡಲಾಗುವುದು ಎಂದು ಮೀನುಗಾರಿಕೆ ಸಚಿವ ಮಂಕಾಳ ವೈದ್ಯ ಹೇಳಿದ್ದಾರೆ.




## ರಾಜ್ಯದ ಹಲವೆಡೆ ಸಾಧಾರಣ ಮಳೆಯಾಗುವ ನಿರೀಕ್ಷೆ

• ಉದಯವಾಹಿನಿ, ಬೆಂಗಳೂರು

ಕರಾವಳಿ, ದಕ್ಷಿಣ ಒಳನಾಡಿನ ಹಲವು ಜಿಲ್ಲೆಗಳಲ್ಲಿ ಸಾಧಾರಣ ಮಳೆಯಾಗುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ. ಉತ್ತರ ಒಳನಾಡಿನಲ್ಲಿ ಒಣ ಹವೆಯ ವಾತಾವರಣ ಮುಂದುವರೆಯಲಿದ್ದು, ಬೆಂಗಳೂರಿನಲ್ಲೂ ಮೋಡ ಕವಿದ ವಾತಾವರಣದೊಂದಿಗೆ ಲಘು ಪ್ರಮಾಣದಲ್ಲಿ ಮಳೆಯಾಗಬಹುದು ಎಂಬ ಮುನ್ಸೂಚನೆಯಿದೆ.

**ಯಾವೆಲ್ಲಾ ಜಿಲ್ಲೆಗಳಲ್ಲಿ ಮಳೆ:** ಕರಾವಳಿಯ ಉಡುಪಿ, ಉತ್ತರ ಕನ್ನಡ ಮತ್ತು ದಕ್ಷಿಣ ಕನ್ನಡ ಜಿಲ್ಲೆಗಳಲ್ಲಿ ಸಾಧಾರಣ ಮಳೆಯಾಗುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ. ದಕ್ಷಿಣ ಒಳನಾಡಿನ ಜಿಲ್ಲೆಗಳಾದ ಬೆಂಗಳೂರು ಗ್ರಾಮಾಂತರ, ಬೆಂಗಳೂರು ನಗರ, ಚಾಮರಾಜನಗರ, ಚಿಕ್ಕಬಳ್ಳಾಪುರ,



ಉದಯವಾಹಿನಿ ಚಿತ್ರ

ಚಿಕ್ಕಮಗಳೂರು, ಹಾಸನ, ಕೊಡಗು, ಕೋಲಾರ, ಮಂಡ್ಯ, ಮೈಸೂರು, ರಾಮನಗರ, ಶಿವಮೊಗ್ಗ ಮತ್ತು ತುಮಕೂರು ಲಘು ಮಳೆಯಾಗುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

## ಒಬ್ಬೊಬ್ಬರಿಗೆ 50 ಕೋಟಿ, 1 ಫ್ಲಾಟ್, ಫಾರ್ಚುನರ್ ಕಾರ್ ಆಫರ್ ನಡೀತಿದೆ: ಛಲವಾದಿ ಬಾಂಬ್

• ಉದಯವಾಹಿನಿ, ಬೆಂಗಳೂರು



ಕುರ್ಚಿ ಕಿತ್ತಾಟಕ್ಕಾಗಿ ಕಾಂಗ್ರೆಸ್‌ನಲ್ಲೇ ಕುದುರೆ ವ್ಯಾಪಾರ ನಡೆಯುತ್ತಿದೆ. ಒಬ್ಬೊಬ್ಬರು ಶಾಸಕರಿಗೆ 50 ಕೋಟಿ ರೂಪಾಯಿ ಜೊತೆಗೆ ಒಂದು ಫ್ಲ್ಯಾಟ್, ಒಂದು ಫಾರ್ಚುನರ್ ಕಾರು ಆಫರ್ ನಡೀತಿದೆ ಎಂದು ವಿಧಾನ ಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಹೊಸ ಬಾಂಬ್ ಸಿಡಿಸಿದ್ದಾರೆ.

ಬೆಂಗಳೂರಿನಲ್ಲಿಂದು ಮಾಧ್ಯಮಗಳೊಂದಿಗೆ ಮಾತನಾಡಿದ ಅವರು ಮತ್ತು ಕಾಂಗ್ರೆಸ್‌ನಲ್ಲಿ ವ್ಯಾಪಾರ ನಡೆಯುತ್ತಿದೆ. ಒಬ್ಬೊಬ್ಬರಿಗೆ 50 ಕೋಟಿ ರೂ. ಕೊಡ್ತಿದ್ದಾರೆ ಅನ್ನೋ ಮಾಹಿತಿ ಬಂದಿದೆ. ಚೌಕಾಸಿ ಹೆಚ್ಚಾಗಿ ಕೆಲವರು 75 ಕೋಟಿ, ಇನ್ನೂ ಕೆಲವರು 100 ಕೋಟಿ ಕೊಡಿ ಅಂತ ಕೇಳ್ತಿದ್ದಾರಂತೆ. ಇವರು ಅಷ್ಟಾಗೋದಿಲ್ಲ, ಇಷ್ಟು ತಗೊಳಿ ಅಂತಿದ್ದಾರಂತೆ. 50 ಕೋಟಿ ಮೇಲೆ 1 ಫ್ಲಾಟ್, ಫಾರ್ಚುನರ್ ಕಾರು ಕೊಡ್ತೀವಿ ಅಂತ ಹೇಳ್ತಿದ್ದಾರಂತೆ. ಇಂತಹ ಆಫರ್‌ಗಳು ಕಾಂಗ್ರೆಸ್‌ನಲ್ಲಿ ನಡೀತಿವೆ ಎಂದು ಹೇಳಿದ್ದಾರೆ. ಮೊದಲು ಒಂದು ಪಕ್ಷದವರು ಇನ್ನೊಂದು ಪಕ್ಷದವರನ್ನ ಕುದುರೆ ವ್ಯಾಪಾರ ಮಾಡ್ತಿದ್ದಾರೆ ಅಂತ ಕೇಳಿದ್ದೆವು. ಆದ್ರೆ ಈಗ ಕಾಂಗ್ರೆಸ್‌ನಲ್ಲೇ ಅದು ನಡೀತಿದೆ ಎಂದು ಗಂಭೀರ ಆರೋಪ ಮಾಡಿದ್ದಾರೆ.

**ಸುರ್ಜೇವಾಲನನ್ನ ಅರೆಸ್ಟ್ ಮಾಡಿ:** ಸುರ್ಜೇವಾಲಾ ಈಗಾಗಲೇ ವ್ಯಾಪಾರ ಶುರು ಮಾಡಿದ್ದಾರೆ. ಮಂತ್ರಿ ಸ್ಥಾನ ಬೇಕಾದ್ರೆ ಒಬ್ಬ ಮಂತ್ರಿ 200 ಕೋಟಿ ಸುರ್ಜೇವಾಲಗೆ ಕೊಡಬೇಕಂತೆ. ಶಾಸಕ ವೀರೇಂದ್ರ ಪಪ್ಪಿ ಮೊದಲೇ ಅಡ್ವಾನ್ಸ್ ಕೊಟ್ಟಿದ್ದಾರಂತೆ ಎಂದು ಆರೋಪಿಸಿದ್ದಾರೆ. ಇದನ್ನ ಮೊದಲು ತನಿಖೆ ಮಾಡಬೇಕು ಸುರ್ಜೇವಾಲನನ್ನ ಅರೆಸ್ಟ್ ಮಾಡಬೇಕು. ಕಾಂಗ್ರೆಸ್ ಪಕ್ಷದಲ್ಲೇ ಎರಡು, ಮೂರು, 4 ಪಕ್ಷಗಳಾಗಿವೆ. ದೊಡ್ಡದಾಗಿ ಎರಡು ಪಕ್ಷಗಳು ಕಾಣುತ್ತಿವೆ. ಒಂದು ಸಿಎಂ ಪಕ್ಷ ಇನ್ನೊಂದು ಡಿಸಿಎಂ ಪಕ್ಷ. ಈ ಪಕ್ಷದಲ್ಲಿರುವರನ್ನ ಅವರು ಕೊಂಡುಕೊಳ್ಳೋಕೆ ನೋಡ್ತಿದ್ದಾರೆ.

ಅದಕ್ಕಾಗಿ ಪಕ್ಷದಲ್ಲೇ ಕುದುರೆ ವ್ಯಾಪಾರ ನಡೆಯುತ್ತಿದೆ. ಈ ಬಗ್ಗೆ ತನಿಖೆ ಆಗಬೇಕು ಎಂದು ಆಗ್ರಹಿಸಿದ್ದಾರೆ.

## ಕಳಪೆ ಗುಣ ಮಟ್ಟದ ಔಷಧ ಪೂರೈಕೆ ತಡೆಗೆ ಕ್ರಮ: ದಿನೇಶ್ ಗುಂಡೂರಾವ್

• ಉದಯವಾಹಿನಿ, ಬೆಂಗಳೂರು

ಪ್ರಮಾಣಿತ ಗುಣಮಟ್ಟ ಹೊಂದಿರದ ಔಷಧಗಳು ಮಾರುಕಟ್ಟೆ ಪ್ರವೇಶಿಸದಂತೆ ತಡೆಯಲು ಸರ್ಕಾರಿ ಪ್ರಯೋಗಾಲಯಗಳ ಪರೀಕ್ಷಾ ಸಾಮರ್ಥ್ಯ ಹೆಚ್ಚಳ, ಮಾರುಕಟ್ಟೆ ಕಣ್ಗಾವಲಿನಂತಹ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಹೇಳಿದರು.



ಇಂಡಿಯನ್ ಫಾರ್ಮಾಸ್ಯುಟಿಕಲ್ ಅಸೋಸಿಯೇಷನ್ ಕರ್ನಾಟಕ ಶಾಖೆ, ಕರ್ನಾಟಕ ಡ್ರಗ್ಸ್ ಆಂಡ್ ಫಾರ್ಮಾಸ್ಯುಟಿಕಲ್ ಮ್ಯಾನುಫ್ಯಾಕ್ಚರ್ಸ್ ಅಸೋಸಿಯೇಷನ್ ಜಂಟಿಯಾಗಿ ನಗರದಲ್ಲಿ ಶನಿವಾರ ಹಮ್ಮಿಕೊಂಡಿದ್ದ ಕಾರ್ಯಾಗಾರ ಉದ್ಘಾಟಿಸಿ, ಮಾತನಾಡಿದರು. ಆಹಾರೋತ್ಪನ್ನ ಸೇರಿ ವಿವಿಧ ವಸ್ತುಗಳಿಗೆ ಸಂಬಂಧಿಸಿದಂತೆ ಬಡವರು, ಮಧ್ಯಮ ವರ್ಗದವರು ಶ್ರೀಮಂತರ ಆಯ್ಕೆಗಳು ಬೇರೆ ಬೇರೆಯಾಗಿದ್ದರೂ, ಔಷಧದ ವಿಷಯದಲ್ಲಿ ಈ ಆಯ್ಕೆ ಇರುವುದಿಲ್ಲ. ಯಾವುದೇ ಔಷಧದ ಕಾರಣದಿಂದ ಮರಣ ಸಂಭವಿಸಿದರೆ ಆ ಪ್ರಕರಣವನ್ನು ದತ್ತಾಂಶಕ್ಕೆ ಹೋಲಿಸಿ ವಿನಾಯಿತಿ ನೀಡಲು ಸಾಧ್ಯವಿಲ್ಲ. ಆದ್ದರಿಂದ ಉತ್ಪಾದಕರು ಸರ್ಕಾರದ ಮಾನದಂಡವನ್ನು ಸರಿಯಾಗಿ ಅಳವಡಿಸಿಕೊಳ್ಳಬೇಕು. ರಾಜ್ಯದ ಜನರಿಗೆ ಅತ್ಯುತ್ತಮ ಗುಣಮಟ್ಟದ ಔಷಧ ಸಿಗುವಂತಾಗಬೇಕು ಎಂದು ಅಭಿಪ್ರಾಯಪಟ್ಟರು. ಪ್ರಮಾಣಿತ ಗುಣಮಟ್ಟ ಕಾಯ್ದುಕೊಳ್ಳದ ಔಷಧಗಳ ತಯಾರಿಕಾ ಕಂಪನಿಗಳನ್ನು ಪೂರೈಕೆ ಸರಪಳಿಯಿಂದ ತೆಗೆದು ಹಾಕಲಾಗುವುದು.

ಯಾವುದೇ 1 ಬ್ಯಾಚ್ ಔಷಧ ಪ್ರಮಾಣಿತ ಗುಣಮಟ್ಟ ಕಾಯ್ದುಕೊಳ್ಳದಿದ್ದರೂ ಆ ಔಷಧ ಜನರ ವಿಶ್ವಾಸವನ್ನು ಕಳೆದುಕೊಳ್ಳಲಿದೆ. ಅಷ್ಟೇ ಅಲ್ಲ, ರೋಗಿಗೆ ಹೆಚ್ಚಿನ ಹಾನಿ ಮಾಡುವ ಸಾಧ್ಯತೆಯೂ ಇರುತ್ತದೆ.

ಅಸಮರ್ಪಕ ಪರೀಕ್ಷೆ, ದಾಖಲಾತಿಯಲ್ಲಿನ ಲೋಪ ಸೇರಿ ವಿವಿಧ ಕಾರಣಗಳಿಂದ ಪ್ರಮಾಣಿತ ಗುಣಮಟ್ಟ ಹೊಂದಿರದ ಔಷಧಗಳು ಮಾರುಕಟ್ಟೆಗೆ ಪ್ರವೇಶಿಸುವ ಸಾಧ್ಯತೆ ಇರುತ್ತದೆ. ಆದ್ದರಿಂದ ಔಷಧಗಳ ಗುಣಮಟ್ಟ ಪರಿಶೀಲನೆಗೆ ಆದ್ಯತೆ ನೀಡಲಾಗಿದೆ' ಎಂದರು.

## ಆರ್‌ಎಸ್‌ಎಸ್ ವಿರುದ್ಧ ಜನಜಾಗೃತಿ ಅಭಿಯಾನ: ಮಾವಳ್ಳಿ ಶಂಕರ್

• ಉದಯವಾಹಿನಿ, ಬೆಂಗಳೂರು

ಸಂವಿಧಾನ ಸಮರ್ಪಣಾ ದಿನದ ಅಂಗವಾಗಿ ಕರ್ನಾಟಕ ದಲಿತ ಸಂಘರ್ಷ ಸಮಿತಿಯು (ಅಂಬೇಡ್ಕರ್ ವಾದ) ನ.26ರಿಂದ 2026ರ ಜನವರಿ 26ರವರೆಗೆ ರಾಷ್ಟ್ರೀಯ ಸ್ವಯಂ ಸೇವಕ ಸಂಘದ (ಆರ್‌ಎಸ್‌ಎಸ್) ವಿರುದ್ಧ ಜನಜಾಗೃತಿ ಅಭಿಯಾನ ಹಮ್ಮಿಕೊಳ್ಳಲಿದೆ ಎಂದು ಮಾವಳ್ಳಿ ಶಂಕರ್ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ದೇಶಕ್ಕೆ ಕಂಟಕವಾಗಿರುವ ಆರ್‌ಎಸ್‌ಎಸ್ ಭಾರತೀಯರ ಮಿದುಳಿನಲ್ಲಿ ಅಸಮಾನತೆಯ, ವಿಷಪೂರಿತ ವೈದಿಕ ಧರ್ಮದ ಅಮಲನ್ನು ತುಂಬುತ್ತಿದೆ. ಬಿಜೆಪಿ ನೇತೃತ್ವದ ಕೇಂದ್ರ ಸರ್ಕಾರವು ತಾರತಮ್ಯ ನೀತಿಯನ್ನು ಅನುಸರಿಸುತ್ತಿದೆ. ದಲಿತ ಸಂಘರ್ಷ ಸಮಿತಿ ಇದರ ವಿರುದ್ಧ ನಿರಂತರವಾಗಿ ಜನರನ್ನು ಎಚ್ಚರಿಸುವ ಕೆಲಸ ಮಾಡುತ್ತಿದೆ' ಎಂದರು.

ಆರ್‌ಎಸ್‌ಎಸ್‌ನ ಸಂವಿಧಾನ ವಿರೋಧಿ ನೀತಿಯನ್ನು ಖಂಡಿಸಿ, ಪ್ರಬುದ್ಧ ಭಾರತ ನಿರ್ಮಾಣ ಮಾಡುವ ಸಂವಿಧಾನದ ಆಶಯಗಳನ್ನು ಜಾರಿಗೊಳಿಸಲು ಈ ಜನಜಾಗೃತಿ ಅಭಿಯಾನ ಆಯೋಜಿಸಲಾಗುವುದು. ಇದರ ಜೊತೆಗೆ ದಲಿತ ಸಂಘರ್ಷ ಸಮಿತಿಯ ಸದಸ್ಯತ್ವ ನೋಂದಣಿ ಅಂದೋಲವನ್ನು ಪ್ರಾರಂಭಿಸಲಾಗುವುದು ಎಂದು ಮಾಹಿತಿ ನೀಡಿದರು.

# ಭೂ ಸ್ವಾಧೀನ ಕೋರ್ಟ್ ಪ್ರಕರಣಗಳ ಕರ್ತವ್ಯಲೋಪ, ತನಿಖೆಗೆ ಎಸ್‌ಐಟಿ ರಚನೆ

## ವಿವಿಧ ನ್ಯಾಯಾಲಯಗಳಲ್ಲಿ ಬಾಕಿ ಇರುವ ಜಲ ಸಂಪನ್ಮೂಲ, ಬಿಡಿಎ ಭೂಸ್ವಾಧೀನ ಪ್ರಕರಣಗಳ ಕುರಿತು ವಿಧಾನಸೌಧದಲ್ಲಿ ಸಭೆ

• ಉದಯವಾಹಿನಿ, ಬೆಂಗಳೂರು

ನೀರಾವರಿ ಇಲಾಖೆ, ಬೆಂಗಳೂರು ನಗರಾಭಿವೃದ್ಧಿ ಇಲಾಖೆಯ ಭೂಸ್ವಾಧೀನ ಕೋರ್ಟ್ ಪ್ರಕರಣಗಳ ಕರ್ತವ್ಯ ಲೋಪಗಳ ಬಗ್ಗೆ ತನಿಖೆಗೆ ಎಸ್‌ಐಟಿ ರಚಿಸಲಾಗುವುದು. ಕರ್ತವ್ಯಲೋಪ ಎಸಗಿರುವ ಅಧಿಕಾರಿಗಳನ್ನು ಅಮಾನತುಗೊಳಿಸಿ, ವಕೀಲರನ್ನು ವಜಾಗೊಳಿಸಲಾಗುವುದು ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಹೇಳಿದ್ದಾರೆ.

**ನೀರಾವರಿ ಇಲಾಖೆಗೆ ಸಂಬಂಧಿಸಿದ 61, 843 ಪ್ರಕರಣಗಳು ಬಾಕಿ:** ವಿವಿಧ ನ್ಯಾಯಾಲಯಗಳಲ್ಲಿ ಬಾಕಿ ಇರುವ ಜಲ ಸಂಪನ್ಮೂಲ, ಬಿಡಿಎ ಭೂಸ್ವಾಧೀನ ಪ್ರಕರಣಗಳ ಕುರಿತು ವಿಧಾನಸೌಧದಲ್ಲಿ ಸಭೆ ನಡೆಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಉಪ ಮುಖ್ಯಮಂತ್ರಿ, ಭೂಸ್ವಾಧೀನ ಪ್ರಕ್ರಿಯೆಗೆ ಸಂಬಂಧಿಸಿದಂತೆ ಇತ್ತೀಚೆಗೆ ಕೃಷ್ಣ ಭಾಗ್ಯ ಜಲ ನಿಗಮದಲ್ಲಿ ಒಪ್ಪಿತ ಭೂಸ್ವಾಧೀನಕ್ಕೆ ಪರಿಹಾರದ ಮೊತ್ತ ಹೆಚ್ಚಿಸುವ ಐತಿಹಾಸಿಕ ತೀರ್ಮಾನ ತೆಗೆದುಕೊಂಡಿದ್ದೇವೆ. ಇದಕ್ಕೆ ಸುಮಾರು 75 ಸಾವಿರ ಕೋಟಿ ರೂ. ಮೀಸಲಿರಿಸಲಾಗುವುದು. ವಿವಿಧ ನೀರಾವರಿ ನಿಗಮಗಳ ವ್ಯಾಪ್ತಿಯಲ್ಲಿ 61, 843 ಪ್ರಕರಣಗಳಿವೆ ಎಂದರು.

ಕಂದಾಯ ಇಲಾಖೆಯವರು ಬೆಂಗಳೂರು ವ್ಯಾಪ್ತಿಯಲ್ಲಿ ತನಿಖೆ ಮಾಡಲು ಆದೇಶ ಮಾಡಿದ್ದು, ಅಧಿಕಾರಿಗಳು, ಕಾನೂನು ತಂಡದವರು ಸೇರಿ ಸರಿಯಾದ ಸಮಯದಲ್ಲಿ ಅರ್ಜಿ ಹಾಕದೇ ಕಾಲಹರಣ ಮಾಡಿರುವುದು ಕಂಡುಬಂದಿದೆ. ಈ ವಿಚಾರವಾಗಿ ವರದಿ ಸಲ್ಲಿಸುವಂತೆ ಸೂಚಿಸಿದ್ದೇವೆ. ಕೆಲವು ಪ್ರಮುಖ ಪ್ರಕರಣಗಳು ನ.10ರಂದು ಸುಪ್ರೀಂ ಕೋರ್ಟ್‌ನಲ್ಲಿ ವಿಚಾರಣೆ ನಡೆಯಲಿದ್ದು, ಅಷ್ಟರೊಳಗೆ ನಮ್ಮಲ್ಲಿ ಆಗಿರುವ ನ್ಯೂನ್ಯತೆ ಗಮನಕ್ಕೆ ತರಬೇಕಾಗಿದೆ. ಇದರ ಜೊತೆಗೆ ಎಸ್‌ಐಟಿ ರಚಿಸಿ ಎಲ್ಲೆಲ್ಲಿ ಯಾವ ರೀತಿ ಪಿತೂರಿ ನಡೆದಿದೆ ಎಂದು ವಿಚಾರಣೆ ನಡೆಸಲಾಗುವುದು. ಕರ್ತವ್ಯ ಲೋಪ ಮಾಡಿರುವ ಅಧಿಕಾರಿಗಳ ವಿರುದ್ಧ ಇಲಾಖೆವಾರು ತನಿಖೆಗೆ ಆದೇಶಿಸಿ ಎಲ್ಲರನ್ನು ಅಮಾನತುಗೊಳಿಸಲು ನಿರ್ಧರಿಸಲಾಗಿದೆ ಎಂದು ತಿಳಿಸಿದರು. ಇನ್ನು ಬೆಂಗಳೂರು ಬಿಸಿನೆಸ್ ಕಾರಿಡಾರ್ ರಸ್ತೆ 1 ಹಾಗೂ 2 ರಸ್ತೆಯ ಭೂಸ್ವಾಧೀನಕ್ಕೆ ಪರಿಹಾರ ನೀಡಲು ಐದು ಅವಕಾಶ ನೀಡಲಾಗಿದೆ. ಈ ಯೋಜನೆ ವಿಚಾರದಲ್ಲಿ ನಾವು ಹಿಂದೆ ಸರಿಯುವುದಿಲ್ಲ. ಆರು ತಿಂಗಳಲ್ಲಿ ನಾವು ಕೆಲಸ ಪ್ರಾರಂಭಿಸಬೇಕು. 1 ತಿಂಗಳ ಒಳಗಾಗಿ ಪರಿಹಾರ ವಿತರಣೆ ಆರಂಭಿಸಬೇಕು, ವಿಳಂಬ ಮಾಡಿದರೆ ಹಳೇ ಅಧಿಕಾರಿಗಳನ್ನು ತೆಗೆದುಹಾಕಿ ಹೊಸ ಅಧಿಕಾರಿಗಳ ನಿಯೋಜಿಸಿ ಕೆಲಸ ಮುಂದುವರಿಸುತ್ತೇವೆ ಎಂದು ತಿಳಿಸಿದರು..



### ರೂ. 9 ಲಕ್ಷ ಪರಿಹಾರ ನಿಗದಿಯಾಗಿದ್ದರೆ 9 ಕೋಟಿ ಪರಿಹಾರಕ್ಕೆ ಕೋರ್ಟ್ ತೀರ್ಪು

**ಕೆಲವು ಸಂದರ್ಭದಲ್ಲಿ ಕಂದಾಯ ಇಲಾಖೆ ಭೂಸ್ವಾಧೀನ ಪ್ರಕ್ರಿಯೆ ಮಾಡಿದರೂ ಪರಿಹಾರ ಹಣ ನೀಡಬೇಕಾಗಿರುವುದು ನೀರಾವರಿ ಇಲಾಖೆಯ ವಿವಿಧ ನಿಗಮಗಳಾಗಿರುತ್ತವೆ. ಇಂತಹ ಪ್ರಕರಣಗಳಲ್ಲಿ ಈ ನಿಗಮಗಳನ್ನೇ ಪಾರ್ಟಿಯನ್ನಾಗಿ ಮಾಡದೇ ಪ್ರಕರಣ ನಡೆಸಲಾಗುತ್ತಿದೆ. ಇಂತಹ ಪ್ರಕರಣಗಳಲ್ಲಿ ಹೈಕೋರ್ಟ್‌ನಲ್ಲಿ ರಿಟ್ ಅರ್ಜಿ ಸಲ್ಲಿಸುತ್ತೇವೆ. ಸುಪ್ರೀಂ ಕೋರ್ಟ್‌ನಲ್ಲಿ ಎಸ್‌ಎಲ್ ಪಿ ಅರ್ಜಿ ಹಾಕುತ್ತಿದ್ದು, ಕೆಲವು ಪ್ರಕರಣವನ್ನು ವಾಪಸ್ ತರಲು ಮುಂದಾಗಿದ್ದೇವೆ. ನೀರಾವರಿ ಇಲಾಖೆಯಲ್ಲಿ 9 ಲಕ್ಷ ರೂಪಾಯಿ ಪರಿಹಾರ ನಿಧಿ ಘೋಷಿಸಿದ್ದರೆ, ನ್ಯಾಯಾಲಯದಲ್ಲಿ ಅರ್ಜಿ ಹಾಕಿ 9, 10, 15, 20 ಕೋಟಿ ರೂಪಾಯಿ ಪರಿಹಾರ ನೀಡಲು ಆದೇಶ ನೀಡಲಾಗಿದೆ. ಹೀಗಾಗಿ ನಮ್ಮ ಸರ್ಕಾರ ಈ ತೀರ್ಮಾನಕ್ಕೆ ಬರಲಾಗಿದೆ ಎಂದರು.**

### ನ್ಯಾಯಾಲಯದ ಹೊರಗೆ ಪ್ರಕರಣ ಇತ್ಯರ್ಥಕ್ಕೆ ಪ್ರಾಧಿಕಾರ ರಚನೆ

**ನೂತನ ಕಾಯ್ದೆ ಪ್ರಕಾರ ನಿವೃತ್ತ ನ್ಯಾಯಾಧೀಶರ ನೇತೃತ್ವದಲ್ಲಿ ಪ್ರಾಧಿಕಾರ ರಚನೆಗೆ ಅವಕಾಶವಿದೆ. ಆಮೂಲಕ ನ್ಯಾಯಾಲಯದ ಮೆಟ್ಟಿಲೇರದೆ ಇಲ್ಲೇ ಪ್ರಕರಣಗಳನ್ನು ಬಗೆಹರಿಸಿಕೊಳ್ಳಲಾಗುವುದು. ಬೆಂಗಳೂರು ನಗರಾಭಿವೃದ್ಧಿ ಇಲಾಖೆ ಹಾಗೂ ನೀರಾವರಿ ಇಲಾಖೆಗೆ ಸಂಬಂಧಿಸಿದಂತೆ ಈ ಪ್ರಾಧಿಕಾರವನ್ನು ಯಾವ ರೀತಿ ರಚಿಸಬೇಕು ಎಂದು ಸರ್ಕಾರದ ಮಟ್ಟದಲ್ಲಿ ಚರ್ಚಿಸಿ ತೀರ್ಮಾನ ಮಾಡಲಾಗುವುದು. ನಮ್ಮ ಸರ್ಕಾರ ಈ ಪ್ರಾಧಿಕಾರ ರಚಿಸಲಿದೆ ಎಂದು ತಿಳಿಸಿದರು.**

# ಮಳೆ ಬಾರದಿದ್ದರೂ ಶಿರಾದ ಕಳ್ಳಂಬೆಳ್ಳ, ಮದಲೂರು ಸೇರಿ ಹೇಮಾವತಿ ನೀರಿನಿಂದ 36 ಕೆರೆ ಭರ್ತಿ

• ಉದಯವಾಹಿನಿ, ಶಿರಾ

ಕಳೆದ 23 ವರ್ಷಗಳಿಂದ ಶಿರಾ ತಾಲ್ಲೂಕಿಗೆ ಹೇಮಾವತಿ ನೀರು ಹರಿದಿದೆ. ಈ ವರ್ಷ ಮಳೆ ಇಲ್ಲದಿದ್ದರೂ ಮದಲೂರು, ಕಳ್ಳಂಬೆಳ್ಳ, ಶಿರಾ ದೊಡ್ಡಕೆರೆ ಸೇರಿ ಸುಮಾರು 36 ಕೆರೆಗಳನ್ನು ಹೇಮಾವತಿ ನೀರಿನಿಂದ ತುಂಬಿಸಿದ್ದೇನೆ ಎಂದು ಶಾಸಕ ಟಿ.ಬಿ.ಜಯಚಂದ್ರ ಹೇಳಿದರು. ತಾಲ್ಲೂಕಿನ ಗುಂಡಪ್ಪಚಿಕ್ಕೇನಹಳ್ಳಿ ಗ್ರಾಮದ ಶ್ರೀ ಗುಂಡಾಂಜನೇಯಸ್ವಾಮಿ ದೇವಸ್ಥಾನದ ಆವರಣದಲ್ಲಿ ಜಲಾನಯನ ಅಭಿವೃದ್ಧಿ ಘಟಕ, ಪ್ರಧಾನಮಂತ್ರಿ ಕೃಷಿ ಸಿಂಚಾಯಿ 2.0 ಯೋಜನೆಯಡಿ ಏರ್ಪಡಿಸಿದ್ದ ರಾಜ್ಯ ಮಟ್ಟದ ಜಲಾನಯನ ಮಹೋತ್ಸವ ಉದ್ಘಾಟಿಸಿ ಮಾತನಾಡಿದ ಅವರು, ಜಲಾನಯನ ಅಭಿವೃದ್ಧಿಯಲ್ಲಿ ಸುಸ್ಥಿರತೆ, ಸಮುದಾಯದ ಭಾಗವಹಿಸುವಿಕೆಯನ್ನು ಉತ್ತೇಜಿಸಲು ರಾಷ್ಟ್ರವ್ಯಾಪಿ ವಾಟರ್ ಶೆಡ್ ಮಹೋತ್ಸವ ಅಭಿಯಾನವನ್ನು ಭೂ ಸಂಪನ್ಮೂಲ ಇಲಾಖೆಯಿಂದ ಆಯೋಜಿಸಲಾಗಿದೆ. ಈ ಯೋಜನೆಯ ಉದ್ದೇಶ ರೈತರು ಜಲಾನಯನ ಇಲಾಖೆಯಲ್ಲಿ ಸಿಗುವ ಸೌಲಭ್ಯಗಳ


ಉದಯವಾಹಿನಿ ಚಿತ್ರ

ಬಗ್ಗೆ ಮಾಹಿತಿ ಪಡೆದು, ಸದುಪಯೋಗ ಪಡಿಸಿಕೊಳ್ಳಬೇಕು ಎಂಬುದಾಗಿದೆ. ಕೃಷಿ ಇಲಾಖೆ ಸಹಾಯ ಹಸ್ತದಲ್ಲಿ ನಡೆದ ಈ ಕಾರ್ಯಕ್ರಮದಲ್ಲಿ ರೈತರಿಗೆ ಅನುಕೂಲವಾಗುವ ಕೆಲಸ ಆಗಲಿ ಎಂದರು.

**ಪ್ರಾತ್ಯಕ್ಷಿಕೆ** **ರಾಜ್ಯ ಮಟ್ಟದ ಜಲಾನಯನ ಮಹೋತ್ಸವ ಕಾರ್ಯಕ್ರಮದಲ್ಲಿ ಕೃಷಿ, ಅರಣ್ಯ, ತೋಟಗಾರಿಕೆ, ಮಹಿಳಾ ಮತ್ತು ಮಕ್ಕಳ ಕಲ್ಯಾಣ, ರೇಷ್ಮೆ, ಪಶು ಇಲಾಖೆಗಳು ಸೇರಿದಂತೆ ಹಲವು ಇಲಾಖೆಗಳಿಂದ ರೈತರಿಗೆ ಪ್ರಾತ್ಯಕ್ಷಿಕೆ ಮೂಲಕ ಹಲವು ಮಾಹಿತಿಗಳನ್ನು ನೀಡಲಾಯಿತು.**

**ಮಣ್ಣಿನ ಪರೀಕ್ಷೆಗೆ ಅನುಮಾಡಿ ಕೊಡ್ಬೇಕು:** ಜಲಾನಯನ ಅಭಿವೃದ್ಧಿ ಇಲಾಖೆ ಮುಖ್ಯ ಆಯುಕ್ತರಾದ ಉಪೇಂದ್ರ ಪ್ರತಾಪ್ ಸಿಂಗ್ ಮಾತನಾಡಿ, ರೈತರು ಮಣ್ಣು ಸಂರಕ್ಷಣೆಗಾಗಿ ಇಲಾಖೆಯ ಅಧಿಕಾರಿಗಳೊಂದಿಗೆ ಸಹಕರಿಸಿದರೆ ಅಧಿಕಾರಿಗಳು ತಾಂತ್ರಿಕವಾಗಿ ಮಣ್ಣಿನ ಸೂಕ್ತ ಪರೀಕ್ಷೆ ನಡೆಸಿ ಅದರ ಸಂರಕ್ಷಣೆಗೆ ಉತ್ತಮ ಮಾರ್ಗದರ್ಶನ ನೀಡುತ್ತಾರೆ. ಇದರಿಂದ ಉತ್ತಮ ಬೆಳೆ ಪಡೆಯಬಹುದು ಎಂದರು.

ಜಲಾನಯನ ಅಭಿವೃದ್ಧಿ ಇಲಾಖೆ ನಿರ್ದೇಶಕರಾದ ಮೊಹಮ್ಮದ್ ಪರವೇಜ ಬಂಥನಾಳ ಮಾತನಾಡಿ, ರೈತರಿಗೆ ಯಾವ ಸವಲತ್ತು ನೀಡಿದರೆ ಅನುಕೂಲವಾಗುತ್ತದೆ ಎಂಬುದನ್ನು ಇಲಾಖೆ ಅರಿತು ಅದನ್ನು ಒದಗಿಸಿದರೆ ಉತ್ತಮ ಫಲಿತಾಂಶ ದೊರಕುತ್ತದೆ. ಅದರಂತೆ ಯಾವುದೋ ಪ್ರದೇಶದಲ್ಲಿ ಕುಳಿತುಕೊಳ್ಳುವ ಬೆಂಚ್ ಹಾಕುವುದನ್ನು ಬಿಟ್ಟು ಅದನ್ನೇ ಶಾಲಾ ಮಕ್ಕಳಿಗೆ ನೀಡಿದರೆ ಅವರು ಹಲವು ವರ್ಷಗಳ ಕಾಲ ಕುಳಿತು ಪಾಠ ಕೇಳಿ ಉತ್ತಮ ಪ್ರಜೆಗಳಾಗುತ್ತಾರೆ ಎಂದು ಮಾರ್ಮಿಕವಾಗಿ ನುಡಿದರು. ಕಾರ್ಯಕ್ರಮದಲ್ಲಿ ಬೇವಿನಹಳ್ಳಿ, ಚಂಗಾವರ, ಹೊಸೂರು ಗ್ರಾಪಂ ವ್ಯಾಪ್ತಿಯ ಸರಕಾರಿ ಶಾಲೆಗಳಿಗೆ 11 ಲಕ್ಷ ರೂ. ವೆಚ್ಚದಲ್ಲಿ ಡೆಸ್ಕ್‌ಗಳನ್ನು ನೀಡಲಾಯಿತು. ಜಿಲ್ಲೆಯ 10 ಮಂದಿಗೆ ಶ್ರೇಷ್ಠ ಕೃಷಿಕ ಪ್ರಶಸ್ತಿ ಪ್ರದಾನ ಮಾಡಲಾಯಿತು. ರಾಜ್ಯದ 5 ಜಿಲ್ಲೆಗಳ 7 ವಿಜೇತರಿಗೆ ಜನ ಭಾಗಿದಾರ್ ಕಪ್ ನೀಡಲಾಯಿತು. ಇದೇ ವೇಳೆ ಜಲಾನಯನ ಯೋಜನೆ ಕಿರುಹೊತ್ತಿಗೆ ಬಿಡುಗಡೆ ಮಾಡಲಾಯಿತು.

# ಬೋನಿಗೆ ಬಿದ್ದ ಚಿರತೆ ನಿಟ್ಟುಸಿರುಬಿಟ್ಟ ಗ್ರಾಮಸ್ಥರು

• ಉದಯವಾಹಿನಿ, ಗುಂಡ್ಲುಪೇಟೆ

ತಾಲ್ಲೂಕಿನ ಬೇಗೂರು ಹೋಬಳಿಯ ಗುಂಡ್ಲುಪೇಟೆ ಬಫರ್ ಜೋನ್ ವಲಯದ ತಗ್ಗಲೂರು ಗ್ರಾಮಸ್ಥರಲ್ಲಿ ಆತಂಕ ಸೃಷ್ಟಿಸಿದ್ದ ಚಿರತೆ ಅರಣ್ಯ ಇಲಾಖೆಯಿರಿಸಿದ್ದ ಬೋನಿನಲ್ಲಿ ಸೆರೆಯಾಗಿದೆ. ತಗ್ಗಲೂರು ಸೇರಿದಂತೆ ಸುತ್ತಲಿನಾ ಗ್ರಾಮಗಳಲ್ಲಿ ಓಡಾಡುತ್ತಿದ್ದ ಚಿರತೆ ಜಾನುವಾರುಗಳ ಮೇಲೆ ದಾಳಿ ನಡೆಸಿತ್ತು, ಗ್ರಾಮಸ್ಥರ ಒತ್ತಾಯದ ಮೇರೆಗೆ ಅರಣ್ಯ ಇಲಾಖೆ ಬೋನ್ ಅಳವಡಿಸಿತ್ತು. ತಾಲ್ಲೂಕಿನ ತಗ್ಗಲೂರು ರೈತರ ಜಮೀನಿನಲ್ಲಿ ಕಾಣಿಸಿಕೊಂಡು ಸ್ಥಳೀಯರಲ್ಲಿ ಆತಂಕ ಸೃಷ್ಟಿಸಿದ್ದ ಸುಮಾರು 5 ವರ್ಷ ವಯಸ್ಸಿನ ಹೆಣ್ಣು ಚಿರತೆ ಅರಣ್ಯ ಇಲಾಖೆ ಗ್ರಾಮದ ರೈತ ನಾಗರಾಜು ಎಂಬವರ ಜಮೀನಿನಲ್ಲಿ ಇರಿಸಿದ್ದ ಬೋನಿನಲ್ಲಿ ರಾತ್ರಿ ಸೆರೆಯಾಗಿದೆ.


ಉದಯವಾಹಿನಿ ಚಿತ್ರ

**ಪದೇಪದೇ ಉಪಟಳ ನೀಡುತ್ತಿದ್ದ ಚಿರತೆ ಸೆರೆಗೆ ಮುಂದಾದ ಅರಣ್ಯ ಇಲಾಖೆ ಬೋನಿನಲ್ಲಿ ನಾಯಿ ಮರಿಯನ್ನಿರಿಸಿ ಚಾಣಾಕ್ಷತಾಣತೋರಿದ ಹಿನ್ನೆಲೆ ಭಕ್ಷಿಸಲು ಮುಂದಾದ ವೇಳೆ ಚಿರತೆ ಬಂದಿಯಾಗಿದೆ, ಚಿರತೆಗೆ ನಾಯಿ ಪ್ರಿಯವಾದ ಆಹಾರವಾಗಿದೆ ಎಂಬುದರ ಆಧಾರದ ಮೇಲೆ ಬೋನಿನಲ್ಲಿ ಮರಿಯನ್ನ ಕಟ್ಟಲಾಗಿತ್ತು ಎಂದು ಗ್ರಾಮಸ್ಥರೊಬ್ಬರು ಮಾಹಿತಿ ನೀಡಿದ್ದಾರೆ.**

ತಗ್ಗಲೂರು ಸುತ್ತಲಿನ ಗ್ರಾಮಗಳಲ್ಲಿ ಭಯದ ವಾತಾವರಣ ನಿರ್ಮಾಣ ಮಾಡಿದ್ದ ಚಿರತೆ ಸೆರೆಯಿಂದ ಗ್ರಾಮಸ್ತರು ನಿಟ್ಟುಸಿರು ಬಿಟ್ಟಿದ್ದಾರೆ.

ಕಳೆದ ಒಂದು ವರ್ಷದಲ್ಲಿ ಗುಂಡ್ಲುಪೇಟೆ ಬಫರ್ ಜೋನ್ ವಲಯದ ವಿವಿಧೆಡೆ ಒಂಬತ್ತು ಚಿರತೆಗಳನ್ನ ಸೆರೆಹಿಡಿದು ಸುರಕ್ಷಿತವಾಗಿ ಸ್ಥಳಾಂತರಿಸಲಾಗಿದೆ ಎಂದು ಅರಣ್ಯ ಇಲಾಖೆ ಅಧಿಕಾರಿಗಳು ತಿಳಿಸಿದ್ದಾರೆ.

## ಚಾಮರಾಜ ನಗರ–ಹೆಜ್ಜಾಲ ಮಾರ್ಗ ನನೆಗುದಿಗೆ: ಗಡಿ ಜಿಲ್ಲೆ ಯೋಜನೆಗೆ ಸರಕಾರ ನಿರಾಸಕ್ತಿ?

# ರಾಜಧಾನಿಯನ್ನು ಹತ್ತಿರವಾಗಿಸುವ ಯೋಜನೆಗೆ ಕಾಲ ಪರಿಪಕ್ವಗೊಳ್ಳಲೇ ಇಲ್ಲ

• ಉದಯವಾಹಿನಿ, ಚಾಮರಾಜನಗರ

ರಾಜ್ಯ ಸರಕಾರ ಮನಸ್ಸು ಮಾಡದ ಹಿನ್ನೆಲೆಯಲ್ಲಿ ಗಡಿ ಜಿಲ್ಲೆ ಚಾಮರಾಜನಗರದಿಂದ ರಾಜ್ಯದ ರಾಜಧಾನಿಗೆ ನೇರ ರೈಲು ಮಾರ್ಗ ಹಾದು ಹೋಗುವ ಯೋಜನೆ ಕಳೆದ ಎರಡೂವರೆ ದಶಕಗಳಿಂದಲೂ ನನೆಗುದಿಗೆ ಬಿದ್ದಿದೆ. ರೈಲ್ವೆ ಇಲಾಖೆ ಯೋಜನೆಯಲ್ಲಿ ಚಾಮರಾಜನಗರ ಹೆಜ್ಜಾಲ ರೈಲು ಮಾರ್ಗದ ನಕ್ಷೆ ಸಿದ್ಧವಾಗಿದೆ. ಯೋಜನೆ ರೂಪುರೇಷೆ ಕೂಡ ಇದೆ. ಆದರೆ, ಅದಕ್ಕಾಗಿ ರಾಜ್ಯ ಸರಕಾರ ಭೂ ಸ್ವಾಧೀನ ಮಾಡಿಕೊಡಬೇಕು. ಇದಕ್ಕೆ ರಾಜ್ಯ ಸರಕಾರ ಸಕಾರಾತ್ಮಕ ಸ್ಪಂದನೆ ತೋರುತ್ತಿಲ್ಲ. ಹೀಗಾಗಿ ಮಹತ್ವದ ಯೋಜನೆಗೂ ಗ್ರಹಣ ಹಿಡಿದಿದೆ.

ಚಾಮರಾಜನಗರದಿಂದ ಮೆಟ್ಟುಪಾಳ್ಯಂ ಮಾರ್ಗವಾಗಿ ತಮಿಳುನಾಡಿಗೆ ರೈಲು ಮಾರ್ಗವಾಗಬೇಕೆಂಬ ಕೂಗು ಸ್ವಾತಂತ್ರ್ಯ ಪೂರ್ವದಿಂದಲೂ ಇತ್ತು. ಆದರೆ, ಆ ಮಾರ್ಗಕ್ಕೆ ಸಾಕಷ್ಟು ಅರಣ್ಯ ನಾಶವಾಗಲಿದೆ. ವನ್ಯಜೀವಿಗಳ ಸಂಚಾರಕ್ಕೆ ತುಂಬ ಸಮಸ್ಯೆಯಾಗಲಿದೆ ಎಂಬ ಕಾರಣಕ್ಕೆ ಪರಿಸರ ಇಲಾಖೆಯಿಂದ ಅನುಮತಿ ದೊರೆಯಲಿಲ್ಲ. ಬಳಿಕ ಬೆಂಗಳೂರು ಮೂಲಕವಾದರೂ ತಮಿಳುನಾಡಿಗೆ ಜಿಲ್ಲೆಯಿಂದ ಸನಿಹದ ಮಾರ್ಗವಾಗಿ ಚಾಮರಾಜನಗರ –ಹೆಜ್ಜಾಲ ಯೋಜನೆ ಸೂಕ್ತ ಎಂಬ ಅಭಿಪ್ರಾಯದ ಹಿನ್ನೆಲೆಯಲ್ಲಿ ಎರಡೂವರೆ ದಶಕದ ಹಿಂದೆಯೇ ಪ್ರಸ್ತಾವನೆ ಸಿದ್ಧಗೊಂಡಿತು. ಆದರೆ, ಅನುಷ್ಠಾನ ಮರೀಚಿಕೆಯಾಗೇ ಉಳಿಯಿತು. ಕಳೆದ ವರ್ಷ ಮತ್ತೊಮ್ಮೆ ಯೋಜನೆ


ಉದಯವಾಹಿನಿ ಚಿತ್ರ

- **ಬೆಂಗಳೂರು ಮೂಲಕ ತಮಿಳುನಾಡಿಗೆ ಜಿಲ್ಲೆಯಿಂದ ಸನಿಹದ ಮಾರ್ಗವಾಗಿ ಚಾಮರಾಜನಗರ –ಹೆಜ್ಜಾಲ ಯೋಜನೆ**
- **ರೈಲ್ವೆ ಇಲಾಖೆ ರಾಜ್ಯ ಸಚಿವರಾಗಿ ವಿ. ಸೋಮಣ್ಣ ಅವರೇ ಇರುವುದರಿಂದ ಯೋಜನೆ ಕೈಗೂಡಬಹುದೆಂದು ನಿರೀಕ್ಷಿಸಲಾಗಿತ್ತು**

ಪ್ರಾರಂಭ ಗೊಳ್ಳುವ ಆಶಾಭಾವನೆ ಚಿಗುರೊಡೆದಿತ್ತು.

ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಅವರು, ಈ ಯೋಜನೆ ಬಗ್ಗೆ ಕೇಂದ್ರ ರೈಲ್ವೆ ಸಚಿವರಿಗೆ ಶೀಘ್ರದಲ್ಲೇ ಯೋಜನೆ ಪ್ರಾರಂಭಿಸುವಂತೆ ಮನವಿ ಮಾಡಿದ್ದರು.

**ಯೋಜನೆಗಳು ನೆನೆಗುದಿಗೆ ಬಿದ್ದಿವೆ**

**ರಾಜ್ಯ ಸರಕಾರದಿಂದ ಭೂಸ್ವಾಧೀನ ವಿಳಂಬ ಆಗಿರುವುದರಿಂದ ಹಲವು ಯೋಜನೆಗಳು ನೆನೆಗುದಿಗೆ ಬಿದ್ದಿವೆ. ಅದರಲ್ಲಿ ಒಂದು ಚಾಮರಾಜನಗರ-ಹೆಜ್ಜಾಲ ರೈಲ್ವೆ ಮಾರ್ಗವೂ ಒಂದು. ನೆರೆಯ ತಮಿಳುನಾಡಿಗೆ ಬೆಂಗಳೂರು ಮೂಲಕವಾದರೂ ನೇರ ಸಂಪರ್ಕ ಒದಗಿಸುವ ರೈಲು ಸಂಪರ್ಕ ಕೊಡುವಂತೆ ಈ ಭಾಗದ ಜನರ ಬೇಡಿಕೆಯಾಗಿದೆ.**

ಅಲ್ಲದೇ ರೈಲ್ವೆ ಇಲಾಖೆ ರಾಜ್ಯ ಸಚಿವರಾಗಿ ವಿ. ಸೋಮಣ್ಣ ಅವರೇ ಇರುವುದರಿಂದ ಯೋಜನೆ ಕೈಗೂಡಬಹುದೆಂದು ನಿರೀಕ್ಷಿಸಲಾಗಿತ್ತು. ಆದರೆ, ಅದಕ್ಕೆ ಕಾಲ ಕೂಡಿ ಬರಲೇ ಇಲ್ಲ. ಈ ಹಿಂದೆಯೂ ಸಂಸದರಾಗಿದ್ದ ಆರ್.ಧ್ರುವನಾರಾಯಣ ಅವರು ಅಂದಿನ ರೈಲ್ವೆ ಸಚಿವರಿಗೆ ಮನವಿ ಸಲ್ಲಿಸಿದ್ದರು. ಸದ್ಯ ಕೊಳ್ಳೇಗಾಲ ಶಾಸಕರಾಗಿರುವ ಎ.ಆರ್.ಕೃಷ್ಣಮೂರ್ತಿ ಅವರೂ ಈ ಹಿಂದೆ ಸಂಸದರಾಗಿ, ಕೇಂದ್ರ ಸಚಿವರೂ ಆಗಿದ್ದ ವಿ.ಶ್ರೀನಿವಾಸಪ್ರಸಾದ್ ಅವರ ಬಳಿ ಈ ಯೋಜನೆ ಕುರಿತು ಪ್ರಸ್ತಾಪಿಸಿದ್ದರು. ಆದರೂ ಜಿಲ್ಲೆಗೆ ರಾಜಧಾನಿಯನ್ನು ಹತ್ತಿರವಾಗಿಸುವ ಯೋಜನೆಗೆ ಕಾಲ ಪರಿಪಕ್ವಗೊಳ್ಳಲೇ ಇಲ್ಲ ಎಂಬುದು ಬೇಸರದ ಸಂಗತಿ.

# ಮಂಡ್ಯ ಜಿಲ್ಲೆಯ 5 ಗ್ರಾಮಗಳಲ್ಲಿ 1079 ಹೆಕ್ಟೇರ್ ಪ್ರದೇಶ ಮುಳುಗಡೆ

• ಉದಯವಾಹಿನಿ, ಮಂಡ್ಯ

ಮೇಕೆದಾಟು ಯೋಜನೆ ಪ್ರಾರಂಭಿಸಲು ಜಿಲ್ಲೆಯ 1079 ಹೆಕ್ಟೇರ್ ಪ್ರದೇಶದ ಬೇಕಾಗಿದೆ ಎಂದು ಜಿಲ್ಲಾಧಿಕಾರಿ ಡಾ.ಕುಮಾರ ತಿಳಿಸಿದರು. ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಮೇಕೆದಾಟು ಸಮತೋಲನ ಜಲಾಶಯ ಹಾಗೂ ಕುಡಿಯುವ ನೀರಿನ ಯೋಜನೆ ಅನುಷ್ಠಾನಕ್ಕೆ ಸಂಬಂಧ ಚರ್ಚಿಸಲು ಕರೆದಿದ್ದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿ, ಮೇಕೆದಾಟು ಯೋಜನೆಗೆ ಮಳವಳ್ಳಿ ತಾಲ್ಲೂಕಿನ 5 ಗ್ರಾಮಗಳಲ್ಲಿ 1079 ಹೆಕ್ಟೇರ್ ಅರಣ್ಯ ಪ್ರದೇಶ ಮುಳುಗಡೆಯಾಗುತ್ತದೆ ಎಂದು ಹೇಳಿದರು.

**ಜಿಲ್ಲೆಯ 2204 ಹೆಕ್ಟೇರ್ ಜಾಗವನ್ನು ಅರಣ್ಯ ಇಲಾಖೆಗೆ:** ಮುಳುಗಡೆಯಾಗುವ ಭೂಮಿಗೆ ಬದಲಿಯಾಗಿ 1, 2 ಅನುಪಾತದಲ್ಲಿ ಜಿಲ್ಲೆಯ 2204 ಹೆಕ್ಟೇರ್ ಜಾಗವನ್ನು ಅರಣ್ಯ ಇಲಾಖೆಗೆ ನೀಡಲು ಜಾಗ ಗುರುತಿಸಲಾಗಿತ್ತು. ಈ ಹಿಂದೆ ಗುರುತಿಸಲಾದ 2204 ಹೆಕ್ಟೇರ್ ಜಾಗವನ್ನು ತೆಗೆದುಕೊಳ್ಳಲಾಗುತ್ತಿಲ್ಲ.


ಉದಯವಾಹಿನಿ ಚಿತ್ರ

ಅರಣ್ಯ ಇಲಾಖೆಗೆ 1:1 ಅನುಪಾತದಲ್ಲಿ 1079 ಹೆಕ್ಟೇರ್ ಅರಣ್ಯೇತರ ಜಾಗ, ಗೋಮಾಳ, ಸರಕಾರಿ ಜಾಗಗಳನ್ನು ನೀಡಬೇಕು ಎಂದರು.

**ಪ್ರತಿ 15 ದಿನಗಳಿಗೊಮ್ಮೆ ಮೇಕೆದಾಟು ಯೋಜನೆ ಕುರಿತು ಸಭೆ:** ಈಗಾಗಲೇ ಪಾಂಡವಪುರ, ನಾಗಮಂಗಲದಲ್ಲಿ 307 ಹೆಕ್ಟೇರ್ ಪ್ರದೇಶವನ್ನು ಗುರುತಿಸಲಾಗಿದ್ದು ಅರಣ್ಯ ಇಲಾಖೆಯೂ ಸಹ ಸದರಿ ಜಾಗಕ್ಕೆ ಸೂಕ್ತತೆ ಪ್ರಮಾಣ ಪತ್ರ ನೀಡಿದೆ.

ಬಾಕಿ ಉಳಿದ 757 ಹೆಕ್ಟೇರ್ ಜಾಗವನ್ನು ಗುರುತಿಸಿ ಅರಣ್ಯ ಇಲಾಖೆಗೆ ನೀಡಬೇಕು. ಅಧಿಕಾರಿಗಳು ತಾಲ್ಲೂಕುವಾರು ತಂಡ ರಚಿಸಿ ಉಳಿದ 757 ಹೆಕ್ಟೇರ್ ಜಾಗವನ್ನು ಗುರುತಿಸಿ 15 ದಿನಗಳೊಳಗಾಗಿ ಸೂಕ್ತತೆ ಪ್ರಮಾಣ ಪಡೆಯಬೇಕು. ಉಪ ಮುಖ್ಯಮಂತ್ರಿಗಳು ಪ್ರತಿ 15 ದಿನಗಳಿಗೊಮ್ಮೆ ಮೇಕೆದಾಟು ಯೋಜನೆ ಕುರಿತು ಸಭೆ ನಡೆಸುತ್ತೇನೆ ಎಂದು ತಿಳಿಸಿದ್ದಾರೆ ಎಂದು ವಿವರಿಸಿದರು.

**ತಾಲ್ಲೂಕು ಮಟ್ಟದಲ್ಲಿ ತಹಶೀಲ್ದಾರ್, ಎಸಿಎಫ್, ಎ.ಡಿ.ಎಲ್.ಆರ್ ಮತು ಕಾವೇರಿ ನಿರಾವರಿ ನಿಗಮದ ಅಧಿಕಾರಿಗಳು ಜಂಟಿ ಸರ್ವೆ ನಡೆಸಿ ಸೂಕ್ತ ಪರಾರಯಯ ಜಾಗ ಗುರುತಿಸಬೇಕು. ಅರಣ್ಯೇತರ ಜಾಗವನ್ನು ಗುರುತಿಸುವಾಗ ಸದರಿ ಜಾಗದ ಕುರಿತು ಯಾವುದೇ ಅಕ್ರಮ ಸಕ್ರಮ ಇರಬಾರದು. ಅಧಿಕಾರಿಗಳು ಗುರುತಿಸಿರುವ ಜಾಗ ಸರ್ವೇ, ಸ್ಕೆಚ್ ಕಡ್ಡಾಯವಾಗಿ ಮಾಡಬೇಕು ಎಂದು ತಿಳಿಸಿದರು.**

# ಮೆಕ್ಕೆಜೋಳ: ಬೆಂಬಲ ಬೆಲೆಗೆ ಆಗ್ರಹ

• ಉದಯವಾಹಿನಿ, ಗೌರಿಬಿದನೂರು

ಮೆಕ್ಕೆಜೋಳ ಖರೀದಿ ಕೇಂದ್ರಗಳನ್ನು ತೆರೆಯುವ ಮೂಲಕ ರೈತರ ಹಿತ ಕಾಯಬೇಕು ಎಂದು ರೈತ ಸಂಘ ಹಾಗೂ ಹಸಿರುಸೇನೆ ಜಿಲ್ಲಾಧ್ಯಕ್ಷ ಎಂ.ಆರ್. ಲಕ್ಷ್ಮಿನಾರಾಯಣ್ ರಾಜ್ಯ ಸರ್ಕಾರಕ್ಕೆ ಮನವಿ ಮಾಡಿದರು. ನಗರದ ಪ್ರವಾಸಿ ಮಂದಿರದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿದರು. ಕೇಂದ್ರ ಸರ್ಕಾರವು ಒಂದು ಕ್ವಿಂಟಾಲ್ ಮೆಕ್ಕೆಜೋಳಕ್ಕೆ 2,400 ಬೆಂಬಲ ಬೆಲೆ ಘೋಷಿಸಿದೆ. ಇದರ ಜೊತೆಗೆ ರಾಜ್ಯ ಸರ್ಕಾರವು ಕ್ವಿಂಟಲ್‌ಗೆ 600 ಬೆಂಬಲ ಘೋಷಿಸಬೇಕು.

ಈ ಮೂಲಕ ರೈತರ ಹಿತ ಕಾಯಲು ಮುಂದಾಗಬೇಕು. ಇಲ್ಲದಿದ್ದರೆ, ಇದೇ 24ರಂದು ನಗರದ ಕೃಷಿ ಉತ್ಪನ್ನ ಮಾರುಕಟ್ಟೆ ಮುಂಭಾಗದಲ್ಲಿ ರೈತರು ಬೃಹತ್ ಪ್ರತಿಭಟನೆ, ರಸ್ತೆ ತಡೆ ನಡೆಸಬೇಕಾಗುತ್ತದೆ. ನಂತರ ತಾಲ್ಲೂಕು ಪಂಚಾಯಿತಿ ಆವರಣದಿಂದ ಎಪಿಎಂಸಿ ಮಾರುಕಟ್ಟೆವರೆಗೆ ರೈತರು ಪ್ರತಿಭಟನಾ ಜಾಥಾ ನಡೆಸಲಿದ್ದಾರೆ ಎಂದು ಎಚ್ಚರಿಕೆ ನೀಡಿದರು. ರೈತ ಸಂಘದ ತಾಲ್ಲೂಕು ಅಧ್ಯಕ್ಷ


ಉದಯವಾಹಿನಿ ಚಿತ್ರ

ಲೋಕೇಶ್ ಗೌಡ ಮಾತನಾಡಿ, ಕೇಂದ್ರ ಸರ್ಕಾರ ಸುಮಾರು 70 ಲಕ್ಷ ಮೆಟ್ರಿಕ್ ಟನ್ ಮೆಕ್ಕೆಜೋಳವನ್ನು ಅಮದು ಮಾಡಿಕೊಳ್ಳುತ್ತಿದೆ. ಇದರಿಂದಾಗಿ ನಮ್ಮ ರೈತರು ಬೆಳೆದ ಮೆಕ್ಕೆಜೋಳಕ್ಕೆ ಸರಿಯಾದ ಬೆಲೆ ಸಿಗುತ್ತಿಲ್ಲ ಎಂದು ದೂರಿದರು. ಪ್ರಜಾ ಸಂಘರ್ಷ ಸಮಿತಿಯ ಜಿಲ್ಲಾ ಸಂಚಾಲಕ ಆರ್.ಎನ್. ರಾಜು ಮಾತನಾಡಿ, ಒಂದು ಎಕರೆ ಮೆಕ್ಕೆಜೋಳ ಬೆಳೆಯಲು ರೈತರಿಗೆ ಕನಿಷ್ಠ 40 ಸಾವಿರ ಖರ್ಚು ಬರುತ್ತದೆ. ಆದರೆ, ಇತ್ತೀಚಿನ ದಿನಗಳಲ್ಲಿ ನಿರೀಕ್ಷಿತ ಪ್ರಮಾಣದ ಇಳುವರಿ ಸಿಗುತ್ತಿಲ್ಲ. ಇದರಿಂದಾಗಿ ರೈತರು ವ್ಯವಸಾಯದಿಂದಲೇ ವಿಮುಖರಾಗುತ್ತಿದ್ದಾರೆ ಎಂದು ಬೇಸರ ವ್ಯಕ್ತಪಡಿಸಿದರು.

# ಕಾಂಗ್ರೇಸ್ ಸರ್ಕಾರ ಬೀಳಲ್ಲ: ಮತ್ತಷ್ಟು ದೋಚಬೇಕಲ್ಲವೇ

• ಉದಯವಾಹಿನಿ, ಕೋಲಾರ

ರಾಜ್ಯ ಕಾಂಗ್ರೇಸ್ ಸರ್ಕಾರ ಅಷ್ಟು ಸುಲಭವಾಗಿ ಬಿದ್ದು ಹೋಗುತ್ತದೆ ಎಂಬುದರ ಮೇಲೆ ನಾನೇನು ನಂಬಿಕೆ ಇಟ್ಟುಕೊಂಡಿಲ್ಲ, ಆ ಭ್ರಮೆಯಲ್ಲೂ ಇಲ್ಲ. ಏಕೆಂದರೆ ಮುಖ್ಯಮಂತ್ರಿ ಕುರ್ಚಿಗೆ ಪೈಪೋಟಿ ಇದ್ದರೂ ಸಿಕ್ಕಿರುವ ಅವಕಾಶದಲ್ಲೇ ಎಷ್ಟು ಬೇಕು ಅಷ್ಟು ದೋಚಬೇಕು ಎಂಬ ಭಾವನೆ ಅವರಲ್ಲಿದೆ ಎಂದು ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ವ್ಯಂಗ್ಯವಾಡಿದರು.



ತಾಲ್ಲೂಕಿನ ಕಾಮದೇನಹಳ್ಳಿಯಲ್ಲಿ ಭಾನುವಾರ ಸುದ್ದಿಗಾರೊಂದಿಗೆ ಮಾತನಾಡಿ, ಆರು ತಿಂಗಳಲ್ಲಿ ರಾಜ್ಯ ಕಾಂಗ್ರೇಸ್ ಸರ್ಕಾರ ಬಿದ್ದು ಹೋಗುತ್ತದೆ, ಕ್ರಾಂತಿ ಆಗುತ್ತದೆ ಎಂಬುದಾಗಿ ನಾನು ಎಲ್ಲೂ ಹೇಳಿಲ್ಲ. ಆ ಬಗ್ಗೆ ಹಗಲು ಕನಸು ಕೂಡ ಕಾಣುತ್ತಿಲ್ಲ. ಮುಂದೇನು ನಡೆಯುತ್ತದೆ ಎಂಬುದನ್ನು ಈಗಿನ ರಾಜಕಾರಣದಲ್ಲಿ ಅರ್ಥ ಮಾಡಿಕೊಳ್ಳುವುದು ಕಷ್ಟ. ಈಗಿನ ಪರಿಸ್ಥಿತಿ ಗಮನಿಸಿದರೆ ಏನು ಬೇಕಾದರೂ ಆಗಬಹುದು.

ಈ ನಿಟ್ಟಿನಲ್ಲಿ ಜೆಡಿಎಸ್ ಕಾರ್ಯಕರ್ತರು ಮೈಮರೆಯದೆ ಜನರ ಮಧ್ಯೆ ಕೆಲಸ ಮಾಡಿ ಎಂಬುದಾಗಿ ಪಕ್ಷದ ಕಾರ್ಯಕ್ರಮದಲ್ಲಿ ಹೇಳಿದ್ದೇನೆ ಎಂದರು. ಒಕ್ಕಲಿಗ ಶಾಸಕರು ದೆಹಲಿ ಭೇಟಿ ಕುರಿತು ಪ್ರತಿಕ್ರಿಯಿಸಿ, ದೆಹಲಿಗೆ ಹೋಗಿ ಏನು ಸಾಧನೆ ಮಾಡಿದರು, ಈ ಬಗ್ಗೆ ಏನಾದರೂ ಹೇಳಿದ್ದಾರೆಯೇ ಎಂದು ಪ್ರಶ್ನಿಸಿದರು. ಒಕ್ಕಲಿಗರಿಗೆ ಮಾತ್ರವಲ್ಲ ರಾಜ್ಯ ಪ್ರತಿ ಜನರಿಗೆ ಪ್ರಾಧಾನ್ಯ ದೊರಕಬೇಕು. ಏಳು ಕೋಟಿ ಜನರ ಬದುಕನ್ನು ಸರಿಪಡಿಸುವ ಕೆಲಸವನ್ನು ಈ ಸರ್ಕಾರ ಮಾಡಬೇಕು. ಒಂದು ಜಾತಿಗೆ ಸೀಮಿತವಲ್ಲ ಎಂದರು.

# ಮನುವಾದ ಜಾರಿಗೆ ಆರ್‌ಎಸ್‌ಎಸ್ ಸಜ್ಜು: ಶಿವಸುಂದರ್

• ಉದಯವಾಹಿನಿ, ತುಮಕೂರು

ಆರ್‌ಎಸ್‌ಎಸ್ ಮನುವಾದ ಜಾರಿಗೆ ಮುಂದಾಗಿದ್ದು, ಧೃತರಾಷ್ಟ್ರನು ಭೀಮನ ಕಬ್ಬಿಣದ ಮೂರ್ತಿಯನ್ನು ತಬ್ಬಿಕೊಂಡಂತೆ ಸಂವಿಧಾನವನ್ನು ಅಪ್ಪಿಕೊಂಡಿದೆ. ನಾವು ಎಚ್ಚರಿಕೆ ವಹಿಸಬೇಕು ಎಂದು ಸಾಮಾಜಿಕ ಹೋರಾಟಗಾರ ಶಿವಸುಂದರ್ ಹೇಳಿದರು.

ನಗರದಲ್ಲಿ ಪ್ರಗತಿಪರ ಸಂಘಟನೆಗಳ ಒಕ್ಕೂಟ, ಸ್ಲಂ ಜನಾಂದೋಲನ ಕರ್ನಾಟಕ, ಸಂವಿಧಾನ ಸ್ನೇಹಿ ಬಳಗದಿಂದ ಹಮ್ಮಿಕೊಂಡಿದ್ದ ಮನ-ಮನೆಗೂ ಸಂವಿಧಾನ ಅಭಿಯಾನಕ್ಕೆ ಚಾಲನೆ ನೀಡಿ ಮಾತನಾಡಿದರು. ಆರ್‌ಎಸ್‌ಎಸ್ ಮುಖಂಡರು ದಲಿತರಿಗಿಂತ ಹೆಚ್ಚಾಗಿ ಸಂವಿಧಾನದ ಬಗ್ಗೆ ಮಾತನಾಡುತ್ತಿದ್ದಾರೆ. ವಾಸ್ತವದಲ್ಲಿ ಅವರು ಸಂವಿಧಾನ ವಿನಾಶ ಬಯಸುತ್ತಿದ್ದಾರೆ. ಮುಸ್ಲಿಮರು ಈ ದೇಶದವರಲ್ಲ, ದಲಿತರು ನಮಗೆ ಸರಿ ಸಮಾನರಲ್ಲ ಎನ್ನುತ್ತಾರೆ.

ಶ್ರೀಮಂತರಿಗೆ ಮಾತ್ರ ಉತ್ತಮ ಶಿಕ್ಷಣ ಸಿಗಬೇಕು. ಬ್ರಾಹ್ಮಣರ ಸಂಖ್ಯೆ ಹೆಚ್ಚಾಗಬೇಕು. ಉಳಿದವರು ಸ್ಲಮ್‌ಗಳಲ್ಲಿಯೇ ಬದುಕಬೇಕು ಎಂಬ ಮನು ಸಿದ್ಧಾಂತ ಜಾರಿಗೊಳಿಸಲು ಹೊರಟಿದ್ದಾರೆ ಎಂದು ಆರೋಪಿಸಿದರು. ಆರ್‌ಎಸ್‌ಎಸ್ ವರ್ಷ ಪೂರ್ತಿ ದ್ವೇಷ ಬಿತ್ತುತ್ತಿದೆ. ಇಂತಹ ಸಮಯದಲ್ಲಿ ನಾವು ಮನ- ಮನೆಗೆ ಸಂವಿಧಾನ ತೆಗೆದುಕೊಂಡು ಹೋಗುವುದು ಅಗತ್ಯ. ಎಲ್ಲಾರಲ್ಲಿ ಪ್ರೀತಿ, ಭ್ರಾತೃತ್ವ, ಬಂಧುತ್ವ ಭಾವ ಬಿತ್ತಬೇಕು. ವರ್ಷ ಪೂರ್ತಿ ಕಾರ್ಯಕ್ರಮಗಳು ನಡೆಯಬೇಕು ಎಂದು ಆಶಿಸಿದರು. ಸರ್ಕಾರದ ಗ್ಯಾರಂಟಿ ಸುಮ್ಮನೆ ಸಿಕ್ಕಿದ್ದಲ್ಲ. ಉಚಿತ ಎಂಬುವುದು ಯಾವುದೂ ಇಲ್ಲ, ನಮ್ಮ ತೆರಿಗೆ ಹಣ ವಾಪಸ್ ಕೊಡುತ್ತಿದ್ದಾರೆ. ಮಹಿಳೆಯರಿಗೆ ತಿಂಗಳಿಗೆ 2 ಸಾವಿರ ಕೊಟ್ಟರೆ ತುಂಬಾ ಒಳ್ಳೆಯದು. ಆದರೆ ನಮ್ಮ ಮನೆಗಳ ಅಕ್ಕ-ಪಕ್ಕದಲ್ಲಿಯೇ ಬರಬೇಕಾದ ಅಂಗನವಾಡಿ, ಆಸ್ಪತ್ರೆ ಕಿತ್ತುಕೊಂಡರು. ಪೆಪ್ಪರುಮೆಂಟ್ ತೋರಿಸಿ ತಾಳಿ, ಜೇಬಿನಲ್ಲಿ ಇರುವ 100 ಕಿತ್ತುಕೊಳ್ಳುತ್ತಿದ್ದಾರೆ. ಇದು ಸಂವಿಧಾನ, ಪ್ರಜಾಪ್ರಭುತ್ವ ಅಲ್ಲ ಎಂದು ಕುಟುಕಿದರು.


ಉದಯವಾಹಿನಿ ಚಿತ್ರ

**ದ್ವೇಷ ಹರಡುವ** **ಆರ್‌ಎಸ್‌ಎಸ್ ಆರ್‌ಎಸ್‌ಎಸ್ ಮನೆ ಮನೆಗೆ ದ್ವೇಷ ಹರಡುತ್ತಿದೆ. ದೇವರು ಧರ್ಮದ ಹೆಸರಿನಲ್ಲಿ ಜನರ ತಲೆ ಕೆಡಿಸುತ್ತಿದೆ ಎಂದು ಜಿಲ್ಲಾ ಪಿಯುಸಿಎಲ್ ಅಧ್ಯಕ್ಷ ಕೆ.ದೊರೈರಾಜ್ ಅಸಮಾಧಾನ ವ್ಯಕ್ತಪಡಿಸಿದರು. ಯಾರು ಏನೇ ಹೇಳಿದರೂ ನಾವು ಸಂವಿಧಾನದ ಪರ ಇರಬೇಕು. ಮಹಿಳೆಯರು ಬಡವರು ಎಲ್ಲಾ ವರ್ಗದವರು ಒಗ್ಗಟ್ಟಾಗಿರಬೇಕು. ಸಂವಿಧಾನ ಹೇಳಿದಂತೆ ಕೇಳಿದರೆ ನಾವೆಲ್ಲ ಸಮಾನತೆ ಕಡೆಗೆ ಹೋಗುತ್ತೇವೆ. ಗೌರವ ಘನತೆಯ ಬದುಕು ನಮ್ಮದಾಗುತ್ತದೆ ಎಂದರು.**

ಸಂವಿಧಾನ ಕನಸು ಮಾತ್ರವಲ್ಲ, ಕನಸಿನ ಸಾಧನೆಗೆ ಏಣಿ 75 ವರ್ಷದಲ್ಲಿ ಕೆಲವರಿಗೆ ಮಾತ್ರ ಆ ಏಣಿ ಸಿಕ್ಕಿದೆ. ಕನಸು ಕಾಣಲು ಆಗದ ಸ್ಥಿತಿಗೆ ನಮ್ಮನ್ನು ದೂಡಿದ್ದಾರೆ. ಸಂವಿಧಾನದ ಆಶಯ ಜಾರಿಗೆ ಆಸಕ್ತಿ ತೋರದವರು ಸಂವಿಧಾನದ ಬಗ್ಗೆ ಮಾತನಾಡುತ್ತಾರೆ. ಸಂವಿಧಾನ ಅಪ್ಪಿಕೊಂಡು, ಹಕ್ಕು ಕೇಳಬೇಕಾದವರು ಬದುಕಿದರೆ ಸಾಕು ಎಂಬಂತಾಗಿದ್ದಾರೆ. ನಮ್ಮನ್ನು ದೈನೇಸಿ ಸ್ಥಿತಿಯಲ್ಲಿ ಇಟ್ಟಷ್ಟು ದಿನ ದೇಶದಲ್ಲಿ ಪ್ರಜಾಪ್ರಭುತ್ವ ಇರುವುದಿಲ್ಲ ಎಂದರು. ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ನೂರುನ್ನೀಸಾ, ಜಿಲ್ಲೆಯ ಗೊಲ್ಲರ ಹಟ್ಟಿಗಳ ಮಹಿಳೆಯರು ಮೌಢ್ಯ, ಕಂದಾಚಾರದಿಂದ ಸಂಕಷ್ಟ ಅನುಭವಿಸುತ್ತಿದ್ದಾರೆ. ಮುಟ್ಟು ಹೆಣ್ಣಿನದ ಗೌರವ. ಹಟ್ಟಿಯ ಮಹಿಳೆಯರು ಅದೊಂದು ಶಾಪ, ಕಾಯಿಲೆ ಎಂದು ಭಾವಿಸಿ ಖಿನ್ನತೆಗೆ ಒಳಗಾಗುತ್ತಿದ್ದಾರೆ. ಇಲ್ಲಿನ ಹೆಣ್ಣು ಮಕ್ಕಳು ಗರ್ಭಕೋಶ ತೆಗೆಸಿದ್ದಾರೆ. ಅವರಲ್ಲಿ ಜೀವ ಕಳೆ ಸತ್ತು ಹೋಗಿದೆ' ಎಂದು ವಿಷಾದಿಸಿದರು.

# ಸಹಿ ಸಂಗ್ರಹ ಮತ್ತಷ್ಟು ಪರಿಣಾಮಕಾರಿಯಾಗಲಿ

• ಉದಯವಾಹಿನಿ, ಮುಳಬಾಗಿಲು

ದೇಶದಾದ್ಯಂತ ಮತ ಕಳವು ಖಂಡಿಸಿ ಸಹಿ ಸಂಗ್ರಹವಾಗುತ್ತಿದ್ದು, ರಾಜ್ಯದಲ್ಲಿ ಈಗಾಗಲೇ 1.9 ಕೋಟಿ ಸಂಗ್ರಹವಾಗಿದೆ. ಮುಳಬಾಗಿಲಿನಲ್ಲಿ 29 ಸಾವಿರ ಸಹಿ ಸಂಗ್ರಹಣೆಯಾಗಿದ್ದು, ಇದನ್ನು ಮತ್ತಷ್ಟು ಪರಿಣಾಮಕಾರಿಯಾಗಿ ಮಾಡಬೇಕೆಂದು ಎಐಸಿಸಿ ಪ್ರಧಾನ ಕಾರ್ಯದರ್ಶಿ ಅಭಿಷೇಕ್ ದತ್ ಕರೆ ನೀಡಿದರು. ನಗರದ ಹೊರವಲಯದ ಕಾಂಗ್ರೇಸ್ ಕಚೇರಿಯಲ್ಲಿ ಪಕ್ಷದ ಮುಂಚೂಣಿ ಘಟಕಗಳ ಕಾರ್ಯಕರ್ತರ ಸಭೆಯನ್ನು ಉದ್ದೇಶಿಸಿ ಮಾತನಾಡಿದ ಅವರು, ದೇಶದಲ್ಲಿ ಓಟ್ ಚೋರ್ ಮಾಡಿ ಬಿಜೆಪಿ ನೇತೃತ್ವದ ಎನ್‌ಡಿಎ ಸರ್ಕಾರ ಅಧಿಕಾರಕ್ಕೆ ಬಂದಿದೆ. ಇದನ್ನು ಕಂಡು ಹಿಡಿದ ರಾಹುಲ್ ಗಾಂಧಿ ಅವರ ಆದೇಶಗಳನ್ನು ಪಕ್ಷದ ಮುಖಂಡರಿಂದ ಹಿಡಿದು ತಳಹಂತದ ಕಾರ್ಯಕರ್ತರು ಪಾಲಿಸಿದರೆ ಮುಂದಿನ ದಿನಗಳಲ್ಲಿ ದೇಶ, ರಾಜ್ಯದಲ್ಲಿ ಕಾಂಗ್ರೇಸ್ ಅಧಿಕಾರಕ್ಕೆ ಬರುವುದು ಖಚಿತ ಎಂದರು.

ಕೆಪಿಸಿಸಿ ಉಪಾಧ್ಯಕ್ಷ ನಾರಾಯಣಸ್ವಾಮಿ ಮಾತನಾಡಿ, ರಾಷ್ಟ್ರವನ್ನು ಬಿಜೆಪಿ, ಆರ್‌ಎಸ್‌ಎಸ್ ಕಪಿಮುಷ್ಟಿಯಿಂದ ಬಿಡಿಸಿಕೊಳ್ಳಲು ಕಾಂಗ್ರೇಸ್ ಪಕ್ಷ ಮತ್ತೆ ಅಧಿಕಾರಕ್ಕೆ ಬರಬೇಕು. ಅದಕ್ಕೆ ಕಾಂಗ್ರೇಸ್ ಪಕ್ಷದ ಎಲ್ಲಾ ಕಾರ್ಯಕರ್ತರು ಮುಂದಾಗಬೇಕು ಎಂದರು.

# ಮಿನಿ ನ್ಯೂಸ್

## ಸಂಚಾರ ನಿಯಮ ಉಲ್ಲಂಘನೆ ದಂಡ: ಶೇ 50ರಷ್ಟು ರಿಯಾಯಿತಿ

• ಉದಯವಾಹಿನಿ, ರಾಮನಗರ

ಪೊಲೀಸ್ ಇಲಾಖೆ ಸಂಚಾರ ಇ-ಚಲನ್‌ನಲ್ಲಿ ದಾಖಲಾಗಿರುವ ದಂಡದ ಪ್ರಕರಣಗಳಲ್ಲಿ ಶೇ50ರಷ್ಟು ರಿಯಾಯಿತಿ ನೀಡಿ ಸಾರಿಗೆ ಇಲಾಖೆ ಆದೇಶಿಸಿದೆ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷ, ಜಿಲ್ಲಾ ಪ್ರಧಾನ ನ್ಯಾಯಾಧೀಶ ಎಂ.ಎಚ್.ಅಣ್ಣಯ್ಯ ತಿಳಿಸಿದರು. ನಗರ ಜಿಲ್ಲಾ ನ್ಯಾಯಾಲಯದ ಸಭಾಂಗಣದಲ್ಲಿ ಪತ್ರಿಕಾಗೋಷ್ಠಿ ನಡೆಸಿ ಮಾತನಾಡಿದ ಅವರು, ಈ ರಿಯಾಯಿತಿಯಲ್ಲಿ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳಲು ನ.21ರಿಂದ ಡಿ.12ರವರೆಗೆ ಕಾಲಾವಕಾಶ ನೀಡಲಾಗಿದೆ. ಪ್ರಕರಣ ಬಾಕಿ ಉಳಿಸಿಕೊಂಡಿರುವ ವಾಹನಗಳ ಮಾಲೀಕರು, ಸಾರ್ವಜನಿಕರು, ಕಕ್ಷಿದಾರರು ಈ ಅವಕಾಶವನ್ನು ಸದುಪಯೋಗಪಯೋಗ ಪಡಿಸಿಕೊಳ್ಳಬೇಕು ಎಂದು ತಿಳಿಸಿದರು.

ಸೆ.13ರಂದು ನಡೆದ ಲೋಕ ಅದಾಲತ್ ನಲ್ಲಿ ಒಟ್ಟು 8241 ಪ್ರಕರಣಗಳಲ್ಲಿ 29.60 ಲಕ್ಷ ಮೊತ್ತ ಪಾವತಿಯಾಗಿದೆ. ಮುಂದಿನ ಲೋಕ ಅದಾಲತ್ ಡಿ.13ರಂದು ನಡೆಯಲಿದೆ. ಸಾರಿಗೆ ಇಲಾಖೆ ಪ್ರಕರಣಗಳಿಗೆ ಸಂಬಂಧಿಸಿದ ಪ್ರಕರಣಗಳಿಗೆ ಹಾಜರಾಗಿ ಕಕ್ಷಿದಾರರು ರಾಜಿ ಸಂಧಾನ ಮಾಡಿಕೊಳ್ಳಬಹುದು ಎಂದು ತಿಳಿಸಿದರು. ರಾಮನಗರ ಡಿವೈಎಸ್‌ಪಿ ಶ್ರೀನಿವಾಸ್ ಮಾತನಾಡಿ, ಇ-ಚಲನ್‌ಗಳ ಮೊತ್ತ ಪಾವತಿಗಾಗಿ ಜಿಲ್ಲಾ ಹಾಗೂ ತಾಲ್ಲೂಕು ಕೇಂದ್ರಗಳಲ್ಲಿ ವಿಶೇಷ ಕೌಂಟರ್ ತೆರೆಯಲಾಗುವುದು. ಕರ್ನಾಟಕ ಒನ್, ಬೆಂಗಳೂರು ಒನ್ ಕೇಂದ್ರಗಳಲ್ಲೂ ದಂಡದ ಮೊತ್ತ ಪಾವತಿಸಬಹುದು ಎಂದು ತಿಳಿಸಿದರು.

## ಶಾಲೆ ಬಳಿ ಬಾಯಿ ತೆರೆದ ಚರಂಡಿ

• ಉದಯವಾಹಿನಿ, ಹಾರೋಹಳ್ಳಿ

ಶಾಲೆ ಪ್ರವೇಶ ದ್ವಾರದ ಬಳಿ ಇರುವ ಚರಂಡಿ ವ್ಯವಸ್ಥೆ ಸಂಪೂರ್ಣವಾಗಿ ಹದಗೆಟ್ಟಿದೆ. ಶಾಲಾ ವಿದ್ಯಾರ್ಥಿಗಳು ಸ್ವಲ್ಪ ಎಚ್ಚರ ತಪ್ಪಿದರೂ, ಚರಂಡಿಯಲ್ಲಿ ಬೀಳುವುದು ಖಚಿತ ಎಂದು ಸ್ಥಳೀಯ ನಾಗರಿಕರು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಹಾರೋಹಳ್ಳಿ ಗ್ರಾಮಾಂತರ ವಿದ್ಯಾಸಂಸ್ಥೆಯಲ್ಲಿ ಸಾವಿರಾರು ವಿದ್ಯಾರ್ಥಿಗಳು ಓದುತ್ತಿದ್ದಾರೆ. ಪ್ರವೇಶ ದ್ವಾರದಲ್ಲೇ ಚರಂಡಿ ಮೇಲೆ ದೊಡ್ಡ ಗುಂಡಿ ಬಿದ್ದಿದೆ. ವಿದ್ಯಾರ್ಥಿಗಳು ಇದಕ್ಕೆ ಬೀಳುವ ಸಾಧ್ಯತೆ ಇದೆ. ಮಕ್ಕಳು ಚರಂಡಿ ಹತ್ತಿರ ಸುಳಿಯದಂತೆ ಎಚ್ಚರ ವಹಿಸಬೇಕಿದೆ. ಇದು ದೊಡ್ಡ ಸವಾಲಾಗಿದೆ ಎಂದು ಹೆಸರು ಹೇಳಲು ಇಚ್ಛಿಸದ ಶಿಕ್ಷಕರೊಬ್ಬರು ಅವಲತ್ತುಕೊಂಡರು. ಚರಂಡಿ ಮೇಲೆ ಹೊದಿಸಲಾಗಿದ್ದ ಕಾಂಕ್ರೀಟ್ ಕಿತ್ತು ಹೋಗಿದೆ. ಮಕ್ಕಳಿಗೆ ಯಾವುದೇ ತೊಂದರೆಯಾಗುವ ಮುನ್ನ ಸಂಬಂಧಪಟ್ಟ ಅಧಿಕಾರಿಗಳು ಪರಿಶೀಲನೆ ನಡೆಸಿ ಸರಿಪಡಿಸಬೇಕು ಎಂದು ಪೋಷಕರು ಆಗ್ರಹಿಸಿದ್ದಾರೆ.

## ಸರ್ಕಾರಿ ಆಸ್ಪತ್ರೆ ನವೀಕರಣಕ್ಕೆ 10 ಕೋಟಿ

• ಉದಯವಾಹಿನಿ, ಚಿಂತಾಮಣಿ

ನಗರದ ಸಾರ್ವಜನಿಕ ಆಸ್ಪತ್ರೆ ನವೀಕರಣಕ್ಕಾಗಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ 10 ಕೋಟಿ ಮಂಜೂರಾಗಿದ್ದು, ಟೆಂಡರ್ ಪ್ರಕ್ರಿಯೆ ಮುಕ್ತಾಯವಾಗಿದೆ. ಇದೇ 24ರಂದು ಚಿಕ್ಕಬಳ್ಳಾಪುರ ಜಿಲ್ಲಾ ಪ್ರವಾಸ ಕೈಗೊಳ್ಳಲಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕಾಮಗಾರಿಗೆ ಶಂಕುಸ್ಥಾಪನೆ ನೆರವೇರಿಸಲಿದ್ದಾರೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಸಿ. ಸುಧಾಕರ್ ತಿಳಿಸಿದರು.

ಆಸ್ಪತ್ರೆ ಆವರಣದಲ್ಲಿ ಆಯೋಜಿಸಲಾಗಿದ್ದ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ ಅವರು, ಸಾರ್ವಜನಿಕ ಆಸ್ಪತ್ರೆ, ಮಹಿಳಾ ಮತ್ತು ಮಕ್ಕಳ ಆಸ್ಪತ್ರೆ ಉನ್ನತೀಕರಣದ ಜೊತೆಗೆ ಹೊಸಾಗಿ ನಿರ್ಮಾಣವಾಗುತ್ತಿರುವ ತೀವ್ರ ನಿಗಾ ಘಟಕದ ವಿಭಾಗ ಸೇರಿ 400 ಹಾಸಿಗೆಗಳ ಸುಸಜ್ಜಿತ ಕಾರ್ಪೋರೇಟ್ ಆಸ್ಪತ್ರೆಯನ್ನಾಗಿ ರೂಪಿಸುವುದು ನನ್ನ ಕನಸು ಎಂದು ಹೇಳಿದರು. ಸರ್ಕಾರ, ವಿವಿಧ ಕಡೆಗಳಿಂದ ಹಣ ಕ್ರೋಢೀಕರಿಸಿ ಹಂತ ಹಂತವಾಗಿ ಕಾಮಗಾರಿ ನಡೆಸಲಾಗುತ್ತಿದೆ ಎಂದರು.

ಆರ್‌ಎಂಎನ್‌ಸಿಎಚ್ ಯೋಜನೆಯಡಿ ನಿರ್ಮಾಣವಾದ ಮಹಿಳಾ ಮಕ್ಕಳ ಆಸ್ಪತ್ರೆಯನ್ನು 60 ಹಾಸಿಗೆಗಳಿಂದ 100 ಹಾಸಿಗೆಗೆ ಉನ್ನತೀಕರಿಸಲಾಗಿದೆ. ಇದಕ್ಕಾಗಿ 6.60 ಕೋಟಿ ವೆಚ್ಚ ಮಾಡಲಾಗಿದೆ. ಆರೋಗ್ಯ ಮತ್ತು ಕುಟುಂಬ ಇಲಾಖೆಯಿಂದಲೂ ಸಹಕಾರ ಸಿಕ್ಕಿದೆ. ಸಣ್ಣಪುಟ್ಟ ಕಾಮಗಾರಿಗಳಷ್ಟೇ ಬಾಕಿಯಿದ್ದು, ಈ ಆಸ್ಪತ್ರೆಯನ್ನು ಸಿಎಂ ಸಿದ್ದರಾಮಯ್ಯ ಅವರು ಸೋಮವಾರ ಉದ್ಘಾಟಿಸಲಿದ್ದಾರೆ ಎಂದು ತಿಳಿಸಿದರು.

## ಆಧುನಿಕ ತಂತ್ರಜ್ಞಾನದಿಂದ ಭೂ ಸಮೀಕ್ಷೆಗೆ ಬಲ

• ಉದಯವಾಹಿನಿ, ಮೈಸೂರು

ಮೈಸೂರು ವಿಶ್ವವಿದ್ಯಾಲಯದ ಭೌಗೋಳಿಕ ಮಾಹಿತಿ ತಂತ್ರಜ್ಞಾನ, ಭೂಗೋಳಶಾಸ್ತ್ರ ಅಧ್ಯಯನ ವಿಭಾಗವು ರುಸಾ ಸಹಯೋಗದಲ್ಲಿ ಭೂ-ಮಾಹಿತಿಶಾಸ್ತ್ರ ಮತ್ತು ಭೂ ಸಮೀಕ್ಷೆ ವಿಷಯದ ಕುರಿತು ಆಯೋಜಿಸಿರುವ ಕಾರ್ಯಾಗಾರವನ್ನು ಕುಲಸಚಿವೆ ಎಂ.ಕೆ ಸವಿತಾ ಉದ್ಘಾಟಿಸಿದರು. ಬಳಿಕ ಮಾತನಾಡಿ, ಭೂ ಸಮೀಕ್ಷೆಯಲ್ಲಿ ಟೋಟಲ್ ಸ್ಟೇಷನ್, ಜಿಪಿಎಸ್ ಮತ್ತು ಡ್ರೋನ್ ಸರ್ವೆ ಮುಂತಾದ ಆಧುನಿಕ ತಂತ್ರಜ್ಞಾನಗಳನ್ನು ಬಳಸಲಾಗುತ್ತಿದ್ದು, ಇವು ಸಂಶೋಧನಾ ಕ್ಷೇತ್ರ ಹಾಗೂ ಆಡಳಿತಾತ್ಮಕ ಕಾರ್ಯದಲ್ಲಿ ತೊಡಗಿಸಿಕೊಂಡವರಿಗೆ ಸಹಾಯಕವಾಗಿವೆ ಎಂದು ತಿಳಿಸಿದರು. ಅಟಾಷನ್ ಕಂಪನಿಯ ನಿರ್ದೇಶಕ ಡಾ. ಸುರೇಶ್ ಚಿತ್ರಾಪು ಮಾತನಾಡಿದರು.

# 800 ಕರ್ನಾಟಕ ಪಬ್ಲಿಕ್ ಶಾಲೆಗಳನ್ನು ಮ್ಯಾಗ್ನೆಟ್ ಶಾಲೆಗಳಾಗಿ ಗುರುತು

## ● ಹೊಂಗನೂರು ಕೆಪಿಎಸ್ ಶಾಲೆ ವಿಲೀನ:ಮುಚ್ಚುವ ಭೀತಿಯಲ್ಲಿ 7 ಸರ್ಕಾರಿ ಶಾಲೆ

• ಉದಯವಾಹಿನಿ, ಚನ್ನಪಟ್ಟಣ

ತಾಲ್ಲೂಕಿನ ಹೊಂಗನೂರು ಕರ್ನಾಟಕ ಪಬ್ಲಿಕ್ ಶಾಲೆಗೆ ಸುತ್ತಮುತ್ತಲಿನ 6 ಕಿ.ಮೀ ವ್ಯಾಪ್ತಿಯ 7 ಸರ್ಕಾರಿ ಪ್ರಾಥಮಿಕ ಶಾಲೆಗಳನ್ನು ವಿಲೀನಗೊಳಿಸಲು ಶಿಕ್ಷಣ ಇಲಾಖೆ ಆದೇಶ ಹೊರಡಿಸಿದೆ. ಈ ನಿರ್ಧಾರದಿಂದ ಏಳು ಶಾಲೆಗಳು ಮುಚ್ಚುವ ಅಪಾಯ ಎದುರಿಸುತ್ತಿವೆ. ಹೊಂಗನೂರು ಕರ್ನಾಟಕ ಪಬ್ಲಿಕ್ ಶಾಲೆ ವ್ಯಾಪ್ತಿಗೆ ಬರುವ ಕನ್ನಿದೊಡ್ಡಿ, ಅಮ್ಮಳ್ಳಿದೊಡ್ಡಿ, ಚನ್ನಂಕೇಗೌಡನದೊಡ್ಡಿ ಗ್ರಾಮಗಳ ಹಿರಿಯ ಪ್ರಾಥಮಿಕ ಶಾಲೆಗಳು, ಹೊಡಿಕೆಹೊಸಹಳ್ಳಿ, ಸಂತೆ ಮೊಗೇನಹಳ್ಳಿ, ಎಸ್.ಎಂ.ದೊಡ್ಡಿ, ಸುಣ್ಣಘಟ್ಟ ಗ್ರಾಮಗಳ ಕಿರಿಯ ಪ್ರಾಥಮಿಕ ಶಾಲೆಗಳನ್ನು ವಿಲೀನಗೊಳಿಸಲು ಚನ್ನಪಟ್ಟಣ ಕ್ಷೇತ್ರ ಶಿಕ್ಷಣಾಧಿಕಾರಿ ಕಚೇರಿ ಅಕ್ಟೋಬರ್‌ನಲ್ಲಿ ಆದೇಶ ಹೊರಡಿಸಿದೆ. ರಾಜ್ಯದಲ್ಲಿ 800 ಕರ್ನಾಟಕ ಪಬ್ಲಿಕ್ ಶಾಲೆಗಳನ್ನು ಮ್ಯಾಗ್ನೆಟ್ ಶಾಲೆಗಳಾಗಿ ಗುರುತಿಸಲಾಗಿದೆ. 50ಕ್ಕಿಂತ ಕಡಿಮೆ ವಿದ್ಯಾರ್ಥಿಗಳನ್ನು ಹೊಂದಿರುವ ಸುತ್ತಮುತ್ತಲಿನ ಶಾಲೆಗಳನ್ನು ಈ ಮ್ಯಾಗ್ನೆಟ್ ಶಾಲೆಗಳಲ್ಲಿ ವಿಲೀನಗೊಳಿಸುವ ಯೋಜನೆಯಡಿ ಹೊಂಗನೂರು ಕೆಪಿಎಸ್ ಶಾಲೆಯನ್ನು ಪ್ರಾಯೋಗಿಕವಾಗಿ ಮೊದಲು ಆಯ್ಕೆ ಮಾಡಲಾಗಿದೆ. ಡಾ.ವೆಂಕಟಪ್ಪ ಅವರ 14 ಕೋಟಿ ಸಹಾಯಧನದಲ್ಲಿ ಈ ಶಾಲೆಯನ್ನು ನಿರ್ಮಿಸಲಾಗಿದೆ.


ಉದಯವಾಹಿನಿ ಚಿತ್ರ

**ಶಾಲೆಗಳು ಮುಚ್ಚುವ ಅಪಾಯ**

ಸುಸಜ್ಜಿತ ತರಗತಿ, ಗ್ರಂಥಾಲಯ, ಪ್ರಯೋಗಾಲಯ ಮತ್ತು ಆಟದ ಮೈದಾನ ಇದೆ. ವಿಲೀನದ ನಿರ್ಧಾರ ಖಂಡಿಸಿ ಪೋಷಕರು ಮತ್ತು ಗ್ರಾಮಸ್ಥರು ಪ್ರತಿಭಟನೆ ನಡೆಸಿದ್ದಾರೆ. ಅಖಿಲ ಭಾರತ ಪ್ರಜಾಸತ್ತಾತ್ಮಕ ವಿದ್ಯಾರ್ಥಿ ಸಂಘದ ಸಹಯೋಗದಲ್ಲಿ ಹೋರಾಟ ಆರಂಭಿಸಿರುವ ಪೋಷಕರು, ನಮ್ಮ ಮಕ್ಕಳನ್ನು ಬೇರೆ ಗ್ರಾಮಕ್ಕೆ ಕಳುಹಿಸಲು ಇಷ್ಟವಿಲ್ಲ. 50 ವರ್ಷಗಳ ಇತಿಹಾಸ ಹೊಂದಿರುವ ಈ ಶಾಲೆಗಳನ್ನು ಮುಚ್ಚಲು ಬಿಡುವುದಿಲ್ಲ ಎಂದು ತಿಳಿಸಿದ್ದಾರೆ. ವಿಲೀನ ಶಾಲೆಗಳಲ್ಲಿ 50 ರಿಂದ 100 ವಿದ್ಯಾರ್ಥಿಗಳ ದಾಖಲಾತಿ ಇದ್ದರೂ ಹೊಂಗನೂರು ಕೆಪಿಎಸ್ ಶಾಲೆಗೆ ವಿಲೀನ ಪ್ರಕ್ರಿಯೆ ಈಗಾಗಲೇ ಆರಂಭವಾಗಿದೆ. ಗ್ರಾಮಸ್ಥರು ಶಾಲೆಗಳ ಐತಿಹಾಸಿಕ ಮಹತ್ವ ಮತ್ತು ಸ್ಥಳೀಯ ಶಿಕ್ಷಣದ ಪ್ರಾಮುಖ್ಯತೆ ಹಿನ್ನೆಲೆಯಲ್ಲಿ ತಮ್ಮ ಹೋರಾಟ ಮುಂದುವರಿಸುವ ನಿರ್ಧಾರ ಕೈಗೊಂಡಿದ್ದಾರೆ.

**ಗುಣಮಟ್ಟದ ಶಿಕ್ಷಣ ಆದ್ಯತೆಯಾಗಲಿ ಸರ್ಕಾರದ ಆದೇಶದಂತೆ ಹೊಂಗನೂರು ಕೆಪಿಎಸ್ ಶಾಲೆಗೆ ಈ ವ್ಯಾಪ್ತಿಯ 7 ಶಾಲೆಗಳನ್ನು ವಿಲೀನ ಮಾಡಲು ಕ್ರಮ ತೆಗೆದುಕೊಳ್ಳಲಾಗಿದೆ. ಈ ಭಾಗದ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ, ಸೌಲಭ್ಯ ಸಿಗುವಂತೆ ಮಾಡುವುದು ಶಿಕ್ಷಣ ಇಲಾಖೆ ಉದ್ದೇಶ. ವಿದ್ಯಾರ್ಥಿಗಳು ಹಾಗೂ ಪೋಷಕರು ಇದರ ಪ್ರಯೋಜನ ಪಡೆದುಕೊಳ್ಳಬೇಕು.**
**–ರಾಮಲಿಂಗಯ್ಯ, ಬಿಇಒ ಚನ್ನಪಟ್ಟಣ**

**ಸರ್ಕಾರಿ ಶಾಲೆಗಳನ್ನು ಉಳಿಸಿ ನಮ್ಮ ಗ್ರಾಮಗಳಲ್ಲಿ ಸರ್ಕಾರಿ ಶಾಲೆಗಳು 50ಕ್ಕೂ ಹೆಚ್ಚು ವರ್ಷಗಳಿಂದ ಕಾರ್ಯನಿರ್ವಹಿಸುತ್ತಿವೆ. ಈ ಶಾಲೆಗಳನ್ನು ಈಗ ಮುಚ್ಚಿದರೆ ಮತ್ತೆ ಗ್ರಾಮಕ್ಕೆ ಶಾಲೆಗಳನ್ನು ತರಲು ಸಾಧ್ಯವಾಗುವುದಿಲ್ಲ. ಇವು ಶಾಶ್ವತವಾಗಿ ಮುಚ್ಚಿದಂತೆಯೇ ಸರಿ. ಸರ್ಕಾರ ಹಾಗೂ ಶಿಕ್ಷಣ ಇಲಾಖೆ ಈ ಶಾಲೆಗಳನ್ನು ಮುಚ್ಚುವ ಕಾರ್ಯ ಕೈಬಿಡಬೇಕು. ಈ ಶಾಲೆಗಳನ್ನು ಉಳಿಸಿ ಗ್ರಾಮಗಳ ವಿದ್ಯಾರ್ಥಿಗಳ ಶಿಕ್ಷಣಕ್ಕೆ ಆದ್ಯತೆ ನೀಡಬೇಕು.**
**–ಮಂಜುನಾಥ್ ಪೋಷಕ ಸಂತೆ ಮೊಗೇನಹಳ್ಳಿ**

**ಶಾಲೆಗಳನ್ನು ಮುಚ್ಚಬಾರದು ತಾಲ್ಲೂಕಿನ 7 ಗ್ರಾಮಗಳ ಶಾಲೆಗಳನ್ನು ಹೊಂಗನೂರು ಕೆಪಿಎಸ್ ಶಾಲೆಗೆ ವಿಲೀನ ಮಾಡುವ ನೆಪದಲ್ಲಿ ಈ ಶಾಲೆಗಳನ್ನು ಮುಚ್ಚಲು ಸರ್ಕಾರ ಹುನ್ನಾರ ನಡೆಸುತ್ತಿದೆ. ಯಾವುದೇ ಶಾಲೆಯಾದರೂ ಕಡಿಮೆ ದಾಖಲಾತಿ ಇದ್ದರೂ ಅದನ್ನು ಮುಚ್ಚಬಾರದು ಎನ್ನುವ ನಿಯಮ ಇದೆ. ಆದರೆ ಈ ಶಾಲೆಗಳಲ್ಲಿ 50ಕ್ಕೂ ಹೆಚ್ಚು ದಾಖಲಾತಿ ಇದ್ದರೂ ಮುಚ್ಚುವ ಸಂಚು ನಡೆಯುತ್ತಿದೆ. ಇದನ್ನು ನಾವು ವಿರೋಧಿಸುತ್ತೇವೆ.**
**–ರೋಹಿತ್, ಜಿಲ್ಲಾ ಸಂಚಾಲಕ ಎಐಡಿಎಸ್‌ಒ ವಿದ್ಯಾರ್ಥಿ ಸಂಘಟನೆ**

### ಉದ್ಯೋಗಕ್ಕೆ ಭಾರಿ ಬೇಡಿಕೆ ಇದ್ದರೂ ಸ್ವಯಂ ಉದ್ಯೋಗ ಕೈಗೊಳ್ಳಲು ಅವಕಾಶ ಇದ್ದರೂ ಯುವಜನರು ಐಟಿಐಗಳಿಗೆ ಬರುತ್ತಿಲ್ಲ

# ಬೇಡಿಕೆ ಕಳೆದುಕೊಳ್ಳುತ್ತಿರುವ ಐಟಿಐ: 6 ವರ್ಷದಲ್ಲಿ 602 ಐಟಿಐಗಳಿಗೆ ಬೀಗ

• ಉದಯವಾಹಿನಿ ಶಿವಮೊಗ್ಗ

ಬಡವರು ಮತ್ತು ಮಧ್ಯಮ ವರ್ಗದ ಯುವಜನರ ಪಾಲಿನ ಉದ್ಯೋಗ ಸಂಜೀವಿನಿಯಾದ ಕೈಗಾರಿಕಾ ತರಬೇತಿ ಸಂಸ್ಥೆಗಳು ಕೋವಿಡ್ ನಂತರದಲ್ಲಿ ಬೇಡಿಕೆ ಕಳೆದುಕೊಂಡು ಮುಚ್ಚಲಾರಂಭಿಸಿವೆ.

1960 ರಿಂದ 1980ರ ನಡುವೆ ಐಟಿಐ ಮತ್ತು ಡಿಪ್ಲೊಮಾ ಮಾಡಿದರೆ ಸರಕಾರಿ ಕೈಗಾರಿಕೆಗಳಲ್ಲಿ ಉದ್ಯೋಗ ಕಾಯಂ ಎಂಬಂತಹ ವಾತಾವರಣವಿತ್ತು. ಖಾಸಗಿ ಕೈಗಾರಿಕೆಗಳಲ್ಲೂ ಐಟಿಐ ಕುಶಲಕರ್ಮಿಗಳಿಗೆ ಉದ್ಯೋಗಾವಕಾಶ ಸೃಷ್ಟಿಯಾಗುತ್ತಿದ್ದರಿಂದ 2015ರವರೆಗೆ ಸರಕಾರಿ ಮತ್ತು ಖಾಸಗಿ ಐಟಿಐಗಳ ಪ್ರವೇಶಕ್ಕೆ ಭಾರಿ ಬೇಡಿಕೆ ಇತ್ತು. ಕೈಗಾರಿಕೆಗಳಲ್ಲಿ ಉದ್ಯೋಗಕ್ಕೆ ಭಾರಿ ಬೇಡಿಕೆ ಇದ್ದರೂ ಸ್ವಯಂ ಉದ್ಯೋಗ ಕೈಗೊಳ್ಳಲು ಅವಕಾಶ ಇದ್ದರೂ ಯುವಜನರು ಐಟಿಐಗಳಿಗೆ ಬರುತ್ತಿಲ್ಲ.

- ಯುವಜನರಿಗೆ ಬೇಡವಾದ ಕೈಗಾರಿಕಾ ವೃತ್ತಿ ತರಬೇತಿ
- 1960 ರಿಂದ 1980ರ ನಡುವೆ ಐಟಿಐ ಮತ್ತು ಡಿಪ್ಲೊಮಾ ಮಾಡಿದರೆ ಸರಕಾರಿ ಕೈಗಾರಿಕೆಗಳಲ್ಲಿ ಉದ್ಯೋಗ ಕಾಯಂ ಎಂಬಂತಹ ವಾತಾವರಣವಿತ್ತು.

**ಐಟಿಐಗಳ ಇತಿಹಾಸ:** ಸ್ವಾತಂತ್ರ್ಯ ನಂತರದಲ್ಲಿ ರಾಜ್ಯದೆಲ್ಲೆಡೆ ಕೈಗಾರಿಕೆಗೆ ಆದ್ಯತೆ ನೀಡಿದ ಕಾರಣದಿಂದಾಗಿ ಕುಶಲಕರ್ಮಿಗಳಿಗೆ ಭಾರಿ ಬೇಡಿಕೆ ಸೃಷ್ಟಿಯಾಗಿತ್ತು. ಕೈಗಾರಿಕೆಗಳಿಗೆ ಅರ್ಹ ಮಾನವ ಸಂಪನ್ಮೂಲ ಪೂರೈಸುವ ಸಲುವಾಗಿ ಸರಕಾರವು 1956ರಲ್ಲಿ ಮೊದಲ ಬಾರಿಗೆ ಬೆಂಗಳೂರು, ಕೆಜಿಎಫ್, ಭದ್ರಾವತಿ, ವಿಜಯಪುರ ಮತ್ತು ಬಳ್ಳಾರಿಯಲ್ಲಿ ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆಗಳನ್ನು ತೆರೆಯಿತು. ಆನಂತರದಲ್ಲಿ ಮತ್ತಷ್ಟು ಐಟಿಗಳನ್ನು ಸರಕಾರ ತೆರೆಯಿತಲ್ಲದೆ 1970ರ ಹೊತ್ತಿಗೆ ಖಾಸಗಿ ಸಂಸ್ಥೆಗಳೂ ಐಟಿಐಗಳನ್ನು ತೆರೆದವು. 2000ನೇ ಇಸವಿ ಹೊತ್ತಿಗೆ ರಾಜ್ಯದಲ್ಲಿ 95 ಸರಕಾರಿ ಮತ್ತು 140 ಖಾಸಗಿ ಐಟಿಗಳಿದ್ದವು.



ಉದಯವಾಹಿನಿ ಚಿತ್ರ

**ಐಟಿಐಗಳು ಸಾಮರ್ಥ್ಯ ಪ್ರವೇಶ ಆಗಿರುವುದು**

- ಸರಕಾರಿ 270 40 ಸಾವಿರ 31 ಸಾವಿರ
- ಅನುದಾನಿತ 192 18ಸಾವಿರ 13ಸಾವಿರ
- ಖಾಸಗಿ 836 39 ಸಾವಿರ 26 ಸಾವಿರ

ಪ್ರವೇಶಕ್ಕೆ ಭಾರಿ ಬೇಡಿಕೆ ಇದ್ದ ಕಾರಣದಿಂದಾಗಿ ಸರಕಾರವು ಪ್ರತಿಯೊಂದು ತಾಲ್ಲೂಕು ಕೇಂದ್ರಗಳಲ್ಲೂ ಐಟಿಗಳನ್ನು ತೆರೆದು ಉತ್ತೇಜನ ನೀಡಿತು. ಸರಕಾರದೊಂದಿಗೆ ಖಾಸಗಿ ಸಂಸ್ಥೆಗಳು ಸ್ಪರ್ಧೆಗೆ ಬಿದ್ದ ಪರಿಣಾಮ 2017ರ ಹೊತ್ತಿಗೆ 270 ಸರಕಾರಿ ಮತ್ತು 1231 ಖಾಸಗಿ ಐಟಿಐಗಳಾದವು. ಕೋವಿಡ್ ಸಮಯ ಐಟಿಐಗಳಿಗೆ ಗ್ರಹಣ ಬಡಿದಂತೆ ಆಗಿತ್ತು. ಕೋವಿಡ್ ನಂತರದಲ್ಲಿ ಇದ್ದಕ್ಕಿದ್ದಂತೆ ಪ್ರವೇಶ ಕುಸಿಯಲಾರಂಭಿಸಿತು. ಹಿಂದೆಲ್ಲ ಪ್ರವೇಶಕ್ಕೆ ಅಂಕ, ಮೀಸಲು, ಕೃಪಾಂಕದ ಆಧಾರದ ಮೇಲೆ ಜಿಲ್ಲಾ ಕೇಂದ್ರಗಳಲ್ಲಿರುವ ಕೇಂದ್ರೀಕೃತ ಘಟಕದಲ್ಲಿ ಕೌನ್ಸೆಲಿಂಗ್ ಮೂಲಕ ಪ್ರವೇಶ ಮಾಡಿಕೊಳ್ಳಲಾಗುತ್ತಿತ್ತು. ಕೆಲವೊಮ್ಮೆ ಶೇ.80 ಅಂಕಗಳಿಸಿದವರಿಗೂ ಸೀಟು ಸಿಗುತ್ತಿರಲಿಲ್ಲ.

**ಮುಚ್ಚಿದ ಸಂಸ್ಥೆಗಳು**

**2017ರಲ್ಲಿ 1800 ಐಟಿಐಗಳು 1.50 ಲಕ್ಷ ವಿದ್ಯಾರ್ಥಿಗಳಿಗೆ ಪ್ರವೇಶ ಅವಕಾಶ ಒದಗಿಸುತ್ತಿದ್ದವು. 6 ವರ್ಷದಿಂದ ಈಚೆಗೆ 602 ಐಟಿಐಗಳಿಗೆ ಬೀಗ ಬಿದ್ದು 1701 ಉಳಿದುಕೊಂಡಿವೆ. ಈ ಐಟಿಐಗಳಲ್ಲಿ 97ಸಾವಿರ ಸೀಟುಗಳಿಗೆ ಆಗಿರುವುದು 70 ಸಾವಿರಕ್ಕಿಂತ ಕಡಿಮೆ. ಈಗ ಎಷ್ಟೇ ಅಂಕ ಗಳಿಸಿದರೂ ನೇರ ಪ್ರವೇಶ ಪಡೆಯಬಹುದಾಗಿದೆ. ಪ್ರೌಢಶಾಲೆಗಳಿಗೆ ತೆರಳಿ ಪ್ರಚಾರ ನೀಡಿದರೂ ವಿದ್ಯಾರ್ಥಿಗಳು ಬರುತ್ತಿಲ್ಲ ಎಂದು ಸರಕಾರಿ ಐಟಿಐಗಳ ಪ್ರಾಂಶುಪಾಲರು ಬೇಸರ ವ್ಯಕ್ತಪಡಿಸುತ್ತಾರೆ.**

ಪ್ರಸ್ತುತ 270 ಸರಕಾರಿ ಐಟಿಐಗಳು ಕಾರ್ಯನಿರ್ವಹಿಸುತ್ತಿದ್ದರೂ ಬಹುತೇಕ ಸಂಸ್ಥೆಗಳಲ್ಲಿ ಡ್ರೆಸ್ ಮೇಕಿಂಗ್, ವೆಲ್ಡರ್, ಟರ್ನರ್, ಮೋಟಾರ್ ವೆಹಿಕಲ್ ಮೆಕ್ಯಾನಿಕ್, ಡೀಸೆಲ್ ಮೆಕ್ಯಾನಿಕ್ ಸೇರಿದಂತೆ ಹಲವು ವೃತ್ತಿ ತರಬೇತಿಗಳಿಗೆ ಯಾರೂ ಬರುತ್ತಿಲ್ಲ. ಎಲೆಕ್ಟ್ರೀಶಿಯನ್, ಎಲೆಕ್ಟ್ರಾನಿಕ್ ಮೆಕ್ಯಾನಿಕ್, ಸಿಎನ್‌ಸಿ ಮೆಸಿನ್ ಟೆಕ್ನಿಶಿಯನ್ ಸೇರಿದಂತೆ ಕೆಲವೇ ಕೆಲವು ತರಬೇತಿಗಳಿಗೆ ಮಾತ್ರ ಪ್ರವೇಶ ಪಡೆದುಕೊಂಡಿದ್ದಾರೆ.

ತಂತ್ರಜ್ಞಾನ ಅಭಿವೃದ್ಧಿ ಹೊಂದಿದಂತೆ ಐಟಿಐಗಳನ್ನೂ ನಿರಂತರವಾಗಿ ಅಪ್‌ಗ್ರೇಡ್ ಮಾಡಲಾಗುತ್ತಿದೆ. 1500 ಕಾಯಂ ಕಿರಿಯ ತರಬೇತಿ ಅಧಿಕಾರಿ(ಜೆಟಿಒ)ಗಳನ್ನು ನೇಮಕ ಮಾಡಿಕೊಂಡು ಗುಣಮಟ್ಟದ ತರಬೇತಿಗೆ ಆದ್ಯತೆ ನೀಡಲಾಗಿದೆ. ಮಕ್ಕಳು ಉನ್ನತ ವ್ಯಾಸಂಗ ಮಾಡಬೇಕು, ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಎದುರಿಸಬೇಕೆಂಬ ಪೋಷಕರ ಒತ್ತಾಸೆಯಿಂದಾಗಿ ಯುವಜನರು ಐಟಿಐಗಳಿಗೆ ಬರುತ್ತಿಲ್ಲ ಎಂದಿದ್ದಾರೆ ಎನ್.ಎಸ್. ಚಿದಾನಂದ, ನಿರ್ದೇಶಕರು, ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆ.

**ಕೈಗಾರಿಕೆಗಳಲ್ಲಿ ಈಗಲೂ ಬೇಡಿಕೆ**

**ಮಕ್ಕಳು ಉನ್ನತ ಶಿಕ್ಷಣ ವ್ಯಾಸಂಗ ಮಾಡಬೇಕೆಂಬ ಪೋಷಕರ ಅಭಿಲಾಷೆ, ಐಟಿಐ ಮಾಡಿದರೆ ಕೈಗಾರಿಕೆಗಳಲ್ಲಿ ಸಣ್ಣಪುಟ್ಟ ಕೆಲಸಕ್ಕೆ ಮಾತ್ರ ಹೋಗಬೇಕು, ಸ್ಪರ್ಧಾತ್ಮಕ ಪರೀಕ್ಷೆಗೆ ಹೋಗಲು ಸಾಧ್ಯವಿಲ್ಲಎಂಬ ಮನೋಭಾವದಿಂದಾಗಿ ಪಾಲಿಟೆಕ್ನಿಕ್‌ಗಳೊಂದಿಗೆ ಐಟಿಐಗಳೂ ಬೇಡಿಕೆ ಕಳೆದುಕೊಂಡಿವೆ. ಆದರೆ, ಖಾಸಗಿ ಕ್ಷೇತ್ರಗಳಲ್ಲಿಈಗಲೂ ಐಟಿಐ ಕುಶಲ ಕರ್ಮಿಗಳಿಗೆ ಭಾರಿ ಬೇಡಿಕೆ ಇದೆ. ಬಹಳಷ್ಟು ಕಂಪನಿಗಳು ಶಿಶುಕ್ಷುತರಬೇತಿಗೆ ಐಟಿಐ ಮುಗಿಸಿದವರನ್ನು ತೆಗೆದುಕೊಂಡು ತರಬೇತಿ ಕೊಟ್ಟು ಬಳಿಕ ಉದ್ಯೋಗವನ್ನೂ ಕೊಡುತ್ತಿವೆ. ಆದರೆ, ಇತ್ತೀಚೆಗೆ ಖಾಸಗಿ ಕಂಪನಿಗಳು ಬಯಸಿದಷ್ಟು ಶಿಶುಕ್ಷುಗಳು ಹೋಗುತ್ತಿಲ್ಲವಂತೆ.**

## ಗಡಿಭಾಗದ ಕನ್ನಡ ಶಾಲೆ ಮುಚ್ಚುತ್ತಿರುವುದು ನೋವಿನ ಸಂಗತಿ: ರಾಜಣ್ಣ

• ಉದಯವಾಹಿನಿ ಬಳ್ಳಾರಿ

ರಾಜ್ಯದ ಗಡಿಭಾಗಗಳಲ್ಲಿನ ಕನ್ನಡ ಶಾಲೆಗಳನ್ನು ಮುಚ್ಚುತ್ತಿರುವುದು ನೋವಿನ ಸಂಗತಿ ಎಂದು ಅಂಗವಿಕಲರ ಅಧಿನಿಯಮದ ನಿವೃತ್ತ ಆಯುಕ್ತ ಪದ್ಮಶ್ರೀ ಡಾ. ಕೆ.ಎಸ್.ರಾಜಣ್ಣ ತಮ್ಮ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.

ಅವರು ಸಂಜೆ ನಗರದ ಸರ್ಕಾರಿ ಕಿರಿಯ ತಾಂತ್ರಿಕ (ಜೆಟಿಎಸ್) ಶಾಲೆಯ ಆವರಣದಲ್ಲಿ ನಿಮಗಾಗಿ ನಾವು ಸಂಸ್ಥೆ ಹಮ್ಮಿಕೊಂಡಿದ್ದ 5 ವರ್ಷದ ಕನ್ನಡ ಜಾತ್ರೆ ಕಾರ್ಯಕ್ರಮದಲ್ಲಿ ''ಕನ್ನಡ ಕಣ್ಮಣಿ'' ಪ್ರಶಸ್ತಿ ಸ್ವೀಕರಿಸಿ ಮಾತನಾಡುತ್ತಿದ್ದರು. ನಮಗೆ ಬೇಕಾದ್ದು ಮೊದಲನೆಯದು ಕನ್ನಡ, ಕನ್ನಡದ ಮಹತ್ವಸಾಹಿತಿಗಳು, ಸಾಂಸ್ಕೃತಿಕ ರಾಯಭಾರಿಗಳು, ಹೋರಾಟಗಾರರಿಂದ ವಿಶ್ವಮಟ್ಟಕ್ಕೆ ಬೆಳೆದಿದೆ.

ನಟರಾಗಿ ರಾಜಕುಮಾರ್, ಪುನಿತ್ ರಾಜ ಕುಮಾರ್ ಅವರು ಕನ್ನಡಕ್ಕೆ ನೀಡಿದ ಕೊಡುಗೆಯೂ ಅಪಾರ, ಪುಲಿಕೇಶಿ ನಗರದ ಮೆಟ್ರೋ ನಿಲ್ದಾಣಕ್ಕೆ ಪುನೀತ್ ಹೆಸರಿಡಲು ನನ್ನ ಮನವಿಯಾಗಿದೆ.

ಕನ್ನಡ ರಾಜ್ಯೋತ್ಸವ ಆಚರಣೆ ಮಾಡಿದರಷ್ಟೇ ಸಾಲದು. ರಾಜ್ಯದ ಗಡಿಭಾಗಗಳಲ್ಲಿನ ಕನ್ನಡ ಶಾಲೆಗಳನ್ನು ಮುಚ್ಚುತ್ತಿರುವುದು ನೋವಿನ ಸಂಗತಿ. ಅವುಗಳನ್ನು ಉಳಿಸುವುದು ಸರ್ಕಾರದ ಜವಾಬ್ದಾರಿಯಾಗಬೇಕು ಎಂದರು. ನಿಮಗಾಗಿ ನಾವು ಸಂಸ್ಥೆ ಮಾನವೀಯತೆಯ ಕಾರ್ಯಚಟುವಟಿಕೆಗಳು ಶ್ಲಾಘನೀಯ ಎಂದರು.



ಉದಯವಾಹಿನಿ ಚಿತ್ರ

**ಈ ಸಂಸ್ಥೆಯ ಕೆಲಸ ಕಾರ್ಯ ಹೆಮ್ಮೆಯ ಸಂಗತಿ. ಏಕೆಂದರೆ, ಇಂದಿನ ದಿನದಲ್ಲಿ ನಮಗಾಗಿ ನೀವು ಎನ್ನುವ ಪರಿಕಲ್ಪನೆಯ ಸಂದರ್ಭದಲ್ಲಿ. ಈ ಸಂಸ್ಥೆಯ ಯುವ ಸಮೂಹ ತಮ್ಮ ಚೌಕಟ್ಟಿನಲ್ಲಿ ಪ್ರಾಮಾಣಿಕವಾಗಿ ಮಾಡುತ್ತಿರುವ ಸಮಾಜ ಸೇವೆ ಶ್ಲಾಘನೀಯವಾದುದು. ನನಗೆ ದೊರೆತ ಕೇಂದ್ರ ಸಾಹಿತ್ಯ ಅಕಾಡೆಮಿಯ ಬಾಲ ಸಾಹಿತ್ಯ ಪ್ರಶಸ್ತಿ ಇಲ್ಲಿನ ಜನತೆಗೆ ತಂದ ಗೌರವವಾಗಿದೆ. ಭೌಗೋಳಿಕ ಕನ್ನಡ ಗಡಿಯನ್ನು ಹೊಂದಿರುತ್ತದೆ. ಗಡಿ ಇಲ್ಲದೆ ಭಾವನಾತ್ಮಕ ಕನ್ನಡ ದ ಮೂಲಕ ಇವರ ಸೇವೆ ಸ್ಮರಣೀಯವಾದುದು. - ಡಾ. ಶಿವಲಿಂಗಪ್ಪ ಹಂದ್ಯಾಳು.**

## ಪವರ್ ಗ್ರಿಡ್ ಉಪ ಕೇಂದ್ರಕ್ಕೆ ಪ್ರಭು ಚವ್ಹಾಣ್ ಭೇಟಿ

• ಉದಯವಾಹಿನಿ ಕಮಲನಗರ

ಔರಾದ(ಬಿ) ವಿಧಾನಸಭಾ ಕ್ಷೇತ್ರದ ಚಿಮ್ಮೇಗಾಂವ-ಮಾಳೆಗಾಂವ ವ್ಯಾಪ್ತಿಯಲ್ಲಿ ನಿರ್ಮಿಸಲಾಗುತ್ತಿರುವ ಪವರ್ ಗ್ರಿಡ್ ಸೆಂಟರ್ ಉಪ ಕೇಂದ್ರಕ್ಕೆ ಮಾಜಿ ಸಚಿವರು ಹಾಗೂ ಔರಾದ(ಬಿ) ಶಾಸಕರಾದ ಪ್ರಭು ಬಿ.ಚವ್ಹಾಣ ಅವರು ಭೇಟಿ ನೀಡಿ ಕಾಮಗಾರಿಯನ್ನು ಪರಿಶೀಲಿಸಿದರು.

ಆಡಳಿತ ಕಛೇರಿ, ಟಾವರ್‌ಗಳು, ಕಟ್ಟಡಗಳ ನಿರ್ಮಾಣ ಸೇರಿದಂತೆ ಉಪ ಕೇಂದ್ರಸ ಆವರಣದಲ್ಲಿ ಸಂಚರಿಸಿ ಕೆಲಸದ ಗುಣಮಟ್ಟವನ್ನು ಗಮನಿಸಿದರು. ನಂತರ ಅಧಿಕಾರಿಗಳ ಸಭೆ ನಡೆಸಿ ಕಾಮಗಾರಿಯ ಸ್ಥಿತಿಗತಿಯ ಬಗ್ಗೆ ಮಾಹಿತಿ ಪಡೆದರು. ಈ ವೇಳೆ ಮಾತನಾಡಿ, ಅತ್ಯಂತ ಹಿಂದುಳಿದ ಪ್ರದೇಶವಾಗಿರುವ ಈ ಭಾಗದಲ್ಲಿ ಜನತೆಗೆ ಉದ್ಯೋಗಾವಕಾಶಗಳು ಲಭಿಸಿ ಆರ್ಥಿಕವಾಗಿ ಸದೃಢರಾಗಬೇಕೆಂಬ ಉದ್ದೇಶದಿಂದ ನಾನು ಸಚಿವನಾಗಿದ್ದಾಗ ಸಾಕಷ್ಟು ಪ್ರಯತ್ನಪಟ್ಟು ಕ್ಷೇತ್ರಕ್ಕೆ ಯೋಜನೆಯನ್ನು ತಂದಿದ್ದೇನೆ.

2147 ಕೋಟಿ ಮೊತ್ತದ 675 ಕೆ.ವಿ ಪವರ್ ಟ್ರಾನ್ಸ್‌ಮಿಷನ್ ಸಾಮರ್ಥ್ಯದ ಕರ್ನಾಟಕ ಮೊದಲ ಪವರ್ ಗ್ರಿಡ್ ವಿದ್ಯುತ್ ಉಪ ಕೇಂದ್ರ ಇದಾಗಿದೆ.



ಉದಯವಾಹಿನಿ ಚಿತ್ರ

ನಮ್ಮ ಭಾಗದ ಬಹುದೊಡ್ಡ ಯೋಜನೆಯನ್ನು ಗುಣಮಟ್ಟದಿಂದ ಮಾಡಬೇಕು ಮತ್ತು ನಿಗದಿತ ಅವಧಿಯೊಳಗಾಗಿ ಕೆಲಸ ಪೂರ್ಣಗೊಳಿಸಬೇಕೆಂದು ನಿರ್ದೇಶನ ನೀಡಿದರು.

ಪವರ್ ಗ್ರಿಡ್ ಕಾರ್ಪೋರೇಷನ್ ಕಾಮಗಾರಿಗೆ ಇಲ್ಲಿನ ಅನೇಕ ರೈತರು ಜಮೀನು ನೀಡಿದ್ದಾರೆ. ಅವರಿಗೆ ಅನುಕೂಲ ಮಾಡಿಕೊಡಬೇಕು. ಕಾಮಗಾರಿ ಸ್ಥಳದಲ್ಲಿ ನೂರಾರು ಜನರ ಅವಶ್ಯಕತೆ ಇರುತ್ತದೆ. ಇದರಲ್ಲಿ ಸ್ಥಳೀಯರಿಗೆ ಹೆಚ್ಚಿನ ಆದ್ಯತೆ ನೀಡಬೇಕು. ತಾಂತ್ರಿಕ ಕೆಲಸಗಳಿಗೆ ಪರಿಣಿತರ ಅವಶ್ಯಕತೆಯಿರುತ್ತದೆ. ಆದರೆ ತಾಂತ್ರಿಕೇತರ ಕೆಲಸಗಳಿಗೆ ಸಾಧ್ಯವಾದಷ್ಟು ಸ್ಥಳೀಯರ ಸೇವೆ ಪಡೆಯಬೇಕೆಂದು ಕಟ್ಟುನಿಟ್ಟಾಗಿ ಸೂಚಿಸಿದರು.

## ಮಿನಿ ನ್ಯೂಸ್

### ಸಿಸಿಬಿ ಪೊಲೀಸರ ಕಾರ್ಯಾಚರಣೆ: 6.84 ಲಕ್ಷ ರೂ.ಮೌಲ್ಯದ 20 ಕ್ವಿಂಟಾಲ್ ಅಕ್ಕಿ ವಶ

• ಉದಯವಾಹಿನಿ ಕಲಬುರಗಿ

ನಗರದ ಸಬ್-ಅರ್ಬನ್ ಪೊಲೀಸ್ ಠಾಣೆ ವ್ಯಾಪ್ತಿಯ ಕಪನೂರ ಇಂಡಸ್ಟ್ರೀಯಲ್ ಏರಿಯಾದಲ್ಲಿ ಅಕ್ರಮವಾಗಿ ಪಡಿತರ ಅಕ್ಕಿ ಸಾಗಿಸುತ್ತಿದ್ದ ಟಾಟಾ ಎಸಿ ವಾಹನದ ಮೇಲೆ ಸಿಸಿಬಿ ಘಟಕದ ಪೊಲೀಸರು ದಾಳಿ ನಡೆಸಿ 6,84,420 ರೂ.ಮೌಲ್ಯದ 20 ಕ್ವಿಂಟಾಲ್ ಅಕ್ಕಿ, ಲಾರಿ ಮತ್ತು ಟಾಟಾ ಎಸಿ ವಾಹನ ಜಪ್ತಿ ಮಾಡಿದ್ದಾರೆ.

ನಗರ ಪೊಲೀಸ್ ಆಯುಕ್ತ ಡಾ.ಶರಣಪ್ಪ ಎಸ್.ಡಿ.ಅವರ ನಿರ್ದೇಶನದ ಮೇರೆಗೆ ಡಿಸಿಪಿ ಪ್ರವೀಣ್ ಹೆಚ್.ನಾಯಕ್, ಸಿಸಿಬಿ ಘಟಕದ ಎಸಿಪಿ ಜೇಮ್ಸ್ ಮಿನೇಜಸ್ ನೇತೃತ್ವದಲ್ಲಿ ಸಿಬ್ಬಂದಿಗಳಾದ ಅಶೋಕ, ಸುನೀಲಕುಮಾರ, ರಾಜಕುಮಾರ ಅವರು ದಾಳಿ ನಡೆಸಿ ಅಕ್ಕಿ ಜಪ್ತಿ ಮಾಡಿದ್ದಾರೆ. ಈ ದಾಳಿಯನ್ನು ಯಶಸ್ವಿಯಾಗಿ ನಡೆಸಿದ ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿ ಕಾರ್ಯವನ್ನು ನಗರ ಪೊಲೀಸ್ ಆಯುಕ್ತ ಡಾ.ಶರಣಪ್ಪ ಎಸ್.ಡಿ.ಶ್ಲಾಘಿಸಿದ್ದಾರೆ.

### ಬಿಸಿಯೂಟಕ್ಕೆ ಕಳಪೆ ಧಾನ್ಯಗಳ ಪೂರೈಕೆ: ಆರೋಪ

• ಉದಯವಾಹಿನಿ ಯಲಬುರ್ಗಾ

ತಾಲ್ಲೂಕಿನ ಚಿಕ್ಕಮ್ಯಾಗೇರಿ ಗ್ರಾಮದ ಸರ್ಕಾರಿ ಪ್ರೌಢಶಾಲೆ ಮಕ್ಕಳಿಗೆ ವಿತರಿಸುವ ಮಧ್ಯಾಹ್ನದ ಬಿಸಿಯೂಟಕ್ಕೆ ಪೂರೈಕೆಯಾಗುವ ಆಹಾರ ಧಾನ್ಯಗಳು ಕಳಪೆಯಾಗಿದ್ದು, ಮಕ್ಕಳ ಆರೋಗ್ಯದ ಮೇಲೆ ಪರಿಣಾಮ ಬೀರುತ್ತಿದೆ ಎಂದು ಗ್ರಾಮಸ್ಥರು ಆರೋಪಿಸಿದ್ದಾರೆ.

ಶಾಲಾಭಿವೃದ್ಧಿ ಸಮಿತಿ ಅಧ್ಯಕ್ಷ ಈರಪ್ಪ ಸಂಗನಾಳ, ಉಪಾಧ್ಯಕ್ಷ ಮುತ್ತಪ್ಪ ದೇಸಾಯಿ, ಸದಸ್ಯ ಮಾರುತಿ ಚಂಡೂರ ಸೇರಿದಂತೆ ಅನೇಕರು ಶಾಲೆಗೆ ಭೇಟಿ ನೀಡಿ ಆಹಾರಧಾನ್ಯಗಳನ್ನು ಪರಿಶೀಲಿಸಿ ಬಿಸಿಯೂಟ ಯೋಜನೆಯ ಸಹಾಯಕ ನಿರ್ದೇಶಕರನ್ನು ಶಾಲೆಗೆ ಕರೆಯಿಸಿ ಗುಣಮಟ್ಟದ ಧಾನ್ಯಗಳನ್ನು ಪೂರೈಸುವಂತೆ ಒತ್ತಾಯಿಸಿದರು.

ಪೂರೈಕೆಯಾದ ತೊಗರಿ ಬೇಳೆಗಳಲ್ಲಿ ಹುಳುಗಳಿವೆ. ಅಲ್ಲದೇ ಜಿಡ್ಡುಗಟ್ಟಿವೆ. ಈ ಬಗ್ಗೆ ಸಂಬಂಧಿಸಿದ ಅಧಿಕಾರಿಗಳ ಗಮನಕ್ಕೆ ತಂದರೆ ಬೇಜವಾಬ್ದಾರಿ ಮಾತುಗಳನ್ನಾಡಿದ್ದಾರೆ ಎಂದು ಗ್ರಾಪಂ ಸದಸ್ಯ ಯಮನೂರಪ್ಪ ಕುರಿ ಅಧಿಕಾರಿ ವಿರುದ್ಧ ಹರಿಹಾಯ್ದಿದ್ದಾರೆ.

ತಾಲ್ಲೂಕಿನಾದ್ಯಂತ ಈ ರೀತಿಯ ಕಳಪೆ ಆಹಾರಧಾನ್ಯಗಳು ಪೂರೈಕೆಯಾಗುತ್ತಿವೆ. ಶಿಕ್ಷಣ ಇಲಾಖೆಯ ಗಮನಕ್ಕೆ ಇದ್ದರೂ ಯಾವುದೇ ಕ್ರಮಕ್ಕೆ ಮುಂದಾಗದೇ ಕಳಪೆ ಪೂರೈಸುವವರ ಪರವಾಗಿ ಮಾತನಾಡುತ್ತಿದ್ದಾರೆ. ಅಧಿಕಾರಿಗಳ ಮತ್ತು ಕಳಪೆ ದಾನ್ಯಗಳ ಪೂರೈಕೆದಾರರಿಂದ ಮಕ್ಕಳ ಭವಿಷ್ಯ ಹಾಳಾಗುತ್ತಿದೆ. ಜಿಲ್ಲಾಮಟ್ಟದ ಅಧಿಕಾರಿಗಳು ಸೂಕ್ತ ಕ್ರಮಕ್ಕೆ ಮುಂದಾಗಬೇಕು ಎಂದು ಆಗ್ರಹಿಸಿದರು.

## ಬೀದಿನಾಯಿಗಳ ಹಾವಳಿ: ಕ್ರಮಕ್ಕೆ ಸೂಚನೆ

• ಉದಯವಾಹಿನಿ ಮಂಗಳೂರು

ಬೀದಿ ನಾಯಿಗಳ ಹಾವಳಿ ತಡೆಗಟ್ಟುವ ನಿಟ್ಟಿನಲ್ಲಿ ಸುಪ್ರೀಂ ಕೋರ್ಟ್ ನೀಡಿರುವ ಆದೇಶಗಳ ಅನುಷ್ಠಾನದ ಕುರಿತು ದಕ್ಷಿಣ ಕನ್ನಡ ಜಿಲ್ಲಾ ಮಟ್ಟದ ಸಮಿತಿ ಸಭೆಯು ಜಿಲ್ಲಾಧಿಕಾರಿ ದರ್ಶನ್ ಎಚ್.ವಿ ಅವರ ಅಧ್ಯಕ್ಷತೆಯಲ್ಲಿ ನಡೆಯಿತು.

ಮಹಾನಗರಪಾಲಿಕೆ, ನಗರ ಮತ್ತು ಸ್ಥಳೀಯಾಡಳಿತ ಸಂಸ್ಥೆಗಳು ತಮ್ಮ ವ್ಯಾಪ್ತಿಯಲ್ಲಿ ಬರುವ ಬೀದಿ ನಾಯಿಗಳ ಗಣತಿಯನ್ನು ಮಾಡಿ ವರದಿ ಸಲ್ಲಿಸಬೇಕು. ತಮ್ಮ ವ್ಯಾಪ್ತಿಯಲ್ಲಿ ಬರುವ ಖಾಸಗಿ ಹಾಗೂ ಸರಕಾರಿ ಶಿಕ್ಷಣ ಸಂಸ್ಥೆಗಳು, ಆಸ್ಪತ್ರೆಗಳು, ಕ್ರೀಡಾ ಸಂಕೀರ್ಣಗಳು, ಬಸ್ ನಿಲ್ದಾಣಗಳು, ರೈಲ್ವೇ ನಿಲ್ದಾಣಗಳು, ಹಾಗೂ ಪ್ರವಾಸಿ ತಾಣಗಳ ಆವರಣದಲ್ಲಿ ಬೀದಿ ನಾಯಿಗಳನ್ನು ಹಿಡಿದು ಅವುಗಳ ಸಂತಾನ ಹರಣ ಶಸ್ತ್ರಚಿಕಿತ್ಸೆ ನಡೆಸಿ ಈಗಾಗಲೆ ಗೊತ್ತುಪಡಿಸಿದ ನಾಯಿ ಆಶ್ರಯ ಕೇಂದ್ರಕ್ಕೆ ಸ್ಥಳಾಂತರಿಸುವುದು ಹಾಗೂ ಮುಂದಿನ ದಿನಗಳಲ್ಲಿ ಸದರಿ ಸಂಸ್ಥೆಗಳ ಆವರಣದಲ್ಲಿ ಬೀದಿ ನಾಯಿಗಳು ನುಸುಳದಂತೆ ಕ್ರಮಕೈಗೊಂಡು ಈ ಬಗ್ಗೆ ಓರ್ವ ಮೇಲ್ವಿಚಾರಣಾ ಅಧಿಕಾರಿಯನ್ನು ನೇಮಕ ಮಾಡಿ ಪಾಲನಾ ವರದಿಯನು ಸಲ್ಲಿಸುವಂತೆ ಜಿಲ್ಲಾಧಿಕಾರಿಗಳು ಸೂಚಿಸಿದರು.



ಉದಯವಾಹಿನಿ ಚಿತ್ರ

ಪ್ರತೀ 3 ತಿಂಗಳಿಗೊಮ್ಮೆ ಈ ಎಲ್ಲಾ ಸಂಸ್ಥೆಗಳ ಆವರಣದ ಒಳಗೆ ಮತ್ತು ಹೊರಗೆ ಬೀದಿ ನಾಯಿಗಳ ವಾಸಸ್ಥಾನ ಇಲ್ಲದಿರುವ ಬಗ್ಗೆ ತಪಾಸಣೆ ನಡೆಸಿ ವರದಿ ಸಲ್ಲಿಸಬೇಕು. ಸಾರ್ವಜನಿಕ ಬಸ್ ನಿಲ್ದಾಣ, ರೈಲ್ವೇ ನಿಲ್ದಾಣ, ಪಾರ್ಕ್, ಡಿಪೋ ಮತ್ತು ಟರ್ಮಿನಲ್ ಸ್ಥಳಗಳಲ್ಲಿ ನಾಯಿಗಳಿಗೆ ಆಹಾರ ಸಿಗದಂತೆ ನೋಡಲ್ ಅಧಿಕಾರಿಗಳು ಕ್ರಮವಹಿಸಬೇಕು ಎಂದರು.

## ಬೆಳೆ ಪರಿಹಾರ ತಕ್ಷಣ ರೈತರ ಖಾತೆಗೆ ಜಮೆ ಮಾಡಲು ಬೆಲ್ದಾಳೆ ಒತ್ತಾಯ

• ಉದಯವಾಹಿನಿ ಬೀದರ್

ಬೀದರ್ ದ. ಕ್ಷೇತ್ರ ಸೇರಿದಂತೆ ಬೀದರ್, ಬಸವಕಲ್ಯಾಣ, ಹುಲಸೂರು, ಹುಮನಾಬಾದ್ ತಾಲ್ಲೂಕಿನ ರೈತರಿಗೆ ತಕ್ಷಣ ಅತಿವೃಷ್ಟಿ ಬೆಳೆ ಹಾನಿ ಪರಿಹಾರ ಬಿಡುಗಡೆ ಮಾಡಬೇಕೆಂದು ಕ್ಷೇತ್ರದ ಶಾಸಕರಾದ ಬಿಜೆಪಿ ರಾಜ್ಯ ಕಾರ್ಯದರ್ಶಿ ಡಾ.ಶೈಲೇಂದ್ರ ಬೆಲ್ದಾಳೆ ಒತ್ತಾಯಿಸಿದ್ದಾರೆ.



ಜಿಲ್ಲೆಯಲ್ಲಿ ಅತಿವೃಷ್ಟಿ ಬೆಳೆ ಹಾನಿ ಪರಿಹಾರ ಸಮರ್ಪಕವಾಗಿ ವಿತರಣೆ ಆಗುತ್ತಿಲ್ಲ. ಬೀದರ್, ಹುಮನಾಬಾದ್, ಬಸವಕಲ್ಯಾಣ, ಹುಲಸೂರು ತಾಲ್ಲೂಕಿನ ರೈತರ ಖಾತೆಗೆ ಹಣ ಜಮೆ ಆಗಿಲ್ಲ. ಈ ಬಗ್ಗೆ ಅನೇಕ ರೈತರು ನನಗೆ ಖುದ್ದು ಭೇಟಿಯಾಗಿ, ದೂರವಾಣಿ ಕರೆ ಮಾಡಿ ದೂರು ನೀಡಿದ್ದಾರೆ. ಜಿಲ್ಲಾಡಳಿತ ತಕ್ಷಣ ಈ ಕುರಿತು ಗಮನಹರಿಸಿ ಸಂತ್ರಸ್ತ ರೈತರ ಖಾತೆಗೆ ಪರಿಹಾರ ಹಣ ಜಮೆ ಮಾಡಬೇಕೆಂದು ಹೊರಡಿಸಿರುವ ಪ್ರಕಟಣೆಯಲ್ಲಿ ಆಗ್ರಹಿಸಿದ್ದಾರೆ.

ಬೀದರ್ ಜಿಲ್ಲೆಯ ಸುಮಾರು 1.80 ಲಕ್ಷ ರೈತರ ಖಾತೆಗೆ ಶೀಘ್ರವೇ ಮೊದಲ ಹಂತದ 140 ಕೋಟಿ ರೂ. ಬೆಳೆ ಹಾನಿ ಪರಿಹಾರ ಜಮೆಯಾಗಲಿದೆ. ಜಿಲ್ಲಾಡಳಿತ ಪರಿಹಾರ ವಿತರಣೆ ಪ್ರಕ್ರಿಯೆ ಆರಂಭಿಸಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಅವರು ಕಳೆದ ದಿ.29ರಂದು ಹೇಳಿದ್ದರು. ಆದರೆ ಈವರೆಗೆ ಅನೇಕ ರೈತರಿಗೆ ಪರಿಹಾರ ಬಂದಿಲ್ಲ. ಹೆಚ್ಚು ರೈತರು ಪರಿಹಾರಕ್ಕಾಗಿ ಕಾಯುತ್ತಿದ್ದಾರೆ. ಸಮಸ್ಯೆಯಲ್ಲಿರುವ ರೈತರಿಗೆ ಬೇಗ ನೆರವಾಗುವ ಕಾರ್ಯಕ್ಕೂ ಇಷ್ಟೊಂದು ವಿಳಂಬ, ನಿರ್ಲಕ್ಷ್ಯತೆ ವಹಿಸುತ್ತಿರುವುದು ಸರಿಯಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಸರ್ಕಾರ ಘೋಷಿಸಿದಂತೆ ಹೆಕ್ಟೇರ್‌ಗೆ ಹೆಚ್ಚುವರಿ 8500 ರೂ. ಪರಿಹಾರ ಇನ್ನೂ ನೀಡುತ್ತಿಲ್ಲ. ಈಗ ನೀಡುತ್ತಿರುವ ಪರಿಹಾರ ಕೇಂದ್ರ ಸರ್ಕಾರದ ಎನ್ ಡಿಆರ್ ಎಫ್ ನಿಧಿಯ ಪರಿಹಾರವಾಗಿದೆ. ರಾಜ್ಯ ಸರ್ಕಾರ ಏನೂ ಕೊಟ್ಟಿಲ್ಲ. ಬೆಳೆ ನಷ್ಟದಿಂದ ರೈತ ಸಮೂಹ ಸಾಕಷ್ಟು ಸಂಕಷ್ಟದಲ್ಲಿ ಕಾಲ ಕಳೆಯುತ್ತಿದೆ. ಇಂಥ ಸ್ಥಿತಿಯಲ್ಲೂ ಸರ್ಕಾರದ ಹೆಚ್ಚುವರಿ ಪರಿಹಾರ ಘೋಷಣೆಗಷ್ಟೇ ಸೀಮಿತಗೊಳಿಸಿರುವ ನೀತಿ ರೈತ ವಿರೋಧಿಯಾಗಿದೆ. ಪರಿಹಾರ ನೀಡಿಕೆಯಲ್ಲಿ ಆಗುತ್ತಿರುವ ವಿಳಂಬವನ್ನು ಗಮನಿಸಿದರೆ ರಾಜ್ಯ ಸರ್ಕಾರದ ಆರ್ಥಿಕ ಸ್ಥಿತಿ ಸರಿಯಿಲ್ಲ. ಗ್ಯಾರಂಟಿ ಅಬ್ಬರದಲ್ಲಿ ಖಜಾನೆ ಝುಳಝುಳವಾದಂತೆ ಕಾಣುತ್ತಿದೆ ಎಂದು ಶಾಸಕ ಡಾ. ಬೆಲ್ದಾಳೆ ಟೀಕಿಸಿದ್ದಾರೆ.

**ಕೊಟ್ಟ ಮಾತಿನಂತೆ ಸಚಿವರು ರೈತರಿಗೆ ಬರಬೇಕಾದ ಸುಮಾರು 280 ಕೋಟಿ ರೂ. ಬೆಳೆ ನಷ್ಟ ಪರಿಹಾರ ಕೂಡಲೇ ಬಿಡುಗಡೆ ಮಾಡಲು ಕ್ರಮ ಕೈಗೊಂಡು ನೊಂದ ರೈತರ ನೆರವಿಗೆ ಬರಬೇಕು. ಹೆಚ್ಚುವರಿ 8500 ರೂ. ಪರಿಹಾರ ಸಹ ತಕ್ಷಣ ರೈತರಿಗೆ ವಿತರಿಸಬೇಕು. ನಮ್ಮಲ್ಲಿ ಈಗ ಡಿಬಿಟಿ ವ್ಯವಸ್ಥೆ ಇರುವ ಕಾರಣ ಎಲ್ಲಾ ರೈತರ ಖಾತೆಗೆ ಏಕಕಾಲಕ್ಕೆ ಪರಿಹಾರ ಹಣ ಜಮೆ ಮಾಡಬೇಕು. ತಾಲ್ಲೂಕು ನಡುವೆ ತಾರತಮ್ಯ ಮಾಡಬಾರದು. ಜಿಲ್ಲಾಡಳಿತ ಸಹ ಈ ವಿಷಯ ಗಂಭೀರವಾಗಿ ಪರಿಗಣಿಸಬೇಕು. ಬೇಗ ಹಣ ಜಮಾ ಆಗದಿದ್ದರೆ ರೈತರೊಂದಿಗೆ ಸೇರಿ ಹೋರಾಟ ಮಾಡುವುದು ಅನಿವಾರ್ಯ ಎಂದು ಎಚ್ಚರಿಸಿದ್ದಾರೆ. -ಬೆಲ್ದಾಳೆ**

### ಕಾರ್ಮಿಕ ಸಂಹಿತೆ ವಿರುದ್ಧ ಪ್ರತಿಭಟನೆ

• ಉದಯವಾಹಿನಿ ಹಾಸನ

ಕಾರ್ಮಿಕ ಸಂಘಟನೆಗಳ ತೀವ್ರ ವಿರೋಧದ ನಡುವೆಯೂ ಕೇಂದ್ರ ಸರ್ಕಾರ 4 ಕರಾಳ ಕಾರ್ಮಿಕ ಸಂಹಿತೆಗಳನ್ನು ನ. 21ರಿಂದ ಜಾರಿ ಮಾಡಿದೆ. ನಗರದ ಮಹಾವೀರ ವೃತ್ತದಲ್ಲಿ ಕೇಂದ್ರ ಸರ್ಕಾರದ ಅಧಿಸೂಚನೆ ಪ್ರತಿಗಳನ್ನು ಸುಟ್ಟು ಪ್ರತಿಭಟನೆ ನಡೆಸಲಾಗಿದೆ. ಜನ ವಿರೋಧಿ ಕೇಂದ್ರದ ಕಾರ್ಮಿಕ ಸಂಹಿತೆ ಜಾರಿ ಮಾಡದಂತೆ ರಾಜ್ಯ ಸರ್ಕಾರವನ್ನು ಆಗ್ರಹಿಸಲಾಗಿದೆ ಎಂದು ಸಿಐಟಿಯು ರಾಜ್ಯ ಘಟಕದ ಉಪಾಧ್ಯಕ್ಷ ಧರ್ಮೇಶ್ ಹೇಳಿದರು.

ನವೆಂಬರ್ 26ರಂದು ನಡೆಯುವ ಸಂವಿಧಾನ ದಿನಾಚರಣೆ ಸಂದರ್ಭದಲ್ಲೂ ಡಾ.ಬಿ.ಆರ್. ಅಂಬೇಡ್ಕರ್ ಪ್ರತಿಮೆ ಎದುರು ಕೇಂದ್ರ ಸರ್ಕಾರದ ಶ್ರಮ ಶಕ್ತಿ ನೀತಿ-2025 ಕರಡು ಪ್ರತಿಗಳನ್ನು ಸುಟ್ಟು ಪ್ರತಿಭಟಿಸಲಾಗುವುದು' ಎಂದು ತಿಳಿಸಿದರು.

ಕೇಂದ್ರ ಸರ್ಕಾರ ಶ್ರಮ ಧರ್ಮ ಎಂದು ಹೇಳಿಕೊಂಡು ಶ್ರಮ ಶಕ್ತಿ ನೀತಿ-2025 ಎಂಬ ರಾಷ್ಟ್ರೀಯ ಕಾರ್ಮಿಕ ಮತ್ತು ಉದ್ಯೋಗ ನೀತಿಯ ಕರಡು ನೀತಿ ಪ್ರಕಟಿಸಿದೆ. ಇದು ಕಾರ್ಮಿಕ ಸಂಹಿತೆ ಜಾರಿಗೊಳಿಸಲು ಒಂದು ಹತಾಶ ಪ್ರಯತ್ನದ ಭಾಗವಾಗಿದ್ದು, ಕಾರ್ಮಿಕ ಕಾನೂನು ಆಡಳಿತದ ನಿಯಂತ್ರಣವನ್ನು ಮುಕ್ತಗೊಳಿಸಿ ದುಡಿಯುವ ಜನರ ಮೇಲೆ ಗುಲಾಮಗಿರಿ ಹೇರಿಕೆ ಮಾಡುವ ಪ್ರಯತ್ನವಾಗಿದೆ' ಎಂದು ದೂರಿದರು.

### ದೂರು ಸ್ವೀಕರಿಸಲು ನಿರಾಕರಣೆ: ಆರೋಪ

• ಉದಯವಾಹಿನಿ ಧಾರವಾಡ

ಜಿಲ್ಲೆಯ ಹುಕ್ಕೇರಿಯ ತಹಶೀಲ್ದಾರ್ (ಗ್ರೇಡ್-2) ಅವರು ವ್ಯಕ್ತಿಯೊಬ್ಬರ ಜಾತಿ ವಿಚಾರದಲ್ಲಿ ತಪ್ಪು ಮಾಹಿತಿ ನೀಡಿರುವುದಕ್ಕೆ ದೂರನ್ನು ಉಪನಗರ ಠಾಣೆ ಪೊಲೀಸರು ಸ್ವೀಕರಿಸುತ್ತಿಲ್ಲ ಎಂದು ಅರುಣ್ ಎಸ್.ಹಿರೇನಾಳ್ ಆರೋಪಿಸಿದರು. ಬ್ಯಾಡ ಜಾತಿಯು ಹಿಂದುಳಿದ ವರ್ಗದ ಪ್ರವರ್ಗ-1 ಪಟ್ಟಿಯಲ್ಲಿದೆ ಎಂದು ಹುಕ್ಕೇರಿಯ ತಹಶೀಲ್ದಾರ್ (ಗ್ರೇಡ್-2) ಅವರು ಮಾಹಿತಿ ನೀಡಿದ್ದಾರೆ. ಇದು ತಪ್ಪು ಮಾಹಿತಿ. ಹುಕ್ಕೇರಿಯ ತಹಶೀಲ್ದಾರ್ (ಗ್ರೇಡ್-2) ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ದೂರು ನೀಡಿದರೆ ಪೊಲೀಸರು ಸ್ವೀಕರಿಸುತ್ತಿಲ್ಲ ಎಂದು ಅರುಣ್ ಅವರು ತಿಳಿಸಿದರು.

### ಜ. 15ರೊಳಗೆ ಕಾಮಗಾರಿ ಪೂರ್ಣಗೊಳಿಸಿ

• ಉದಯವಾಹಿನಿ ಉಡುಪಿ

ನೂತನ ಜಿಲ್ಲಾಸ್ಪತ್ರೆ ಕಾಮಗಾರಿಗೆ ಬಾಕಿ ಅನುದಾನವನ್ನು ತಕ್ಷಣ ಮಂಜೂರು ಮಾಡಿ ಜನವರಿ 15 ರೊಳಗೆ ಜಿಲ್ಲೆಯ ಜನತೆಯ ಆರೋಗ್ಯ ಸೇವೆಗೆ ಲೋಕಾರ್ಪಣೆ ಮಾಡುವಂತೆ ಶಾಸಕ ಯಶ್‌ಪಾಲ್ ಸುವರ್ಣ ರಾಜ್ಯ ಸರ್ಕಾರವನ್ನು ಆಗ್ರಹಿಸಿದರು. ಜಿಲ್ಲಾಸ್ಪತ್ರೆ ಕಾಮಗಾರಿ ಸ್ಥಳಕ್ಕೆ ಅಧಿಕಾರಿಗಳೊಂದಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿ, ಕಾಮಗಾರಿಯ ಪ್ರಗತಿ ಹಾಗೂ ಉಳಿದ ಕಾಮಗಾರಿಗಳ ಬಗ್ಗೆ ಮಾಹಿತಿ ಪಡೆದು ಬಳಿಕ ಅವರು ಮಾತನಾಡಿದರು. ಜಿಲ್ಲಾಸ್ಪತ್ರೆ ಪೂರ್ಣಗೊಳಿಸುವ ಬಗ್ಗೆ ಈಗಾಗಲೇ ಹಲವು ಬಾರಿ ವಿಧಾನಸಭಾ ಅಧಿವೇಶನದಲ್ಲಿ ಪ್ರಸ್ತಾಪ ಮಾಡಿ, ಮುಖ್ಯಮಂತ್ರಿ. ಆರೋಗ್ಯ ಸಚಿವರಿಗೆ ಮನವಿ ಮಾಡಿದ್ದರೂ, ಈವರೆಗೆ ಸಚಿವರು ನೀಡಿದ ಭರವಸೆಗಳು ಈಡೇರಿಲ್ಲ. ಜನವರಿ 15 ರೊಳಗೆ ನೂತನ ಜಿಲ್ಲಾಸ್ಪತ್ರೆ ಸೇವೆಗೆ ಲಭ್ಯವಾಗದಿದ್ದರೆ ಸರ್ಕಾರದ ವಿರುದ್ಧ ಬೃಹತ್ ಪ್ರತಿಭಟನೆ ನಡೆಸಲಾಗುವುದು ಎಂದರು.

250 ಹಾಸಿಗೆಗಳ ಜಿಲ್ಲಾಸ್ಪತ್ರೆಯ ಶೇ 80 ರಷ್ಟು ಸಿವಿಲ್ ಕಾಮಗಾರಿಗಳು ಪೂರ್ಣಗೊಂಡಿದ್ದು, ಉಳಿದ ಕಾಮಗಾರಿಗೆ ಒಟ್ಟು ರೂ. 30 ಕೋಟಿ ಅನುದಾನ ತಕ್ಷಣ ಮಂಜೂರಾಗಬೇಕಿದೆ ಎಂದು ಹೇಳಿದರು. ಕಿಡ್ನಿ, ಹೃದಯ, ನ್ಯೂರೋ ಸಂಬಂಧಿತ ಕಾಯಿಲೆಗಳ ಚಿಕಿತ್ಸೆಗಳನ್ನು ಒಳಗೊಂಡ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯ ಅಗತ್ಯವಿದ್ದು, ಖಾಸಗಿ ಹಾಗೂ ನೆರೆಯ ಜಿಲ್ಲೆಯ ವೆನ್ಲಾಕ್ ಆಸ್ಪತ್ರೆಯ ಮೇಲಿನ ಅವಲಂಬನೆಯನ್ನು ತಪ್ಪಿಸಿ, ಜಿಲ್ಲೆಯಲ್ಲಿ ಸೇವೆ ದೊರಕುವಂತಾಗಬೇಕು ಎಂದರು. ಈ ಹಿಂದೆ ಚಿಂತನೆ ನಡೆಸಿದಂತೆ ಸಂಪೂರ್ಣ ಸೌಲಭ್ಯಗಳನ್ನು ಒಳಗೊಂಡ 50 ಬೆಡ್‌ಗಳ ಕ್ರಿಟಿಕಲ್ ಕೇರ್ ಯೂನಿಟ್ ಪ್ರಾರಂಭಿಸ ಬೇಕು , 250 ಬೆಡ್‌ಗಳ ಆಸ್ಪತ್ರೆಗೆ ಅನುಗುಣವಾಗಿ ಅಗತ್ಯ ವೈದ್ಯಾಧಿಕಾರಿಗಳು ಹಾಗೂ ವೈದ್ಯಕೇತರ ಸಿಬ್ಬಂದಿಯ ಮಂಜೂರಾತಿಗೆ ರಾಜ್ಯ ಸರ್ಕಾರ ತಕ್ಷಣ ಕ್ರಮ ವಹಿಸಬೇಕು ಎಂದು ಹೇಳಿದರು.

## ಲೋಕ ಅದಾಲತ್ ಡಿ.13ರಂದು: 20 ಸಾವಿರ ವ್ಯಾಜ್ಯಗಳ ಗುರುತು

• ಉದಯವಾಹಿನಿ ಬೆಳಗಾವಿ

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ವತಿಯಿಂದ ವರ್ಷದ ಕೊನೆಯ (4ನೇ) ಲೋಕ ಅದಾಲತ್ ಡಿ. 13ರಂದು ಬೆಳಿಗ್ಗೆ 10ರಿಂದ ಸಂಜೆ 5ರವರೆಗೆ ಜಿಲ್ಲೆಯ ಎಲ್ಲಾ ನ್ಯಾಯಾಲಯಗಳಲ್ಲಿ ನಡೆಯಲಿದೆ ಎಂದು ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ಮಂಜುನಾಥ ನಾಯಕ ತಿಳಿಸಿದರು.

ನ್ಯಾಯಾಧೀಶರ ಕಚೇರಿಯಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾಹಿತಿ ನೀಡಿದ ಅವರು, ಈ ವರ್ಷದ ಕೊನೆಯ ಲೋಕ ಅದಾಲತ್ ಇದಾಗಿದ್ದು, ಇದಕ್ಕೂ ಮುನ್ನ 3 ಲೋಕ್ ಅದಾಲತ್‌ಗಳು ನಡೆದಿವೆ. ನ್ಯಾಯಾಲಯದಲ್ಲಿ ಬಾಕಿ ಇರುವ ವಿವಿಧ ಪ್ರಕರಣಗಳನ್ನು ಕೊನೆಯ ಅದಾಲತ್‌ನಲ್ಲಿ ರಾಜಿ ಮಾಡಲಾಗುವುದು' ಎಂದರು

ವೈವಾಹಿಕ, ಕೌಟುಂಬಿಕ ಮತ್ತು ಪಾಲು, ಬ್ಯಾಂಕುಗಳಿಗೆ ಸಂಬಂಧಪಟ್ಟ ಪ್ರಕರಣಗಳು, ಚೆಕ್ ಬೌನ್ಸ್, ಭಾರತ ದಂಡ ಸಂಹಿತೆಯ ರಾಜಿಯಾಗಬಲ್ಲ ಪ್ರಕರಣಗಳು, ವ್ಯಾಜ್ಯಗಳು, ಮೋಟಾರ್ ವಾಹನ ಅಪಘಾತ ಪರಿಹಾರ, ಕಂದಾಯ ಮತ್ತು ಇತರ ಎಲ್ಲಾ ರೀತಿಯ ರಾಜಿಯಾಗಬಹುದಾದ ಪ್ರಕರಣಗಳ ಹಾಗೂ ನ್ಯಾಯಾಲಯಗಳಲ್ಲಿ ತನಿಖೆಗೆ ಬಾಕಿ ಇರುವ ಪ್ರಕರಣಗಳನ್ನು ಇತ್ಯರ್ಥ ಪಡಿಸಲಾಗುವುದು.



ಲೋಕ ಅದಾಲತ್‌ನಲ್ಲಿ ಪರಿಹರಿಸಬಹುದಾದ ಪ್ರಕರಣಗಳನ್ನು ಗುರುತಿಸಿ ಇತ್ಯರ್ಥಪಡಿಸಿ ನ್ಯಾಯಾಲಯದ ಸಮಯ ಉಳಿತಾಯ ಮಾಡುವುದು ಇದರ ಮುಖ್ಯ ಉದ್ದೇಶವಾಗಿದೆ' ಎಂದರು. ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಂದೀಪ ಪಾಟೀಲ ಮಾತನಾಡಿ, ಕಳೆದ ಲೋಕ ಅದಾಲತ್‌ನಲ್ಲಿ 14,500 ಪ್ರಕರಣಗಳನ್ನು ಜಿಲ್ಲೆಯ ನ್ಯಾಯಾಲಯಗಳಲ್ಲಿ ಇತ್ಯರ್ಥ ಪಡಿಸಲಾಗಿದೆ. ಅದೇ ರೀತಿಯಲ್ಲಿ ಈಗ ನಡೆಯಲಿರುವ ಲೋಕ ಅದಾಲತ್‌ನಲ್ಲಿ ಸುಮಾರು 20 ಸಾವಿರ ಪ್ರಕರಣಗಳನ್ನು ಗುರುತಿಸಲಾಗಿದ್ದು, ಕನಿಷ್ಠ 14 ರಿಂದ 16 ಸಾವಿರದ ವರೆಗೂ ಪ್ರಕರಣಗಳ ಇತ್ಯರ್ಥ ಪಡಿಸುವ ಎಂದು ಗುರಿ ನಿಗದಿಪಡಿಸಲಾಗಿದೆ' ಎಂದರು.

**ವಾಹನ ದಂಡ ಶೇ 50ರಷ್ಟು ರಿಯಾಯಿತಿ:** ವಾಹನ ಸಂಚಾರ ನಿಯಮ ಉಲ್ಲಂಘಿಸಿದ ವಾಹನ ಸವಾರರಿಗೆ ದಂಡವನ್ನು ಶೇ 50ರಷ್ಟು ರಿಯಾಯತಿ ನೀಡಿ ದಂಡ ಪಾವತಿಗೆ ಅನುಕೂಲ ಮಾಡಿಕೊಡಲಾಗುತ್ತಿದೆ. ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ನ್ಯಾಯಾಧೀಶರಾದ ಮಂಜುನಾಥ ನಾಯಕ ಹೇಳಿದರು. ಜಿಲ್ಲೆಯ ಎಲ್ಲಾ 14 ತಾಲ್ಲೂಕು ಕೇಂದ್ರಗಳ ನ್ಯಾಯಾಲಯ ಸಮುಚ್ಚಯದಲ್ಲಿ ಲೋಕ ಅದಾಲತ್ ಏಕ ಕಾಲದಲ್ಲಿ ನಡೆಯಲಿದೆ. ನ್ಯಾಯಾಲಯ ಸಮಯ ಉಳಿತಾಯದ ಜತೆಗೆ ಜನರಿಗೂ ಅನುಕೂಲಕರ ಎಂದರು.

# ದಾವಣಗೆರೆಗೆ ಐಟಿ-ಬಿಟಿ ಪಾರ್ಕ್ ಸ್ಥಾಪನೆ ಕನಸು ನನಸಾಗುವ ಕಾಲ ಹತ್ತಿರ

### ಐಟಿ ಕಂಪನಿಗಳನ್ನು ಆಕರ್ಷಿಸಲು ದಾವಣಗೆರೆ ನಗರವನ್ನು ಸೆವೆನ್ ಮಿನಿಟ್ ಸಿಟಿ ಎಂದು ವಿಷನ್ ತಂಡ ಬಿಂಬಿಸಿದೆ

• ಉದಯವಾಹಿನಿ ದಾವಣಗೆರೆ

ರಾಜಧಾನಿ ಬೆಂಗಳೂರಿನಲ್ಲಿ ನಡೆದ ಟೆಕ್ ಸಮ್ಮಿಟ್‌ನಲ್ಲಿ ದಾವಣಗೆರೆ ನಗರವನ್ನು 'ಐಟಿ-ಬಿಟಿ ಕ್ಲಸ್ಟರ್' ಎಂದು ಗುರುತಿಸಿದ್ದು, ಇನ್ಮುಂದೆ ಐಟಿ ಕಂಪನಿಗಳು ಇಲ್ಲಿ ಬಂದು ತಳವೂರಲು ರಹದಾರಿ ದೊರೆತಂತಾಗಿದೆ, ಐಟಿ, ಬಿಟಿ ನಗರಗಳ ಸಾಲಿಗೆ ದಾವಣಗೆರೆ ಸೇರುವ ಕನಸು ಚಿಗುರೊಡೆದಿದೆ. ರಾಜ್ಯದಲ್ಲಿ ಈವರೆಗೆ ಬೆಂಗಳೂರು, ಮೈಸೂರು, ಮಂಗಳೂರು, ತುಮಕೂರು, ಹುಬ್ಬಳ್ಳಿ-ಧಾರವಾಡ ಮತ್ತು ಬೆಳಗಾವಿ (ಎಚ್‌ಡಿಬಿ)ನಗರಗಳನ್ನು ಮಾತ್ರ ಐಟಿ-ಬಿಟಿ ಕ್ಲಸ್ಟರ್‌ಗಳೆಂದು ಗುರುತಿಸಲಾಗಿತ್ತು. ಹೀಗಾಗಿ, ಪ್ರತಿ ವರ್ಷ ನಡೆಯುವ ಟೆಕ್ ಶೃಂಗದಲ್ಲಿ ಈ ನಗರಗಳತ್ತ ಮಾತ್ರ ಐಟಿ ಕಂಪನಿಗಳು ಚಿತ್ತ ಹರಿಸುತ್ತಿದ್ದವು, ಈ ಅವಕಾಶ ಈಗ ದಾವಣಗೆರೆಗೂ ದಕ್ಕಿದೆ. ದಾವಣಗೆರೆ ನಗರದಲ್ಲಿ ಎಸ್‌ಟಿಪಿಐ ಕೇಂದ್ರ ಸ್ಥಾಪನೆಯಾಗಿ ನಾಲ್ಕು ವರ್ಷ ಕಳೆದಿದ್ದರೂ ಇಲ್ಲಿಐಟಿ ಕಂಪನಿಗಳು ನೆಲೆ ನಿಂತಿಲ್ಲ, ಐಟಿ ಕ್ಲಸ್ಟರ್ ಮಾನ್ಯತೆ ಇಲ್ಲದ ಕಾರಣ ಟೆಕ್ ಸಮ್ಮಿಟ್‌ಗಳಲ್ಲಿ ಬೆಣ್ಣೆ ನಗರಿಗೆ ಆದ್ಯತೆ ಸಿಗುತ್ತಿರಲಿಲ್ಲ. ಇದೀಗ ದಾವಣಗೆರೆ ಐಟಿ ಕ್ಲಸ್ಟರ್ ಆಗಿದ್ದು, ಇನ್ಮುಂದೆ ಇಲ್ಲಿಯೂ ಐಟಿ ಸಮ್ಮಿಟ್ ನಡೆದಿದ್ದು, ಕಂಪನಿಗಳ ಸೆಳೆಯಲು ನೆರವಾಗಲಿದೆ. ಈ ಎಲ್ಲಾ ಬೆಳವಣಿಗೆಗಳ ಜತೆ ಟೆಕ್ ಸಮ್ಮಿಟ್ ಇತಿಹಾಸದಲ್ಲಿ ಇದೇ ಮೊದಲ ಬಾರಿ ದಾವಣಗೆರೆ ನಗರದ ಮಳಿಗೆ ತೆರೆಯಲಾಗಿತ್ತು. 'ವಿಷನ್ ದಾವಣಗೆರೆ' ತಂಡ ದಾವಣಗೆರೆ ನಗರದಲ್ಲಿ ಐಟಿ ಕಂಪನಿಗಿರುವ ಅವಕಾಶಗಳ ಗಮನ ಸೆಳೆದಿತ್ತು. ಈ ಎಲ್ಲದರ ಪರಿಣಾಮ ಈಗ ಐಟಿ -ಬಿಟಿ ಕ್ಲಸ್ಟರ್ ಅಸ್ಮಿತೆ ದೊರೆತಿದೆ. ಬಿಯಾಂಡ್ ಬೆಂಗಳೂರು ಪ್ರಯತ್ನಕ್ಕೆ ಇದು ನಾಂದಿ ಆಗಲಿದೆ.

**ಸೆವೆನ್ ಮಿನಿಟ್ ಸಿಟಿ:** ಐಟಿ ಕಂಪನಿಗಳನ್ನು ಆಕರ್ಷಿಸಲು ದಾವಣಗೆರೆ ನಗರವನ್ನು 'ಸೆವೆನ್ ಮಿನಿಟ್ ಸಿಟಿ' ಎಂದು ವಿಷನ್ ತಂಡ ಬಿಂಬಿಸಿದೆ. ಮಧ್ಯ ಕರ್ನಾಟಕದ ಈ ನಗರದಲ್ಲಿ ಒಂದು ತುದಿಯಿಂದ ಮತ್ತೊಂದು ತುದಿ ತಲುಪಲು ಕೇವಲ 7 ನಿಮಿಷ ಸಮಯ ಸಾಕು. ಪೂರಕ ಶಿಕ್ಷಣ ಸಂಸ್ಥೆಗಳು, ಸಾರಿಗೆ ಸಂಪರ್ಕ, ಹೆದ್ದಾರಿ ಮತ್ತು ರೈಲ್ವೆ ಸಂಪರ್ಕದ ಬಗ್ಗೆ ರಾಜ್ಯ, ಕೇಂದ್ರದ ಐಟಿ ಸಚಿವಾಲಯ ಗಮನ ಸೆಳೆಯಲಾಯಿತು ಎಂದು ವಿಷನ್ ದಾವಣಗೆರೆಯ ವೀರೇಶ್ ಪಟೇಲ್ ಹೇಳುತ್ತಾರೆ.

- ಈವರೆಗೆ ಬೆಂಗಳೂರು, ಮೈಸೂರು, ಮಂಗಳೂರು, ತುಮಕೂರು, ಹುಬ್ಬಳ್ಳಿ-ಧಾರವಾಡ ಮತ್ತು ಬೆಳಗಾವಿ(ಎಚ್‌ಡಿಬಿ)ನಗರಗಳನ್ನು ಮಾತ್ರ ಐಟಿ-ಬಿಟಿ ಕ್ಲಸ್ಟರ್‌ಗಳೆಂದು ಗುರುತಿಸಲಾಗಿತ್ತು
- ದಾವಣಗೆರೆ ಐಟಿ ಕ್ಲಸ್ಟರ್ ಆಗಿದ್ದು, ಇನ್ಮುಂದೆ ಇಲ್ಲಿಯೂ ಐಟಿ ಸಮ್ಮಿಟ್ ನಡೆದಿದ್ದು, ಕಂಪನಿಗಳ ಸೆಳೆಯಲು ನೆರವಾಗಲಿದೆ.
- ಐಟಿ ಕಂಪನಿಗಳನ್ನು ಆಕರ್ಷಿಸಲು ದಾವಣಗೆರೆ ನಗರವನ್ನು 'ಸೆವೆನ್ ಮಿನಿಟ್ ಸಿಟಿ' ಎಂದು ವಿಷನ್ ತಂಡ ಬಿಂಬಿಸಿದೆ




ಉದಯವಾಹಿನಿ ಚಿತ್ರ

**ಐಟಿ ಪಾರ್ಕ್ ಸ್ಥಾಪನೆಗೆ ನಾಲ್ಕು ಕಟ್ಟಡ**

- ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣ ಮೇಲಂತಸ್ತು
- ಯುಬಿಡಿಟಿ ಕಾಲೇಜ್
- ಸ್ಮಾರ್ಟ್ ಸಿಟಿ ಕಟ್ಟಡ
- ಜೆಎಚ್ ಪಟೇಲ್ ಬಡಾವಣೆಯ ಎಸ್‌ಟಿಪಿಐ ಕೇಂದ್ರ ಕಟ್ಟಡ

**ಸತತ ಪ್ರಯತ್ನದ ಫಲ**

**ದಾವಣಗೆರೆಗೆ ಐಟಿ ಪಾರ್ಕ್ ಸ್ಥಾಪಿಸುವ ಪ್ರಯತ್ನ ನಡೆಯುತ್ತಲೇ ಇದೆ. ಡಾ.ಪ್ರಭಾ ಮಲ್ಲಿಕಾರ್ಜುನ್ ಸಂಸದರಾದ ನಂತರ ಈ ಪ್ರಯತ್ನ ವೇಗ ಪಡೆದಿತ್ತು. ವಿಷನ್ ದಾವಣಗೆರೆ ಸ್ಥಾಪಿಸಿ ಐಟಿ, ಬಿಟಿ ಕಂಪನಿ ಸೆಳೆಯಲು ವೇದಿಕೆ ನಿರ್ಮಿಸಲಾಗಿತ್ತು. ಬೆಂಗಳೂರು, ಮೈಸೂರು, ತುಮಕೂರು ಸೇರಿ ರಾಜ್ಯದ ಎಲ್ಲಾ ಐಟಿ-ಬಿಟಿ ಕ್ಲಸ್ಟರ್‌ಗಳಲ್ಲಿ ನಡೆದ ಐಟಿ ಶೃಂಗಗಳಿಗೆ ದಾವಣಗೆರೆಯ ನಿಯೋಗ ತೆರಳಿ ದಾವಣಗೆರೆಯ ಅವಕಾಶಗಳ ಬಗ್ಗೆ ಗಮನ ಸೆಳೆವ ಪ್ರಯತ್ನ ಸಾಗಿತ್ತು. ಕಳೆದ ತಿಂಗಳು ಎಸ್‌ಟಿಪಿಐ ಕೇಂದ್ರ ತಂಡ ದಾವಣಗೆರೆಗೆ ಭೇಟಿ ನೀಡಿ, ಸಮ್ಮೇಳನ ನಡೆಸಿ ಸಕಾರಾತ್ಮಕವಾಗಿ ಸ್ಪಂದನೆ ವ್ಯಕ್ತವಾಗಿತ್ತು. ಕರ್ನಾಟಕ ಡಿಜಿಟಲ್ ಎಕಾನಮಿ ಮಿಷನ್ ಸಿಇಒ ಸಂಜೀವ ಕುಮಾರ್ ಗುಪ್ತ, ದಾವಣಗೆರೆ ಭೇಟಿ ನೀಡಿ 'ಮೈಸೂರು, ಮಂಗಳೂರು ಮಾದರಿಯಲ್ಲಿ, ದಾವಣಗೆರೆಯಲ್ಲೂ ಜಾಗತಿಕ ತಂತ್ರಜ್ಞಾನ ಕೇಂದ್ರ ಸ್ಥಾಪಿಸುವ ಚಿಂತನೆಯಿದೆ,' ಎಂದು ತಿಳಿಸಿದ್ದರು.**

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಬೆಳಿಗ್ಗೆ | 07:30 ರಿಂದ 09:00 |
| ಗುಳಿಕ ಕಾಲ | ಮಧ್ಯಾಹ್ನ | 01:30 ರಿಂದ 03:00 |
| ಯಮಗಂಡ ಕಾಲ | ಬೆಳಿಗ್ಗೆ | 10:30 ರಿಂದ 12:00 |

**ಮೇಷ** ಆರ್ಥಿಕ ಸಮಸ್ಯೆ ರಚನಾತ್ಮಕವಾಗಿ ಯೋಚಿಸುವ ನಿಮ್ಮ ಸಾಮರ್ಥ್ಯವನ್ನು ಹಾಳುಮಾಡುತ್ತದೆ. ಹಿರಿಯರು ಮತ್ತು ಕುಟುಂಬದ ಸದಸ್ಯರು ಪ್ರೀತಿ ಮತ್ತು ರಕ್ಷಣೆ ನೀಡುತ್ತಾರೆ.

**ವೃಷಭ** ಯಶಸ್ಸು ಹತ್ತಿರವಿರುವಂತೆ ತೋರಿದರೂ ಸಹ ಶಕ್ತಿ ಕುಂಠಿತವಾಗುತ್ತದೆ. ಹಣದ ಪ್ರಾಮುಖ್ಯತೆ ನಿಮಗೆ ಚೆನ್ನಾಗಿ ಗೊತ್ತಿದೆ, ಆದ್ದರಿಂದ ನಿಮ್ಮ ಮೂಲಕ ಉಳಿಸಲಾಗಿರುವ ಹಣ ನಿಮ್ಮ ತುಂಬಾ ಕೆಲಸಕ್ಕೆ ಬರಬಹುದು.

**ಮಿಥುನ** ನೀವು ಬಹುಕಾಲದಿಂದ ಎದುರು ನೋಡುತ್ತಿದ್ದ ಜೀವನದ ಒತ್ತಡಗಳಿಂದ ಶಮನ ಪಡೆಯುತ್ತೀರಿ. ಅವುಗಳನ್ನು ಶಾಶ್ವತವಾಗಿ ದೂರವಿಸಿರಿಸಲು ನಿಮ್ಮ ಜೀವನಶೈಲಿಯನ್ನು ಬದಲಿಸಲು ಇದು ಸರಿಯಾದ ಸಮಯ.

**ಕರ್ಕಾಟಕ** ವಿಶ್ರಾಂತಿ ಪ್ರಮುಖವಾದ ಒಂದು ದಿನ ಇತ್ತೀಚೆಗೆ ನೀವು ಬಹಳಷ್ಟು ಮಾನಸಿಕ ಒತ್ತಡ ಎದುರಿಸುತ್ತಿದ್ದೀರಿ, ಮನೋಲ್ಲಾಸ ಮತ್ತು ಮನೋರಂಜನೆ ನಿಮಗೆ ವಿಶ್ರಾಂತಿ ಪಡೆಯಲು ಸಹಾಯ ಮಾಡುತ್ತದೆ.

**ಸಿಂಹ** ಇತರರ ವಿರುದ್ಧ ದ್ವೇಷ ಕಾರುವುದು ಮಾನಸಿಕ ಒತ್ತಡವನ್ನು ನೀಡುತ್ತದೆ. ಇವುಗಳು ಜೀವನವನ್ನು ವ್ಯರ್ಥಗೊಳಿಸುವುದರಿಂದ, ನಿಮ್ಮ ಸಾಮರ್ಥ್ಯವನ್ನು ಕೊಲ್ಲುವುದರಿಂದ ಈ ರೀತಿಯ ಆಲೋಚನೆಗಳನ್ನು ತಪ್ಪಿಸಬೇಕು.

**ಕನ್ಯಾ** ಎಲ್ಲರಿಗೂ ಸಹಾಯ ಮಾಡುವ ನಿಮ್ಮನ್ನು ದಣಿಸುತ್ತದೆ. ದೀರ್ಘ ಕಾಲ ಬಾಕಿಯಿದ್ದ ಬಾಕಿಗಳು ಕೊನೆಗೂ ದೊರಕುತ್ತವೆ. ಅತಿಥಿಗಳು ಮನೆಯನ್ನು ಒಂದು ಆಹ್ಲಾದಕರ ಮತ್ತು ಅದ್ಭುತ ಸಂಜೆಗಾಗಿ ಬಳಸಿಕೊಳ್ಳುತ್ತಾರೆ.

**ತುಲಾ** ಕುಟುಂಬದ ಸದಸ್ಯರ ಖುಷಿಯ ಸ್ವಭಾವ ಮನೆಯಲ್ಲಿನ ವಾತಾವರಣವನ್ನು ಹಗುರಗೊಳಿಸುತ್ತದೆ. ನಿಮ್ಮ ಪ್ರೀತಿಪಾತ್ರರು ಬದ್ಧತೆಯನ್ನು ಬಯಸುತ್ತಾರೆ– ನೀವು ಕಾಯ್ದುಕೊಳ್ಳಲು ಕಷ್ಟವಾಗುವ ಭರವಸೆಯನ್ನು ನೀಡಬೇಡಿ.

**ವೃಶ್ಚಿಕ** ಹಾಜರಾಗುವ ಸಮಾರಂಭದಲ್ಲಿ ಹೊಸ ಸ್ನೇಹ ಅಭಿವೃದ್ಧಿಯಾಗುತ್ತದೆ. ಇಂದು, ನೀವು ಮತ್ತು ನಿಮ್ಮ ಪ್ರೀತಿ ಸಂಗಾತಿ ಪ್ರೀತಿಯ ಸಾಗರದಲ್ಲಿ ತೇಲುತ್ತೀರಿ ಮತ್ತು ಪ್ರೀತಿಯ ಔನ್ನತ್ಯವನ್ನು ಅನುಭವಿಸುತ್ತೀರಿ.

**ಧನಸ್ಸು** ಆರೋಗ್ಯ ಪರಿಪೂರ್ಣವಾಗಿರುತ್ತದೆ. ಇತರರ ಮೇಲೆ ಪ್ರಭಾವ ಬೀರಲು ತುಂಬಾ ವೆಚ್ಚ ಮಾಡಬೇಡಿ. ಸಂಗಾತಿಯೊಡನೆ ಒಂದು ಉತ್ತಮ ತಿಳುವಳಿಕೆ ಮನೆಯಲ್ಲಿ ಸಂತೋಷ–ಶಾಂತಿ ಮತ್ತು ಸಮೃದ್ಧಿಯನ್ನು ತರುತ್ತದೆ.

**ಮಕರ** ಕೌಟುಂಬಿಕ ಸಮಸ್ಯೆಗೆ ಮೊದಲ ಆದ್ಯತೆ ನೀಡಬೇಕು. ನೀವು ವಿಳಂಬವಿಲ್ಲದೇ ಇದನ್ನು ಚರ್ಚಿಸಬೇಕು, ಏಕೆಂದರೆ ಒಮ್ಮೆ ಇದನ್ನು ಬಗೆಹರಿಸಿದ ನಂತರ ಮನೆಯಲ್ಲಿನ ಜೀವನ ನಡೆಸಲು ಹೆಚ್ಚು ಸುಲಭವಾಗುತ್ತದೆ.

**ಕುಂಭ** ಮಕ್ಕಳೊಂದಿಗೆ ಆಟವಾಡುವುದು ನಿಮಗೆ ಯಾವತ್ತೂ ಅದ್ಭುತ ಚಿಕಿತ್ಸೆಯ ಅನುಭವ ನೀಡುತ್ತದೆ. ಪ್ರಮುಖ ಜನರು ವಿಶೇಷ ವರ್ಗ ಹೊಂದಿರುವ ಯಾವುದಕ್ಕಾದರೂ ಹಣಕಾಸು ನೀಡಲು ಸಿದ್ಧವಾಗಿರುತ್ತಾರೆ.

**ಮೀನ** ಕುಟುಂಬ ಅಥವಾ ಹತ್ತಿರದ ಸ್ನೇಹಿತರ ಜೊತೆ ಇದನ್ನು ಒಂದು ಅತ್ಯುತ್ತಮ ದಿನವಾಗಿಸಿ. ನಿಮ್ಮ ಶಕ್ತಿಯ ಮಟ್ಟ ಹೆಚ್ಚಿರುತ್ತದೆ – ನಿಮ್ಮ ಪ್ರೀತಿಪಾತ್ರರು ನಿಮಗೆ ಅಪಾರ ಸಂತೋಷ ತರುತ್ತಾರೆ.

### ಕಾಮಗಾರಿ ಬೇಗನೆ ಮುಗಿಸುವುದು ರಾಜ್ಯ ಸರ್ಕಾರದ ಹೊಣೆಗಾರಿಕೆ: ಪ್ರಹ್ಲಾದ ಜೋಶಿ

# ಮೇಲ್ಸೇತುವೆ ಕಾಮಗಾರಿ ಬೇಗ ಮುಗಿಸಿ

• **ಉದಯವಾಹಿನಿ ಹುಬ್ಬಳ್ಳಿ**

ನಗರದಲ್ಲಿ ನಿರ್ಮಾಣ ಹಂತದಲ್ಲಿರುವ ಮೇಲ್ವೇತುವೆ ಕಾಮಗಾರಿಗೆ ತೊಡಕಾಗಿರುವ ಉಪನಗರ ಠಾಣೆ ಕಟ್ಟಡ ಸ್ಥಳಾಂತರ ಸೇರಿದಂತೆ ಭೂಸ್ವಾಧೀನ ಆಗಲಿರುವ ಖಾಸಗಿ ಕಟ್ಟಡಗಳಿಗೆ ಸಂಬಂಧಿಸಿದ ಪರಿಹಾರವನ್ನು ರಾಜ್ಯ ಸರ್ಕಾರ ಕೊಟ್ಟು, ಕಾಮಗಾರಿ ಬೇಗ ಮುಗಿಸಿ ಜನರಿಗೆ ಅನುಕೂಲ ಮಾಡಿಕೊಡಬೇಕು ಎಂದು ಕೇಂದ್ರ ಸಚಿವ ಪ್ರಹ್ಲಾದ ಜೋಶಿ ಹೇಳಿದರು.

ಮೇಲ್ವೇತುವೆ ನಿರ್ಮಾಣ ರಾಜ್ಯ ಸರ್ಕಾರದ ಯೋಜನೆ. ಇದಕ್ಕೆ ಸಂಬಂಧಿಸಿದ ವಿಶೇಷ ಅನುದಾನವನ್ನು ಈಗಾಗಲೇ ಕೇಂದ್ರ ಸರ್ಕಾರ ನೀಡಿದೆ. ಕಾಮಗಾರಿ ಬೇಗನೆ ಮುಗಿಸುವುದು ರಾಜ್ಯ ಸರ್ಕಾರದ ಹೊಣೆಗಾರಿಕೆ ಎಂದರು.

ಕುಸುಗಲ್ ಬಳಿ ನಿರ್ಮಾಣ ಹಂತದಲ್ಲಿರುವ ರಿಂಗ್ ರೋಡ್ ಕಾಮಗಾರಿಗೆ ಸಂಬಂಧಿಸಿದಂತೆ ರಾಜ್ಯ ಸರ್ಕಾರವು ಕೇಂದ್ರಕ್ಕೆ ಸರಿಯಾದ ಡಿಪಿಆರ್ ಸಲ್ಲಿಸಬೇಕು. ನಂತರ ಭೂಸ್ವಾಧೀನ ಪ್ರಕ್ರಿಯೆ ಆರಂಭಿಸಬೇಕು. ಆದರೆ, ಇಲ್ಲಿಯೂ ವಿಳಂಬ ಧೋರಣೆ ಅನುಸರಿಸಲಾಗುತ್ತಿದೆ' ಎಂದು ದೂರಿದರು.

**ಆಡಳಿತ ವ್ಯವಸ್ಥೆ ಕುಸಿತ:** ರಾಜ್ಯದಲ್ಲಿ ಆಡಳಿತ ಹಾಗೂ ಕಾನೂನು ವ್ಯವಸ್ಥೆ ಸಂಪೂರ್ಣವಾಗಿ ಕುಸಿದಿದೆ. ರಾಜ್ಯ ಸರ್ಕಾರದಲ್ಲಿ ಭ್ರಷ್ಟಾಚಾರ ತಾಂಡವವಾಡುತ್ತಿದೆ. ಶಾಸಕರು ಅಧಿಕಾರಿಗಳ ವರ್ಗಾವಣೆ ದಂಧೆಯಲ್ಲಿ ತೊಡಗಿದ್ದಾರೆ. ರೈತರ ಹಾಗೂ ಸಾರ್ವಜನಿಕರ ಸಮಸ್ಯೆಯನ್ನು ಕೇಳವವರೇ ಇಲ್ಲವಾಗಿದೆ' ಎಂದು ಆರೋಪಿಸಿದರು.

ಕೇಂದ್ರ ಸರ್ಕಾರ ವಿದೇಶಗಳಿಂದ 70 ಲಕ್ಷ ಮೆಟ್ರಿಕ್ ಟನ್ ಮೆಕ್ಕೆಜೋಳ ಆಮದು ಮಾಡಿಕೊಂಡಿದೆ. ಇದರಿಂದ ರಾಜ್ಯದಲ್ಲಿ ಮೆಕ್ಕೆಜೋಳ ಬೆಳೆದ ರೈತರಿಗೆ ಅನ್ಯಾಯವಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಇದೆಲ್ಲವೂ ಸುಳ್ಳು. ನೀವು ಹಿರಿಯ ರಾಜಕಾರಣಿ, ಅನುಭವಿಯಾಗಿದ್ದು ವಿಚಾರ ಮಾಡಿ ಸರಿಯಾದ ಮಾಹಿತಿಯೊಂದಿಗೆ ಮಾತನಾಡಬೇಕು ಎಂದರು.

ಕೇಂದ್ರ ಸರ್ಕಾರ ರೈತರಿಗೆ ಎಂದಿಗೂ ಅನ್ಯಾಯ ಮಾಡಿಲ್ಲ. ಬೆಲೆ ಕುಸಿತದಿಂದ ಸಂಕಷ್ಟ ಎದುರಿಸುತ್ತಿರುವ ರಾಜ್ಯದ ಮೆಕ್ಕೆಜೋಳ ರೈತರ ನೆರವಿಗೆ ಕೇಂದ್ರ ಸರ್ಕಾರ ಎಲ್ಲಾ ರೀತಿಯ ನೆರವು ನೀಡಿದೆ. ಈಗಾಗಲೇ ಕೇಂದ್ರದ ನೋಡಲ್ ಏಜೆನ್ಸಿಗಳಾದ ನಾಫೆಡ್ ಹಾಗೂ ಎನ್‌ಸಿಸಿಎಫ್ ಬೆಂಬಲ ಬೆಲೆ ಯೋಜನೆಯಡಿ ಮೆಕ್ಕೆಜೋಳ ಖರೀದಿ ಮಾಡಲು ತಯಾರಿವೆ. ಇದಕ್ಕೆ ಸಂಬಂಧಿಸಿದಂತೆ ರಾಜ್ಯ ಸರ್ಕಾರ ಅಗತ್ಯ ಕ್ರಮಕ್ಕೆ ಗೊಳ್ಳಬೇಕು' ಎಂದು ಆಗ್ರಹಿಸಿದರು.

## ಆಡಳಿತ ನಡೆಸಲು ಆಗದಿದ್ದರೆ ಬಿಟ್ಟು ಹೋಗಲಿ

**ಜನರಿಗೆ ಭರವಸೆಗಳನ್ನು ನೀಡಿ ಅಧಿಕಾರಕ್ಕೆ ಬಂದ ಕಾಂಗ್ರೆಸ್ ಸರ್ಕಾರ ಗ್ಯಾರಂಟಿ ಯೋಜನೆಗಳಿಗೆ ಹಣ ಹೊಂದಿಸುವಲ್ಲಿ ಪರದಾಡುತ್ತಿದೆ. ಆಗಸ್ಟ್‌ನಿಂದ ಗೃಹಲಕ್ಷ್ಮಿ ಯೋಜನೆಯ ಹಣವು ಫಲಾನುಭವಿಗಳ ಖಾತೆಗೆ ಪಾವತಿಯಾಗಿಲ್ಲ. ಅಭಿವೃದ್ಧಿ ಕಾಮಗಾರಿಗಳು ನಡೆಯುತ್ತಿಲ್ಲ. ಸರ್ಕಾರಿ ಆಸ್ಪತ್ರೆಗಳಲ್ಲಿ ಔಷಧವೂ ಸಿಗುತ್ತಿಲ್ಲ. ಇದು ಜನರಿಗೆ ಮಾಡುವ ವಂಚನೆ. ಜನಪರ ಆಡಳಿತ ನಡೆಸಲು ಆಗದಿದ್ದರೆ ಬಿಟ್ಟು ಹೋಗಲಿ' ಎಂದು ಪ್ರಹ್ಲಾದ ಜೋಶಿ ರಾಜ್ಯ ಸರ್ಕಾರದ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದರು.**

> **ರಾಜ್ಯ ಸರ್ಕಾರದ ಅಸ್ಥಿರತೆ ನಾವು ಬಯಸುವುದಿಲ್ಲ. ಈ ಸರ್ಕಾರ ಐದು ವರ್ಷ ಪೂರ್ಣಗೊಳಿಸಬೇಕು. ಇದು ನಮ್ಮ ಆಶಯವೂ ಕೂಡ. ಜನಾದೇಶಕ್ಕೆ ನಾವು ಗೌರವ ನೀಡುತ್ತೇವೆ. -ಪ್ರಹ್ಲಾದ ಜೋಶಿ ಕೇಂದ್ರ ಸಚಿವ**




**ಇಲ್ಲಿಯೂ ವಿಳಂಬ ಧೋರಣೆ**

## ಸಚಿವ ಪ್ರಿಯಾಂಕ ಖರ್ಗೆ ಆಶಯದಂತೆ ಬಡ ಜನರಿಗೆ ಹೊದಿಕೆ ಶಾಲಾ ಮಕ್ಕಳಿಗೆ ನೋಟ್ ಬುಕ್ ವಿತರಣೆ ಮಾದರಿ ಕಾರ್ಯ

• **ಉದಯವಾಹಿನಿ, ಚಿಂಚೋಳಿ**

ಆರ್.ಡಿ.ಪಿ.ಆರ್ ಮತ್ತು ಐಟಿಬಿಟಿ ಸಚಿವ ಪ್ರೀಯಾಂಕ್ ಖರ್ಗೆಯವರ ಆಶಯದಂತೆ ಬಡ ಜನರಿಗೆ ಅನುಕೂಲವಾಗುವ ರೀತಿಯಲ್ಲಿ ಬೇಡ್ ಶೀಡ್ (ಹೊದಿಕೆ) ವಿತರಣೆ ಹಾಗೂ ಶಾಲಾಮಕ್ಕಳಿಗೆ ನೋಟ್ ಬುಕ್ ಪೆನ್ ಅನ್ನು ವಿಜಯಕುಮಾರ ಶಾಬಾದಿ ಮತ್ತು ಅನೀಲ ಬಿರಾದಾರ ಅಣವಾರ ವಿತರಿಸಿ ಪ್ರೀಯಾಂಕ್ ಖರ್ಗೆಯವರ ಹುಟ್ಟುಹಬ್ಬವನ್ನು ಮಾದರಿಯಾಗಿ ಆಚರಿಸಿದರು ಎಂದು ಪುರಸಭೆ ಮಾಜಿ ಅಧ್ಯಕ್ಷ ಅಬ್ದುಲ್ ಬಾಷೀದ್ ಹೇಳಿದರು.

ನಗರದ ಚಂದಾಪೂರದ ಆಶ್ರಯ ಕಾಲೋನಿಯಲ್ಲಿ ಗ್ರಾಮೀಣಾಭಿವೃದ್ಧಿ ಪಂಚಾಯತ್ ರಾಜ್ ಮತ್ತು ಐಟಿಬಿಟಿ ಸಚಿವ ಪ್ರಿಯಾಂಕ್ ಖರ್ಗೆರವರ ಹುಟ್ಟುಹಬ್ಬದ ಅಂಗವಾಗಿ ಸಮಾಜ ಸೇವಕರಾದ ವಿಜಯಕುಮಾರ ಶಾಬಾದಿ ಹಾಗೂ ಅನೀಲ ಬಿರಾದಾರ ಅಣವಾರ ವ್ಯಯಕ್ತಿಕವಾಗಿ ಕೇಕ್ ಕತ್ತರಿಸಿ, ಬಡವರಿಗೆ ಬೆಚ್ಚಗೆ ಹೊದಿಕೆ ಹಾಗೂ ಬಡ ಮಕ್ಕಳಿಗೆ ಉಚಿತ ನೋಟ್ ಬುಕ್ ಹಾಗೂ ಪೆನ್ ವಿತರಣೆ ಕಾರ್ಯಕ್ರಮದಲ್ಲಿ ಮಾತನಾಡಿದರು.

ಲಕ್ಷಾಂತರ ರೂಪಾಯಿ ದುಂದುವೆಚ್ಚ ಮಾಡದೆ ಬಡ ಜನರಿಗೆ ಉಪಯೋಗವಾಗುವ ಹೊದಿಕೆ ಹಾಗೂ ಬಡ ಮಕ್ಕಳಿಗೆ ನೋಟ್ ಬುಕ್ ಪೆನ್ ವಿತರಿಸಿ ಶಾಬಾದಿ, ಅನೀಲ ಸಮಾಜ ಸೇವಕರು ಇತರರಿಗೆ ಮಾದರಿಯಾಗಿದ್ದಾರೆ.


ಉದಯವಾಹಿನಿ ಚಿತ್ರ

ಸಮಾಜ ಸೇವಕರಾದ ವಿಜಯಕುಮಾರ ಶಾಬಾದಿ ಮತ್ತು ಅನೀಲಕುಮಾರ ಬಿರಾದಾರ ಅಣವಾರ ಮಾತನಾಡಿ ಸಚಿವ ಪ್ರಿಯಾಂಕ್ ಖರ್ಗೆರವರ ಆಶಯದಂತೆ ಬಡ ಜನರಿಗೆ ಅವಶ್ಯಕತೆ ಇರುವ ವಸ್ತುಗಳನ್ನು ವಿತರಣೆ ಮಾಡಿ ಬಡವರಿಗೆ ಅಲ್ಪಮಟ್ಟದಲ್ಲಿ ನೆರವಿಗೆ ಬಂದಿದ್ದೇವೆ ಬರುವ ದಿನಗಳಲ್ಲಿ ದೊಡ್ಡಮಟ್ಟದಲ್ಲಿ ಕೆಲಸ ಮಾಡೋಣ ಎಂದರು.

ಅಹೇಮದ್ ಬಾಗಬಾನ್ ಸ್ವಾಗತಿಸಿದರು, ಕಾಂಗ್ರೆಸ್ ಯುವ ಮುಖಂಡ ನಾಗೇಶ ಗುಣಾಜೀ ನಿರೂಪಿಸಿದರು, ಭಾಗ್ಯವಂತ ಶಾರಾದ ವಂದಿಸಿದರು.

ಈ ಸಂದರ್ಭದಲ್ಲಿ ಶಿವರಾಜ ಪಾಟೀಲ, ಸುಭಾಷ್ಚಂದ್ರ ಪಾಟೀಲ, ಚಾಂದ, ನರೇಶರೆಡ್ಡಿ, ಉಲ್ಲಾಸಕುಮಾರ ಕೆರೋಳ್ಳಿ ಸೇರಿದಂತೆ ಅನೇಕರಿದ್ದರು.

### ದಿನದಲಿತರ ಪರ ಕೆಲಸ

**ಸಚಿವ ಪ್ರೀಯಾಂಕ್ ಖರ್ಗೆ ಚಿಕ್ಕ ವಯಸ್ಸಿನಲ್ಲಿ ಸಮಾಜ ಕಲ್ಯಾಣ ಸಚಿವ, ಐಟಿಬಿಟಿ ಸಚಿವ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರಾಗಿ ರಾಜ್ಯಕ್ಕೆ ಅನೇಕ ಯೋಜನೆಗಳು ನೀಡಿ ಬಡವರ ದಿನದಲಿತರ ಪರ ಕಣ್ಣೋರಿಸುವ ಕೆಲಸ ಮಾಡಿದ್ದಾರೆ, ಅಂತರಾಷ್ಟ್ರೀಯ ಮಟ್ಟದಿಂದ ಅನೇಕ ಉದ್ಯೋಗ ದೊರಕುವ ಯೋಜನೆಗಳು ರಾಜ್ಯದಲ್ಲಿ ತಂದು ಸಾವಿರಾರು ಯುವಕರಿಗೆ ಉದ್ಯೋಗ ದೊರಕುವಂತೆ ಮಾಡಿ ಮಾದರಿ ರಾಜಕಾರಣಿವೆಂದು ಅನಿಸಿಕೊಂಡಿದ್ದಾರೆ, ಬರುವ ದಿನಗಳಲ್ಲಿ ಪ್ರೀಯಾಂಕ್ ಖರ್ಗೆಯವರು ಮುಖ್ಯಮಂತ್ರಿ ಗಾಧಿ ಅಲಂಕರಿಸಲಿ ಎಂದು ಶುಭಹಾರೈಸಿದ್ದರು.**

## ನೀರಿನ ಘಟಕ ದುರಸ್ತಿಗೆ ಕ್ರಮ

• **ಉದಯವಾಹಿನಿ ಚಿಕ್ಕೋಡಿ**

ತಾಲ್ಲೂಕಿನ ಶಿರಗಾಂವ ಗ್ರಾಮದಲ್ಲಿರುವ ಸಾರ್ವಜನಿಕ ಗ್ರಂಥಾಲಯ ಅವ್ಯವಸ್ಥೆ ಕುರಿತು ನ. 20ರಂದು ಪ್ರಕಟವಾದ ಗ್ರಂಥಾಲಯ ಕಟ್ಟಡ ದುರಸ್ತಿಗೆ ನಿರ್ಲಕ್ಷ್ಯ ಎಂಬ ವಿಶೇಷ ವರದಿ ಪ್ರಕಟವಾದ ನಿಮಿತ್ತ ಸ್ಥಳಕ್ಕೆ ಅಧಿಕಾರಿಗಳು ಭೇಟಿ ನೀಡಿ ಸಮಸ್ಯೆ ನಿವಾರಣೆಗೆ ಕ್ರಮ ಕೈಗೊಂಡಿದ್ದಾರೆ. ಚಿಕ್ಕೋಡಿ ತಾಲ್ಲೂಕಿನ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ಬಿ.ಆರ್. ಜಂಬಗೆ, ತಾಂತ್ರಿಕ ಸಹಾಯಕ ಮಹಾಂತೇಶ ಹಿಂಗ್ಲಜೆ, ತಾಲ್ಲೂಕು ಪಂಚಾಯತಿ ಸಹಾಯಕ ನಿರ್ದೇಶಕ ಎಸ್.ಎಸ್. ಮಠದ, ನರೇಗಾ ವಿಭಾಗದ ಸಹಾಯಕ ನಿರ್ದೇಶಕ ಶಿವಾನಂದ ಶಿರಗಾಂವೆ ಭೇಟಿ ನೀಡಿ ಪರಿಶೀಲಿಸಿ ಸೂಕ್ತ ಕ್ರಮ ಕೈಗೊಳ್ಳುವಂತೆ ಗ್ರಾಮ ಪಂಚಾಯತಿ ಸಿಬ್ಬಂದಿಗೆ ಸೂಚಿಸಿದರು.

## ಕನಿಷ್ಠ ವೇತನ ರೂ. 25 ಸಾವಿರ ನಿಗದಿಪಡಿಸಿ

• **ಉದಯವಾಹಿನಿ ಚನ್ನಗಿರಿ**

ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಸಹಾಯಕಿಯರು ಹಲವು ಸಮಸ್ಯೆಗಳನ್ನು ಎದುರಿಸುತ್ತಿದ್ದಾರೆ. ಸೇವಾ ಭದ್ರತೆ ಒದಗಿಸದೇ ಅವರನ್ನು ಸರ್ಕಾರ ಜೀತದಾಳುಗಳಂತೆ ಕೆಲಸ ಮಾಡಿಸಿಕೊಳ್ಳುತ್ತಿದೆ. ಚಿಕ್ಕಮಕ್ಕಳ ಪಾಲನೆ, ಪೋಷಣೆ ಮಾಡುವ ಅಂಗನವಾಡಿ ಕಾರ್ಯಕರ್ತೆಯರಿಗೆ ರೂ. 25,000 ಕನಿಷ್ಠ ವೇತನ ನಿಗದಿಪಡಿಸಬೇಕು ಎಂದು ಎಐಟಿಯುಸಿ ರಾಜ್ಯ ಘಟಕದ ಅಧ್ಯಕ್ಷ ಹೊನ್ನಪ್ಪ ಮರಿಯಮ್ಮನವರ್ ಆಗ್ರಹಿಸಿದರು. ಪಟ್ಟಣದ ತಾಲ್ಲೂಕು ಕ್ರೀಡಾಂಗಣದಲ್ಲಿ ನಡೆದ ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಸಹಾಯಕಿಯರ ಕುಂದು ಕೊರತೆ ಸಭೆಯಲ್ಲಿ ಮಾತನಾಡಿದರು.

ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಸಹಾಯಕಿಯರಿಗೆ ಗುಣಮಟ್ಟದ ಸಮವಸ್ತ್ರ ನೀಡಿಲ್ಲ. ರೂ. 250 ವೆಚ್ಚದಲ್ಲಿ ಕಳಪೆ ಗುಣಮಟ್ಟದ ಸೀರೆಗಳನ್ನು ಇಲಾಖೆ ವಿತರಿಸುತ್ತಿದೆ. ಇವರಿಗೆ ವಿತರಿಸಿರುವ ಮೊಬೈಲ್‌ಗಳು ಸಮರ್ಪಕವಾಗಿ ಕಾರ್ಯನಿರ್ವಹಿಸುತ್ತಿಲ್ಲ. ಕಳಪೆ ದರ್ಜೆಯ ಮೊಬೈಲ್‌ಗಳನ್ನು ಇಲಾಖೆ ವಿತರಿಸಿದ್ದು, ಸರಿಯಾಗಿ ಕಾರ್ಯನಿರ್ವಹಿಸಲು ಸಾಧ್ಯವಾಗುತ್ತಿಲ್ಲ ಎಂದು ತಿಳಿಸಿದರು.

## ಮದ್ಯದಂಗಡಿ ಸ್ಥಳಾಂತರಕ್ಕೆ ಒತ್ತಾಯ: ಗ್ರಾಮಸ್ಥರಿಂದ ರಸ್ತೆ ತಡೆದು ಪ್ರತಿಭಟನೆ

• **ಉದಯವಾಹಿನಿ ಹಿರೇಮಳಲಿ**

ತಾಲ್ಲೂಕಿನ ಹಿರೇಮಳಲಿ ಗ್ರಾಮದ ಬಳಿ ರಸ್ತೆ ಬದಿಯಲ್ಲಿರುವ ಮದ್ಯದ ಅಂಗಡಿಯನ್ನು ಕೂಡಲೇ ಸ್ಥಳಾಂತರಿಸಬೇಕು ಎಂದು ಒತ್ತಾಯಿಸಿ ರೈತ ಸಂಘದ ಕಾರ್ಯಕರ್ತರು ಹಾಗೂ ಗ್ರಾಮಸ್ಥರು ಶುಕ್ರವಾರ ರಸ್ತೆ ತದ ನಡೆಸಿ ಪ್ರತಿಭಟಿಸಿದರು.

ನಾಲ್ಕು ವರ್ಷದ ಹಿಂದೆ ಗ್ರಾಮದ ಜಿಲ್ಲಾ ಮುಖ್ಯರಸ್ತೆಗೆ ಹೊಂದಿಕೊಂಡಂತೆ ಮದ್ಯದ ಅಂಗಡಿ ತೆರೆಯಲಾಗಿದೆ. ಆದರೆ ಇದರ ಮುಂದೆ ಕಳೆದ ನಾಲ್ಕು ವರ್ಷಗಳ ಅವಧಿಯಲ್ಲಿ ನಡೆದ ಪ್ರತ್ಯೇಕ ಅಪಘಾತಗಳಲ್ಲಿ 9 ಜನ ಅಮಾಯಕರು ಪ್ರಾಣ ಕಳೆದುಕೊಂಡಿದ್ದಾರೆ. ಅಬಕಾರಿ ಇಲಾಖೆಯ ನಿಯಮದ ಪ್ರಕಾರ ರಸ್ತೆ ಬದಿಯಿಂದ 100 ಮೀಟರ್ ದೂರದಲ್ಲಿ ಮದ್ಯದ ಅಂಗಡಿ ಇರಬೇಕು. ಆದರೆ ಈ ಗ್ರಾಮದಲ್ಲಿ ನಿಯಮವನ್ನು ಮೀರಿ ರಸ್ತೆ ಬದಿಗೆ ಹೊಂದಿಕೊಂಡಂತೆ ಮದ್ಯದ ಅಂಗಡಿ ತೆರೆಯಲಾಗಿದೆ. ನಿಯಮ ಉಲ್ಲಂಘನೆಯಾಗಿದ್ದರೂ ಇಲಾಖೆಯವರು ಯಾವುದೇ ಕ್ರಮ ಕೈಗೊಂಡಿಲ್ಲ ಎಂದು ಪ್ರತಿಭಟನಕಾರರು ಆರೋಪಿಸಿದರು.

ಸ್ಥಳಕ್ಕೆ ಭೇಟಿ ನೀಡಿದ ತಹಶೀಲ್ದಾರ್ ಎನ್.ಜೆ. ನಾಗರಾಜ್, ಮಾಲೀಕರಿಗೆ ನೋಟಿಸ್ ಜಾರಿ ಮಾಡಲಾಗುವುದು. ಮದ್ಯದಂಗಡಿ ಸ್ಥಳಾಂತರಕ್ಕೆ ಇಲಾಖೆ ಅಧಿಕಾರಿಗಳಿಗೆ ತಿಳಿಸಲಾಗುವುದು ಎಂದು ಭರವಸೆ ನೀಡಿದರು.

## ವೃದ್ಧಾಪ್ಯ ವೇತನ ಅಕ್ರಮ: 11 ಸಿಬ್ಬಂದಿ ವಿರುದ್ಧ ಪ್ರಕರಣ

• **ಉದಯವಾಹಿನಿ ಚಿಕ್ಕಮಗಳೂರು**

ಮಧ್ಯ ವಯಸ್ಸಿನವರಿಗೂ ವೃದ್ಧಾಪ್ಯ ವೇತನ ಮಂಜೂರು ಮಾಡಿರುವ ಆರೋಪದಲ್ಲಿ ಕಂದಾಯ ಇಲಾಖೆಯ 11 ಸಿಬ್ಬಂದಿ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲಾಗಿದೆ.

ಕಡೂರು ತಾಲ್ಲೂಕು ಕಚೇರಿ ಸಾಮಾಜಿಕ ಭದ್ರತೆ ವಿಭಾಗದ ಹಿಂದಿನ ಶಿರಸ್ತೇದಾರ್ ಆಗಿದ್ದ ಬಿ.ಸಿ. ಕಲ್ಮರುಡಪ್ಪ, ವಿಷಯ ನಿರ್ವಾಹಕ ಗಿರೀಶ್, ಕಂದಾಯ ಅಧಿಕಾರಿ ರವಿಕುಮಾರ್, ಗ್ರಾಮ ಆಡಳಿತಾಧಿಕಾರಿಗಳಾದ ಹನುಮಂತಪ್ಪ, ಕಾವ್ಯಾ ಟಿ.ಎಂ., ಕುಮಾರ್ ಜಿ.ಎಂ., ಲಿಂಗರಾಜು ಕೆ, ರವಿ ಕೆ.ಆರ್., ಎಸ್.ಎಂ.ಚನ್ನಬಸವಯ್ಯ, ನಿರ್ಮಲಾ ಟಿ.ಎಸ್., ರವಿಚಂದ್ರ ಎಸ್.ಗೊಗಿ ವಿರುದ್ಧ ಕಡೂರು ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದೆ.

ಸರ್ಕಾರಕ್ಕೆ ವಂಚನೆ, ನಕಲಿ ದಾಖಲೆ ಸೃಷ್ಟಿ, ವಂಚಿಸುವ ಉದ್ದೇಶದಿಂದಲೇ ದಾಖಲೆಗಳ ಸೃಷ್ಟಿ, ಕರ್ತವ್ಯ ಲೋಪ ಸೇರಿ ಹಲವು ಕಲಂಗಳ ಅಡಿ ಪ್ರಕರಣ ದಾಖಲಿಸಲಾಗಿದೆ. ಸಂಧ್ಯಾ ಸುರಕ್ಷಾ ಯೋಜನೆಯಡಿ ವೃದ್ಧಾಪ್ಯ ವೇತನವನ್ನು 60 ವರ್ಷ ಮೇಲ್ಪಟ್ಟವರಿಗೆ ನೀಡಲಾಗುತ್ತಿದೆ. ಬಡತನ ರೇಖೆಗಿಂತ ಕೆಳಗಿನವರು ಮಾತ್ರ ಈ ಯೋಜನೆಗೆ ಅರ್ಹರು. ಆದರೆ, ಸಾಮಾಜಿಕ ಭದ್ರತಾ ವಿಭಾಗದ ಶಿರಸ್ತೇದಾರ್ (ಉಪ ತಹಶೀಲ್ದಾರ್) ಬಿ.ಸಿ.ಕಲ್ಮರುಡಪ್ಪ ಅವರು ಲಾಗಿನ್ ದುರ್ಬಳಕೆ ಮಾಡಿಕೊಂಡು 35–40 ವಯಸ್ಸಿನವರಿಗೂ ವೇತನ ಮಂಜೂರು ಮಾಡಿದ್ದಾರೆ' ಎಂಬ ದೂರುಗಳು ಜಿಲ್ಲಾಧಿಕಾರಿಗೆ ಸಲ್ಲಿಕೆಯಾಗಿದ್ದವು.

ಅಂದಿನ ಉಪವಿಭಾಗಾಧಿಕಾರಿ ಅವರಿಂದ ಪ್ರಾಥಮಿಕ ತನಿಖೆ ಮಾಡಿಸಿದ್ದ ಜಿಲ್ಲಾಧಿಕಾರಿ ಮೀನಾ ನಾಗರಾಜ್ ಅವರು ಕಲ್ಮರುಡಪ್ಪ ಅವರನ್ನು ಅಮಾನತು ಮಾಡಿದ್ದರು. ತಹಶೀಲ್ದಾರ್ ಸರ್ಕಾರಕ್ಕೆ ವಿಚಾರಣಾ ವರದಿ ಸಲ್ಲಿಸಿದ್ದರು. ಅಕ್ರಮವಾಗಿ 64 ಜನರಿಗೆ ಪಿಂಚಣಿ ಮಂಜೂರು ಮಾಡಿ ಸರ್ಕಾರಕ್ಕೆ ರೂ. 9.03 ಲಕ್ಷ ನಷ್ಟ ಮಾಡಿದ್ದಾರೆ ಎಂದು ವರದಿಯಲ್ಲಿ ಉಲ್ಲೇಖಿಸಿದ್ದು, ಅಷ್ಟೂ ಜನರ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲಿಸಲು ಕಂದಾಯ ಇಲಾಖೆ ಸೂಚನೆ ನೀಡಿತ್ತು. ಜಿಲ್ಲಾಧಿಕಾರಿ ಆದೇಶದ ಮೇರೆಗೆ ಕಡೂರು ತಹಶೀಲ್ದಾರ್ ಪೊಲೀಸರಿಗೆ ದೂರು ನೀಡಿದ್ದರು.

## ಸಫಾಯಿ ಕರ್ಮಚಾರಿಗಳಿಗೆ ಅಗತ್ಯ ಸೌಲಭ್ಯ ಒದಗಿಸಿ

• **ಉದಯವಾಹಿನಿ ಗದಗ**

ಸಫಾಯಿ ಕರ್ಮಚಾರಿಗಳಿಗೆ ಸರ್ಕಾರದಿಂದ ಜಾರಿಯಾಗಿರುವ ವಿವಿಧ ಯೋಜನೆಗಳ ಸೌಲಭ್ಯ ಒದಗಿಸಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದರು.

ಗದಗ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸಫಾಯಿ ಕರ್ಮಚಾರಿ, ಮ್ಯಾನುವಲ್ ಸ್ಕಾಯವೆಂಜರ್ ನಿಯೋಜನೆ ನಿಷೇಧ ಮತ್ತು ಅವರ ಪುನರ್ವಸತಿ ಸೌಲಭ್ಯಗಳ ಕುರಿತು ಜರುಗಿದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಸಫಾಯಿ ಕರ್ಮಚಾರಿಗಳಿಗೆ ನಿಯಮಿತವಾಗಿ ಆರೋಗ್ಯ ತಪಾಸಣೆ ಕುರಿತು ಕ್ರಮ ಜರುಗಿಸಬೇಕು.

ನೇರವಾಗಿ ಪಾವತಿಸಲಾಗುತ್ತಿರುವ ಪೌರಕಾರ್ಮಿಕರ ವೇತನದಲ್ಲಿ ಭವಿಷ್ಯ ನಿಧಿ ಹಾಗೂ ಇಎಸ್‌ಐ ಕಡಿತಗಳ ಕುರಿತು ಪರಿಶೀಲಿಸಬೇಕು. ಪೌರಕಾರ್ಮಿಕರು ಹಾಗೂ ಅವಲಂಬಿತರಿಗೆ ದೊರಕಬೇಕಾದ ಸೌಲಭ್ಯಗಳು ಹಾಗೂ ಕುಂದುಕೊರತೆ ಕುರಿತು ತಾಲ್ಲೂಕು ಮಟ್ಟದಲ್ಲಿಯೂ ಸಭೆ ಜರುಗಿಸಲು ಕ್ರಮ ವಹಿಸಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ನಿರ್ದೇಶನ ನೀಡಿದರು.

## 20 ವರ್ಷದಿಂದ ಜಿಲ್ಲೆಗೆ ಸಚಿವ ಸ್ಥಾನ ಸಿಕ್ಕಿಲ್ಲ: ಮೋಟಮ್ಮ

• **ಉದಯವಾಹಿನಿ ಮೂಡಿಗೆರೆ**

ರಾಜ್ಯದ ಮುಖ್ಯಮಂತ್ರಿ ಬದಲಾವಣೆ ಬಗ್ಗೆ ವಿರೋಧ ಪಕ್ಷಗಳು ಹತಾಶೆಯಿಂದ ಬಾಯಿ ಚಪಲಕ್ಕಾಗಿ ಮಾತನಾಡುತ್ತಿವೆ ಎಂದು ಕಾಂಗ್ರೆಸ್ ನಾಯಕಿ ಮೋಟಮ್ಮ ಹೇಳಿದರು.

ಪಟ್ಟಣದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಕಾಂಗ್ರೆಸ್ ಪಕ್ಷದ ಅಂತರಿಕ ವಿಚಾರದಲ್ಲಿ ಪದೇ ಪದೇ ಮೂಗು ತೂರಿಸುವ ಬಿಜೆಪಿಯು, ಕೇಂದ್ರದಲ್ಲಿ 11 ವರ್ಷದ ಆಡಳಿತ ವಿಫಲತೆಯನ್ನು ಬಿಜೆಪಿ ನಾಯಕರು ಏಕೆ ಪ್ರಶ್ನಿಸುತ್ತಿಲ್ಲ ಎಂದು ಪ್ರಶ್ನಿಸಿದರು.

ರಾಜ್ಯದಲ್ಲಿ ನಾಯಕತ್ವ ಬದಲಾವಣೆ ಬಗ್ಗೆ ಹೈಕಮಾಂಡ್ ತೀರ್ಮಾನ ಕೈಗೊಳ್ಳಲಿದೆ. ನಾಯಕತ್ವದ ಬಗ್ಗೆ ಯಾರೊಬ್ಬರು ತಲೆಕೆಡಿಸಿಕೊಳ್ಳಬೇಕಾದ ಅಗತ್ಯವಿಲ್ಲ. ರಾಜ್ಯದಲ್ಲಿ ಕಾಂಗ್ರೆಸ್ ಶಾಸಕರು, ಸಚಿವರು, ಸಂಸದರು ಪಕ್ಷದ ನಾಯಕರು ಒಗ್ಗಟ್ಟಿನಿಂದ ಕೆಲಸ ಮಾಡುತ್ತಿದ್ದಾರೆ. ಒಂದಿಬ್ಬರು ನಾಯಕತ್ವ ಬದಲಾವಣೆ ವಿಚಾರವನ್ನು ಪ್ರಶ್ನಿಸುತ್ತಿದ್ದಾರೆ. ಈ ಬಗ್ಗೆ ಎಐಸಿಸಿ ಪ್ರಧಾನ ಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜಿವಾಲ ಅವರೊಂದಿಗೆ ಚರ್ಚಿಸಿದ್ದೇನೆ. ನಾಯಕತ್ವ ಬದಲಾವಣೆ ಬಗ್ಗೆ ಯಾರೊಬ್ಬರೂ ಅಪಸ್ವರ ಎತ್ತದಂತೆ ಹೈಕಮಾಂಡ್ ಕಠಿಣ ನಿರ್ಧಾರ ಕೈಗೊಳ್ಳಬೇಕು ಎಂದು ಸಲಹೆ ನೀಡಿದ್ದೇನೆ ಎಂದರು.

ಮೂಡಿಗೆರೆಯ ಮಹಾಗಣಪತಿ ಸಮಿತಿಯ ಆಹ್ವಾನದ ಮೇರೆಗೆ ಸಭೆಗೆ ಶಾಸಕಿ ನಯನಾ ಮೋಟಮ್ಮ ತೆರಳಿದ್ದರು. ಆ ಕಾರ್ಯಕ್ರಮದಲ್ಲಿ ಪ್ರಮೋದ್ ಮುತಾಲಿಕ್ ಭಾಗವಹಿಸುವ ವಿಚಾರ ಶಾಸಕಿ ನಯನಾ ಅವರಿಗೆ ತಿಳಿದಿರಲಿಲ್ಲ. ಈ ವಿಚಾರದಲ್ಲಿ ಪರ ವಿರೋಧ ಚರ್ಚೆಗಳು ನಡೆದಿವೆ. ಶಾಸಕಿ ನಯನಾ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರಿಂದ ಪ್ರಮೋದ್ ಮುತಾಲಿಕ್ ನಾಲಿಗೆ ಹರಿಯ ಬಿಡಲು ಸಾಧ್ಯವಾಗಲಿಲ್ಲ. ಶಾಸಕಿ ವಿರುದ್ಧ ಮಾತನಾಡುವವರು ಇದನ್ನು ಅರ್ಥಮಾಡಿಕೊಳ್ಳಬೇಕು ಎಂದು ಹೇಳಿದರು.



> **ನನ್ನ ಹಾಗೂ ಪುತ್ರಿಯ ರಾಜಕೀಯ ಜೀವನದಲ್ಲಿ ಯಾವ ಸಮುದಾಯವನ್ನು ವಿರೋಧಿಸಿಲ್ಲ. ಎಲ್ಲರೊಂದಿಗೂ ಉತ್ತಮ ಬಾಂಧವ್ಯ ಇಟ್ಟುಕೊಂಡು ಮುನ್ನಡೆಯುತ್ತಿದ್ದೇವೆ. ಪ್ರಮೋದ್ ಮುತಾಲಿಕ್ ಅವರೊಂದಿಗೆ ವೇದಿಕೆ ಹಂಚಿಕೊಂಡಿರುವ ಬಗ್ಗೆ ಕಾಂಗ್ರೆಸ್ ಪಕ್ಷದ ಕೆಲ ಮುಖಂಡರು ವಿರೋಧ ವ್ಯಕ್ತಪಡಿಸುತ್ತಿರುವುದು ಸರಿಯಲ್ಲ ಎಂದು ತಿಳಿಸಿದರು. -ಮೋಟಮ್ಮ**

## ಅಲೆಮಾರಿಗಳಿಗೆ ಮೂಲಸೌಲಭ್ಯ ಕಲ್ಪಿಸಿ: ಪಲ್ಲವಿ

• **ಉದಯವಾಹಿನಿ ಬಾಗಲಕೋಟೆ**

ಅಲೆಮಾರಿ ಸಮುದಾಯಗಳಿಗೆ ಮೂಲಸೌಲಭ್ಯ ಕಲ್ಪಿಸದಿರುವುದು ಕಂಡು ಬಂದಿದೆ. ಕಾಲಮಿತಿಯಲ್ಲಿ ಸೌಲಭ್ಯಗಳನ್ನು ಕಲ್ಪಿಸಲು ಅಧಿಕಾರಿಗಳಿಗೆ ಸೂಚಿಸಿದ್ದೇನೆ ಎಂದು ಕರ್ನಾಟಕ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡಗಳ ಅಲೆಮಾರಿ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಪಲ್ಲವಿ ಜಿ ಹೇಳಿದರು. ಜಿಲ್ಲೆಯ ವಿವಿಧ ಗ್ರಾಮಗಳ ಅಲೆಮಾರಿ ಸಮುದಾಯದವರು ವಾಸಿಸುವ ಕಾಲೋನಿಗಳಿಗೆ ಭೇಟಿ ನೀಡಿದಾಗ ಸೌಲಭ್ಯ ಕಲ್ಪಿಸುವಲ್ಲಿ ಅಧಿಕಾರಿಗಳು ನಿರ್ಲಕ್ಷ್ಯ ವಹಿಸಿರುವುದು ಕಂಡು ಬಂದಿತು. ಅನಕ್ಷಸ್ಥರಾದ ಆ ಸಮುದಾಯದವರಿಗೆ ಸೌಲಭ್ಯಗಳನ್ನು ಕಲ್ಪಿಸುವ ಕೆಲಸ ಮಂಡಳಿ ನಿಗಮ ಮಾಡಲಿದೆ ಎಂದರು.



ಉಪನಾಳ, ಭೀಮಗಡದಲ್ಲಿ ಕಿಳ್ಳೇಕೇತರಿದ್ದಾರೆ. ಅವರಿಗೆ ಪ್ರವರ್ಗ–1 ಜಾತಿ ಪ್ರಮಾಣ ಪತ್ರ ನೀಡಲಾಗುತ್ತಿದೆ. ಅವರಿಗೂ ಪರಿಶಿಷ್ಟ ಜಾತಿ ಪ್ರಮಾಣ ಪತ್ರ ನೀಡಬೇಕು. ಸ್ಥಳೀಯ ಪಂಚನಾಮೆ ನೀಡಲು ಸೂಚಿಸಲಾಗಿದೆ ಎಂದು ಹೇಳಿದರು. ಐಹೊಳೆಯಲ್ಲಿರುವ ಕೊರವರ ಕಾಲೋನಿಯಲ್ಲಿ 30 ಕುಟುಂಬಗಳಿವೆ.

ಒಂದೊಂದು ಮನೆಯಲ್ಲಿ 15 ರಿಂದ 20 ಜನರು ವಾಸಿಸುತ್ತಿದ್ದಾರೆ. ಪಾರಂಪರಿಕ ಕ್ಷೇತ್ರವಾಗಿರುವುದರಿಂದ ಮನೆ ವಿಸ್ತರಣೆಗೆ ಅವಕಾಶ ನೀಡುತ್ತಿಲ್ಲ. ಸರ್ಕಾರಿ ಜಾಗದ ಕೊರತೆಯಿದೆ. ಜಿಲ್ಲೆಯಲ್ಲಿ ಅಲೆಮಾರಿಗಳಿಗೆ ಮನೆ ನಿರ್ಮಿಸಿಕೊಡುವ ಉದ್ದೇಶದಿಂದ ಭೂಮಿ ಖರೀದಿಸಲು ಸಿದ್ಧರಿದ್ದು. ಕೊಡುವವರಿದ್ದರೆ ಮುಂದೆ ಬರಬೇಕು ಎಂದರು.

ಜಿಲ್ಲೆಗೆ ರೂ.2.14 ಕೋಟಿ ಅನುದಾನ ನೀಡಲಾಗಿದೆ. ನ.30ರೊಳಗೆ ಫಲಾನುಭವಿಗಳ ಆಯ್ಕೆ ಮಾಡಲು ಸೂಚಿಸಲಾಗಿದೆ. ಸರ್ಕಾರದ ವತಿಯಿಂದ ಮೇದಾರ ಕೇತೇಶ್ವರ ಜಯಂತಿ ಮಾಡಲು ಮನವಿ ಮಾಡಲಾಗಿದೆ. ಮುಂದಿನ ವರ್ಷದಿಂದ ಸರ್ಕಾರದ ವತಿಯಿಂದ ಆಚರಿಸಲಾಗುವುದು ಎಂದು ಹೇಳಿದರು.

## ಅನಧಿಕೃತ ಕೋಚಿಂಗ್ ಸೆಂಟರ್ ಬಂದ ಮಾಡಲು ಆದೇಶ

• **ಉದಯವಾಹಿನಿ ಜಮಖಂಡಿ**

ಜಮಖಂಡಿ ತಾಲ್ಲೂಕಿನಲ್ಲಿ ಜರಗುತ್ತಿರುವ ಎಲ್ಲಾ ಅನಧಿಕೃತ ಕೋಚಿಂಗ್ ಸೆಂಟರ್‌ಗಳನ್ನು ಇಂದಿನಿಂದಲೇ ಮುಚ್ಚಲು ತಿಳಿಸಲಾಗಿದೆ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಅಶೋಕ ಬಸಣ್ಣವರ ಪತ್ರಿಕಾ ಪ್ರಕಟಣೆ ಮೂಲಕ ತಿಳಿಸಿದ್ದಾರೆ.

ಸ್ಥಳೀಯ ಎಕ್ಸ್ ಲೆಂಟ್ ಕೋಚಿಂಗ್ ಸೆಂಟರ್ ವಸತಿ ಶಾಲೆ 30 ವಿದ್ಯಾರ್ಥಿಗಳು ನ.13 ರಂದು ರಾತ್ರಿ ಸಮಯದಲ್ಲಿ ದೋಷಪೂರಿತ ಆಹಾರ ಸೇವನೆಯಿಂದ ಅಸ್ವಸ್ಥರಾಗಿ ಖಾಸಗಿ ಆಸ್ಪತ್ರೆಗೆ ದಾಖಲಾಗಿ ಚೇತರಿಕೆ ಪಡೆದುಕೊಂಡ ಮನೆಗೆ ತೆರಳಿರುವ ಘಟನೆ ಹಿನ್ನೆಲೆಯಲ್ಲಿ ನ.22 ರಂದು ನಗರದ ಅನಧಿಕೃತವಾಗಿ ನಡೆಯುತ್ತಿರುವ ಎಕ್ಸಲೆಂಟ್ ಕೋಚಿಂಗ್ ಸೆಂಟರ್‌ಗೆ ಭೇಟಿ ನೀಡಿ ಪರಿಶೀಲನೆ ಮಾಡಿ ಅವರು ಎಕ್ಸಲೆಂಟ ಕೋಚಿಂಗ್ ಸೆಂಟರ್ ಮುಖ್ಯಸ್ಥ ರಮೇಶ ಕೋರಿಯನ್ನ ವಿಚಾರಿಸಿ ಕೋಚಿಂಗ್ ಸೆಂಟರ್‌ನಲ್ಲಿ 4 ಮತ್ತು 5 ನೇ ತರಗತಿಯ ಸುಮಾರು 30 ಮಕ್ಕಳು ಅಧ್ಯಯನ ಮಾಡುತ್ತಿದ್ದರು ಎಂದು ತಿಳಿದು ಬಂದಿರುವ ಹಿನ್ನಲೆ ಕೋಚಿಂಗ್ ಸೆಂಟರ್ ಮುಚ್ಚಲು ಆದೇಶ ಹೊರಡಿಸಿದ್ದಾರೆ.

ತಾಲ್ಲೂಕಿನಲ್ಲಿ ಜರಗುತ್ತಿರುವ ಎಲ್ಲಾ ಅನಧಿಕೃತ ಕೋಚಿಂಗ್ ಸೆಂಟರ್‌ಗಳನ್ನು ಇಂದಿನಿಂದಲೇ ಮುಚ್ಚಲು ಆದೇಶ ಮಾಡಿದ್ದಾರೆ.

# ಹಾಲು ಮತ ಸಮಾಜದ ಹೆಸರಿನಲ್ಲಿ ನಿವೇಶನಗಳು ಗುಳುಂ

### ಹೋರಾಟಗಾರರು ಮೌನವಾದರೆ ಭ್ರಷ್ಟಚಾರಿಗಳ ಸಂಖ್ಯೆ ಏರಿಕೆಯಾಗಿದೆ : ಶರಣಬಸಪ್ಪ ದಾನಕ್ಕೆ

• **ಉದಯವಾಹಿನಿ ಯಲಬುರ್ಗಾ**

ಪಟ್ಟಣದ ಮೂಲಕ ಸಮುದ್ರ ರಸ್ತೆಗೆ ಹೊಂದಿಕೊಂಡಿರುವ ಶ್ರೀ ಸಿದ್ದರಾಮಯ್ಯ ನಗರದ ಸರ್ವೇ ನಂಬರ್ 222 ಮತ್ತು 224 ರಲ್ಲಿ ಹಾಲುಮತ ಸಮಾಜದ ಹೆಸರಿನಲ್ಲಿ ನಿವೇಶನಗಳು ಮಾಯವಾಗಿವೆ ಎಂದು ಕರ್ನಾಟಕ ರಾಜ್ಯ ಹಸಿರು ಸೇನೆ ಹಾಗು ರಾಜ್ಯ ರೈತ ಸಂಘದ ( ವಾಸುದೇವ ಮೇಟಿ ಬಣ ) ತಾಲ್ಲೂಕಾ ಅಧ್ಯಕ್ಷ ಶರಣಬಸಪ್ಪ ದಾನದಕ್ಕೆ ಅವರು ಅ.30 ರಂದು ಉಪ ಲೋಕಯುಕ್ತರಿಗೆ ದೂರನ್ನು ಸಲ್ಲಿಸಿದ್ದಾರೆ.

ಭ್ರಷ್ಟಾಚಾರದಲ್ಲಿ ಭಾಗಿಯಾದ ತಪ್ಪಿತಸ್ತರ ಮೇಲೆ ಬೆಂಗಳೂರಿನ ಉಪ ಲೋಕಯುಕ್ತರು ದಾಳಿನಡೆಸಿ ತನಿಖೆ ಮಾಡಿ ಹಾಲುಮತ ಸಮಾಜದ ಸಂಘ, ಸಂಸ್ಥೆಗಳಿಗೆ ಹಾಗೂ ಅನ್ಯಾಯಕ್ಕೆ ಒಳಗಾದವರಿಗೆ ನ್ಯಾಯ ದೊರಕಿಸಿ ಕೊಡಬೇಕು ಎಂದರು.

ಹಾಲುಮತ ಸಮಾಜದ ಅಭಿವೃದ್ಧಿಗಾಗಿ ಮತ್ತು ಸಮಾಜದ ಸಂಘ ಸಂಸ್ಥೆಗಳಿಗೆ ನಿವೇಶನಗಳನ್ನು ವಿತರಿಸಿ ಉಳಿದ ಸದಸ್ಯರಿಗೆ ಹಣ ಕೊಟ್ಟಿರುವ ಸದಸ್ಯರಿಗೆ 30×40 ಸೈಜ್ ನಿವೇಶನಗಳನ್ನು ಹಂಚಿಕೆ ಮಾಡಿ ಕೊಡಬೇಕು ಎಂದು ನಿರ್ಧಾರ ಮಾಡಲಾಗಿತ್ತು.

ಆದರೆ ಈ ವ್ಯವಹಾರದಲ್ಲಿ ಭಾಗವಹಿಸಿದ ಹನುಮಂತಪ್ಪ ಕೊಂಡಗುರಿ ಶಿಕ್ಷಕರು ಸಾ/ ಹಿರೇ ಅರಳಿಹಳ್ಳಿ ಇವರು ತಮ್ಮ ಸಹೋದರ ಶರಣಪ್ಪ ಕೊಂಡುಗುರಿ ಇವರ ಹೆಸರಿಗೆ 222 ರ ಸರ್ವೇ ನಂಬರ್ ಜಮೀನು ಮತ್ತು 224 ರ ಸರ್ವೇ ನಂಬರ್ ಜಮೀನನ್ನು ಕರಿಬಸಪ್ಪ ನಿಡುಗುಂದಿ ಇವರ ಹೆಸರಿಗೆ ಖರೀದಿ ಮಾಡಿ ಕೊಡಬೇಕು ಮತ್ತು ಎನ್.ಎ ಮಾಡಿಸಿದ ನಿವೇಶನಗಳನ್ನ ವಿತರಿಸಬೇಕೆಂದು ತೀರ್ಮಾನಿಸಿ, ಇದರ ಮುಂದಾಳತ್ವವನ್ನು ವಹಿಸಿದ ಸೋಮಶೇಖರ ಹರ್ತಿ ನಿವೃತ್ತ ಶಿಕ್ಷಕರು ಭಾಗ್ಯನಗರ ಹಾಗು ಮಲ್ಲಪ್ಪ ಜೋಗಿನ ಇವರು ವಹಿಸಿದ್ದರು.

ನಿವೇಶನಗಳನ್ನು ಸರಿಯಾಗಿ ವಿತರಣೆ ಮಾಡಲಾರದೆ ಭ್ರಷ್ಟಾಚಾರ ಮಾಡಿದ್ದಾರೆ. ಈ ಹಾಲುಮತ ಸಮಾಜದ ಅಧ್ಯಕ್ಷ ವೀರನಗೌಡ ಪೊಲೀಸ ಪಾಟೀಲ ಅವರು ನೂತನ ಮನೆ ನಿರ್ಮಿಸಿಕೊಂಡು ಸುಮ್ಮನಿದ್ದು ಇವರು ನಿವೇಶನದ ವಿಚಾರ ಬಗೆ ಹರಿಸುತ್ತೇವೆ ಎಂದು ಹೇಳಿದವರೇ ಮೌನವಾಗಿ ಸುಮ್ಮನಿದ್ದಾರೆ ಯಾಕೆ ? ಈ ನಿವೇಶನದ ಭ್ರಷ್ಟಚಾರ ಯಾರಿಂದ ಆಗಿದೆ ಎಂಬುದನ್ನು ತನಿಖೆ ನಡೆಸಬೇಕು. ಇದರಲ್ಲಿ ಶ್ರೀ ಕನಕದಾಸ ಯುವಕ ಮಂಡಳ, ಮತ್ತು ಶ್ರೀ ಕನಕದಾಸ ಪತ್ತಿನ ಸಹಕಾರ ಸಂಘ, ಯಲಬುರ್ಗಾ ತಾಲ್ಲೂಕು ಕುರುಬರ ಸಂಘ, ಕನಕ ಭವನ ಹಾಗು ನಿವೇಶನದಾರರಾದ ಶರಣಬಸಪ್ಪ ದಾನದಕ್ಕೆ ಯಲಬುರ್ಗಾ, ದೇವಪ್ಪ ಭೀಮಪ್ಪ ಬಾವಿಕಟ್ಟಿ ಭಟಪನಹಳ್ಳಿ ಪುಷ್ಪಲತಾ ಹನುಮಂತಪ್ಪ ದಾನಕ್ಕೆ ಯಲಬುರ್ಗಾ ಹಾಗೂ ಇತರ ಇನ್ನುಳಿದ ಜನರಿಗೆ ಮೋಸ ಮಾಡಿದ್ದಾರೆ, ತಿಳಿದು ಬದುಕ ಬೇಕಾದವರು ತುಳಿದು ಬದುಕುತ್ತಿದ್ದಾರೆ, ಬೇಲಿಯೆ ಎದ್ದು ಹೊಲವನ್ನು ಮೆದಂತೆ ಆಗಿದೆ, ಈ ಕುರುಬ ಸಮಾಜದ ಮುಖಂಡರಿಂದ ಕುರುಬರಿಗೆ ಅನ್ಯಾಯವಾಗಿದೆ ಎಂದು ಆರೋಪ ಮಾಡಿದ್ದಾರೆ.

ಕುರುಬ ಸಮಾಜಕ್ಕಾಗಿ ಉಳಿಸಿದ ನಿವೇಶನಗಳನ್ನ ಪರರರಿಗೆ ಮಾರಾಟ ಮಾಡಿ ಹಂಚಿಕೆ ಮಾಡಲಾರದೆ ಮೋಸಮಾಡಿದ್ದಾರೆ, ಈ ತಪಿತಸ್ಥರ ಮೇಲೆ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಅನ್ಯಾಯಕ್ಕೆ ಒಳಗಾದವರಿಗೆ ನ್ಯಾಯ ದೊರಕಿಸಿ ಕೊಡಬೇಕೆಂದು ಉಪಲೋಕಯುಕ್ತರಿಗೆ ಶರಣಬಸಪ್ಪ ಕಲ್ಲಪ್ಪ ದಾನದಕ್ಕೆ ಅವರು ದೂರು ಸಲ್ಲಿಸಿ ಮನವಿ ಸಲ್ಲಿಸಿದ್ದಾರೆ.

ಇಂತಹ ಭ್ರಷ್ಟಚಾರದಲ್ಲಿ ನಿರತರಾದ ಯಾವ ವ್ಯಕ್ತಿ ಹಾಗು ಇವರ ಕುಟುಂಬದವರ ಮನೆಯನ್ನು ಲೋಕಯುಕ್ತರು ಸಮಯ ನೋಡಿ ದಾಳಿ ಮಾಡಿದಾಗ ಇವರ ಭ್ರಷ್ಟಚಾರ ಹೊರ ಬರಲು ಸಾಧ್ಯವಾಗುತ್ತದೆ ಎಂದು ರೈತ ಮುಖಂಡ ಹೊರಾಟಗಾರ ಶರಣಬಸಪ್ಪ ದಾನಕ್ಕೆ ಅವರು ಮಾಧ್ಯಮದವರಿಗೆ ಮಾಹಿತಿಯನ್ನು ನೀಡಿದ್ದಾರೆ,


ಉದಯವಾಹಿನಿ ಚಿತ್ರ

> **ಹಾಲುಮತ ಸಮಾಜದ ಅಭಿವೃದ್ಧಿಗಾಗಿ ಸರ್ವೆ ನಂಬರ್ 224 ರ ಪೂಜಾರಪ್ಪ ಬಂಡಿಹಾಳ ಇವರ ಜಮೀನು ಒಂದು ಎಕರೆ 11 ಗುಂಟೆ ಜಮೀನು ಹಾಗು ಸರ್ವೆ ನಂಬರ 222 ರ ರೇವಣೆಪ್ಪ ಹಿರೇಕುರಬರ ಇವರ ಒಂದು ಎಕರೆ ಜಮೀನು ಖರೀದಿ ಮಾಡಿ. ಎನ್.ಎ.ಮಾಡಿದ ಅದರಲ್ಲಿ ಸಮಾಜಕ್ಕೆ ಪ್ರಥಮ ಪ್ರಾಮುಖ್ಯತೆ ಕೊಟ್ಟು ಇತರ ನಿವೇಶನಗಳನ್ನ ಹಣ ಕೊಟ್ಟಿರುವ ಸದಸ್ಯರಿಗೆ ಮಾತ್ರ ಡ್ರಾ ಮಾಡಿ ವಿತರಿಸಬೇಕು ಎಂದು ತಿರ್ಮಾನಿಸಿ ಹಿರಿಯರು ಮತ್ತು ಸದಸ್ಯರು ಸೇರಿಕೊಂಡು ಅವರ ಹೆಸರಿಗೆ ಎನ್.ಎ ಮಾಡಿದ್ದಾರೆ ಇಲ್ಲಿಯವರೆಗೆ ಲೇಖ್ಯ ಪತ್ರಗಳನ್ನು ನೀಡಿಲ್ಲ, ಈ ಸರ್ವೆ ನಂಬರ್ 222 ರ ಜಮೀನು ಮಾಲಿಕರು ಇವರಿಗೆ ಮೊದಲು ಒಂದು ಲಕ್ಷ ರೂ ಕೊಟ್ಟವರು ಯಾರು? ಇದನ್ನು ತಿಳಿಯಲಾರದೆ ಪ್ರಥಮ ಹಂತದಲ್ಲಿ ನಯ ಪೈಸೆ ಕೊಡಲಾರದವರು ನಿವೇಶನಗಳನ್ನ ನುಂಗಿ ನೀರು ಕುಡಿದಿದ್ದಾರೆ ಎಂದು ಆರೋಪ ಮಾಡಿದರು. -ಶರಣಬಸಪ್ಪ ದಾನಕ್ಕೆ**

**ವಿತರಣೆ ಮಾಡಲಾರದೆ ಭ್ರಷ್ಟಾಚಾರ**


ಉದಯವಾಹಿನಿ ಚಿತ್ರ

# ಬಾಬ್ರಿ ಮಸೀದಿ ಶಂಕುಸ್ಥಾಪನೆ ಘೋಷಣೆ: ರಾಜಕೀಯ ಬಿರುಗಾಳಿ

## ಪಶ್ಚಿಮ ಬಂಗಾಳದಲ್ಲಿ ಬಾಬ್ರಿ ಮಸೀದಿಯ ಶಂಕುಸ್ಥಾಪನೆ ನೆರವೇರಿಸಲಾಗುವುದು, ರಾಜಕೀಯ ಚರ್ಚೆಗೆ ಕಾರಣ

**ಕೊಲ್ಕತ್ತಾ:** ಪಶ್ಚಿಮ ಬಂಗಾಳದ ಮುರ್ಷಿದಾಬಾದ್ ಜಿಲ್ಲೆಯಲ್ಲಿ ಡಿಸೆಂಬರ್ 6 ರಂದು, ಬಾಬ್ರಿ ಮಸೀದಿ ಧ್ವಂಸಗೊಂಡ 33ನೇ ವಾರ್ಷಿಕೋತ್ಸವದಂದು, ಬಾಬ್ರಿ ಮಸೀದಿಯ ಶಂಕುಸ್ಥಾಪನೆ ನೆರವೇರಿಸಲಾಗುವುದು ಎಂದು ತೃಣಮೂಲ ಕಾಂಗ್ರೆಸ್ ಶಾಸಕ ಹುಮಾಯುನ್ ಕಬೀರ್ ಘೋಷಿಸಿದ್ದಾರೆ. ಈ ಘೋಷಣೆ ರಾಜ್ಯದಲ್ಲಿ ತೀವ್ರ ರಾಜಕೀಯ ಚರ್ಚೆಗೆ ಕಾರಣವಾಗಿದೆ. ಬೆಲ್ಡಂಗಾದಲ್ಲಿ ನಡೆಯಲಿರುವ ಈ ಕಾರ್ಯಕ್ರಮದಲ್ಲಿ ಹಲವು ಮುಸ್ಲಿಂ ಮುಖಂಡರು ಭಾಗವಹಿಸಲಿದ್ದಾರೆ ಎಂದು ಕಬೀರ್ ತಿಳಿಸಿದ್ದಾರೆ.

ಈ ನಿರ್ಧಾರವನ್ನು ಬಿಜೆಪಿ ತೀವ್ರವಾಗಿ ಖಂಡಿಸಿದ್ದು, ಮುಂಬರುವ ವಿಧಾನಸಭಾ ಚುನಾವಣೆಯನ್ನು ಗಮನದಲ್ಲಿಟ್ಟುಕೊಂಡು ತೃಣಮೂಲ ಕಾಂಗ್ರೆಸ್ ಧಾರ್ಮಿಕ ಅಸ್ಮಿತೆಯನ್ನು ರಾಜಕೀಯಕ್ಕೆ ಬಳಸಿಕೊಳ್ಳುತ್ತಿದೆ ಎಂದು ಆರೋಪಿಸಿದೆ.

**ಬಿಜೆಪಿಯಿಂದ ತೀವ್ರ ವಾಗ್ದಾಳಿ:** ಬಿಜೆಪಿ ವಕ್ತಾರ ಗೌರವ್ ಭಾಟಿಯಾ ಅವರು ಕಬೀರ್ ಅವರ ಹೇಳಿಕೆಯನ್ನು ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಅವರ ಆಶಯದಂತೆ ಈ ಘೋಷಣೆ ಮಾಡಲಾಗಿದೆ ಎಂದು ಅವರು ಆರೋಪಿಸಿದರು. ಪ್ರತಿಯೊಬ್ಬ ಭಾರತೀಯ, ಪ್ರತಿಯೊಬ್ಬ ಹಿಂದೂ ಅಯೋಧ್ಯೆಯಲ್ಲಿ ಭವ್ಯ ರಾಮ ಮಂದಿರವನ್ನು ನಿರ್ಮಿಸುತ್ತಿರುವಾಗ, ಹುಮಾಯುನ್ ಕಬೀರ್, ಮಮತಾ ಬ್ಯಾನರ್ಜಿ ಅವರ ಆಶಯದಂತೆ, ಡಿಸೆಂಬರ್ 6 ರಿಂದ ಪಶ್ಚಿಮ ಬಂಗಾಳದಲ್ಲಿ ಬಾಬ್ರಿ ಮಸೀದಿ ನಿರ್ಮಾಣದ ಬಗ್ಗೆ ಘೋಷಿಸಿದ್ದಾರೆ. ಇದು ಮಮತಾ ಬ್ಯಾನರ್ಜಿ ಅವರು ಹಿಂದೂಗಳ ಬಗ್ಗೆ ಹೊಂದಿರುವ ದ್ವೇಷ ಮತ್ತು ಅಕ್ರಮ ವಲಸಿಗರ ಬಗ್ಗೆ ಅವರಿಗಿರುವ ಪ್ರೀತಿಯನ್ನು ಸ್ಪಷ್ಟವಾಗಿ ತೋರಿಸುತ್ತದೆ.

ಮಮತಾ ಬ್ಯಾನರ್ಜಿ ಅವರ ಚಿಂತನೆ, ಸಿದ್ಧಾಂತವು ಖಂಡನೀಯ, ಕಳವಳಕಾರಿಯಾಗಿದೆ ಎಂದು ಭಾಟಿಯಾ ಹೇಳಿದರು. ಮಮತಾ ಬ್ಯಾನರ್ಜಿ ಅವರನ್ನು ಸಾಮುದಾಯಿಕ ರಾಜಕೀಯ, ಓಲೈಕೆ ರಾಜಕೀಯದ ಪ್ರತೀಕ ಎಂದು ಬಣ್ಣಿಸಿದ ಭಾಟಿಯಾ, ಮುಂಬರುವ ವಿಧಾನಸಭಾ ಚುನಾವಣೆಯಲ್ಲಿ ಸೋಲುವ ಭಯ ಅವರಿಗಿದೆ ಎಂದು ಪ್ರತಿಪಾದಿಸಿದರು. ಭಾರತದಲ್ಲಿ ಮಮತಾ ಬ್ಯಾನರ್ಜಿ ಅವರಂತಹ ನಾಯಕಿ ಇರುವುದು ದುರದೃಷ್ಟಕರ, ಅವರು ಸಾಮುದಾಯಿಕ ರಾಜಕೀಯ, ಓಲೈಕೆ ರಾಜಕೀಯದಪ್ರತೀಕವಾಗಿದ್ದಾರೆ. ಮಮತಾ ಬ್ಯಾನರ್ಜಿ ಅವರು ಭಯಭೀತರಾಗಿದ್ದಾರೆ. ಏಕೆಂದರೆ ಅವರು ಪಶ್ಚಿಮ ಬಂಗಾಳದಲ್ಲಿ ಮುಂಬರುವ ವಿಧಾನಸಭಾ ಚುನಾವಣೆಯಲ್ಲಿ ಸೋಲಲಿದ್ದಾರೆ ಎಂಬುದು ಅವರಿಗೆ ಚೆನ್ನಾಗಿ ತಿಳಿದಿದೆ ಎಂದರು.

**ಉತ್ತರ ಪ್ರದೇಶ ಉಪಮುಖ್ಯಮಂತ್ರಿ ಪ್ರತಿಕ್ರಿಯೆ:** ಉತ್ತರ ಪ್ರದೇಶದ ಉಪಮುಖ್ಯಮಂತ್ರಿ ಕೇಶವ್ ಪ್ರಸಾದ್ ಮೌರ್ಯ ಕೂಡ ಈ ವಿಷಯದಲ್ಲಿ ಧ್ವನಿಗೂಡಿಸಿದರು. ಭಾರತದ ಮಣ್ಣಿನಲ್ಲಿ ವಿದೇಶಿ ಆಕ್ರಮಣಕಾರನ ಹೆಸರಿನಲ್ಲಿ ಯಾವುದೇ ಇಟ್ಟಿಗೆಯನ್ನು ಇಡಲಾಗುವುದಿಲ್ಲ. ದೇಶಾದ್ಯಂತ ನುಸುಳುಕೋರರ ವಿರುದ್ಧ ಒಂದು ಅಭಿಯಾನ ನಡೆಯುತ್ತಿದೆ. ಅವರನ್ನು ಭಾರತದಿಂದ ಆಯ್ದು ತೆಗೆದುಹಾಕಲಾಗುತ್ತದೆ. ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಇದನ್ನು ಘೋಷಿಸಿದ್ದಾರೆ. ಇಡೀ ದೇಶ ಇದಕ್ಕೆ ಸಿದ್ಧವಾಗಿದೆ. 2026ರಲ್ಲಿ, ಪಶ್ಚಿಮ ಬಂಗಾಳದ ಜನರು ಟಿಎಂಸಿಯನ್ನು ಕಿತ್ತೊಗೆಯುತ್ತಾರೆ. ನಾವು ಪಶ್ಚಿಮ ಬಂಗಾಳದಲ್ಲಿಯೂ ಸರ್ಕಾರ ರಚಿಸುತ್ತೇವೆ ಎಂದು ಅವರು ಹೇಳಿದರು.




ಕಾಂಗ್ರೆಸ್ ನಾಯಕ ಅಧೀರ್ ರಂಜನ್ ಚೌಧರಿ ಅವರು ತೃಣಮೂಲ ಕಾಂಗ್ರೆಸ್‌ನ ಮತ್ತೊಂದು ನಿಲುವನ್ನು ಟೀಕಿಸಿದರು. ದೇವಾಲಯ ಮತ್ತು ಮಸೀದಿ ಎರಡರ ಹೇಳಿಕೆಗಳೂ ಚುನಾವಣಾ ಲಾಭಕ್ಕಾಗಿ ಬಳಸಲಾಗುತ್ತಿದೆ ಎಂದು ಅವರು ವಾದಿಸಿದರು. ಇಂತಹ ಪರಿಸ್ಥಿತಿಯಲ್ಲಿ, ಅವರು ಬಾಬ್ರಿ ಮಸೀದಿ ನಿರ್ಮಾಣದ ಬಗ್ಗೆ ಘೋಷಿಸುತ್ತಿದ್ದಾರೆ. ನಮಗೆ ಇದರಲ್ಲಿ ಯಾವುದೇ ಆಕ್ಷೇಪವಿಲ್ಲ, ದೇವಾಲಯ, ಮಸೀದಿ ನಿರ್ಮಿಸಿದರೆ, ಆದರೆ ದೇವಾಲಯ, ಮಸೀದಿ ನಿರ್ಮಾಣದ ನೆಪದಲ್ಲಿ ಚುನಾವಣೆಗಳಲ್ಲಿ ಬೆಂಬಲ ಪಡೆಯಲು ಪ್ರಯತ್ನಿಸುವುದು ಸರಿಯಲ್ಲ. ನಾವು ಧ್ರುವೀಕರಣದ ರಾಜಕೀಯ ನಡೆಯದಂತೆ ನೋಡಿಕೊಳ್ಳಬೇಕು.

– ಚೌಧರಿ

### ಡಿಸೆಂಬರ್ 6 ರಂದು ಕಲ್ಕತ್ತಾದಲ್ಲಿ ತೃಣಮೂಲ ರ‍್ಯಾಲಿ

ಹುಮಾಯುನ್ ಕಬೀರ್ ಅವರ ಹೇಳಿಕೆ, ತೃಣಮೂಲ ಕಾಂಗ್ರೆಸ್ ಡಿಸೆಂಬರ್ 6 ರಂದು ಕಲ್ಕತ್ತಾದಲ್ಲಿ ಒಂದು ದೊಡ್ಡ ರ‍್ಯಾಲಿಯನ್ನು ಆಯೋಜಿಸಲು ಸಿದ್ಧತೆ ನಡೆಸುತ್ತಿರುವ ಸಂದರ್ಭದಲ್ಲಿ ಬಂದಿದೆ. ಸಾಮಾನ್ಯವಾಗಿ ತೃಣಮೂಲದ ಅಲ್ಪಸಂಖ್ಯಾತ ಘಟಕವು ಆಯೋಜಿಸುವ ಈ ಕಾರ್ಯಕ್ರಮವನ್ನು ಈ ಬಾರಿ ಅದರ ವಿದ್ಯಾರ್ಥಿ ಮತ್ತು ಯುವ ಘಟಕಗಳಿಗೆ ವಹಿಸಲಾಗಿದೆ. ಮಮತಾ ಬ್ಯಾನರ್ಜಿ ಮತ್ತು ಟಿಎಂಸಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಅಭಿಷೇಕ್ ಬ್ಯಾನರ್ಜಿ ಅವರು ಬಾಬ್ರಿ ಮಸೀದಿ ಧ್ವಂಸವನ್ನು ಪ್ರತಿಭಟಿಸಲು ವಾರ್ಷಿಕವಾಗಿ ನಡೆಸಲಾಗುವ ಈ ರ‍್ಯಾಲಿಯಲ್ಲಿ ಭಾಗವಹಿಸುವ ನಿರೀಕ್ಷೆಯಿದೆ. ಈ ಘಟನೆಯು ಪಶ್ಚಿಮ ಬಂಗಾಳದ ರಾಜಕೀಯದಲ್ಲಿ ಧಾರ್ಮಿಕ ಭಾವನೆಗಳನ್ನು ಚುನಾವಣಾ ಅಸ್ತ್ರವಾಗಿ ಬಳಸಿಕೊಳ್ಳುವ ಬಗ್ಗೆ ತೀವ್ರ ಚರ್ಚೆಗೆ ಕಾರಣವಾಗಿದೆ. ಬಿಜೆಪಿ, ಇತರ ಪಕ್ಷಗಳು ತೃಣಮೂಲ ಕಾಂಗ್ರೆಸ್‌ನ ಈ ನಡೆಯನ್ನು ತೀವ್ರವಾಗಿ ಖಂಡಿಸಿವೆ. ಆದರೆ, ತೃಣಮೂಲ ಕಾಂಗ್ರೆಸ್ ತನ್ನ ನಿಲುವನ್ನು ಸಮರ್ಥಿಸಿಕೊಳ್ಳುವ ಸಾಧ್ಯತೆಯಿದೆ. ಡಿಸೆಂಬರ್ 6ರಂದು ನಡೆಯಲಿರುವ ರ‍್ಯಾಲಿ ಈ ವಿಷಯದಲ್ಲಿ ಮತ್ತಷ್ಟು ಸ್ಪಷ್ಟತೆಯನ್ನು ನೀಡಬಹುದು.

ಇಡೀ ದೇಶ ಸಿದ್ಧ

# ಪರಾರಿಯಾಗುತ್ತಿರುವ ಅಕ್ರಮ ಬಾಂಗ್ಲಾ ಪ್ರಜೆಗಳು, ಗಡಿಯಲ್ಲಿ ನೂಕುನುಗ್ಗಲು

**ಹಕೀಂಪುರ:** ಪಶ್ಚಿಮ ಬಂಗಾಳದಲ್ಲಿ ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆ ಪ್ರಾರಂಭವಾ ಗಿರುವ ಹಿನ್ನೆಲೆಯಲ್ಲಿ ಅಕ್ರಮ ಬಾಂಗ್ಲಾವಲಸಿಗರು ಸ್ವದೇಶಕ್ಕೆ ಹಿಂತಿರುಗುತ್ತಿರುವ ಪ್ರಮಾಣ ಹೆಚ್ಚಾಗಿದೆ. ಇಲ್ಲಿನ ಗಡಿ ಭದ್ರತಾ ಪಡೆ ಹೊರಠಾಣೆಯ ಇಕ್ಕಟ್ಟಾದ ಧೂಳಿನ ಹಾದಿ ಈಗ ಪಶ್ಚಿಮ ಬಂಗಾಳದಲ್ಲಿ ಹಲವಾರು ವರ್ಷಗಳಿಂದ ನೆಲೆಸಿದ್ದ ಅಕ್ರಮ ಬಾಂಗ್ಲಾ ವಲಸಿಗರ ಅನೌಪಚಾರಿಕ ನಿರ್ಗಮನ ಮಾರ್ಗವಾಗಿ ಪರಿವರ್ತಿತವಾಗಿದೆ. ವಿಶಾಲ ಆಲದಮರವೊಂದರ ಕೆಳಗೆ ಚಿಕ್ಕ ಬಟ್ಟೆಯ ಚೀಲಗಳನ್ನು ಹಿಡಿದ ಕುಟುಂಬಗಳು, ಪ್ಲಾಸ್ಟಿಕ್ ಬಾಟಲ್‌ಗಳನ್ನು ಹಿಡಿದ ಮಕ್ಕಳು, ಪುರುಷರು ಮೌನವಾಗಿ ಸಾಲುಗಟ್ಟಿ ನಿಂತಿದ್ದ ದೃಶ್ಯ ಶನಿವಾರ ಕಂಡು ಬಂದಿತು. ನಮನ್ನು ಸ್ವದೇಶಕ್ಕೆ ಹೋಗಲು ಬಿಡಿ ಎಂದು ಪದೇಪದೇ ಈ ಜನರು ಗಡಿ ಭದ್ರತಾ ಪಡೆಯನ್ನು ಅಂಗಲಾಗಚುತ್ತಿದ್ದರು.

ದಕ್ಷಿಣ ಬಂಗಾಳ ಗಡಿ ಪ್ರದೇಶದಾದ್ಯಂತ ನವೆಂಬರ್ ಪ್ರಾರಂಭದಿಂದ ದಾಖಲೆಗಳಿಲ್ಲದ ಬಾಂಗ್ಲಾದೇಶೀಯರು ಅವರ ದೇಶಕ್ಕೆ ವಾಪಸಾಗಲು ಪ್ರಯತ್ನಿಸುತ್ತಿದ್ದಾರೆ ಎಂದು ಭದ್ರತಾ ಸಿಬ್ಬಂದಿ ಮತ್ತು ಸ್ಥಳೀಯ ನಿವಾಸಿಗಳು ಹೇಳುತ್ತಾರೆ. ವಿಶೇಷ ತೀವ್ರ ಮತದಾರರ ಪಟ್ಟಿ ಪರಿಷ್ಕರಣೆ ಹಿನ್ನೆಲೆಯಲ್ಲಿ ಸ್ವದೇಶಕ್ಕೆ ಹಿಂತಿರುಗಲು ಯತ್ನಿಸುತ್ತಿರುವ ಬಾಂಗ್ಲಾದೇಶೀಯರ ಸಂಖ್ಯೆಯಲ್ಲಿ ಅಸಾಧಾರಣ ಹೆಚ್ಚಳವಾಗಿದೆ ಎಂದು



ಅಧಿಕಾರಿಗಳು ತಿಳಿಸಿದ್ದಾರೆ. ಕೋಲ್ಕತಾ ಸಮೀಪದ ನ್ಯೂ ಟೌನ್‌ನಲ್ಲಿ ಮನೆ ಸಹಾಯಕಿಯಾಗಿ ಕೆಲಸ ಮಾಡುತ್ತಿದ್ದ ಮತ್ತು ಖುಲ್ನಾ ಜಿಲ್ಲೆಯ ನಿವಾಸಿ ಎಂದು ಹೇಳಿಕೊಂಡ ಷಹೀನ್ ಬೀಬಿ ಎಂಬಾಕೆ ರಸ್ತೆ ಬದಿಯಲ್ಲಿ ತನ್ನ ಹಸುಗೂಸೊಂದಿಗೆ ಕಾಯುತ್ತಿದ್ದ ದೃಶ್ಯ ಗೋಚರಿಸಿತು. ನಾವು ಬಡವರಾಗಿದ್ದುದರಿಂದ ನಾನು ಇಲ್ಲಿಗೆ ಬಂದೆ. ನನ್ನ ಬಳಿ ಸೂಕ್ತ ದಾಖಲೆಗಳಿಲ್ಲ. ಈಗ ನಾನು ಖುಲ್ನಾಕ್ಕೆ ವಾಪಸಾಗ ಬಯಸುತ್ತಿದ್ದೇನೆ. ಅದಕ್ಕಾಗಿ ಇಲ್ಲಿದ್ದೇನೆ ಎಂದು ಆಕೆ ನುಡಿದರು.

ತಿಂಗಳಿಗೆ 20.000 ರೂ. ಸಂಪಾದಿಸುತ್ತಿದ್ದ ಆಕೆ ಇಬ್ಬರು ಮಹಿಳೆಯರೊಂದಿಗೆ ಒಂದು ರೂಂನಲ್ಲಿ ವಾಸಿಸುತ್ತಿದ್ದು ನಿಯಮಿತವಾಗಿ ಮನೆಗೆ ಹಣ ಕಳುಹಿಸುತ್ತಿದ್ದುದಾಗಿ ಹೇಳಿದಳು. ದಲ್ಲಾಳಿಗಳು ಮತ್ತು ಮಧ್ಯವರ್ತಿಗಳಿಂದ ತಾವು ಆಧಾರ್ ಕಾರ್ಡ್‌ಗಳು, ರೇಷನ್‌ಕಾರ್ಡ್‌ಗಳು, ಮತದಾರರ ಗುರುತಿನ ಚೀಟಿಯನ್ನು ಪಡೆದಿರುವುದಾಗಿ ಸಾಲಿನಲ್ಲಿದ್ದ ಬಹುತೇಕರು ಒಪ್ಪಿಕೊಂಡರು. ನ್ಯೂ ಟೌನ್, ಬೈರಾಟಿ, ಧುಲಾಗೋರಿ, ಚಾಮಂಗಚಿ, ಘುಸೂರಿ, ಹೌರಾದ, ಕೈಗಾರಿಕಾ ಪ್ರದೇಶಗಳ ಕೆಲವು ಭಾಗಗಳಿಂದ ಬಾಂಗ್ಲಾಪುರುಷರು, ಮಹಿಳೆಯರು, ಮಕ್ಕಳು ಗಡಿಯತ್ತ ಧಾವಿಸುತ್ತಿದ್ದಾರೆ. ಇವರಲ್ಲಿ ಕೆಲವರು ಒಂದು ದಶಕದಿಂದ ರಾಜ್ಯದಲ್ಲಿದ್ದರೆ, ಇತರ ಕೆಲವರು ಕೆಲವೇ ವರ್ಷಗಳ ಹಿಂದೆ ಇಲ್ಲಿಗೆ ಬಂದಿದ್ದಾರೆ ಎಂದು ಅವರು ಪ್ರತಿಪಾದಿಸಿದ್ದಾರೆ.

### 200 ಜನರ ಪರಿಶೀಲನೆ

ಎಸ್‌ಐಆರ್ ಹಳೆಯ ದಾಖಲೆಗಳ ಪರಿಶೀಲನೆ ಬಯಸುತ್ತಿರುವ ಕಾರಣ ವಿಚಾರಣೆಗೊಳಪಡುವುದು ಮತ್ತು ಸಂಭವನೀಯ ಬಂಧನಕ್ಕಿಂತ ಸ್ವದೇಶಕ್ಕೆ ಹಿಂತಿರುಗುವುದು ಉತ್ತಮ ಎಂದು ಇವರ ಅನಿಸಿಕೆಯಾಗಿದೆ. ಎಸ್‌ಐಆರ್ ಪ್ರಾರಂಭವಾದ ನವೆಂಬರ್ 4 ರಿಂದ ಈ ಜನರು ವಾಪಸಾಗಲು ಈಗ ಸರದಿ ಸಾಲುಗಳಲ್ಲಿ ನಿಲ್ಲುತ್ತಿದ್ದಾರೆ. ಪ್ರತಿ ದಿನ 150-200 ಜನರನ್ನು ಪರಿಶೀಲನೆ ಬಳಿಕ ವಾಪಸ್ ಕಳುಹಿಸಲಾಗುತ್ತಿದೆ ಎಂದು ಗಡಿ ಭದ್ರತಾ ಪಡೆ ಅಧಿಕಾರಿಗಳು ವಿವರಿಸಿದ್ದಾರೆ.

# ಅಕ್ರಮ ಶಸ್ತ್ರಾಸ್ತ್ರ ತಯಾರಿಕಾ ಜಾಲ ಭೇದಿಸಿದ ಪುಣೆ ಪೊಲೀಸರು, 36 ಜನರ ಬಂಧನ

**ಪುಣೆ:** ಮಧ್ಯಪ್ರದೇಶದ ಬರ್ವಾನಿ ಜಿಲ್ಲೆಯ ಹಳ್ಳಿಯೊಂದರಲ್ಲಿ ನಡೆಸಲಾಗುತ್ತಿದ್ದ ಅಂತರರಾಜ್ಯ ಅಕ್ರಮ ಶಸ್ತ್ರಾಸ್ತ್ರ ತಯಾರಿಕೆ ಮತ್ತು ಸಾಗಣೆ ದಂಧೆಯನ್ನು ಪುಣೆ ಪೊಲೀಸರು ಭೇದಿಸಿದ್ದಾರೆ. ಘಟನೆಯಲ್ಲಿ 36 ಜನರನ್ನು ಬಂಧಿಸಲಾಗಿದೆ ಮತ್ತು ಅಪಾರ ಪ್ರಮಾಣದ ಶಸ್ತ್ರಾಸ್ತ್ರಗಳನ್ನು ವಶಪಡಿಸಿಕೊಂಡಿದ್ದಾರೆ ಎಂದು ಪೊಲೀಸ್ ಅಧಿಕಾರಿಗಳು ತಿಳಿಸಿದ್ದಾರೆ.

ಮಹಾರಾಷ್ಟ್ರದ ಪುಣೆ ನಗರದಿಂದ ಸುಮಾರು 500 ಕಿ.ಮೀ ದೂರದಲ್ಲಿರುವ ನೆರೆಯ ಮಧ್ಯಪ್ರದೇಶದ ಉಮಾರ್ತಿ ಗ್ರಾಮದಲ್ಲಿ ನಡೆದ ಕಾರ್ಯಾಚರಣೆಯಲ್ಲಿ ವೇಳೆ ಪಿಸ್ತೂಲ್‌ಗಳನ್ನು ವಶಪಡಿಸಿಕೊಂಡ ನಂತರ, ಮಧ್ಯಪ್ರದೇಶಕ್ಕೆ ಪೂರೈಕೆ ಸಂಪರ್ಕಗಳು ಕಂಡುಬಂದಿವೆ ಎಂದು ಹೇಳಿದರು.

ಮಧ್ಯಪ್ರದೇಶ ಪೊಲೀಸರೊಂದಿಗೆ ಜಂಟಿಯಾಗಿ ನಡೆಸಲಾದ ಕಾರ್ಯಾಚರಣೆಯಲ್ಲಿ ಅಕ್ರಮವಾಗಿ ಶಸ್ತ್ರಾಸ್ತ್ರಗಳನ್ನು ತಯಾರಿಸಲಾಗುತ್ತಿದ್ದ 50 ಕುಲುಮೆಗಳನ್ನು ನಾಶಪಡಿಸಲಾಗಿದೆ ಎಂದು ಅವರು ಹೇಳಿದರು.

ವಿಮಂತಲ್, ಕಾಲೇಪಡಲ್ ಪೊಲೀಸ್ ಠಾಣೆಗಳಲ್ಲಿ ದಾಖಲಾದ ಪ್ರಕರಣಗಳ ತನಿಖೆಯ ಸಮಯದಲ್ಲಿ, ಮಧ್ಯಪ್ರದೇಶದಲ್ಲಿರುವ ಪಿಸ್ತೂಲ್ ತಯಾರಿಕಾ ಘಟಕಗಳ ಬಗ್ಗೆ ನಮಗೆ ಮಾಹಿತಿಗಳು ಬಂದವು ಎಂದು ಪುಣೆಯ ಜಂಟಿ ಪೊಲೀಸ್ ಆಯುಕ್ತ ರಂಜನ್ ಕುಮಾರ್ ಶರ್ಮಾ ಪತ್ರಿಕಾಗೋಷ್ಠಿಯಲ್ಲಿ ಹೇಳಿದರು. ಹಲವಾರು




ಸ್ಥಳಗಳಲ್ಲಿ ದಾಳಿ ನಡೆಸಿ ಶಸ್ತ್ರಾಸ್ತ್ರ ತಯಾರಿಕಾ ಘಟಕಗಳನ್ನು ಕೆಡವಲಾಯಿತು.

ಒಟ್ಟು 36 ಜನರನ್ನು ವಶಕ್ಕೆ ಪಡೆಯಲಾಗಿದೆ ಎಂದು ಅವರು ಹೇಳಿದರು. ಪುಣೆಗೆ ಈ ಶಸ್ತ್ರಾಸ್ತ್ರಗಳನ್ನು ಕಳುಹಿಸಿದವರಿಗಾಗಿ ಹುಡುಕಾಟ ನಡೆಯುತ್ತಿದೆ. ಈ ದಂಧೆಯಲ್ಲಿ ಇನ್ನೂ ಅನೇಕ ವ್ಯಕ್ತಿಗಳು ಭಾಗಿಯಾಗಿದ್ದಾರೆ ಮತ್ತು ವಿಚಾರಣೆ ಇನ್ನೂ ನಡೆಯುತ್ತಿದೆ ಎಂದು ಜಂಟಿ ಸಿಪಿ ಹೇಳಿದರು. ಪುಣೆಯ 105 ಪೊಲೀಸ್ ಸಿಬ್ಬಂದಿಗಳ ತಂಡ, ಉಪ ಪೊಲೀಸ್ ಆಯುಕ್ತ (ಡಿಸಿಪಿ) ಸೋಮಯ್ ಮುಂಡೆ ನೇತೃತ್ವದಲ್ಲಿ, ಕಾರ್ಯಾಚರಣೆಯಲ್ಲಿ ಭಾಗವಹಿಸಿತ್ತು.

# ಸುಪ್ರೀಂ ಕೋರ್ಟ್ 53ನೇ ಮುಖ್ಯ ನ್ಯಾಯಮೂರ್ತಿಯಾಗಿ ಸೂರ್ಯಕಾಂತ್ ಪ್ರಮಾಣ

**ನವದೆಹಲಿ:** ಭಾರತದ ಸರ್ವೋಚ್ಚ ನ್ಯಾಯಾಲಯದ 53ನೇ ಮುಖ್ಯ ನ್ಯಾಯಮೂರ್ತಿಯಾಗಿ ಸೂರ್ಯಕಾಂತ್ ಅವರು ಇಂದು ಪ್ರಮಾಣ ವಚನ ಸ್ವೀಕರಿಸಲಿದ್ದಾರೆ. ಜಮ್ಮು, ಕಾಶ್ಮೀರದ ವಿಶೇಷ ಸ್ಥಾನಮಾನವನ್ನು ರದ್ದುಗೊಳಿಸುವ 370 ನೇ ವಿಧಿಯನ್ನು ರದ್ದುಗೊಳಿಸುವುದು, ಬಿಹಾರದ ಮತದಾರರ ಪಟ್ಟಿ ಪರಿಷ್ಕರಣೆ, ಪೆಗಾಸಸ್ ಸ್ಪೈವೇರ್ ಪ್ರಕರಣದ ಕುರಿತು ಹಲವಾರು ಮಹತ್ವದ ತೀರ್ಪುಗಳು ನೀಡಿದ ನ್ಯಾಯಮೂರ್ತಿ ಸೂರ್ಯಕಾಂತ್ ಸೋಮವಾರ ಭಾರತದ 53ನೇ ಮುಖ್ಯ ನ್ಯಾಯಮೂರ್ತಿಯಾಗಿ ಪ್ರಮಾಣ ವಚನ ಸ್ವೀಕರಿಸಲಿದ್ದಾರೆ.

ಸಂಜೆ ಅಧಿಕಾರದಿಂದ ನಿವೃತ್ತಲಾಗಲಿರುವ ನ್ಯಾಯಮೂರ್ತಿ ಬಿ.ಆರ್. ಗವಾಯಿ ಅವರ ನಂತರ ಅವರು ಅಧಿಕಾರ ವಹಿಸಿಕೊಳ್ಳಲಿದ್ದಾರೆ. ನ್ಯಾಯಮೂರ್ತಿ ಸೂರ್ಯ ಕಾಂತ್ ಅವರನ್ನು ಕಳೆದ ಅಕ್ಟೋಬರ್ 30 ರಂದು ಮುಂದಿನ ಸಿಜೆಐ ಆಗಿ ನೇಮಿಸಲಾಗಿತ್ತು. ಸುಮಾರು 15 ತಿಂಗಳುಗಳ ಸೇವಾವಧಿ ಇದ್ದು ,ಮುಂದಿನ ಫೆಬ್ರವರಿ 9, 2027 ರಂದು 65 ವರ್ಷ ತುಂಬಿದ ನಂತರ ನಿವೃತ್ತಲಾಗಲಿದ್ದಾರೆ. ಫೆಬ್ರವರಿ 10, 1962 ರಂದು ಹರಿಯಾಣದ ಹಿಸಾರ್ ಜಿಲ್ಲೆಯಲ್ಲಿ ಮಧ್ಯಮ ವರ್ಗದ ಕುಟುಂಬದಲ್ಲಿ ಜನಿಸಿದ ನ್ಯಾಯಮೂರ್ತಿ ಕಾಂತ್, ಪಟ್ಟಣದಲ್ಲಿ ವಕೀಲ ಹುದ್ದೆ ಆರಂಭಿಸಿ ಈಗ ದೇಶದ ಅತ್ಯುನ್ನತ ನ್ಯಾಯಾಂಗ ಹುದ್ದೆಗೆ ಏರುತ್ತಿದ್ದಾರೆ, 2011ರಲ್ಲಿ ಕುರುಕ್ಷೇತ್ರ ವಿಶ್ವವಿದ್ಯಾಲಯದಿಂದ ಕಾನೂನು




ಸ್ನಾತಕೋತ್ತರ ಪದವಿಯಲ್ಲಿ ಪ್ರಥಮ ಸ್ಥಾನ ಪಡೆದ ಹೆಗ್ಗಳಿಕೆಯನ್ನೂ ಅವರು ಹೊಂದಿದ್ದಾರೆ. ಪಂಜಾಬ್ ಮತ್ತು ಹರಿಯಾಣ ಹೈಕೋರ್ಟ್‌ನಲ್ಲಿ ಹಲವಾರು ಗಮನಾರ್ಹ ತೀರ್ಪುಗಳನ್ನು ಬರೆದ ನ್ಯಾಯಮೂರ್ತಿ ಕಾಂತ್ ಅವರನ್ನು ಅ.5, 2018ರಂದು ಹಿಮಾಚಲ ಪ್ರದೇಶ ಹೈಕೋರ್ಟ್‌ನ ಮುಖ್ಯ ನ್ಯಾಯಮೂರ್ತಿಯಾಗಿ ನೇಮಿಸಲಾಯಿತು. ಎಸ್‌ಸಿ ನ್ಯಾಯಾಧೀಶರಾಗಿ ಅವರ ಅಧಿಕಾರಾವಧಿಯು 370 ನೇ ವಿಧಿ ರದ್ದತಿ, ವಾಕ್ ಸ್ವಾತಂತ್ರ್ಯ ಮತ್ತು ಪೌರತ್ವ ಹಕ್ಕುಗಳ ಕುರಿತಾದ ತೀರ್ಪುಗಳಿಂದ ಗುರುತಿಸಲ್ಪಟ್ಟಿದೆ.

ರಾಜ್ಯ ವಿಧಾನಸಭೆಯು ಅಂಗೀಕರಿಸಿದ ಮಸೂದೆಗಳನ್ನು ನಿರ್ವಹಿಸುವಲ್ಲಿ ರಾಜ್ಯಪಾಲರು, ರಾಷ್ಟ್ರಪತಿಗಳ ಅಧಿಕಾರಗಳ ಕುರಿತು ಇತ್ತೀಚಿನ ಅಧ್ಯಕ್ಷೀಯ ಉಲ್ಲೇಖದ ಭಾಗವಾಗಿ ನ್ಯಾಯಾಧೀಶರು ಇದ್ದರು. ರಾಜ್ಯಗಳಾದ್ಯಂತ ಸಂಭಾವ್ಯ ಪರಿಣಾಮಗಳೊಂದಿಗೆ ಈ ತೀರ್ಪು ಕುತೂಹಲದಿಂದ ಕಾಯಲಾಗುತ್ತಿದೆ. ಚುನಾವಣೆ ನಡೆಯಲಿರುವ ರಾಜ್ಯದಲ್ಲಿ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ಕೈಗೊಳ್ಳುವ ಚುನಾವಣಾ ಸಮಿತಿಯ ನಿರ್ಧಾರವನ್ನು ಪ್ರಶ್ನಿಸಿ ಸಲ್ಲಿಸಲಾದ ಅರ್ಜಿಗಳ ಗುಂಪನ್ನು ಆಲಿಸುವಾಗ, ಬಿಹಾರದಲ್ಲಿ ಕರಡು ಮತದಾರರ ಪಟ್ಟಿಯಿಂದ ಹೊರಗುಳಿದ 65 ಲಕ್ಷ ಮತದಾರರ ವಿವರಗಳನ್ನು ಬಹಿರಂಗಪಡಿಸುವಂತೆ ನ್ಯಾಯಮೂರ್ತಿ ಕಾಂತ್ ಚುನಾವಣಾ ಆಯೋಗಕ್ಕೆ ಆದೇಶಿಸಿದ್ದರು.

# ತಮಿಳುನಾಡಿನಲ್ಲಿ ಚುನಾವಣಾ ಪೂರ್ವ ಪ್ರಚಾರ ಆರಂಭಿಸಿದ ಟಿವಿಕೆ ಮುಖ್ಯಸ್ಥ ವಿಜಯ್

**ಚೆನ್ನೈ:** ತಮಿಳಿಗ ವೆಟ್ರಿ ಕಳಗಂ ಪಕ್ಷದ ಸಂಸ್ಥಾಪಕ, ನಟ-ರಾಜಕಾರಣಿ ವಿಜಯ್ ಮುಂಬರುವ ರಾಜ್ಯ ವಿಧಾನಸಭೆಯ ಚುನಾವಣೆ ಪೂರ್ವ ಪ್ರಚಾರ ಆರಂಭಿಸಲಿದ್ದಾರೆ. ಕಾಂಚೀಪುರಂ ಜಿಲ್ಲೆಯ ಒಳಾಂಗಣ ಕ್ರೀಡಾಂಗಣದಲ್ಲಿ ಭಾನುವಾರ ಜನರನ್ನು ಉದ್ದೇಶಿಸಿ ಮಾತನಾಡುವ ಮೂಲಕ ತಮ್ಮ ರಾಜಕೀಯ ಪ್ರಚಾರವನ್ನು ಪುನರಾರಂಭಿಸಲಿದ್ದಾರೆ.



ಸುಮಾರು 2 ತಿಂಗಳ ನಂತರ ವಿಜಯ್ ಪ್ರಚಾರ ಆರಂಭಿಸುತ್ತಿದ್ದು, ಕಾರ್ಯಕ್ರಮವನ್ನು ಸುಗಮವಾಗಿ ನಡೆಸಲು ಎಲ್ಲಾ ವ್ಯವಸ್ಥೆಗಳನ್ನು ಮಾಡಲಾಗಿದೆ ಎಂದು ಪಕ್ಷದ ಮೂಲಗಳು ತಿಳಿಸಿವೆ. ಕಾಂಚೀಪುರಂ ಜಿಲ್ಲೆಯ ಸುಂಗುವರ್ಚತ್ತಿರಂನಲ್ಲಿರುವ ಖಾಸಗಿ ಶಿಕ್ಷಣ ಸಂಸ್ಥೆಯ ಆವರಣದಲ್ಲಿ ಕಾರ್ಯಕ್ರಮ ನಡೆಯಲಿದೆ. ಸರಿಸುಮಾರು 1,500 ಜನರಿಗೆ ಕೋಡೆಡ್ ಪಾಸ್‌ಗಳನ್ನು ನೀಡಲಾಗಿದೆ, ಅದನ್ನು ಹೊಂದಿರುವವರಿಗೆ ಮಾತ್ರ ಅವಕಾಶ ನೀಡಲಾಗುವುದು ಎಂದು ಅವರು ಹೇಳಿದರು. ಸ್ಥಳದಲ್ಲಿ, ಹಳದಿ ಟಿ-ಶರ್ಟ್‌ಗಳು ಮತ್ತು ಕ್ಯಾಪ್‌ಗಳನ್ನು ಧರಿಸಿದ ಪಕ್ಷದ ಕಾರ್ಯಕರ್ತರು ಜಮಾಯಿಸಿದ್ದಾರೆ. ಪೊಲೀಸರು, ಖಾಸಗಿ ಸಂಸ್ಥೆಗಳು ಭದ್ರತಾ ತಂಡದ ಬೌನ್ಸರ್‌ಗಳು ಮತ್ತು ಭದ್ರತಾ ಸಿಬ್ಬಂದಿ, ವಾಹನ ಬನಿಲುಗಡೆ, ಆಹಾರ ಮತ್ತು ನೀರನ್ನು ಲಭ್ಯವಾಗುವಂತೆ ಎಲ್ಲಾ ವ್ಯವಸ್ಥೆ ಮಾಡಲಾಗಿದೆ. ಕಳೆದ ತಿಂಗಳು, ವಿಜಯ್ ಇಲ್ಲಿಗೆ ಹತ್ತಿರದ ಮಾಮಲ್ಲಪುರಂನಲ್ಲಿರುವ ರೆಸಾರ್ಟ್‌ನಲ್ಲಿ ಕರೂರ್ ಕಾಲ್ತುಳಿತಕ್ಕೆ ಬಲಿಯಾದವರ ಕುಟುಂಬಗಳನ್ನು ಭೇಟಿ ಮಾಡಿ ಸಂತಾಪ ಸೂಚಿಸಿದರು.

# ಯುಎನ್‌ಎಸ್‌ಸಿ ಸುಧಾರಣೆಗಳು ಆಯ್ಕೆಯಲ್ಲ, ಅವಶ್ಯಕತೆ


**ಜೋಹಾನ್ಸ್‌ಬರ್ಗ್:** ವಿಶ್ವಸಂಸ್ಥೆಯ ಭದ್ರತಾ ಮಂಡಳಿಯ ಸುಧಾರಣೆ ಇನ್ನು ಮುಂದೆ ಒಂದು ಆಯ್ಕೆಯಲ್ಲ, ಬದಲಿಗೆ ಅವಶ್ಯಕತೆಯಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಭಾನುವಾರ ಹೇಳಿದ್ದಾರೆ.

ಭಾರತ-ಬ್ರೆಜಿಲ್-ದಕ್ಷಿಣ ಆಫ್ರಿಕಾ ದೇಶಗಳು ಜಾಗತಿಕ ಆಡಳಿತ ಸಂಸ್ಥೆಗಳಿಗೆ ಬದಲಾವಣೆಗಳಿಗೆ ಸ್ಪಷ್ಟ ಸಂದೇಶವನ್ನು ಕಳುಹಿಸಬೇಕು ಎಂದು ಪ್ರತಿಪಾದಿಸಿದರು. ಭಾರತ-ಬ್ರೆಜಿಲ್-ದಕ್ಷಿಣ ಆಫ್ರಿಕಾ ನಾಯಕರ ಶೃಂಗಸಭೆಯನ್ನು ಉದ್ದೇಶಿಸಿ ಮಾತನಾಡಿದ ಮೋದಿ, ಜಗತ್ತು ಛಿದ್ರವಾಗಿ ಮತ್ತು ವಿಭಜಿತವಾಗಿ ಕಂಡುಬರುತ್ತಿರುವ ಸಮಯದಲ್ಲಿ, ಐಬಿಎಸ್‌ಎ ಏಕತೆ, ಸಹಕಾರ ಮತ್ತು ಮಾನವೀಯತೆಯ ಸಂದೇಶವನ್ನು ನೀಡಬಲ್ಲದು ಎಂದು ಹೇಳಿದ್ದಾರೆ.

ಮೂರು ದೇಶಗಳ ನಡುವೆ ಭದ್ರತಾ ಸಹಕಾರವನ್ನು ಬಲಪಡಿಸಲು ಐಬಿಎಸ್‌ಎಯ ಎನ್‌ಎಸ್‌ಎ ಮಟ್ಟದ ಸಭೆಯನ್ನು ಸಾಂಸ್ಥಿಕಗೊಳಿಸುವುದನ್ನು ಸಹ ಅವರು ಪ್ರಸ್ತಾಪಿಸಿದರು. ಭಯೋತ್ಪಾದನೆಯ ವಿರುದ್ಧದ ಹೋರಾಟದಲ್ಲಿ ನಾವು ನಿಕಟ ಸಮನ್ವಯದಿಂದ ಮುಂದುವರಿಯಬೇಕು. ಇಂತಹ ಗಂಭೀರ ವಿಷಯದ ಬಗ್ಗೆ ಯಾವುದೇ ದ್ವಿಮುಖ ನೀತಿಗಳಿಗೆ ಸ್ಥಾನವಿಲ್ಲ ಎಂದು ದಕ್ಷಿಣ ಆಫ್ರಿಕಾದ ಅಧ್ಯಕ್ಷ ಸಿರಿಲ್ ರಾಮಾಫೋಸಾ ಮತ್ತು ಬ್ರೆಜಿಲ್ ಅಧ್ಯಕ್ಷ ಲೂಯಿಜ್ ಇನಾಸಿಯೊ ಲುಲಾ ಡ ಸಿಲ್ವಾ ಭಾಗವಹಿಸಿದ್ದ ಸಭೆಯಲ್ಲಿ ಮೋದಿ ಹೇಳಿದ್ದಾರೆ.

ಮಾನವ ಕೇಂದ್ರಿತ ಅಭಿವೃದ್ಧಿಯನ್ನು ಖಾತ್ರಿಪಡಿಸುವಲ್ಲಿ ತಂತ್ರಜ್ಞಾನದ ನಿರ್ಣಾಯಕ ಪಾತ್ರವನ್ನು ಎತ್ತಿ ತೋರಿಸಿದ ಪ್ರಧಾನಿ, ಮೂರು ದೇಶಗಳ ನಡುವೆ ಯುಪಿಐನಂತಹ ಡಿಜಿಟಲ್ ಸಾರ್ವಜನಿಕ ಮೂಲಸೌಕರ್ಯ, ಕೋವಿನ್‌ನಂತಹ ಆರೋಗ್ಯ ವೇದಿಕೆಗಳು, ಸೈಬರ್ ಭದ್ರತಾ ಚೌಕಟ್ಟುಗಳು ಮತ್ತು ಮಹಿಳಾ ನೇತೃತ್ವದ ತಂತ್ರಜ್ಞಾನ ಉಪಕ್ರಮಗಳ ಹಂಚಿಕೆಯನ್ನು ಸುಗಮಗೊಳಿಸಲು ಐಬಿಎಸ್‌ಎ ಡಿಜಿಟಲ್ ಇನ್ನೋವೇಶನ್ ಅಲೈಯನ್ಸ್ ಅನ್ನು ಸ್ಥಾಪಿಸುವ ಪ್ರಸ್ತಾಪವನ್ನೂ ಮಾಡಿದರು. ಶಿಕ್ಷಣ, ಆರೋಗ್ಯ, ಮಹಿಳಾ ಸಬಲೀಕರಣ, ಸೌರಶಕ್ತಿಯಂತಹ ಕ್ಷೇತ್ರಗಳಲ್ಲಿ 40 ದೇಶಗಳಲ್ಲಿನ ಯೋಜನೆಗಳನ್ನು ಬೆಂಬಲಿಸುವಲ್ಲಿ ಐಬಿಎಸ್‌ಎ ನಿಧಿಯ ಕಾರ್ಯವನ್ನು ಶ್ಲಾಘಿಸಿದರು. ಆಫ್ರಿಕನ್ ನೆಲದಲ್ಲಿ ನಡೆದ ಮೊದಲ ಜಿ20 ಶೃಂಗಸಭೆ ಸಂದರ್ಭದಲ್ಲೇ ನಡೆದ ಐಬಿಎಸ್‌ಎ ಸಭೆಯನ್ನು ಮೋದಿ ಸಕಾಲಿಕ ಎಂದು ಕರೆದರು.

ಜಾಗತಿಕ ದಕ್ಷಿಣ ದೇಶಗಳು ಸತತ ನಾಲ್ಕು ಜಿ-20 ಅಧ್ಯಕ್ಷತೆಗಳನ್ನು ವಹಿಸಿಕೊಂಡಿದ್ದವು. ಅವುಗಳಲ್ಲಿ ಕೊನೆಯ ಮೂರನ್ನು ಐಬಿಎಸ್‌ಎ ಸದಸ್ಯರ ರಾಷ್ಟ್ರಗಳು ವಹಿಸಿಕೊಂಡಿದ್ದವು ಎಂದರು. ಇದು ಮಾನವ ಕೇಂದ್ರಿತ ಅಭಿವೃದ್ಧಿ, ಬಹುಪಕ್ಷೀಯ ಸುಧಾರಣೆ ಮತ್ತು ಸುಸ್ಥಿರ ಬೆಳವಣಿಗೆಯ ಮೇಲೆ ಕೇಂದ್ರೀಕರಿಸಿದ ಹಲವಾರು ಪ್ರಮುಖ ಉಪಕ್ರಮಗಳಿಗೆ ಕಾರಣವಾಗಿದೆ ಎಂದು ಅವರು ಬಣ್ಣಿಸಿದರು.



ಐಬಿಎಸ್‌ಎ ಕೇವಲ ಮೂರು ದೇಶಗಳ ಗುಂಪಲ್ಲ, ಅದು ಮೂರು ಖಂಡಗಳು, ಮೂರು ಪ್ರಮುಖ ಪ್ರಜಾಪ್ರಭುತ್ವ ರಾಷ್ಟ್ರಗಳು ಮತ್ತು ಮೂರು ಪ್ರಮುಖ ಆರ್ಥಿಕತೆಗಳನ್ನು ಸಂಪರ್ಕಿಸುವ ಪ್ರಮುಖ ವೇದಿಕೆಯಾಗಿದೆ.

-ನರೇಂದ್ರ ಮೋದಿ
ಪ್ರಧಾನ ಮಂತ್ರಿ

## ಮಿನಿ ನ್ಯೂಸ್

### ಮಹಾರಾಷ್ಟ್ರದಲ್ಲಿ ದರೋಡೆ ಮಾಡುತ್ತಿದ್ದ ಕರ್ನಾಟಕ ಮೂಲದ ಮೂವರ ಬಂಧನ

**ಪಾಲ್ಘರ್:** ಮಹಾರಾಷ್ಟ್ರದ ಪಾಲ್ಘರ್ ಜಿಲ್ಲೆಯ ಮನೆಯೊಂದರಲ್ಲಿ ದರೋಡೆ ಮಾಡುತ್ತಿದ್ದ ಕರ್ನಾಟಕ ಮೂಲದ ಮೂವರನ್ನು ಬಂಧಿಸಿರುವ ಪೊಲೀಸರು, ಬಂಧಿತರಿಂದ 10 ಲಕ್ಷ ರೂ. ಮೌಲ್ಯದ ಚಿನ್ನಾಭರಣ ಮತ್ತು ಇತರ ವಸ್ತುಗಳನ್ನು ವಶಪಡಿಸಿಕೊಂಡಿದ್ದಾರೆ. ಅಶೋಕ್ ಅಲಿಯಾಸ್ ಬಾಬು ರಾಜು ಶಿಂಧೆ, ಅಬ್ದುಲ್ ರವೂಫ್ ಹಶಿ ಮತ್ತು ರಿತಿಕ್ ರವಿ ಬೆಳಂಗಿ ಬಂಧಿತರು. ಇವರೆಲ್ಲರೂ ಕರ್ನಾಟಕದ ಬೀದರ್ ಜಿಲ್ಲೆಯ ನಂದಗಾಂವ್ ಗ್ರಾಮದವರಾಗಿದ್ದಾರೆ. ನ.18ರಂದು ವಸಾಯಿ ಪ್ರದೇಶದ ಸತಿವಲಿಯಲ್ಲಿರುವ ಮನೆಯಲ್ಲಿ ದರೋಡೆ ನಡೆದಿತ್ತು. ಈ ಕುರಿತು ಮಹಿಳೆಯೊಬ್ಬರು ಠಾಣೆಗೆ ದೂರು ನೀಡಿದ್ದರು. ತನ್ನ ಮಗನೊಂದಿಗೆ ಮನೆಯಲ್ಲಿದ್ದಾಗ ಮೂವರು ಅಪರಿಚಿತ ವ್ಯಕ್ತಿಗಳು ಮನೆಗೆ ನುಗ್ಗಿ ನನಗೂ ಮತ್ತು ಮಗನ ಕುತ್ತಿಗೆಗೆ ಚಾಕುಗಳನ್ನು ಹಿಡಿದು ಬೆದರಿಸಿ, ಮನೆಯಲ್ಲಿದ್ದ ಚಿನ್ನಾಭರಣಗಳು ಮತ್ತು ಮೊಬೈಲ್ ಫೋನ್ ಅನ್ನು ದೋಚಿಕೊಂಡು ಪರಾರಿಯಾಗಿದ್ದಾರೆ ಎಂದು ದೂರಿನಲ್ಲಿ ತಿಳಿಸಿದ್ದರು. ಈ ವೇಳೆ ತನ್ನ ಕೈಗೆ ಗಾಯವಾಗಿದೆ ಎಂದು ಮಹಿಳೆ ತಿಳಿಸಿದ್ದಾರೆ.

ದರೋಡೆ ನಂತರ ಆರೋಪಿಗಳು ಕರ್ನಾಟಕದ ಬೀದರ್ ಜಿಲ್ಲೆಯ ನಂದಗಾಂವ್‌ಗೆ ಪರಾರಿಯಾಗಿದ್ದರು. ಇವರ ಪತ್ತೆಗಾಗಿ ಪೊಲೀಸ್ ತಂಡವನ್ನು ಅಲ್ಲಿಗೆ ಕಳುಹಿಸಲಾಗಿತ್ತು. ಇವರಿಂದ 10 ಲಕ್ಷ ಮೌಲ್ಯದ ಚಿನ್ನಾಭರಣ, ಮೊಬೈಲ್, ನಗದು ವಶಪಡಿಸಿಕೊಂಡಿದ್ದಾರೆ. ವಿಚಾರಣೆಯ ಸಮಯದಲ್ಲಿ, ಬಂಧಿತ ವ್ಯಕ್ತಿಗಳು ದರೋಡೆಯ ಯೋಜನೆ ಮತ್ತು ಕಾರ್ಯಗತಗೊಳಿಸುವಲ್ಲಿ ಇನ್ನೂ ಮೂವರು ವ್ಯಕ್ತಿಗಳು ಭಾಗಿಯಾಗಿದ್ದಾರೆ. ಅವರನ್ನು ಪತ್ತೆಹಚ್ಚಲು ಪ್ರಯತ್ನಗಳು ನಡೆಯುತ್ತಿವೆ ಎಂದು ಪೊಲೀಸರಿಗೆ ತಿಳಿಸಿದ್ದಾರೆ.

### ಧರ್ಮ ಧ್ವಜದ ಮರುಸ್ಥಾಪನೆ ಹೊಸ ಯುಗಕ್ಕೆ ನಾಂದಿ ಹಾಡಲಿದೆ: ಯೋಗಿ

**ಲಕ್ನೋ:** ಅಯೋಧ್ಯೆಯಲ್ಲಿ ಧರ್ಮ ಧ್ವಜದ ಮರುಸ್ಥಾಪನೆಯು ರಾಜ್ಯದಲ್ಲಿ ಸಂತೋಷ, ಶಾಂತಿ ಮತ್ತು ಸಮೃದ್ಧಿಯ ಹೊಸ ಯುಗಕ್ಕೆ ನಾಂದಿ ಹಾಡಲಿದೆ ಎಂದು ಉತ್ತರಪ್ರದೇಶದ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಹರ್ಷ ವ್ಯಕ್ತಪಡಿಸಿದ್ದಾರೆ. ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು, ಪ್ರಧಾನಿ ನರೇಂದ್ರ ಮೋದಿ ನೇತೃತ್ವದಲ್ಲಿ ನ.25ರಂದು ಅಯೋಧ್ಯೆಯಲ್ಲಿ ಅದ್ಧೂರಿ ಸಮಾರಂಭದಲ್ಲಿ ಧರ್ಮಧ್ವಜವನ್ನು ಸ್ಥಾಪಿಸಲಾಗುವುದು. ಅಂದು ಶ್ರೀ ಅಯೋಧ್ಯಾ ಧಾಮದ ಹೆಸರನ್ನು ಇತಿಹಾಸದ ಪುಟಗಳಲ್ಲಿ ಮತ್ತೊಮ್ಮೆ ಸುವರ್ಣಾಕ್ಷರಗಳಲ್ಲಿ ಕೆತ್ತಲಾಗುತ್ತದೆ. ಪ್ರಧಾನಿ ಮಾರ್ಗದರ್ಶನದಲ್ಲಿ ಅಯೋಧ್ಯಾ ಧಾಮದಲ್ಲಿ ನಡೆಯುತ್ತಿರುವ ಕೆಲಸವು ಭಗವಾನ್ ರಾಮನ ಜೀವನ ಮೌಲ್ಯಗಳಿಂದ ಪ್ರೇರಿತವಾಗಿದೆ ಎಂದು ಹೇಳಿದ್ದಾರೆ.

ಧರ್ಮಧ್ವಜದ ಮರುಸ್ಥಾಪನೆಯು ಅಯೋಧ್ಯೆಯನ್ನು ಜಾಗತಿಕ ಆಧ್ಯಾತ್ಮಿಕ ಕೇಂದ್ರವಾಗಿ ಪರಿವರ್ತಿಸುತ್ತದೆ. ಭವ್ಯವಾದ ರಾಮಮಂದಿರದ ಪ್ರತಿಷ್ಠಾಪನೆಯ ನಂತರ ಈ ಆಚರಣೆಯು ಕೇವಲ ಯಜ್ಞದ ಪರಾಕಾಷ್ಠೆಯಲ್ಲ, ಆದರೆ ಹೊಸ ಯುಗದ ಆರಂಭವಾಗಿದೆ ಎಂದಿದ್ದಾರೆ. ಅಯೋಧ್ಯೆ ವಿಷನ್ 2047 ಶೀಘ್ರವಾಗಿ ಕಾರ್ಯರೂಪಕ್ಕೆ ಬರುತ್ತಿದೆ ಎಂದು ಹೇಳಿದ ಆದಿತ್ಯನಾಥ್, ಹೊಸ ಸಂಪರ್ಕ, ಅತ್ಯಾಧುನಿಕ ಮೂಲಸೌಕರ್ಯ, ಕ್ಷಿಪ್ರ ಪ್ರವಾಸೋದ್ಯಮ ಅಭಿವೃದ್ಧಿ, ಸ್ಮಾರ್ಟ್ ಸಿಟಿ, ಸೋಲಾರ್ ಸಿಟಿಯಂತಹ ಉಪಕ್ರಮಗಳು ಅಯೋಧ್ಯೆಯನ್ನು ಜಾಗತಿಕ ಮಟ್ಟದಲ್ಲಿ ಸುಸ್ಥಿರ, ಅಂತರ್ಗತ, ಆಧುನಿಕ ನಗರವಾಗಿ ಸ್ಥಾಪಿಸುತ್ತಿವೆ ಎಂದು ಹೇಳಿಕೊಂಡಿದ್ದಾರೆ. ಲಕ್ಷಾಂತರ ಭಕ್ತರಿಗೆ, ಶ್ರೀ ಅಯೋಧ್ಯಾ ಧಾಮವನ್ನು ತಲುಪುವುದು ಹಿಂದೆಂದಿಗಿಂತಲೂ ಸುಲಭ, ಸುರಕ್ಷಿತ, ಹೆಚ್ಚು ಅನುಕೂಲಕರವಾಗಿದೆ. ಭಗವಾನ್ ಶ್ರೀರಾಮ ನಗರವು ವಿಶ್ವ ಭೂಪಟದಲ್ಲಿ ಸಾಂಸ್ಕೃತಿಕ ರಾಜಧಾನಿಯಾಗಿ ಹೊರಹೊಮ್ಮುತ್ತಿದೆ, ಅಲ್ಲಿ ಪರಂಪರೆಯನ್ನು ಗೌರವಿಸಲಾಗುತ್ತದೆ ಮತ್ತು ಅಭೂತಪೂರ್ವ ಅಭಿವೃದ್ಧಿ ನಡೆಯುತ್ತಿದೆ ಎಂದು ಯೋಗಿ ಆದಿತ್ಯನಾಥ್ ತಿಳಿಸಿದ್ದಾರೆ.

### ಲೋಕಸಭೆಯ ಸ್ಪೀಕರ್ ಓಂ ಬಿರ್ಲಾ ಹುಟ್ಟುಹಬ್ಬ: ಶುಭಾಶಯ ಕೋರಿದ್ದ ಮೋದಿ



**ನವದೆಹಲಿ:** ಲೋಕಸಭೆಯ ಸ್ಪೀಕರ್ ಓಂ ಬಿರ್ಲಾ ಅವರ ಹುಟ್ಟುಹಬ್ಬಕ್ಕೆ ಪ್ರಧಾನಿ ನರೇಂದ್ರಮೋದಿ ಶುಭಾಶಯ ಕೋರಿದ್ದಾರೆ. ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಜಿ ಅವರ ಜನುಮದಿನದಂದು ನನ್ನ ಶುಭಾಶಯಗಳು. ಅವರು ತಮ್ಮ ಶಾಂತ ನಾಯಕತ್ವ ಮತ್ತು ಸದನದಲ್ಲಿ ಏಕೀಕೃತ ಉಪಸ್ಥಿತಿಗೆ ಹೆಸರುವಾಸಿಯಾಗಿದ್ದಾರೆ. ಸಂಸತ್ತನ್ನು ಉತ್ಪಾದಕ ಮತ್ತು ಜನಕೇಂದ್ರಿತಗೊಳಿಸಲು ಅವರು ಅವಿರತವಾಗಿ ಶ್ರಮಿಸಿದ್ದಾರೆ ಎಂದು ಪ್ರದಾನಿ ಮೋದಿ ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದಾರೆ. ಶಾಸಕಾಂಗ ಪ್ರಕ್ರಿಯೆಗಳನ್ನು ಬಲಪಡಿಸಲು, ರಚನಾತಕ ಚರ್ಚೆಯನ್ನು ಉತ್ತೇಜಿಸಲು, ಸಂಸತ್ತಿನ ಘನತೆಯನ್ನು ಎತ್ತಿಹಿಡಿಯಲು ಬಿರ್ಲಾ ಅವರ ಬದ್ಧತೆಯನ್ನು ವ್ಯಾಪಕವಾಗಿ ಗೌರವಿಸಲಾಗಿದೆ ಅವರು ಸಂಸತ್ತನ್ನು ಉತ್ಪಾದಕ, ಜನಕೇಂದ್ರಿತಗೊಳಿಸಲು ಅವಿರತವಾಗಿ ಶ್ರಮಿಸಿದ್ದಾರೆ. ಅವರು ರಾಷ್ಟ್ರದ ಸೇವೆಯಲ್ಲಿ ದೀರ್ಘ, ಆರೋಗ್ಯಕರ ಜೀವನವನ್ನು ಆಶೀರ್ವದಿಸಲಿ ಎಂದು ಬೇಡಿಕೊಂಡಿದ್ದಾರೆ. ಬಿರ್ಲಾ ಅವರು ಪ್ರಸ್ತುತ ಲೋಕಸಭೆಯ 17ನೇ ಸ್ಪೀಕರ್ ಆಗಿದ್ದಾರೆ. 2019ರಲ್ಲಿ ಈ ಹುದ್ದೆಗೆ ಮೊದಲ ಬಾರಿಗೆ ಆಯ್ಕೆಯಾಗಿದ್ದರು. ನಂತರ ಜೂನ್ 2024ರಲ್ಲಿ ಹುದ್ದೆಗೆ ಮರು ಆಯ್ಕೆಯಾದರು.

# ಚಂಡೀಗಢದಲ್ಲಿ ರಾಷ್ಟ್ರಪತಿ ಆಳ್ವಿಕೆ ಜಾರಿ ವಿವಾದ

## ಚಳಿಗಾಲದ ಅಧಿವೇಶನದಲ್ಲಿ ಚಂಡೀಗಢ ಆಡಳಿತ ಬದಲಾವಣೆ ಮಸೂದೆ ಮಂಡನೆಯಾಗುವುದಿಲ್ಲ ಎಂದು ಕೇಂದ್ರ ಗೃಹ ಸಚಿವಾಲಯ ಸ್ಪಷ್ಟನೆ

**ನವದೆಹಲಿ:** ಚಂಡೀಗಢದ ಆಡಳಿತಾತ್ಮಕ ಸ್ವರೂಪವನ್ನು ಬದಲಿಸುವ ಯಾವುದೇ ಮಸೂದೆಯನ್ನು ಮುಂಬರುವ ಸಂಸತ್ತಿನ ಚಳಿಗಾಲದ ಅಧಿವೇಶನದಲ್ಲಿ ಪರಿಚಯಿಸುವ ಉದ್ದೇಶ ಕೇಂದ್ರ ಸರ್ಕಾರಕ್ಕಿಲ್ಲ ಎಂದು ಕೇಂದ್ರ ಗೃಹ ಸಚಿವಾಲಯವು ಭಾನುವಾರ ಸ್ಪಷ್ಟಪಡಿಸಿದೆ. ಈ ಮೂಲಕ ಚಂಡೀಗಢವನ್ನು ರಾಷ್ಟ್ರಪತಿಗಳ ನೇರ ಆಡಳಿತಕ್ಕೆ ವಹಿಸಲು ಕೇಂದ್ರ ಸರ್ಕಾರ ಉದ್ದೇಶಿಸಿದೆ ಎಂಬ ಊಹಾಪೋಹಗಳಿಗೆ ತೆರ ಬಿದ್ದಿದೆ. ಸಂವಿಧಾನದ ಅನುಚ್ಛೇದ 240 ರ ಅಡಿಯಲ್ಲಿ ಚಂಡೀಗಢವನ್ನು ತರುವ ಯೋಜನೆಗಳ ಬಗ್ಗೆ ರಾಜಕೀಯ ವಿವಾದ ಭುಗಿಲೆದ್ದ ನಂತರ ಈ ಸ್ಪಷ್ಟನೆ ಹೊರಬಿದ್ದಿದೆ. ಈ 131ನೇ ಸಾಂವಿಧಾನಿಕ ತಿದ್ದುಪಡಿ ಮಸೂದೆಯ ಮೂಲಕ, ಅಂಡಮಾನ್ ಮತ್ತು ನಿಕೋಬಾರ್ ದ್ವೀಪಗಳು, ಲಕ್ಷದ್ವೀಪ, ದಾದ್ರಾ ಮತ್ತು ನಗರ ಹವೇಲಿ, ಮತ್ತು ದಮನ್, ದಿಯು ನಂತಹ ಇತರ ಕೇಂದ್ರಾಡಳಿತ ಪ್ರದೇಶಗಳ ಸಾಲಿಗೆ ಚಂಡೀಗಢವನ್ನು ಸೇರಿಸಲು ಕೇಂದ್ರ ಸರ್ಕಾರವು ಉದ್ದೇಶಿಸಿದೆ ಎಂಬ ವರದಿಗಳು ಪ್ರಕಟಗೊಂಡಿದ್ದವು.

**ಕೇಂದ್ರ ಗೃಹ ಸಚಿವಾಲಯದ ಸ್ಪಷ್ಟನೆ:** ಗೃಹ ಸಚಿವಾಲಯವು ಒಂದು ಹೇಳಿಕೆಯನ್ನು ಬಿಡುಗಡೆ ಮಾಡಿ, ಕೇಂದ್ರಾಡಳಿತ ಪ್ರದೇಶವಾದ ಚಂಡೀಗಢಕ್ಕೆ ಸಂಬಂಧಿಸಿದಂತೆ ಕೇಂದ್ರ ಸರ್ಕಾರದ ಕಾನೂನು ಮಾಡುವ ಪ್ರಕ್ರಿಯೆಯನ್ನು ಸರಳೀಕರಿಸುವ ಪ್ರಸ್ತಾವನೆ ಮಾತ್ರ ಕೇಂದ್ರ ಸರ್ಕಾರದ ಪರಿಗಣನೆಯಲ್ಲಿದೆ. ಈ ಪ್ರಸ್ತಾವನೆಯ ಬಗ್ಗೆ ಇನ್ನೂ ಯಾವುದೇ ಅಂತಿಮ ನಿರ್ಧಾರವನ್ನು ತೆಗೆದುಕೊಳ್ಳಲಾಗಿಲ್ಲ.



**ವಿವಾದಕ್ಕೆ ಕಾರಣವೇನು?:** ಚಂಡೀಗಢವನ್ನು ಸಂವಿಧಾನದ ಅನುಚ್ಛೇದ 240 ರ ಅಡಿಯಲ್ಲಿ ತರಲು ಬಿಜೆಪಿ ನೇತೃತ್ವದ ಕೇಂದ್ರ ಸರ್ಕಾರವು ಪ್ರಸ್ತಾಪಿಸಿದ್ದೇ ಈ ವಿವಾದಕ್ಕೆ ಕಾರಣ. ಈ ತಿದ್ದುಪಡಿಯು ರಾಷ್ಟ್ರಪತಿಗೆ ನಗರಕ್ಕೆ ಲೆಫ್ಟಿನೆಂಟ್ ಗವರ್ನರ್ (ಪರಿಪಾಲಕ) ಅನ್ನು ನೇಮಿಸಲು ಮತ್ತು ನೇರವಾಗಿ ನಿಯಮಗಳನ್ನು ಮಾಡುವ ಅಧಿಕಾರ ನೀಡುತ್ತದೆ. ಪ್ರಸ್ತುತ, ಪಂಜಾಬ್‌ನ ರಾಜ್ಯಪಾಲರೇ ಚಂಡೀಗಢದ ಆಡಳಿತಾಧಿಕಾರಿಯೂ ಆಗಿದ್ದಾರೆ. ಈ ಪ್ರಸ್ತಾವನೆಗೆ ಪಂಜಾಬ್‌ನ ರಾಜಕೀಯ ವಲಯದಲ್ಲಿ ತೀವ್ರ ಆಕ್ಷೇಪ ವ್ಯಕ್ತವಾಗಿದೆ ಮತ್ತು ಇದನ್ನು ಪಂಜಾಬ್‌ನ ಹಕ್ಕುಗಳ ಮೇಲೆ ನಡೆದ ದಾಳಿ ಎಂದು ಹಲವು ನಾಯಕರು ಕರೆದಿದ್ದಾರೆ.

**ಚಂಡೀಗಢದ ಪ್ರಸ್ತುತ ಸ್ಥಿತಿ:** ಚಂಡೀಗಢವು ಪ್ರಸ್ತುತ ಪಂಜಾಬ್, ಹರಿಯಾಣ ಎರಡಕ್ಕೂ ಜಂಟಿ ರಾಜಧಾನಿಯಾಗಿ ಕಾರ್ಯನಿರ್ವಹಿಸುತ್ತಿದೆ. ದಶಕಗಳಿಂದ, ಎರಡೂ ರಾಜ್ಯಗಳು ನಗರದ ಮೇಲೆ ಸಂಪೂರ್ಣ ಹಕ್ಕು ಸಾಧಿಸುತ್ತಿದ್ದರೂ, 1966 ರಿಂದ ಇದು ಕೇಂದ್ರಾಡಳಿತ ಪ್ರದೇಶವಾಗಿಯೇ ಉಳಿದಿದೆ.

ಈ ಪ್ರಸ್ತಾವನೆಯು ಯಾವುದೇ ರೀತಿಯಲ್ಲಿ ಚಂಡೀಗಢದ ಆಡಳಿತ ಅಥವಾ ಆಡಳಿತಾತ್ಮಕ ರಚನೆಯನ್ನು ಬದಲಾಯಿಸಲು ಅಥವಾ ಪಂಜಾಬ್ ಅಥವಾ ಹರಿಯಾಣ ರಾಜ್ಯಗಳ ನಡುವಿನ ಸಾಂಪ್ರದಾಯಿಕ ವ್ಯವಸ್ಥೆಗಳನ್ನು ಬದಲಿಸಲು ಉದ್ದೇಶಿಸಿಲ್ಲ ಎಂದು ಗೃಹ ಸಚಿವಾಲಯ ತಿಳಿಸಿದೆ. ಚಂಡೀಗಢದ ಹಿತಾಸಕ್ತಿಗಳನ್ನು ಗಮನದಲ್ಲಿಟ್ಟುಕೊಂಡು, ಎಲ್ಲಾ ಪಾಲುದಾರರೊಂದಿಗೆ ಸೂಕ್ತ ಸಮಾಲೋಚನೆ ನಡೆಸಿದ ನಂತರವೇ ಸೂಕ್ತ ನಿರ್ಧಾರವನ್ನು ತೆಗೆದುಕೊಳ್ಳಲಾಗುವುದು. ಮುಂಬರುವ ಸಂಸತ್ತಿನ ಚಳಿಗಾಲದ ಅಧಿವೇಶನದಲ್ಲಿ ಈ ಸಂಬಂಧ ಯಾವುದೇ ಮಸೂದೆಯನ್ನು ಮಂಡಿಸುವ ಉದ್ದೇಶ ಕೇಂದ್ರ ಸರ್ಕಾರಕ್ಕಿಲ್ಲ ಎಂದು ಸಚಿವಾಲಯ ಸ್ಪಷ್ಟಪಡಿಸಿದೆ.

### ಕೇಂದ್ರದ ನಡೆಗೆ ವಿಪಕ್ಷಗಳ ತೀವ್ರ ವಿರೋಧ

ಪಂಜಾಬ್ ಮುಖ್ಯಮಂತ್ರಿ ಭಗವಂತ್ ಮಾನ್ ಅವರು ಈ ಕ್ರಮವನ್ನು ಬಲವಾಗಿ ಟೀಕಿಸಿದರು ಮತ್ತು ಇದನ್ನು ಪಂಜಾಬ್‌ನ ರಾಜಧಾನಿಯನ್ನು ಕಸಿದುಕೊಳ್ಳುವ ಪಿತೂರಿ ಎಂದು ಕರೆದರು. ಚಂಡೀಗಢವು ಪಂಜಾಬ್‌ನ ಅವಿಭಾಜ್ಯ ಅಂಗವಾಗಿದೆ, ಇದೆ ಮತ್ತು ಎಂದೆಂದಿಗೂ ಇರಲಿದೆ ಎಂದು ಅವರು ಹೇಳಿದರು. ಮೂಲ ರಾಜ್ಯವಾಗಿ ಪಂಜಾಬ್‌ಗೆ ಚಂಡೀಗಢದ ಮೇಲೆ ಸಂಪೂರ್ಣ ಹಕ್ಕು ಇದೆ ಎಂದು ವಾದಿಸಿದ ಅವರು, ಕೇಂದ್ರವು ಅನ್ಯಾಯವಾಗಿ ವರ್ತಿಸುತ್ತಿದೆ ಎಂದು ಆರೋಪಿಸಿದರು. ಆಡಳಿತಾರೂಢ ಆಮ್ ಆದ್ಮಿ ಪಕ್ಷ, ಕಾಂಗ್ರೆಸ್, ಶಿರೋಮಣಿ ಅಕಾಲಿದಳ ಸೇರಿದಂತೆ ಪ್ರಮುಖ ಪಕ್ಷಗಳಿಂದ ಈ ಪ್ರಸ್ತಾವನೆಗೆ ತೀವ್ರ ವಿರೋಧ ವ್ಯಕ್ತವಾಗಿದೆ.

# ನೀ ನನ್ನವಳೇ ಹಾಡಿನಲ್ಲಿ ಮಿಂಚಿದ ನಿಹಾರ್ ರಚನಾ

ಅಪ್ಪಟ ಕನ್ನಡ ಟೈಟಲ್ ಹಾಗೂ ತಾರಾಬಳಗದ ಮೂಲಕ ಕುತೂಹಲ ಹೆಚ್ಚಿಸಿರುವ ಸಿನಿಮಾ ತೀರ್ಥರೂಪ ತಂದೆಯವರಿಗೆ. ಈ ಹಿಂದೆ ಹೊಂದಿಸಿ ಬರೆಯಿರಿ ಕಥೆ ಹೇಳಿದ್ದ ನಿರ್ದೇಶಕ ರಾಮೇನಹಳ್ಳಿ ಜಗನ್ನಾಥ ಅವರ ಎರಡನೇ ಪ್ರಯತ್ನ ಇದು. ಈಗಾಗಲೇ ತೀರ್ಥರೂಪ ತಂದೆಯವರಿಗೆ ಚಿತ್ರದ 'ನನದೇ ಜಗದಲಿ' ಎಂಬ ಹಾಡು ಪ್ರೇಕ್ಷಕರ ಮೆಚ್ಚುಗೆ ಪಡೆದಿದೆ. ಇದೀಗ ಚಿತ್ರತಂಡ ಎರಡನೇ ಹಾಡನ್ನು ಅನಾವರಣ ಮಾಡಿದೆ. ಆನಂದ್ ಆಡಿಯೋ ಯೂಟ್ಯೂಬ್‌ನಲ್ಲಿ 'ನೀ ನನ್ನವಳೇ' ಎಂಬ ಮೆಲೋಡಿ ಗೀತೆ ರಿಲೀಸ್ ಆಗಿದೆ. ನೀ ನನ್ನವಳೇ ಹಾಡಿಗೆ ನಾಗಾರ್ಜುನ್ ಶರ್ಮಾ ಸಾಹಿತ್ಯ ಬರೆದಿದ್ದು, ರಜತ್ ಹೆಗ್ಡೆ, ಈಶಾ ಸುಚಿ ಧ್ವನಿಯಾಗಿದ್ದಾರೆ. ಜೋ ಕೋಸ್ಟ್ ಸಂಗೀತ ನಿರ್ದೇಶನ ಮಾಡಿದ್ದಾರೆ. ನಾಯಕ ನಿಹಾರ್ ಮುಖೇಶ್ ಹಾಗೂ ನಾಯಕಿ ರಚನಾ ಇಂದರ್ ಹಾಡಿನಲ್ಲಿ ಮಿಂಚಿದ್ದಾರೆ. ಚಿತ್ರದಲ್ಲಿ ರಾಜೇಶ್ ನಟರಂಗ, ಸಿತಾರಾ, ರವೀಂದ್ರ ವಿಜಯ್, ಅಜಿತ್ ಹಂಡೆ, ಅಶ್ವಿತಾ ಹೆಗಡೆ ಸೇರಿದಂತೆ ಅನುಭವಿ ತಾರಾಬಳಗದವಿದೆ. 'ತೀರ್ಥರೂಪ ತಂದೆಯವರಿಗೆ' ಚಿತ್ರವು 'ಜೈ ಚಾಮುಂಡೇಶ್ವರಿ ಪ್ರೊಡಕ್ಷನ್ಸ್' ಮೂಲಕ ನಿರ್ಮಾಣ ಆಗುತ್ತಿದೆ.



ರಾಮೇನಹಳ್ಳಿ ಜಗನ್ನಾಥ ಅವರೇ ಕಥೆ ಬರೆದಿದ್ದಾರೆ. ನಿರ್ದೇಶನದ ಜವಾಬ್ದಾರಿ ಕೂಡ ಹೊತ್ತುಕೊಂಡಿದ್ದಾರೆ. 'ಹೊಂದಿಸಿ ಬರೆಯಿರಿ' ಚಿತ್ರ ನಿರ್ಮಾಣ ಮಾಡಿದ್ದ 'ಸಂಡೇ ಸಿನಿಮಾಸ್' ಈ ಚಿತ್ರವನ್ನು ಪ್ರೆಸೆಂಟ್ ಮಾಡುತ್ತಿದೆ. 'ಬ್ಲಿಂಕ್' ಸಿನಿಮಾ ಖ್ಯಾತಿಯ ರವಿಚಂದ್ರ ಎ.ಜೆ. ಅವರು 'ತೀರ್ಥರೂಪ ತಂದೆಯವರಿಗೆ' ಸಿನಿಮಾಗೆ ಎಕ್ಸಿಕ್ಯುಟಿವ್ ಪ್ರೊಡ್ಯೂಸರ್ ಆಗಿ ಕೆಲಸ ಮಾಡುತ್ತಿದ್ದಾರೆ. ದೀಪಕ್ ಯರಗೇರಾ ಅವರು ಛಾಯಾಗ್ರಹಣ, ಸುರೇಶ್ ಆರ್ಮುಗಂ ಸಂಕಲನ, ಮಾಡುತ್ತಿದ್ದಾರೆ. ಪ್ರಶಾಂತ್ ರಾಜಪ್ಪ ಅವರು ಸಂಭಾಷಣೆ ಬರೆದಿದ್ದಾರೆ. ಪೋಸ್ಟ್ ಪ್ರೊಡಕ್ಷನ್ ಕೆಲಸ ಮುಗಿಸಿರುವ ಚಿತ್ರತಂಡ ಶೀಘ್ರದಲ್ಲೇ ಬಿಡುಗಡೆ ದಿನಾಂಕ ಘೋಷಣೆ ಮಾಡಲಿದೆ.



# ಲಂಡನ್ ಕೆಫೆ ರಾಜ್ಯಾದ್ಯಂತ ತೆರೆಗೆ

ಬಹುನಿರೀಕ್ಷಿತ ಮಾಸ್ ಮತ್ತು ಆಕ್ಷನ್ ಪೋಸ್ಟರ್ಸ್, ಟೀಸರ್, ಟ್ರೈಲರ್ ಹಾಗೂ ರೈ ರೈ ರೈ ಅದ್ಭುತ ಹಾಡಿನ ಮೂಲಕ ಪ್ರೇಕ್ಷಕರಲ್ಲಿ ಇನ್ನಷ್ಟೂ ಕುತೂಹಲ ಮೂಡಿಸಿರುವ ಆಪರೇಷನ್ ಲಂಡನ್ ಕೆಫೆ ಕನ್ನಡ ಚಿತ್ರವು ಇದೇ ನವೆಂಬರ್ 28ರಂದು ಏಕಕಾಲಕ್ಕೆ ಕನ್ನಡ ಮರಾಠಿ ಮತ್ತು ಹಿಂದಿ ಭಾಷೆಯಲ್ಲಿ ತೆರೆ ಕಾಣಲಿದೆ ಎಂದು ನಟ ಅರ್ಜುನ್ ಕಾಪಿಕಾಡ್ ತಿಳಿಸಿದ್ದಾರೆ.

ನಿರ್ಮಾಪಕ ವಿಜಯ್ ಕುಮಾರ್ ಶೆಟ್ಟಿ ಚಿತ್ರಕ್ಕೆ ಸಾಕಷ್ಟು ಬಂಡವಾಳ ಹಾಕಿ ಸಿನಿಮಾ ಮಾಡಿದ್ದಾರೆ. ಮರಾಠಿ ಭಾಷೆ ಬಾರದೆ ಇದ್ರೂ, ಯಾವುದೇ ಸಮಸ್ಯೆಯಾಗದಂತೆ ನಟಿಸಲು ಸಹಕಾರ ನೀಡಿದ್ದಾರೆ. ತುಳುವರು ನನ್ನನ್ನು ಬೆಳೆಸಿದ್ದಾರೆ. ಅದೇ ಪ್ರೀತಿ ಈ ಕನ್ನಡ ಸಿನಿಮಾಕ್ಕೂ ಇರಲಿ ಎಂದರು.


ಚಿತ್ರದ ಪ್ರಚಾರ ಕಾರ್ಯದಲ್ಲಿ ಈಗಾಗಲೇ ಚಿತ್ರತಂತ ತೊಡಗಿಸಿಕೊಂಡಿದ್ದು, ಕರ್ನಾಟಕ ಮತ್ತು ಮಹಾರಾಷ್ಟ್ರದೆಲ್ಲೆಡೆ ವಿವಿಧ ಪ್ರಚಾರ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ. ಕನ್ನಡ ಮತ್ತು ಮರಾಠಿ ಎರಡೂ ಭಾಷೆಯಲ್ಲಿ ಏಕಕಾಲಕ್ಕೆ ಚಿತ್ರೀಕರಣಗೊಂಡಿರುವ ಈ ಚಿತ್ರವನ್ನು ವಿಜಯ್ ಕುಮಾರ್ ಶೆಟ್ಟಿ ಅವರಾಲ್, ರಮೇಶ್ ಕೊಠಾರಿ, ದೀಪಕ್ ರಾಣೆ ಮತ್ತು ವಿಜಯ ಪ್ರಕಾಶ್ ಇಂಡಿಯನ್ ಫಿಲಂ ಫ್ಯಾಕ್ಟರಿ ಮತ್ತು ದೀಪಕ್ ರಾಣೆ ಫಿಲಂಸ್ ಲಾಂಛನದ ಅಡಿಯಲ್ಲಿ ಬಹಳ ಅದ್ದೂರಿಯಾಗಿ ನಿರ್ಮಿಸಿದ್ದಾರೆ. ಸಡಗರ ರಾಘವೇಂದ್ರ ಈ ಚಿತ್ರವನ್ನು ನಿರ್ದೇಶಿಸಿದ್ದಾರೆ. ಜಿಲ್ಕಾ ಸಿನಿಮಾದಲ್ಲಿ ಅಭಿನಯಿಸಿದ್ದ ನಾನು ಈ ಸಿನಿಮಾದಲ್ಲಿ ವಿಭಿನ್ನ ಸಾಹಸಗಳ ಮೂಲಕ ಪ್ರೇಕ್ಷಕರ ಮನಮುಟ್ಟುವ ಪ್ರಾಮಾಣಿಕ ಪ್ರಯತ್ನ ಮಾಡಿದ್ದೇನೆ ಎಂದರು.

ನಿರ್ಮಾಪಕ ವಿಜಯ್ ಕುಮಾರ್ ಶೆಟ್ಟಿ ಮಾತಾಡಿ, ನಟಿ ಮೇಘಾ ಶೆಟ್ಟಿ ಈಗಾಗಲೇ ಬಿಡುಗಡೆಗೊಂಡಿರುವ ಚಿತ್ರದ ಹಾಡು, ಡ್ಯಾನ್ಸ್ ಮತ್ತು ಟ್ರೇಲರ್‌ನಲ್ಲಿ ಲಂಗ ದಾವಣಿ ತೊಟ್ಟು ಅಪ್ಪಟ ಬಜಾರಿ ಹಳ್ಳಿ ಹುಡುಗಿಯಂತೆ ತರ್ಲೆ ಮಾಡುತ್ತಾ ತನ್ನ ನಟನೆಯ ಇನ್ನೊಂದು ಮಜಲನ್ನು ಪ್ರೇಕ್ಷಕರಿಗೆ ತಿಳಿಯಪಡಿಸಿದ್ದಾರೆ. ತುಳು ಚಿತ್ರರಂಗದ ಹೆಸರಾಂತ ನಟ ಅರ್ಜುನ್ ಕಾಪಿಕಾಡ್ ಈ ಚಿತ್ರದಲ್ಲಿ ಒಬ್ಬ ಖಡಕ್ ಆರ್ಮಿ ಆಫೀಸರ್ ಪಾತ್ರದಲ್ಲಿ ಮೊದಲ ಬಾರಿ ಕಾಣಿಸಿಕೊಂಡಿದ್ದಾರೆ. ಹಾಗೆ ಮರಾಠಿ ಚಿತ್ರರಂಗದ ಹೆಸರಾಂತ ನಟಿ ಶಿವಾನಿ ಸುರ್ವೆಯ ಜೊತೆ ಅದೇ ಮರಾಠಿಯ ವಿರಾಟ್ ಮಡ್ಕ, ಪ್ರಸಾದ್ ಖಾಂಡೇಕರ್ ಮುಂತಾದವರು ವಿಭಿನ್ನವಾದ ಚಾಲೆಂಜಿಂಗ್ ಪಾತ್ರಗಳಲ್ಲಿ ಕಾಣಿಸಿಕೊಂಡಿದ್ದಾರೆ. ಉಳಿದಂತೆ ಕನ್ನಡದ ಚಿರಪರಿಚಿತ ಬಿ.ಸುರೇಶ್, ಕೃಷ್ಣ ಹೆಬ್ಬಾಳೆ, ನೀನಾಸಂ ಅಶ್ವಥ್, ಧರ್ಮೇಂದ್ರ, ಅರಸ್ ಜೊತೆಯಲ್ಲಿ ಇನ್ನೂ ಹೆಸರಾಂತ ಕನ್ನಡ ಮತ್ತು ಮರಾಠಿಯ ಕಲಾವಿದರು ತೆರೆ ಹಂಚಿಕೊಂಡಿದ್ದಾರೆ ಎಂದು ತಿಳಿಸಿದರು.



ನವೆಂಬರ್ 28ರಂದು ರಿಲೀಸ್‌ಗೆ ಸಿದ್ಧ

# ಹಾಟಪ್ರ್ಪೋ ಹಾಟ್ ಸಖತ್ ಹಾಟ್..!



ಶಿವಲಿಂಗ ಖ್ಯಾತಿಯ ವೇದಿಕಾ

ಬಹುಭಾಷಾ ನಟಿ ವೇದಿಕಾ ಕನ್ನಡದ ಹುಡುಗಿಯಾದರೂ ಹುಟ್ಟಿ ಬೆಳೆದಿದ್ದು ಬಾಂಬೆಯಲ್ಲಿ.

ಹೀಗಾಗಿ ಸಖತ್ ಬೋಲ್ಡ್ ಅವತಾರದಲ್ಲಿ ಆಗಾಗ ದರ್ಶನ ಕೊಡ್ತಾರೆ. ಮಾಡೆಲ್ ಕಮ್ ನಟಿಯಾಗಿರುವ ವೇದಿಕಾ ಈ ಬಾರಿ ಸಖತ್ ಹಾಟ್ ಆಗಿ ಕಂಗೊಳಿಸಿದ್ದಾರೆ. ಪಡ್ಡೆ ಹುಡುಗ್ರ ನಿದ್ದೆಗೆ ಕತ್ತರಿ ಹಾಕುತ್ತಿದ್ದಾರೆ.

ಸಮುದ್ರದ ಕಿನಾರೆಯಲ್ಲಿ ನಿಂತು ವಿವಿಧ ಸ್ಟೈಲ್‌ನಲ್ಲಿ ಪೋಸ್ ಕೊಟ್ಟ ವೇದಿಕಾ, ಬ್ಲ್ಯಾಕ್ ಕಲರ್ ಬಿಕಿನಿ ತೊಟ್ಟು ಕಣ್ಮನ ಸೆಳೆದಿದ್ದಾರೆ. ಫೋಟೋಶೂಟ್‌ನ ವಿಡಿಯೋವನ್ನ ಜಾಲತಾಣದಲ್ಲಿ ಹಂಚಿಕೊಂಡಿದ್ದಾರೆ. ವೇದಿಕಾ ಈ ಹಾಟ್ ಅವತಾರಕ್ಕೆ ಫ್ಯಾನ್ಸ್ ಕಣ್ಣು ಮಿಟುಕಿಸದೇ ನೋಡುತ್ತಿದ್ದಾರೆ. ತಮಿಳು ಸಿನಿಮಾ ಮೂಲಕ ಸಿನಿಮಾ ಜರ್ನಿ ಆರಂಭಿಸಿದ ವೇದಿಕಾ ತೆಲುಗು ಹಾಗೂ ಕನ್ನಡದ ಶಿವಲಿಂಗ ಸಿನಿಮಾದಲ್ಲಿ ಕಾಣಿಸಿಕೊಂಡು ಗಮನ ಸೆಳೆದಿದ್ದಾರೆ. ವೇದಿಕಾ ಈ ವಿಡಿಯೋಗೆ ಜಾಲತಾಣದಲ್ಲಿ ವೆರೈಟಿ ವೆರೈಟಿ ಕಮೆಂಟ್ಸ್‌ಗಳು ಬರುತ್ತಿವೆ.

# ಫೋಟೋಶೂಟ್‌ನಲ್ಲಿ ಮಿಂಚಿದ ನಟಸಾರ್ವಭೌಮ ನಟಿ

ತೆಲುಗು ಹಾಗೂ ಕನ್ನಡ ಸಿನಿಮಾಗಳಲ್ಲಿ ಗುರುತಿಸಿಕೊಂಡಿರುವ ನಟಿ ಅನುಪಮಾ ಪರಮೇಶ್ವರನ್ ಹೊಸ ಫೋಟೋಶೂಟ್‌ನಲ್ಲಿ ಮಿಂಚಿದ್ದಾರೆ. ಇತ್ತೀಚೆಗಷ್ಟೇ ತಮ್ಮ ಫೋಟೋಗಳನ್ನ ಯಾರೋ ಮುಖೇಡಿಗಳು ಮಾರ್ಫ್ ಮಾಡಿ ಜಾಲತಾಣದಲ್ಲಿ ಹರಿಬಿಟ್ಟಿದ್ದಾರೆ ಎಂದು ದೂರು ನೀಡಿದ್ದರು. ಆ ಪ್ರಕರಣದಲ್ಲಿ ಆರೋಪಿ ಯಾರು ಅಂತಲೂ ಪತ್ತೆಯಾಗಿದೆ. ಇದೀಗ ಅನುಪಮಾ ಸಹಜ, ಸರಳ ಸುಂದರ ಫೋಟೋಗೆ ಪೋಸ್ ನೀಡಿದ್ದಾರೆ. ಈ ಫೋಟೋಗಳನ್ನ ತಮ್ಮ ಸೋಷಿಯಲ್ ಮೀಡಿಯಾದಲ್ಲಿ ಹಂಚಿಕೊಂಡಿದ್ದಾರೆ. ಈ ಫೋಟೋ ನೋಡಿ ಅವರ ಅಭಿಮಾನಿಗಳು ಖುಷಿ ಪಡೋದರ ಜೊತೆಗೆ ಮೆಚ್ಚುಗೆಯ ಕಾಮೆಂಟ್ಸ್ ಹಾಕುತ್ತಿದ್ದಾರೆ. ಕನ್ನಡದಲ್ಲಿ ಅಪ್ಪು ಜೊತೆ ನಟಸೌರ್ವಭೌಮ ಸಿನಿಮಾದಲ್ಲಿ ಪಾತ್ರ ಮಾಡುವ ಮೂಲಕ ಕರ್ನಾಟಕದಲ್ಲೂ ಅಭಿಮಾನಿ ಬಳಗವನ್ನ ಹೊಂದಿದ್ದಾರೆ ನಟಿ ಅನುಪಮಾ ಪರಮೇಶ್ವರ್. ಅವರ ಹೊಸ ಫೋಟೋಗಳು ಜಾಲತಣದಲ್ಲಿ ಸಖತ್ ವೈರಲ್ ಆಗಿವೆ.

ಪಡ್ಡೆ ಹುಡುಗ್ರು ಫಿದಾ!



# ಜ್ಯೋತಿ ರೈ ಹಾಟ್ ಅವತಾರ

ಸೋಶಿಯಲ್ ಮೀಡಿಯಾದಲ್ಲಿ ಯಾವಾಗಲೂ ಆಕ್ಟಿವ್ ಆಗಿರುವ ನಟಿ ಜ್ಯೋತಿ ರೈ ಆಗಾಗ ಬಗೆ ಬಗೆಯ ಫೋಟೋಗಳನ್ನ ಹಂಚಿಕೊಳ್ಳುತ್ತಿರುತ್ತಾರೆ. ಅವರ ಫೋಟೋಗಳಿಗೆ ಮನಸೋಲದವರೇ ಇಲ್ಲ. ಕನ್ನಡದ ಈ ನಟಿ ಈಗ ಟಾಲಿವುಡ್ ಕಡೆ ಮುಖ ಮಾಡಿದ್ದಾರೆ. ತೆಲುಗು ಚಿತ್ರರಂಗದಲ್ಲಿ ಆಕ್ಟಿವ್ ಆಗಿರುವ ಸುಕು ಪೂರ್ವಜ್ ಅವರ ಜೊತೆ ಎರಡನೇ ಮದುವೆಯಾಗಿದ್ದಾರೆ ಜ್ಯೋತಿ ರೈ. ಸಾಮಾಜಿಕ ಜಾಲತಾಣದಲ್ಲಿ ತಮ್ಮ ಫೋಟೋಗಳನ್ನ ಹಂಚಿಕೊಳ್ಳುವುದರ ಜೊತೆಗೆ ತಮ್ಮ ಸಿನಿಮಾಗಳ ಪ್ರಮೋಷನ್ ಕೂಡಾ ಮಾಡಿಕೊಳ್ಳುತ್ತಾರೆ. ಕಿಲ್ಲರ್ ಸಿನಿಮಾದಲ್ಲಿ ನಟಿಸಿದ್ದು, ಈ ಸಿನಿಮಾದ ಫೈರ್ ಅಂಡ್ ಲಿರಿಕಲ್ ಸಾಂಗ್ ರಿಲೀಸ್ ಆಗಿದ್ದು, ಅದ್ಭುತ ರೆಸ್ಪಾನ್ಸ್ ಸಿಕ್ತಿದೆ. ಕಿಲ್ಲರ್ ಸಿನಿಮಾದಲ್ಲಿ ಮುಖ್ಯ ಪಾತ್ರದಲ್ಲಿ ಜ್ಯೋತಿ ರೈ ಕಾಣಿಸಿಕೊಂಡಿದ್ದಾರೆ. ಸೂಪರ್ ವುಮನ್ ಪಾತ್ರದಲ್ಲಿ ಜ್ಯೋತಿ ರೈ ಗಮನ ಸೆಳೆಯುತ್ತಿದ್ದಾರೆ.

# ಬೃಹತ್ ಮೊತ್ತ ಪೇರಿಸಿ ಸೌತ್ ಆಫ್ರಿಕಾ ಆಲೌಟ್

ಭಾರತ ಮತ್ತು ಸೌತ್ ಆಫ್ರಿಕಾ ನಡುವಣ 2 ಪಂದ್ಯಗಳ ಟೆಸ್ಟ್ ಸರಣಿಯ ಮೊದಲ ಮ್ಯಾಚ್‌ನಲ್ಲಿ ಆಫ್ರಿಕಾ ಪಡೆ ಜಯ ಸಾಧಿಸಿದೆ.

ಹೀಗಾಗಿ ಈ ಪಂದ್ಯವು ಟೀಮ್ ಇಂಡಿಯಾ ಪಾಲಿಗೆ ನಿರ್ಣಾಯಕ. ಅಂದರೆ ಈ ಮ್ಯಾಚ್‌ನಲ್ಲಿ ಗೆದ್ದರೆ ಮಾತ್ರ ಭಾರತ ತಂಡವು ಸರಣಿ ಸೋಲನ್ನು ತಪ್ಪಿಸಿಕೊಳ್ಳಬಹುದು

ಭಾರತದ ವಿರುದ್ಧದ ದ್ವಿತೀಯ ಟೆಸ್ಟ್ ಪಂದ್ಯದ ಮೊದಲ ಇನಿಂಗ್ಸ್‌ನಲ್ಲಿ ಸೌತ್ ಆಫ್ರಿಕಾ ತಂಡ 489 ರನ್‌ಗಳಿಸಿ ಆಲೌಟ್ ಆಗಿದೆ. ಗುವಾಹಟಿಯ ಬರ್ಸಪಾರ ಸ್ಟೇಡಿಯಂನಲ್ಲಿ ನಡೆಯುತ್ತಿರುವ ಈ ಪಂದ್ಯದಲ್ಲಿ ಟಾಸ್ ಗೆದ್ದು ಮೊದಲು ಬ್ಯಾಟ್ ಮಾಡಿದ ಸೌತ್ ಆಫ್ರಿಕಾ ತಂಡವು ಉತ್ತಮ ಆರಂಭ ಪಡೆದುಕೊಂಡಿತ್ತು. ಆರಂಭಿಕರಾಗಿ ಕಣಕ್ಕಿಳಿದ ರಯಾನ್ ರಿಕೆಲ್ಟನ್ (35) ಹಾಗೂ ಐಡೆನ್ ಮಾರ್ಕ್ರಾಮ್ (38) ಮೊದಲ ವಿಕೆಟ್‌ಗೆ 82 ರನ್ ಪೇರಿಸಿ ಉತ್ತಮ ಆರಂಭ ಒದಗಿಸಿದ್ದರು.

ಇದಾದ ಬಳಿಕ ಬಂದ ಟ್ರಿಸ್ಟನ್ ಸ್ಟಬ್ಸ್ 49 ರನ್ ಬಾರಿಸಿದರೆ, ಟೆಂಬಾ ಬವುಮಾ 41 ರನ್‌ಗಳ ಕೊಡುಗೆ ನೀಡಿದರು. ಇನ್ನು ಟೋನಿ ಡಿ ಝೋರ್ಝಿ 28 ರನ್ ಬಾರಿಸಿ ಮೊಹಮ್ಮದ್ ಸಿರಾಜ್‌ಗೆ ವಿಕೆಟ್ ಒಪ್ಪಿಸಿದರು. ಈ ಮೂಲಕ ಸೌತ್ ಆಫ್ರಿಕಾ ತಂಡವು ಮೊದಲ ದಿನದಾಟದ ಅಂತ್ಯಕ್ಕೆ 6 ವಿಕೆಟ್ ಕಳೆದುಕೊಂಡು 247 ರನ್‌ಗಳಿಸಿತ್ತು. ದ್ವಿತೀಯ ದಿನದಾಟದಲ್ಲಿ ಬ್ಯಾಟಿಂಗ್ ಮುಂದುವರೆಸಿದ ಸೆನುರಾನ್ ಮುತ್ತುಸಾಮಿ ಭರ್ಜರಿ ಶತಕ ಸಿಡಿಸುವ ಮೂಲಕ ತಂಡದ ಮೊತ್ತವನ್ನು 400ರ ಗಡಿದಾಟಿಸಿದರು. ಅಂತಿಮವಾಗಿ 206 ಎಸೆತಗಳನ್ನು ಎದುರಿಸಿದ ಮುತ್ತುಸಾಮಿ 2 ಸಿಕ್ಸ್ ಹಾಗೂ 10 ಫೋರ್‌ಗಳೊಂದಿಗೆ 109 ರನ್ ಬಾರಿಸಿ ಔಟಾದರು. ಮತ್ತೊಂದೆಡೆ ಉತ್ತಮ ಸಾಥ್ ನೀಡಿದ ಮಾರ್ಕೊ ಯಾನ್ಸೆನ್ 93 ರನ್‌ಗಳಿಸಿ ಕೇವಲ 7 ರನ್‌ಗಳಿಂದ ಶತಕ ವಂಚಿತರಾದರು. ಈ ಮೂಲಕ ಸೌತ್ ಆಫ್ರಿಕಾ ತಂಡವು 489 ರನ್‌ಗಳಿಸಿ ಆಲೌಟ್ ಆಗಿದೆ.



ಟೀಮ್ ಇಂಡಿಯಾ ಪರ ಕುಲ್ದೀಪ್ ಯಾದವ್ 4 ವಿಕೆಟ್ ಪಡೆದರೆ, ಮೊಹಮ್ಮದ್ ಸಿರಾಜ್, ಜಸ್‌ಪ್ರೀತ್ ಬುಮ್ರಾ, ರವೀಂದ್ರ ಜಡೇಜಾ ತಲಾ 2 ವಿಕೆಟ್ ಕಬಳಿಸಿ ಮಿಂಚಿದರು.

# ಮುಂದಿನ ವರ್ಷದವರೆಗೆ ಗಿಲ್ ಔಟ್!

ಭಾರತ ತಂಡದ ನಾಯಕ ಶುಭ್‌ಮನ್ ಗಿಲ್ ಮತ್ತೆ ಕಣಕ್ಕಿಳಿಯಲು ಮುಂದಿನ ವರ್ಷದವರೆಗೆ ಕಾಯಬೇಕಿದೆ. ಏಕೆಂದರೆ ಗಿಲ್ ನರಗಳ ಸೆಳೆತದ ಸಮಸ್ಯೆಯಿಂದ ಬಳಲುತ್ತಿದ್ದು, ಹೀಗಾಗಿ ವೈದ್ಯರು ಹೆಚ್ಚಿನ ವಿಶ್ರಾಂತಿ ಸೂಚಿಸಿದ್ದಾರೆ ಎಂದು ವರದಿಯಾಗಿದೆ. ಕೊಲ್ಕತ್ತಾದ ಈಡನ್ ಗಾರ್ಡನ್ಸ್ ಮೈದಾನದಲ್ಲಿ ನಡೆದ ಸೌತ್ ಆಫ್ರಿಕಾ ವಿರುದ್ಧದ ಮೊದಲ ಟೆಸ್ಟ್ ಪಂದ್ಯದ ಮೊದಲ ಇನಿಂಗ್ಸ್‌ನ ಬ್ಯಾಟಿಂಗ್ ವೇಳೆ ಶುಭ್‌ಮನ್ ಗಿಲ್ ಅವರು ಕುತ್ತಿಗೆ ನೋವಿನ ಸಮಸ್ಯೆಗೀಡಾಗಿದ್ದರು. ಹೀಗಾಗಿ ಅರ್ಧದಲ್ಲೇ ಬ್ಯಾಟಿಂಗ್ ನಿಲ್ಲಿಸಿ ಮೈದಾನ ತೊರೆದಿದ್ದರು. ಇದಾದ ಬಳಿಕ ಕೊಲ್ಕತ್ತಾದ ಆಸ್ಪತ್ರೆಗೆ ದಾಖಲಾಗಿದ್ದ ಶುಭ್‌ಮನ್ ಗಿಲ್ ಅವರ ಸ್ಕ್ಯಾನಿಂಗ್ ರಿಪೋರ್ಟ್‌ನಲ್ಲಿ ನರಗಳಲ್ಲಿ ಸೆಳೆತವಿರುವುದು ಕಂಡು ಬಂದಿದೆ. ಅಲ್ಲಿ ಚಿಕಿತ್ಸೆ ಪಡೆದ ಬಳಿಕ ಗಿಲ್ ಮುಂಬೈನ ಖ್ಯಾತ ವೈದ್ಯ ಡಾ. ಅಭಯ್ ನೇನೆ ಅವರನ್ನು ಸಂಪರ್ಕಿಸಿದ್ದಾರೆ ಎಂದು ತಿಳಿದು ಬಂದಿದೆ. ಅಭಯ್ ನೇನೆ ಅವರು ಕೂಡ ಶುಭ್‌ಮನ್ ಗಿಲ್ ಅವರು ನರಗಳ ಸೆಳೆತದಿಂದ ಸಮಸ್ಯೆಯಿಂದ ಬಳಲುತ್ತಿದ್ದು, ಹೀಗಾಗಿ ಹೆಚ್ಚಿನ ವಿಶ್ರಾಂತಿ ಸೂಚಿಸಿದ್ದಾರೆ ಎಂದು ವರದಿಯಾಗಿದೆ. ಅದರಂತೆ ಸೌತ್ ಆಫ್ರಿಕಾ ವಿರುದ್ಧದ ಏಕದಿನ ಹಾಗೂ ಟಿ20 ಸರಣಿಗಳಿಂದ ಗಿಲ್ ಹೊರಗುಳಿಯುವುದು ಬಹುತೇಕ ಖಚಿತವಾಗಿದೆ. ಅಲ್ಲದೆ ಮುಂದಿನ ವರ್ಷ ಜನವರಿ 11 ರಿಂದ ಶುರುವಾಗಲಿರುವ ನ್ಯೂಝಿಲೆಂಡ್ ವಿರುದ್ಧದ ಸರಣಿಯ ಮೂಲಕ ಶುಭ್‌ಮನ್ ಗಿಲ್ ಮತ್ತೆ ಮರಳುವ ಸಾಧ್ಯತೆಯಿದೆ. ಅಲ್ಲಿಯವರೆಗೆ ಭಾರತ ತಂಡದಿಂದ ಗಿಲ್ ಹೊರಗುಳಿಯುವುದು ಬಹುತೇಕ ಖಚಿತ ಎಂದೇ ಹೇಳಬಹುದು.



# ಟಿ20 ಕ್ರಿಕೆಟ್ ವಿಶ್ವಕಪ್ ಗೆದ್ದ ಭಾರತ

ಅಂಧರ ಮಹಿಳಾ ಟಿ20 ವಿಶ್ವಕಪ್‌ನಲ್ಲಿ ಭಾರತ ತಂಡವು ಚಾಂಪಿಯನ್ ಪಟ್ಟ ಅಲಂಕರಿಸಿದೆ. ಕೊಲಂಬೊದ ಪಿ ಸಾರಾ ಓವಲ್ ಮೈದಾನದಲ್ಲಿ ನಡೆದ ಫೈನಲ್ ಪಂದ್ಯದಲ್ಲಿ ಭಾರತ ಮತ್ತು ನೇಪಾಳ ತಂಡಗಳು ಮುಖಾಮುಖಿಯಾಗಿದ್ದವು. ಈ ಪಂದ್ಯದಲ್ಲಿ ಟಾಸ್ ಗೆದ್ದ ಟೀಮ್ ಇಂಡಿಯಾ ಬೌಲಿಂಗ್ ಆಯ್ದುಕೊಂಡಿದ್ದರು.

ಅದರಂತೆ ಮೊದಲು ಬ್ಯಾಟ್ ಮಾಡಿದ ನೇಪಾಳ ತಂಡವು 20 ಓವರ್‌ಗಳಲ್ಲಿ ಐದು ವಿಕೆಟ್ ನಷ್ಟಕ್ಕೆ 114 ರನ್‌ಗಳಿಸಿತು. ಈ ಗುರಿಯನ್ನು ಬೆನ್ನತ್ತಿದ ಭಾರತ ತಂಡವು 12 ಓವರ್‌ಗಳಲ್ಲಿ ಮೂರು ವಿಕೆಟ್ ನಷ್ಟಕ್ಕೆ 117 ರನ್ ಗಳಿಸಿ ಭರ್ಜರಿ ಜಯ ಸಾಧಿಸಿತು. ಈ ಮೂಲಕ ಭಾರತ ಮಹಿಳಾ ತಂಡವು ಚೊಚ್ಚಲ ಬಾರಿಗೆ ಅಂಧರ ಟಿ20 ವಿಶ್ವಕಪ್ ಅನ್ನು ಮುಡಿಗೇರಿಸಿಕೊಂಡಿದೆ.



# ಭರ್ಜರಿ ಶತಕ ಸಿಡಿಸಿದ ಮುತ್ತುಸಾಮಿ

ಗುವಾಹಟಿಯಲ್ಲಿ ನಡೆಯುತ್ತಿರುವ ಭಾರತದ ವಿರುದ್ಧದ 2ನೇ ಟೆಸ್ಟ್ ಪಂದ್ಯದ ಮೊದಲ ಇನಿಂಗ್ಸ್‌ನಲ್ಲಿ ಸೌತ್ ಆಫ್ರಿಕಾ ತಂಡದ ಆಲ್ ರೌಂಡರ್ ಸೆನುರಾನ್ ಮುತ್ತುಸಾಮಿ ಭರ್ಜರಿ ಶತಕ ಸಿಡಿಸಿದ್ದಾರೆ. ಈ ಪಂದ್ಯದಲ್ಲಿ 7ನೇ ಕ್ರಮಾಂಕದಲ್ಲಿ ಕಣಕ್ಕಿಳಿದ ಸೆನುರಾನ್ ಆಕರ್ಷಕ ಬ್ಯಾಟಿಂಗ್‌ನೊಂದಿಗೆ ಗಮನ ಸೆಳೆದರು. ಅಷ್ಟೇ ಅಲ್ಲದೆ 191 ಎಸೆತಗಳಲ್ಲಿ ಶತಕ ಪೂರೈಸಿದರು.

ವಿಶೇಷ ಎಂದರೆ ಇದು ಸೆನುರಾನ್ ಮುತ್ತುಸಾಮಿ ಅವರ ಚೊಚ್ಚಲ ಟೆಸ್ಟ್ ಶತಕವಾಗಿದೆ. ಈ ಶತಕದೊಂದಿಗೆ ಸೌತ್ ಆಫ್ರಿಕಾ ತಂಡದ ಸ್ಕೋರ್ 400 ರನ್‌ಗಳ ಗಡಿದಾಟಿದೆ. ಎರಡನೇ ದಿನದಾಟದ ಭೋಜನಾ ವಿರಾಮದ ವೇಳೆ ಸೌತ್ ಆಫ್ರಿಕಾ ತಂಡವು 7 ವಿಕೆಟ್ ಕಳೆದುಕೊಂಡು 428 ರನ್ ಕಲೆಹಾಕಿದೆ. ಸದ್ಯ ಸೆನುರಾನ್ ಮುತ್ತುಸಾಮಿ (107) ಹಾಗೂ ಮಾರ್ಕೊ ಯಾನ್ಸನ್ (51) ಬ್ಯಾಟಿಂಗ್ ಕಾಯ್ದುಕೊಂಡಿದ್ದು, ಆಫ್ರಿಕಾ ಪಡೆ ಬೃಹತ್ ಮೊತ್ತದತ್ತ ದಾಪುಗಾಲಿಟ್ಟಿದೆ.

# ಸ್ಮೃತಿ ಮಂದಾನ ಮದುವೆ ಮುಂದೂಡಿಕೆ

ಭಾರತೀಯ ಕ್ರಿಕೆಟ್ ಆಟಗಾರ್ತಿ ಸ್ಮೃತಿ ಮಂದಾನ ಅವರ ವಿವಾಹ ಕಾರ್ಯಕ್ರಮ ಮುಂದೂಡಲಾಗಿದೆ. ಅವರ ತಂದೆಗೆ ಹಠಾತ್ ಅನಾರೋಗ್ಯ ಸಂಭವಿಸಿದ ಕಾರಣ, ನಡೆಯಬೇಕಿದ್ದ ಸ್ಮೃತಿ ಮಂದಾನ ಮತ್ತು ಪಲಾಶ್ ಮುಚ್ಚಲ್ ವಿವಾಹ ನಡೆಯುತ್ತಿಲ್ಲ. ಮಂದಾನರ ತಂದೆಯ ಹೆಸರು ಶ್ರೀನಿವಾಸ್.

ಮಂದಾನ ತಂದೆಯ ಆರೋಗ್ಯ ಇದ್ದಕ್ಕಿದ್ದಂತೆ ಹದಗೆಟ್ಟಿದೆ. ಪ್ರಸ್ತುತ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ. ಮಂದಾನ ಅವರ ಮದುವೆ ಮುಂದೂಡಿರುವ ಬಗ್ಗೆ ಅವರ ಕುಟುಂಬ ಮೂಲಗಳು ದೃಢಪಡಿಸಿವೆ. ಬೆಳಗ್ಗೆ ಮಂದಾನ ತಂದೆ ತಿಂಡಿ ತಿನ್ನುತ್ತಿದ್ದರು. ಈ ವೇಳೆ ಹಠಾತ್ ಅಸ್ವಸ್ಥಗೊಂಡಿದ್ದಾರೆ. ಕೂಡಲೇ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ. ಚಿಕಿತ್ಸೆಗೆ ಸ್ಪಂದಿಸುತ್ತಿದ್ದು, ವೈದ್ಯರ ನಿಗಾದಲ್ಲಿ ನೋಡಿಕೊಳ್ಳಲಾಗುತ್ತಿದೆ. ಕೆಲವು ವರದಿಗಳ ಪ್ರಕಾರ, ಲಘು ಹೃದಯಾಘಾತ ಸಂಭವಿಸಿದೆ ಎಂದು ಹೇಳಲಾಗಿದೆ. ಆದರೆ ಈ ಬಗ್ಗೆ ಯಾರೂ ಖಚಿತಪಡಿಸಿಲ್ಲ. ಮದುವೆ ಹಿನ್ನೆಲೆಯಲ್ಲಿ ಕಳೆದ ಎರಡ್ಮೂರು ದಿನಗಳಿಂದ ವಿವಾಹ ಪೂರ್ವದ ಆಚರಣೆಗಳು ಜೋರಾಗಿತ್ತು. ಅದಕ್ಕೆ ಸಂಬಂಧಿಸಿದ ವಿಡಿಯೋ, ಫೋಟೋಗಳು ಸೋಶಿಯಲ್ ಮೀಡಿಯಾದಲ್ಲಿ ವೈರಲ್ ಆಗಿವೆ. ಮೇಹಂದಿ ಸಮಾರಂಭ ಶನಿವಾರ ನಡೆದಿದೆ. ಆದರೆ ವಿವಾಹ ಕಾರ್ಯಕ್ರಮ ನಡೆಯಬೇಕಿತ್ತು. ವಿವಾಹ ಸಮಾರಂಭವು ಮಹಾರಾಷ್ಟ್ರದ ಸಾಂಗ್ಲಿಯದಲ್ಲಿ ಆಯೋಜನೆಗೊಂಡಿತ್ತು. ಸಂತೋಷದ ಆಚರಣೆಗಳ ನಡುವೆ, ದುಃಖವು ಇದ್ದಕ್ಕಿದ್ದಂತೆ ಮನೆ ಬಾಗಿಲಿಗೆ ಅಪ್ಪಳಿಸಿದೆ. ಮಾಧ್ಯಮ ವರದಿಯ ಪ್ರಕಾರ, ಮಂದಾನ ತಂದೆ ಚೇತರಿಸಿಕೊಳ್ಳುವವರೆಗೆ ಮದುವೆ ಮುಂದೂಡಲಾಗಿದೆ ಎಂದು ಹೇಳಿವೆ.



ತಂದೆಗೆ ಹಠಾತ್ ಅನಾರೋಗ್ಯ

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966